ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | 45 | ಜನವರಿ 24 ಶುಕ್ರವಾರ 2025

ಸಂಪುಟ: 45 | ಸಂಚಿಕೆ: 277 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಮುಡಾ ನಿವೇಶನ ಹಂಚಿಕೆ ಹಗರಣ: ಮುಖ್ಯಮಂತ್ರಿ ಸಿದ್ದರಾಮಯ್ಯ, ಅವರ ಕುಟುಂಬದ ಪಾತ್ರವಿಲ್ಲವಂತೆ

ಅಧಿಕಾರಿಗಳದ್ದೇ ಲೋಪವಂತೆ

● ಇದು ಕಾನೂನು ತಜ್ಞರ ಅಭಿಪ್ರಾಯ ಎನ್ನಲಾಗಿದೆ... ● ತನಿಖೆಯ ಪ್ರಗತಿ ಆಧರಿಸಿ ಎಡಿಜಿಪಿಗೆ ವರದಿ ಸಲ್ಲಿಕೆ



ಬೆಂಗಳೂರು, ಜ.23(ಕೆಎಂಶಿ)– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಶ್ರೀಮತಿ ಪಾರ್ವತಿ ಅವರಿಗೆ 14 ನಿವೇಶನಗಳನ್ನು ಹಂಚಿಕೆ ಮಾಡಲಾದ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕುಟುಂಬದ ಪಾತ್ರ ಇಲ್ಲ ಎಂದು ಈವರೆಗಿನ ಲೋಕಾಯುಕ್ತ ಪೊಲೀಸರ ತನಿಖೆಯನ್ನಾಧರಿಸಿ ಕಾನೂನು ತಜ್ಞರು



> ಮುಡಾ ಪ್ರಕರಣದಲ್ಲಿ ಲೋಕಾಯುಕ್ತ ಪೊಲೀಸರು ನನಗೆ ಕ್ಲೀನ್ ಚಿಟ್ ನೀಡಿದ್ದಾರೆ ಎಂಬುದರ ಕುರಿತು ಯಾವುದೇ ಮಾಹಿತಿ ಇಲ್ಲ.
> – ಮುಖ್ಯಮಂತ್ರಿ ಸಿದ್ದರಾಮಯ್ಯ

ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ ಎಂದು ಹೇಳಲಾಗಿದೆ.

ಈ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸುವ ಸಂಬಂಧ ವಿಚಾರಣೆ ನಡೆಸುತ್ತಿರುವ ಹೈಕೋರ್ಟ್ ನ್ಯಾಯಪೀಠಕ್ಕೆ ಮೈಸೂರು ಲೋಕಾಯುಕ್ತ ಎಸ್ಪಿ ಉದೇಶ್ ಅವರು ಜ.27ರೊಳಗೆ ತನಿಖಾ ವರದಿಯನ್ನು ಸಲ್ಲಿಸಬೇಕಾಗಿದೆ.

ಲೋಕಾಯುಕ್ತ ಪೊಲೀಸರು ಈವರೆವಿಗೆ ನಡೆಸಿರುವ ತನಿಖೆಯ ವರದಿಯನ್ನು ತಮ್ಮ ಹಿರಿಯ ಅಧಿಕಾರಿಯಾದ ಲೋಕಾಯುಕ್ತ ಎಡಿಜಿಪಿ ಸುಬ್ರಹ್ಮಣ್ಯೇಶ್ವರ ರಾವ್ ಅವರಿಗೆ ಸಲ್ಲಿಸಿದ್ದಾರೆ ಎನ್ನಲಾಗಿದ್ದು, ಮಧ್ಯಂತರ ವರದಿಯನ್ನು ಹೈಕೋರ್ಟ್‌ಗೆ ಜ.25ಕ್ಕೆ ತನಿಖಾಧಿಕಾರಿಗಳಾದ ಮೈಸೂರು ಲೋಕಾಯುಕ್ತ ಎಸ್ಪಿ ಉದೇಶ್ ಸಲ್ಲಿಸಲು ಸಿದ್ಧತೆ ಮಾಡಿಕೊಂಡಿದ್ದಾರೆ. ಕೆಸರೆ ಸರ್ವೆ ನಂಬರ್ 464ರ ಭೂಮಿಗೆ ಪರಿಹಾರವಾಗಿ ವಿಜಯನಗರ ಬಡಾವಣೆಯಲ್ಲಿ 14 ನಿವೇಶನಗಳ ಹಂಚಿಕೆ ವಿಚಾರದಲ್ಲಿ ಮುಖ್ಯಮಂತ್ರಿ ಹಾಗೂ ಅವರ ಕುಟುಂಬ ಹಸ್ತಕ್ಷೇಪ ಮಾಡಿರುವುದಕ್ಕೆ ಯಾವುದೇ ದಾಖಲೆಗಳು ■6ನೇ ಪುಟಕ್ಕೆ

ಲೋಕಾಯುಕ್ತ ಪೊಲೀಸರಿಂದ ಮುಡಾ ಪ್ರಕರಣ ಮುಚ್ಚಿ ಹಾಕುವ ಯತ್ನ


ಅಶೋಕ್

ಬೆಂಗಳೂರು: ಮುಡಾ ಪ್ರಕರಣ ಮುಚ್ಚಿ ಹಾಕಲು ಲೋಕಾಯುಕ್ತ ಪೊಲೀಸರು ಪ್ರಯತ್ನ ಮಾಡುತ್ತಿದ್ದಾರೆ ಎಂದು ವಿಧಾನ ಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಆರೋಪಿಸಿದ್ದಾರೆ. ಮುಡಾ ಹಗರಣದಲ್ಲಿ ಜಾರಿ ನಿರ್ದೇಶನಾಲಯ

> ಅಧಿಕಾರಿಗಳು ತಪ್ಪು ಮಾಡಿದ್ದಾರೆ ಎನ್ನಲಾಗುತ್ತಿದೆ, ಆದರೆ, ಇದರ ಹಿಂದೆ ಸಿದ್ದರಾಮಯ್ಯ ಇದ್ದಾರೆ

(ಇ.ಡಿ) ಆಸ್ತಿಗಳನ್ನು ವಶಪಡಿಸಿಕೊಂಡಿದ್ದರೂ, ಲೋಕಾಯುಕ್ತ ಪೊಲೀಸರು ಈ ವಿಷಯದಲ್ಲಿ ಯಾವುದೇ ಕ್ರಮ ಕೈಗೊಂಡಿಲ್ಲ. ■6ನೇ ಪುಟಕ್ಕೆ

ಸಿದ್ದರಾಮಯ್ಯರ ಒತ್ತಡಕ್ಕೆ ಮಣಿದು ಲೋಕಾಯುಕ್ತದಿಂದ ಕ್ಲೀನ್‌ಚಿಟ್!


ವಿಜಯೇಂದ್ರ

ಬೆಂಗಳೂರು, ಜ.23(ಕೆಎಂಶಿ)– ಮುಖ್ಯಮಂತ್ರಿಗಳ ಒತ್ತಡಕ್ಕೆ ಮಣಿದು ಮುಡಾ ವಿಚಾರದಲ್ಲಿ ಲೋಕಾಯುಕ್ತ ಕ್ಲೀನ್ ಚಿಟ್ ಕೊಟ್ಟಿರುವ ಸಾಧ್ಯತೆ ಇದೆ ಎಂದು

> ಇದರ ವಿರುದ್ಧ ಬಿಜೆಪಿಯಿಂದ ವ್ಯವಸ್ಥಿತ ಹೋರಾಟ

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಒಂದು ವೇಳೆ ಕ್ಲೀನ್ ಚಿಟ್ ಕೊಟ್ಟಿದ್ದರೆ, ■6ನೇ ಪುಟಕ್ಕೆ

ಸೋದರಮಾವನ ಕೊಲೆಯಾದ ನಂತರ ನನ್ನ ಆಶ್ರಯಕ್ಕೆ ಬಂದ ರಾಮುಲು ಬೆಳೆಸಿದ್ದೇ ನಾನು...!

ಮಾಜಿ ಸಚಿವ ಜನಾರ್ಧನ ರೆಡ್ಡಿ ಪ್ರತಿಕ್ರಿಯೆ

ಬೀದಿಗೆ ಬಂದ ಬಳ್ಳಾರಿ ಕುಚುಕುಗಳ ಜಗಳ


ಜನಾರ್ಧನ ರೆಡ್ಡಿ

ಬೆಂಗಳೂರು: ಶ್ರೀರಾಮುಲು ವಿಚಾರದಲ್ಲಿ ನಾನು ಯಾರಿಗೂ ಚಾಡಿ ಹೇಳಿಲ್ಲ, ಅದರ ಅವಶ್ಯಕತೆ ನನಗೆ ಇಲ್ಲ ಎಂದು ಮಾಜಿ ಸಚಿವ ಜನಾರ್ಧನ ರೆಡ್ಡಿ ಹೇಳಿದ್ದಾರೆ.

ತನ್ನ ವಿರುದ್ಧ ಶ್ರೀರಾಮುಲು ಮಾಡಿದ ಆರೋಪಕ್ಕೆ ಸಂಬಂಧಿಸಿದಂತೆ ಸುದ್ದಿಗೋಷ್ಠಿ ನಡೆಸಿದ ಅವರು, ಬಂಗಾರು ಹನುಮಂತುಗೆ ಸಂಡೂರು ಉಪ ಚುನಾವಣೆ ಟಿಕೆಟ್ ನಾನು ಕೊಡಿಸಲಿಲ್ಲ. ಪಕ್ಷ ಅವರಿಗೆ ಟಿಕೆಟ್ ನೀಡಿತ್ತು. ನನಗೆ ಕೆಲಸ ಮಾಡಲು ಪಕ್ಷ ಆದೇಶ ಮಾಡಿತ್ತು. ನಮ್ಮ ಪಕ್ಷದ ಎಲ್ಲ ನಾಯಕರು ಬಂದು ಸಂಡೂರಲ್ಲಿ ಪ್ರಚಾರ ಮಾಡಿದ್ದರು. ಆದರೆ ರಾಮುಲು ಮೂರು ದಿನ ತಡವಾಗಿ ಪ್ರಚಾರಕ್ಕೆ ಬಂದಿದ್ದರು. ಅವರ ಜತೆಗೂ ನಾನು ಪ್ರಚಾರ ಮಾಡಿದೆ. ಆದರೆ ■2ನೇ ಪುಟಕ್ಕೆ

ಡಿಕೆಶಿಯಿಂದ ಶ್ರೀರಾಮುಲು ಆಪರೇಷನ್...

ಸತೀಶ್ ಜಾರಕಿಹೊಳಿಯನ್ನು ಮಣಿಸಲು ಡಿ.ಕೆ.ಶಿವಕುಮಾರ್ ಹೇಗಾದರೂ ಮಾಡಿ ಶ್ರೀರಾಮುಲು ಅವರನ್ನು ಪಕ್ಷಕ್ಕೆ ಕರೆದುಕೊಳ್ಳುವ ಸಂಬಂಧ ಮಾತುಕತೆ ನಡೆಸುತ್ತಿದ್ದಾರೆ. ಶ್ರೀರಾಮುಲು ಪಕ್ಷ ಬಿಡುವುದು ಅವರ ವೈಯಕ್ತಿಕ ವಿಚಾರ. ಹೋಗುವುದಾದರೆ ಅವರು ಹೋಗಲಿ. ಶ್ರೀರಾಮುಲು ಪಕ್ಷ ಬಿಟ್ಟು ಹೋಗುವುದು ಹೊಸದೇನಲ್ಲ. ಈ ಹಿಂದೆ ಬಿಎಸ್‌ಆರ್ ಪಕ್ಷ ಮಾಡುವಾಗಲೇ ನಾನು ಬಿಜೆಪಿ ಪಕ್ಷ ಬಿಡಬೇಡ ಎಂದು ಹೇಳಿದ್ದೆ. ಈ ಸಂದರ್ಭದಲ್ಲಿ ■2ನೇ ಪುಟಕ್ಕೆ

ಆ ವ್ಯಕ್ತಿಯ ದಾಖಲೆಗಳು ನನ್ನ ಬಳಿಯಿವೆ; ಸಾಕ್ಷಿ ಸಮೇತ ಸಮಯ ಬಂದಾಗ ಬಿಚ್ಚಿಡ್ತೀನಿ

ಜನಾರ್ಧನ ರೆಡ್ಡಿಗೆ ಶ್ರೀರಾಮುಲು ವಾರ್ನಿಂಗ್


ಶ್ರೀರಾಮುಲು

ಬಳ್ಳಾರಿ: ಆ ವ್ಯಕ್ತಿ ನನ್ನನ್ನ ಒಬ್ಬ ಕ್ರಿಮಿನಲ್ ರೀತಿ ಬಿಂಬಿಸಲು ಹೊರಟಿದ್ದಾರೆ. ನನ್ನ ಮೇಲೆ ಒಂದೇ ಒಂದು ಕ್ರಿಮಿನಲ್ ಕೇಸ್ ಇಲ್ಲ. ಆದರೆ ನನ್ನ ವಿರುದ್ಧ ಆರೋಪ ಮಾಡಿದ ಆ ವ್ಯಕ್ತಿಯ ದಾಖಲೆಗಳು ನನ್ನ ಬಳಿಯಿದೆ. ಸಮಯ ಬಂದಾಗ ಸಾಕ್ಷಿ ಸಮೇತ ಜನರ ಮುಂದೆ ಬಿಚ್ಚಿಡ್ತೀನಿ ಎಂದ ಮಾಜಿ ಸಚಿವ ಶ್ರೀರಾಮುಲು ಅವರು ಪರೋಕ್ಷವಾಗಿ ಜನಾರ್ದನ ರೆಡ್ಡಿ ಅವರಿಗೆ ಎಚ್ಚರಿಕೆ ನೀಡಿದ್ದಾರೆ.

ಬಳ್ಳಾರಿಯ ತಮ್ಮ ನಿವಾಸದಲ್ಲಿ ಸುದ್ದಿಗೋಷ್ಠಿ ನಡೆಸಿದ ಮಾಜಿ ಸಚಿವ ಶ್ರೀರಾಮುಲು, ಜನಾರ್ದನ ರೆಡ್ಡಿ ಆರೋಪಗಳಿಗೆ ಕೌಂಟರ್ ಕೊಟ್ಟಿದ್ದಾರೆ. ಇದೇ ವೇಳೆ ಡಿ.ಕೆ.ಶಿವಕುಮಾರ್, ಸತೀಶ್ ಜಾರಕಿಹೊಳಿಯನ್ನು ಮಣಿಸಲು ಹೇಗಾದರೂ ಮಾಡಿ ಶ್ರೀರಾಮುಲು ಅವರನ್ನು ಪಕ್ಷಕ್ಕೆ ■2ನೇ ಪುಟಕ್ಕೆ

ಈತನೇ ಗೆಲ್ಲಿಸಿಬಿಟ್ನಾ...

ನಮ್ಮದು ಪೊಲಿಟಿಕಲ್ ಫ್ಯಾಮಿಲಿ, ನಾನು ಹಾದಿ–ಬೀದಿಯಿಂದ ಬಂದವನಲ್ಲ. ನಮ್ಮ ಮಾವನವರಿಂದ, ಅಜ್ಜಿ ಕಾಲದಿಂದಲೂ ರಾಜಕೀಯದಲ್ಲಿದ್ದೀನಿ. ಹೋರಾಟದಿಂದ ಮೇಲೆ ಬಂದಿದ್ದೇನೆಯೇ ಹೊರತು, ಯಾರದ್ದೋ ಕೃಪಾಕಟಾಕ್ಷದಿಂದ ಮೇಲೆ ಬಂದಿಲ್ಲ. ನಮಗೆ ಪಕ್ಷದ ಕ್ರೆಡಿಬಿಲಿಟಿ ಮುಖ್ಯವೇ ಹೊರತು. ಸೋಲು–ಗೆಲುವಲ್ಲ. ಮೊಳಕಾಲ್ಮೂರಿನಲ್ಲಿ ಮ್ಯಾಜಿಕ್ ಮಾಡಿ 43,000 ವೋಟ್‌ನಿಂದ ಗೆಲ್ಲಿಸಿದ್ದೀನಿ ಎಂದು ಹೇಳಿದ್ದಾರೆ. ಆಗ ಪಕ್ಷ ಎರಡೂ ■2ನೇ ಪುಟಕ್ಕೆ

ಮುಡಾ ಕಚೇರಿಯಲ್ಲಿ ಮುಂದುವರಿದ ಲೋಕಾಯುಕ್ತ ಪೊಲೀಸರ ಶೋಧ

ಮೈಸೂರು, ಜ.23(ಆರ್‌ಕೆ)–ಜನವರಿ 25ಕ್ಕೆ ತನಿಖಾ ವರದಿ ಸಲ್ಲಿಸಬೇಕಾಗಿರುವ ಹಿನ್ನೆಲೆಯಲ್ಲಿ ಬುಧವಾರ ಮುಡಾ ಕಚೇರಿಯಲ್ಲಿ ದಾಖಲೆಗಳ ಪರಿಶೀಲನೆ ಆರಂಭಿಸಿದ ಲೋಕಾಯುಕ್ತ, ಮೈಸೂರು ಎಸ್ಪಿ ಉದೇಶ್ ನೇತೃತ್ವದ ತಂಡ ಎರಡನೇ ದಿನವಾದ ಇಂದೂ ಶೋಧ ಕಾರ್ಯಾಚರಣೆ ಮುಂದುವರಿಸಿತು.

ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ನಿ ಬಿ.ಎಂ. ಪಾರ್ವತಿ ಅವರಿಗೆ ಶೇ.50:50 ಅನುಪಾತದಲ್ಲಿ ಅಭಿವೃದ್ಧಿಪಡಿಸಿದ ಬಡಾವಣೆಗಳಲ್ಲಿ 14 ನಿವೇಶನಗಳನ್ನು ಮಂಜೂರು ಮಾಡಿರುವ ಪ್ರಕರಣದಲ್ಲಿ ನಿರ್ಧಾರ ಕೈಗೊಂಡ ದಿನದ ಸಭೆಯಲ್ಲಿ ಮಾತನಾಡಿದ ಸದಸ್ಯರ ವಾಯ್ಸ್ ರೆಕಾರ್ಡ್ ಅನ್ನು ಪೊಲೀಸರು ಪರಿಶೀಲಿಸಿ, ನಡಾವಳಿಯಲ್ಲಿ ನಮೂದಿಸಿರುವ ಮಾಹಿತಿಯೊಂದಿಗೆ ಹೋಲಿಸುವ ಪ್ರಕ್ರಿಯೆ ನಡೆಸುತ್ತಿದ್ದಾರೆ. ಇಂದು ಬೆಳಗ್ಗೆ 6 ಗಂಟೆಯಿಂದಲೇ ಮುಡಾ ಕಚೇರಿಗೆ ತೆರಳಿ ಸಭಾಂಗಣದಲ್ಲಿ ವಾಯ್ಸ್ ರೆಕಾರ್ಡ್ ಪರಿಶೀಲಿಸಿದರಲ್ಲದೆ, ಅದಕ್ಕೆ ಪೂರಕ ದಾಖಲೆಗಳ ದೃಢೀಕೃತ ಪ್ರತಿಗಳನ್ನು ಪಡೆದ ಲೋಕಾಯುಕ್ತ ಪೊಲೀಸರು, 14 ನಿವೇಶನಗಳ ಮಂಜೂರಾತಿ ಅಧಿಕೃತ ಜ್ಞಾಪನ, ಹಂಚಿಕೆ ಪತ್ರ, ನೋಂದಣಿ, ಖಾತಾ ಪತ್ರಗಳನ್ನು ಪ್ರಾಧಿಕಾರದ ಅಧಿಕಾರಿಗಳಿಂದ ಪಡೆದುಕೊಂಡರು. ಶನಿವಾರ ಎಸ್ಪಿ ಉದೇಶ್ ಅವರು ಪ್ರಕರಣದ ತನಿಖಾ ವರದಿಯನ್ನು ಡಿಜಿಪಿ ಮೂಲಕ ರಾಜ್ಯ ಉಚ್ಚ ನ್ಯಾಯಾಲಯಕ್ಕೆ ವರದಿಯನ್ನು ಸಲ್ಲಿಸಲಿದ್ದಾರೆ.

ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಅವರು ಈ ಪ್ರಕರಣವನ್ನು ಸಿಬಿಐಗೆ ಒಪ್ಪಿಸುವಂತೆ ಕೋರಿ ಸಲ್ಲಿಸಿರುವ ಅರ್ಜಿ ಸಂಬಂಧ ಹೈಕೋರ್ಟ್ ಜನವರಿ 27ರಂದು ವಿಚಾರಣೆ ನಡೆಸಲಿದೆ.

ಜ.26ರಿಂದ ಸುತ್ತೂರಿನಲ್ಲಿ ವೈಭವದ ಜಾತ್ರಾ ಮಹೋತ್ಸವ

ಸಾಮೂಹಿಕ ವಿವಾಹ, ಹಾಲರವಿ ಉತ್ಸವ, ರಥೋತ್ಸವ, ಕೊಂಡೋತ್ಸವ, ದೀಪೋತ್ಸವ, ತೆಪ್ಪೋತ್ಸವ, ಅನ್ನ ಬ್ರಹ್ಮೋತ್ಸವ ಕಾರ್ಯಕ್ರಮಗಳು




ಸುದ್ದಿಗೋಷ್ಠಿಯಲ್ಲಿ ಜಾತ್ರಾ ಮಹೋತ್ಸವ ಸಮಿತಿಯ ಕಾರ್ಯದರ್ಶಿ ಎಸ್.ಪಿ.ಮಂಜುನಾಥಸ್ವಾಮಿ ಈ ಕುರಿತು ಮಾಹಿತಿ ನೀಡಿದರು.

ಮೈಸೂರು, ಜ.23(ಜಿಎ)–ನಾಡಿನ ಕಲೆ, ಸಂಸ್ಕೃತಿ ಮತ್ತು ಪರಂಪರೆಯನ್ನು ಬಿಂಬಿಸುವ ಆದಿಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳ ಜಾತ್ರಾ ಮಹೋತ್ಸವಕ್ಕೆ ಸಿದ್ಧತೆ ಭರದಿಂದ ಸಾಗಿದ್ದು, ಸುತ್ತೂರು ಶ್ರೀಕ್ಷೇತ್ರ ನವವಧುವಿನಂತೆ ಸಿಂಗಾರಗೊಳ್ಳುತ್ತಿದೆ. ಜ.26ರಿಂದ 31ರವರೆಗೆ 6 ದಿನಗಳ ಕಾಲ ಸುತ್ತೂರಿನಲ್ಲಿ ಜಾತ್ರಾ ಮಹೋತ್ಸವ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ ನಡೆಯಲಿದ್ದು, ಜ.27ರಂದು ಸಾಮೂಹಿಕ ವಿವಾಹ, ಹಾಲರವಿ ಉತ್ಸವ, 28ರಂದು ರಥೋತ್ಸವ, 29ರಂದು ಮಹದೇಶ್ವರ ಕೊಂಡೋತ್ಸವ ಹಾಗೂ ಲಕ್ಷದೀಪೋತ್ಸವ, 30ರಂದು ತೆಪ್ಪೋತ್ಸವ, 31ರಂದು ಅನ್ನ ಬ್ರಹ್ಮೋತ್ಸವದ ಜತೆಗೆ ಹಲವು ಧಾರ್ಮಿಕ ಕಾರ್ಯಕ್ರಮಗಳು, ವೈವಿಧ್ಯಮಯ ಸಾಂಸ್ಕೃತಿಕ, ಶೈಕ್ಷಣಿಕ ಹಾಗೂ ಕ್ರೀಡಾಚಟುವಟಿಕೆಗಳು ಜರುಗಲಿವೆ.

ಸುತ್ತೂರು ಶ್ರೀ ಕ್ಷೇತ್ರದಲ್ಲಿ ಸುದ್ದಿಗೋಷ್ಠಿಯಲ್ಲಿ ಜಾತ್ರಾ ಮಹೋತ್ಸವ ಸಮಿತಿಯ ಕಾರ್ಯದರ್ಶಿ ಎಸ್.ಪಿ.ಮಂಜುನಾಥಸ್ವಾಮಿ ■6ನೇ ಪುಟಕ್ಕೆ

ಸಾಮೂಹಿಕ ವಿವಾಹ

ಜ.27ರಂದು ನಡೆಯುವ ಉಚಿತ ಸಾಮೂಹಿಕ ವಿವಾಹದಲ್ಲಿ ಜಾತಿ–ಮತ ಭೇದವಿಲ್ಲದೆ



ಸರ್ವಧರ್ಮಗಳ ವಧು–ವರರು ವಿವಾಹವಾಗಲು ಮುಕ್ತ ಅವಕಾಶ ಕಲ್ಪಿಸಲಾಗಿದೆ.

ಅಂತರ್ಜಾತಿ, ವಿಶೇಷ ಚೇತನರು ಹಾಗೂ ಹೊರರಾಜ್ಯಗಳ ವಧು–ವರರು ಸಹ ಪಾಲ್ಗೊಳ್ಳಲಿದ್ದಾರೆ. ವಿವಾಹಗಳ ನೋಂದಣಿಯನ್ನು ಮಾಡಿಸಲಾಗುತ್ತದೆ. ವಧುವಿಗೆ ಸೀರೆ, ಕುಪ್ಪಸ, ಮಾಂಗಲ್ಯ ಹಾಗೂ ಕಾಲುಂಗುರಗಳನ್ನು, ವರನಿಗೆ ಪಂಚೆ, ವಲ್ಲಿ, ಷರ್ಟ್‌ಗಳನ್ನು ನೀಡಲಾಗುತ್ತದೆ. ಈ ಬಾರಿ ವಿವಾಹದಲ್ಲಿ 156 ಜೋಡಿ ಸತಿಪತಿಗಳಾಗುತ್ತಿದ್ದು, ತಮಿಳುನಾಡಿನ 18 ಜೋಡಿ, 3 ವಿಶೇಷಚೇತನ ಜೋಡಿ, 1 ಅಂತರ್‌ಧರ್ಮೀಯ ಜೋಡಿ ಭಾಗವಹಿಸುತ್ತಿರುವುದು ವಿಶೇಷ. ಈವರೆಗೆ ಸಾಮೂಹಿಕ ವಿವಾಹ ವ್ಯವಸ್ಥೆಯಲ್ಲಿ 3200ಕ್ಕೂ ಹೆಚ್ಚು ಮಂದಿ ಸತಿಪತಿಗಳಾಗಿದ್ದಾರೆ. ವಧು–ವರರು ವಿವಾಹದ ದೃಢೀಕರಣ ಪತ್ರ ಹಾಗೂ ನೋಂದಣಿಪತ್ರಗಳನ್ನು ಸಲ್ಲಿಸಿ ಸರ್ಕಾರ ನೀಡುವ ಪ್ರೋತ್ಸಾಹಧನ ಪಡೆದುಕೊಳ್ಳಬಹುದಾಗಿದೆ ಎಂದರು.

ಮೈಸೂರು ಮಿತ್ರ ಶುಕ್ರವಾರ 24 ಜನವರಿ 2025

ಇಂದು, ನಾಳೆ ನಾಟ್ಯಲೇಖ ನಾಟಕೋತ್ಸವ

ಮೈಸೂರು,ಜ.23(ಎಂಟಿವೈ)– ಮೈಸೂರಿನ ರಂಗಾಯಣದ ವನರಂಗದಲ್ಲಿ ಜ.24 ಮತ್ತು 25ರಂದು ಸಂಜೆ 7ಕ್ಕೆ ನಾಟ್ಯಾ ಲೇಖ ರಂಗಸಮೂಹದ ವತಿಯಿಂದ ನೀನಾಸಂ ತಿರುಗಾಟ ನಾಟಕಗಳ 'ನಾಟ್ಯ ಲೇಖ' ನಾಟಕೋತ್ಸವವನ್ನು ಆಯೋಜಿಸಲಾಗಿದೆ ಎಂದು ರಂಗಸಮೂಹದ ನಿರ್ದೇಶಕ ಅಮಿತ್ ರೆಡ್ಡಿ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜ.24ರಂದು ಸಂಜೆ 6.30ಕ್ಕೆ 'ನಾಟ್ಯಲೇಖ' ನಾಟಕೋತ್ಸವವನ್ನು ಹಿರಿಯ ರಂಗಕರ್ಮಿ ಬಿ.ಎಂ.ರಾಮಚಂದ್ರ ಉದ್ಘಾಟಿಸಲಿದ್ದಾರೆ. ಸಭಾ ಕಾರ್ಯಕ್ರಮಕ್ಕೂ ಮುನ್ನ ಆರ್.ಸಿ.ಧನಂಜಯ ಅವರು ಗೀತ ಗಾಯನ ನಡೆಸಿಕೊಡಲಿದ್ದಾರೆ.

ಮುಖ್ಯ ಅತಿಥಿಗಳಾಗಿ ರಂಗಾಯಣದ ಉಪನಿರ್ದೇಶಕ ಡಾ.ಎಂ.ಡಿ.ಸುದರ್ಶನ್ ಹಾಗೂ ಇನ್ನಿತರರು ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

ಸಭಾ ಕಾರ್ಯಕ್ರಮದ ನಂತರ ಸಂಜೆ 7ಕ್ಕೆ ನೀನಾಸಂ ತಿರುಗಾಟ ತಂಡ ಅಭಿನಯಿಸುವ ಅಭಿರಾಮ್ ಭಡ್ಕಮ್ಕರ್ ರಚಿಸಿ, ಜಯಂತ್ ಕಾಯ್ಕಿಣಿ ಕನ್ನಡಕ್ಕೆ ಅನುವಾದಿಸಿರುವ, ವಿದ್ಯಾನಿಧಿ ವನಾರಸೆ ನಿರ್ದೇಶನದ 'ಅಂಕದ ಪರದೆ' ನಾಟಕ ಪ್ರದರ್ಶನಗೊಳ್ಳಲಿದೆ ಎಂದು ತಿಳಿಸಿದರು.

ಜ.25ರಂದು ಸಂಜೆ 7ಕ್ಕೆ ಭವಭೂತಿ ರಚನೆಯ ಕೆ.ವಿ.ಅಕ್ಷರ ಅವರು ಕನ್ನಡಕ್ಕೆ ಅನುವಾದಿಸಿ, ನಿರ್ದೇಶಿಸಿರುವ 'ಮಾಲತಿ ಮಾಧವ' ನಾಟಕ ಪ್ರದರ್ಶನಗೊಳ್ಳಲಿದೆ. ಈ ನಾಟಕಗಳಿಗೆ ಮುಂಗಡ ಟಿಕೆಟ್ ಮಾರಾಟ ವ್ಯವಸ್ಥೆ ಮಾಡಲಾಗಿದೆ. ಹೆಚ್ಚಿನ ಮಾಹಿತಿಗೆ ಮೊ.6361848788, 9482138073 ಸಂಪರ್ಕಿಸುವಂತೆ ಕೋರಿದರು.

ಸುದ್ದಿಗೋಷ್ಠಿಯಲ್ಲಿ ಸಮೂಹದ ಕಾರ್ಯದರ್ಶಿ ವಿ.ಡಿ.ಮಧುಸೂದನ್, ಖಜಾಂಚಿ ಮಹೇಶ್ ಕಲ್ಲತ್ತಿ ಇದ್ದರು.

ಇಂದು ರೇಷ್ಮೆ ಕೃಷಿ, ಉದ್ಯಮ ತರಬೇತಿ

ಮೈಸೂರು,ಜ.23– ಕೇಂದ್ರೀಯ ರೇಷ್ಮೆ ಸಂಶೋಧನಾ ಮತ್ತು ತರಬೇತಿ ಸಂಸ್ಥೆ ಕೇಂದ್ರೀಯ ರೇಷ್ಮೆ ಮಂಡಳಿ ಮೈಸೂರು ಇಲ್ಲಿನ ಸಭಾಂಗಣದಲ್ಲಿ ಜ.24ರಂದು ಬೆಳಗ್ಗೆ 11 ಗಂಟೆಗೆ ರೇಷ್ಮೆ ಕೃಷಿ ಮತ್ತು ರೇಷ್ಮೆ ಉದ್ಯಮ ತರಬೇತಿ ಕಾರ್ಯಕ್ರಮವನ್ನು ಅಂತರರಾಷ್ಟ್ರೀಯ ಬೆಂಗಳೂರಿನ ರೇಷ್ಮೆ ಆಯೋಗದ ಕೇಂದ್ರ ರೇಷ್ಮೆ ಮಂಡಳಿಯ ಪ್ರಧಾನ ಕಾರ್ಯದರ್ಶಿ, ಐಎಫ್ಎಸ್‌ನ ಸದಸ್ಯ ಕಾರ್ಯದರ್ಶಿ ಪಿ.ಶಿವಕುಮಾರ್ ಉದ್ಘಾಟಿಸಿ ಅಧ್ಯಕ್ಷೀಯ ಭಾಷಣ ಮಾಡುವರು. ಕಾರ್ಯಕ್ರಮದಲ್ಲಿ ಸಿಎಸ್‌ಆರ್‌ಟಿಐನ ವಿಜ್ಞಾನಿ ಡಿಎಲ್ ಡಾ.ಕುಸುಮಾ.ಎಲ್, ಸಹಾಯಕ ಕಾರ್ಯದರ್ಶಿಯಾದ ಪದ್ಮನವ್ ನಾಯಕ್, ಸಿಎಸ್‌ಬಿ ನಿರ್ದೇಶಕ ಡಾ.ಎಸ್.ಮಂತ್ರಿರಾ ಮೂರ್ತಿ, ಸಿಎಸ್‌ಬಿ–ಸಿಎಸ್‌ಆರ್‌ಟಿಐನ ತರಬೇತಿ ವಿಭಾಗದ ವಿಭಾಗೀಯ ಮುಖ್ಯಸ್ಥ ಡಾ.ಆರ್.ಮೀನಾಲ್ ಉಪಸ್ಥಿತರಿರುವರು.

ಒಂದನೇ ಪುಟದಿಂದ

ರಾಮುಲು ಬೆಳೆಸಿದ್ದೇ ನಾನು...!

ಬಿಜೆಪಿ ಅಭ್ಯರ್ಥಿ ಸೋಲುವ ಪರಿಸ್ಥಿತಿ ಬಂತು ಎಂದು ತಿಳಿಸಿದರು. ಲೋಕಸಭೆ ಚುನಾವಣೆ ನಡೆಯುವ ತಿಂಗಳ ಮೊದಲು ಬಿಜೆಪಿಗೆ ನಾನು ಸೇರಿದೆ. ಬಳ್ಳಾರಿಗೆ ಹೋಗಲು ನನಗೆ ಅನುಮತಿ ಇರಲಿಲ್ಲ. ಸುಪ್ರೀಂಕೋರ್ಟ್ ಅನುಮತಿ ನೀಡಿದ ಬಳಿಕ ನಾನು ಬಳ್ಳಾರಿಗೆ ಹೋಗಿದ್ದೆ. ಸಂಡೂರು ಕ್ಷೇತ್ರದ ಟಿಕೆಟ್ ಚರ್ಚೆಯ ವೇಳೆ ಯಾರಿಗೇ ನೀಡಿದರೂ ನಾನು ದುಡಿಯುತ್ತೇನೆ ಎಂದು ಹೇಳಿದ್ದೆ ಎಂದರು.

ರಾಮುಲುಗೆ ಸಹಕಾರ ನೀಡಿದ್ದೆ: 1991ರಲ್ಲಿ ರಾಮುಲು ಅವರ ಸೋದರ ಮಾವನ ಕೊಲೆ ನಡೆಯುತ್ತದೆ. ಆ ಕೊಲೆಯ ನಂತರ ನನ್ನ ಆಶ್ರಯಕ್ಕೆ ರಾಮುಲು ಬರುತ್ತಾರೆ. ಚಾಕು ಹಿಡಿದು, ಬೆನ್ನಿಗೆ ಕೊಡಲಿ ಕಟ್ಟಿಕೊಂಡವರ ರಕ್ಷಣೆಯಲ್ಲಿ ರಾಮುಲು ಬಂದರು. ಆಗ ಅವರಿಗೆ ರಕ್ಷಣೆ ಬೇಕಿತ್ತು. ಮಾವನನ್ನು ಮುಗಿಸಿ ದವರು ರಾಮುಲು ಅವರನ್ನು ಕೊಲೆ ಮಾಡುವ ಬೆದರಿಕೆ ಹಾಕಿದ್ದರು. ರಾಮುಲು ಬಗ್ಗೆ ನಮ್ಮ ತಾಯಿಗೆ ನಂಬಿಕೆ ಇತ್ತು. ಅವನನ್ನು ಕಾಪಾಡುವ ಜವಾಬ್ದಾರಿ ನಿನ್ನದು ಅಂತ ನಮ್ಮ ತಾಯಿ ನನಗೆ ಹೇಳಿದ್ದರು.

ರಾಮುಲು ಅವರ ಮಾವನ ಕೊಲೆಗೆ ಫಂಡಿಂಗ್ ಮಾಡಿದವರು ಸೂರ್ಯನಾರಾಯಣ ರೆಡ್ಡಿ. ದಿವಾಕರ್ ಬಾಬು ಮೂಲಕ ಸೂರ್ಯನಾರಾಯಣ ರೆಡ್ಡಿ ಕೊಲೆ ಮಾಡಿಸಿದರು. ಈಗ ಅವರು ಕಾಂಗ್ರೆಸ್ ನಲ್ಲಿದ್ದಾರೆ. ರಾಮುಲು ತಮ್ಮ ಮಾವನ ಕೊಲೆಗಾರರ ಮೇಲೆ ಸೇಡಿಗೆ ಮುಂದಾಗಿದ್ದರು. ಆಗ ನಾನು ರಾಮುಲುಗೆ ಬುದ್ಧಿ ವಾದ ಹೇಳಿ, ಅಪರಾಧದಲ್ಲಿ ಶಾಮೀಲಾ ದರೆ ಬೆಳೆಯಲು ಸಾಧ್ಯವಿಲ್ಲ. ಅವರ ಮುಂದೆ ದೊಡ್ಡದಾಗಿ ಬೆಳಿ ಎಂದು ಹೇಳಿದೆ. ಪ್ರಾಣ ತೆಗೆಯುವ ಕೆಲಸ ಬೇಡ ಎಂದು ರಾಮುಲು ಅವರನ್ನು ಸನ್ಮಾರ್ಗದಲ್ಲಿ ಹೋಗು ವಂತೆ ಮಾಡಿದೆ. ರಾಮುಲು ಮತ್ತವರ ತಂಡ ಸೂರ್ಯನಾರಾಯಣ ರೆಡ್ಡಿ ಕೊಲೆಗೆ ಸ್ಕೆಚ್ ಹಾಕಿದ್ದರು. ಅದನ್ನು ತಡೆದಿದ್ದು ನಾನು. ನನ್ನ ಮಾತಿನಂತೆ ರಾಮುಲು ರಾಜಕೀಯಕ್ಕೆ ಬಂದರು. 1999ರಲ್ಲಿ ಯಡಿಯೂರಪ್ಪ ಹಾಗೂ ಸುಷ್ಮಾ ಸ್ವರಾಜ್ ಭೇಟಿ ಮಾಡಿಸಿ ಶಾಸಕ ಕ್ಷೇತ್ರಕ್ಕೆ ಟಿಕೆಟ್ ಕೊಡಿಸಿದೆ. ಆಗ ರಾಮುಲು ಬಿ.ಎಸ್. ಯಡಿಯೂರಪ್ಪ ನವರ ಮುಂದೆ ಕಣ್ಣೀರು ಹಾಕಿದ್ದರು. ಆ ಚುನಾವಣೆಯಲ್ಲಿ ರಾಮುಲು ಸೋತರೂ ಬಿಜೆಪಿಯಲ್ಲಿ ಅವರು ಬೆಳೆದರು. ನಮ್ಮಿಬ್ಬರ ಸ್ನೇಹ ರಾಜಕೀಯ ಮೀರಿದ್ದು. ನಂತರ ಸಮ್ಮಿಶ್ರ ಸರ್ಕಾರ ಬಂದಾಗ ರಾಮುಲು ಅವರನ್ನು ನಾನು ಮಂತ್ರಿ ಮಾಡಿಸಿದ್ದೆ ಎಂದು ತಿಳಿಸಿದರು.

ಡಿಕೆಶಿಯಿಂದ ಶ್ರೀರಾಮುಲು ಆಪರೇಷನ್...

ಸಿಬಿಐ ನನ್ನನ್ನು ಬಂಧಿಸುತ್ತದೆ, ನಮಗೆ ಬಹಳ ಕಷ್ಟ ಇದೆ. ಹೀಗಾಗಿ ಸುಮ್ಮನಿರು, ಪಕ್ಷ ತೊರೆಯಬೇಡ ಎಂದು ಸಲಹೆ ನೀಡಿದ್ದೆ. ರಾಜಕೀಯ ಸಂಕಷ್ಟದ ಸಮಯದಲ್ಲಿ ನನ್ನ ಮಾತನ್ನು ಕೇಳಲಿಲ್ಲ. ಈಗ ಯಾರದ್ದೋ ಮಾತು ಕೇಳಿ ಬಿಜೆಪಿ ಬಿಡುವುದಾದರೆ ಬಿಡಲಿ. ನನ್ನ ಮೇಲೆ ಆರೋಪ ಮಾಡಿ ಹೋಗುವುದು ಬೇಡ. ಬಳ್ಳಾರಿ ಭಾಗದಲ್ಲಿ ಅವರು ಪಕ್ಷ ಬಿಡುವ ಬಗ್ಗೆ ಚರ್ಚೆ ನಡೆಯುತ್ತಿದೆ ಎಂದರು.

ಸಮಯ ಬಂದಾಗ ಬಿಚ್ಚಿಡ್ತೀನಿ

ಕರೆದುಕೊಳ್ಳುವ ಸಂಬಂಧ ಮಾತುಕತೆ ನಡೆಸುತ್ತಿದ್ದಾರೆ ಎಂಬ ಆರೋಪಕ್ಕೆ ಪ್ರತಿಕ್ರಿಯೆ ನೀಡಿದ್ದಾರೆ. ಸತೀಶ್ ಜಾರಕಿಹೊಳಿಯನ್ನು ಮಟ್ಟ ಹಾಕೋ ದಕ್ಕೆ ನಾನ್ಯಾರು, ಕಾಂಗ್ರೆಸ್‌ನಲ್ಲೂ ವಾಲ್ಮೀಕಿ ಸಮುದಾಯದ ನಾಯಕರಿದ್ದಾರೆ. ನಾನು ಸೋತಿದ್ದರೂ ನನ್ನ ಪಾರ್ಟಿಯಲ್ಲಿ ಪ್ರಬಲವಾಗಿದ್ದೇನೆ. ಸತೀಶ್ ಅವರಿಗೆ ತೊಂದರೆ ಕೊಡಲು ಡಿಕೆಶಿ ನನ್ನ ಬಳಕೆ ಮಾಡಿಕೊಳ್ಳು ತ್ತಾರೆ ಅನ್ನೋದು ಸುಳ್ಳು ಸೃಷ್ಟಿ ಎಂದು ಸ್ಪಷ್ಟನೆ ನೀಡಿದ್ದಾರೆ.

ಮೊನ್ನೆ ಪಕ್ಷದ ಉಸ್ತುವಾರಿ ರಾಧಾ ಮೋಹನ್ ಅಗರವಾಲ್ ಸಭೆ ಕರೆದಿದ್ದರು. ಸಂಘಟನೆ ವಿಚಾರಗಳ ಬಗ್ಗೆ ಚರ್ಚೆ ಆಯಿತು. ಈ ವೇಳೆ ಒಬ್ಬರು ನನ್ನತ್ತ ಅಸಹ್ಯವಾಗಿ ನೋಡಿ ಸಂಡೂರು ಸೋಲಲು ನೀನೇ ಕಾರಣ ಎಂದು ಆರೋಪ ಮಾಡಿದರು. ನಾನು ಇದು ಸರಿ ಅಲ್ಲ ಎಂದು ಹೇಳಿದೆ. ಶಿಗ್ಗಾಂವಿ ಜೊತೆಗೆ ಸಂಡೂರಿನಲ್ಲೂ ಕೆಲಸ ಮಾಡಿದ್ದೇನೆ ಅಂತ ಹೇಳಿದೆ. ಅದಕ್ಕೆ ಆ ವ್ಯಕ್ತಿಗೆ ನೀವು ಸರಿಯಿಲ್ಲ, ಡಬಲ್ ಗೇಮ್ ಆಡ್ತೀರಿ ಎಂದು ಗಟ್ಟಿಯಾಗಿ ವಾದಿಸಿದರು.

ಆಗ ನಾನು ಕಳಂಕ ಇಲ್ಲದೇ ರಾಜಕಾರಣ ಮಾಡಿ ಕೊಂಡು ಬಂದಿದ್ದೇನೆ. ಎಂದು ಸ್ಪಷ್ಟವಾಗಿ ಹೇಳಿದೆ. ನನಗೆ ಅಪಮಾನ ಮಾಡ್ತಿದ್ದೀರಿ. ಎರಡು ಬಾರಿ ಸೋತಿದ್ದೇನೆ. ಗಾಯದ ಮೇಲೆ ಬರೆ ಎಳೆಯಬೇಡಿ ಎಂದು ಸಭೆಯಿಂದ ಎದ್ದು ಹೋಗಲು ಮುಂದಾದೆ. ಆಗ ನಮ್ಮ ನಾಯಕರು ಇದು ಶೋಭೆಯಲ್ಲ ಎಂದು ನನ್ನ ಸಮಾಧಾನ ಮಾಡಿದರು ಎಂದು ಹೇಳಿದರು. ರಾಜ್ಯಾಧ್ಯಕ್ಷರು ನನ್ನ ರಕ್ಷಣೆಗೆ ನಿಲ್ಲಬೇಕಿತ್ತು. ಅದರೆ ಸಂಪೂರ್ಣ ಸೋಲು ನಿನ್ನಿಂದಲೇ ಆಗಿದೆ ಎಂದಾಗಲೂ ಸುಮ್ಮನಿದ್ದರು, ರಕ್ಷಣೆಗೆ ಬರಲಿಲ್ಲ. ಆಗ ಸದಾನಂದಗೌಡ ಮಾತಾಡಿದರು. ನಾನೇ ಸಂಡೂರಿಗೆ ಹೋಗಿ ಬಂದಿದ್ದೇನೆ ಅಂದರು. ಆಗ ಉಸ್ತುವಾರಿ ತಮ್ಮ ಮಾತು ವಾಪಸ್ ತಗೋತೀನಿ ಅಂದರು. ಜನಾರ್ದನರೆಡ್ಡಿ ಮಾತು ಕೇಳಿಕೊಂಡು, ಸುಳ್ಳಿನ ಕೋಟೆ ಕಟ್ಟಿದ್ದಾರೆ. ಬಂಗಾರು ಹನುಮಂತು ಮಾತು ಕೇಳಿ ಆರೋಪ ಮಾಡಿದ್ದಾರೆ ಎಂದು ನೇರಾನೇರಾ ಆರೋಪ ಮಾಡಿದರು. ಅಲ್ಲೇ ಮಾಧ್ಯಮಗಳಿಗೆ ಮಾತಾಡೋದು ಬೇಡ ಅಂದಾಗ ನಾನು ವಾಪಸ್ ಬಂದೆ. ಈಗ ಮಾಧ್ಯಮದಲ್ಲಿ ಬಂದಾಗ ನಾನು ಮಾತನಾಡಿದೆ. ನನ್ನ ವಿರುದ್ಧ ಹೇಳಿಕೆ ನೀಡಿದಾಗಲೂ ನಾನು ಮಾತನಾಡದೇ ಇದ್ದರೆ ತಪ್ಪಿತಸ್ಥನಾಗುತ್ತೇನೆ. ಏಕೆಂದರೆ ನನ್ನ ಪಕ್ಷ ನನಗೆ ತಾಯಿ ಇದ್ದಂತೆ, ತಾಯಿಗೆ ದ್ರೋಹ ಮಾಡೋ ಕೆಲಸ ಮಾಡಲ್ಲ. ಆ ಸಂಸ್ಕೃತಿಯನ್ನು ನಮ್ಮ ಹಿರಿಯರೂ ನನಗೆ ಹೇಳಿಕೊಟ್ಟಿಲ್ಲ ಎಂದು ಭಾವುಕರಾದರು.

ಪಕ್ಷ ಬಿಡ್ತೀರಾ ಎಂಬ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಶ್ರೀರಾಮುಲು, ನನಗೆ ತುಂಬಾ ಜನ ಈ ಪ್ರಶ್ನೆ ಕೇಳಿದ್ದಾರೆ. ನಾನು ಪಕ್ಷ ತೊರೆಯಲ್ಲ. ಪ್ರಧಾನಿಗಳನ್ನು, ವರಿಷ್ಠರನ್ನು ಭೇಟಿ ಮಾಡ್ತೀನಿ ಅಂತ ಹೇಳಿದೆ. ಪ್ರಧಾನಿ, ಅಮಿತ್ ಶಾ ಅವರ ವಿಶ್ವಾಸ ಕಳೆದುಕೊಳ್ಳಲ್ಲ ಎಂದು ಹೇಳಿದೆ. ಎಲ್ಲಾ ಕೇಂದ್ರ ನಾಯಕರಿಗೆ ತಿಳಿಸುತ್ತೇನೆ. ಸುಳ್ಳು ಬಲಾಢ್ಯರ ಕೈಯ್ಯಲ್ಲಿದ್ದಾಗ ಅದು ಸತ್ಯ ಆಗುತ್ತದೆ. ಸುಳ್ಳಿನ ಮುಂದೆ ಸತ್ಯ ಸೋಲುತ್ತೆ ಎಂದು ಕಳವಳ ವ್ಯಕ್ತಪಡಿಸಿದರು.

ಈತನೇ ಗೆಲ್ಲಿಸಿಬಿಟ್ನಾ...

ಕಡೆ ನಿಲ್ಲಲು ಅವಕಾಶ ಮಾಡಿಕೊಟ್ಟಿತು. ಏನೂ ಇಲ್ಲದೇ ಈತ ಮ್ಯಾಜಿಕ್ ಮಾಡಿ ಗೆಲ್ಲಿಸಿಬಿಟ್ನಾ, ಈತನೇ ಗೆಲ್ಲಿಸಿ ಬಿಟ್ನಾ ಯಾರೂ ಯಾರನ್ನೂ ಗೆಲ್ಲಿಸಿಲ್ಲ, ಸೋಲಿಸಿಲ್ಲ. 2018ರಲ್ಲಿ ರಾಮುಲು ಅಲ್ಲಿ ನಿಂತಿದ್ದಕ್ಕೆ 6 ಕ್ಷೇತ್ರದಲ್ಲಿ ಗೆದ್ವಿ, ರಾಮುಲು ಪ್ರಭಾವದಿಂದಲೇ ಅಲ್ಲಿ ಅಷ್ಟು ಸ್ಥಾನ ಬಂದ್ವು ಎಂದು ಹೆಸರು ಹೇಳದೆಯೇ ಜನಾರ್ಧನ ರೆಡ್ಡಿ ವಿರುದ್ಧ ಕಿಡಿಕಾರಿದರು.

ಎಲ್ಲದಕ್ಕಿಂತ ಸ್ವಾಭಿಮಾನ ದೊಡ್ಡದು. ಅದಕ್ಕೆ ನಾನು ಪಾರ್ಟಿ ಬಿಡ್ತೀನಿ ಅಂತ ಹೇಳಿದ್ದೆ. ಜನಾರ್ಧನ ರೆಡ್ಡಿಗೆ ಸುಪ್ರೀಂ ಕೋರ್ಟ್ ಬಳ್ಳಾರಿಗೆ ನಿಷೇಧ ಹೇರಿದಾಗ ಪಾರ್ಟಿ ಬೆಳೆಸಿದ್ದು ನಾನು. 6 ಬಾರಿ ಶಾಸಕನಾಗಿದ್ದೇನೆ, ಜನಾರ್ಧನರೆಡ್ಡಿ ಒಂದು ಬಾರಿ ಆಗಿದ್ದಾನೆ ಹಿಂದೆ ಎನ್‌ಡಿಎ ಸರ್ಕಾರ ಇದ್ದಾಗ ನಾನು ಸಂಸದನಾಗಿದ್ದೆ. ಆಗ ರೆಡ್ಡಿ ಜೈಲಿನಲ್ಲಿದ್ದ. ಜೈಲಿನಲ್ಲಿದ್ದಾಗ ಅವರನ್ನು ಹೊರ ತರೋದಕ್ಕೆ ಸಾಕಷ್ಟು ಪ್ರಯತ್ನಿಸಿದೆ. ಎಲ್ಲರೂ ಸೇರಿ ಪಾರ್ಟಿ ಕಟ್ಟಿದ್ದೇವೆ. ಜನಾರ್ಧನರೆಡ್ಡಿ 2018ರಲ್ಲಿ ಜೈಲಿನಿಂದ ಮೊದಲ ಬಾರಿಗೆ ಬಳ್ಳಾರಿಗೆ ಬಂದಿದ್ದರು. ಆಗ ನಾನು ಮಂತ್ರಿ ಇದ್ದೆ. ಆಗ 25,000 ಜನರನ್ನು ಸೇರಿಸಿ ಭವ್ಯ ಸ್ವಾಗತ ಮಾಡಿ ಕರೆತಂದಿದ್ದು ನಾನು. ಮೊನ್ನೆ ಬಂದಾಗ ಅವರನ್ನು ಸ್ವಾಗತಿಸಲು ಬಂದಿಲ್ಲ ಅನ್ನೋದು ಕೋಪ ಎಂದು ವ್ಯಂಗ್ಯವಾಡಿದರು.

ಡಾ.ಅಂಬೇಡ್ಕರರಿಗೆ ಕಬೀರರೇ ಆಧ್ಯಾತ್ಮ ಚಳವಳಿಯ ಗುರು

ಸಾಹಿತಿ ಪ್ರೊ.ರಹಮತ್ ತರೀಕೆರೆ ವಿವರಣೆ



ಮೈಸೂರು ವಿವಿ ಡಾ.ಬಿಆರ್.ಅಂಬೇಡ್ಕರ್ ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರದ ವತಿಯಿಂದ ತತ್ವಶಾಸ್ತ್ರ ಅಧ್ಯಯನ ವಿಭಾಗದಲ್ಲಿ ಗುರುವಾರ ಆಯೋಜಿಸಿದ್ದ ವಿಚಾರ ಸಂಕಿರಣದಲ್ಲಿ ಸಾಹಿತಿ ಪ್ರೊ.ರಹಮತ್ ತರೀಕೆರೆ ಮಾತನಾಡಿದರು.

ಮೈಸೂರು,ಜ.23(ಎಂಟಿವೈ)–ವಿದೇಶದಲ್ಲಿ ಶಿಕ್ಷಣ ಪಡೆದು ಜ್ಞಾನ ಸಂಪಾದನೆ ಮಾಡಿದ ಡಾ.ಅಂಬೇಡ್ಕರ್ ಸಂತ ಕಬೀರ್ ದಾಸ್ ಅವರನ್ನು ತಮ್ಮ ಆಧ್ಯಾತ್ಮ ಚಳವಳಿಯ ಗುರುವಾಗಿ ಸ್ವೀಕರಿಸಿದ್ದರು ಎಂದು ಸಾಹಿತಿ ಪ್ರೊ.ರಹಮತ್ ತರೀಕೆರೆ ತಿಳಿಸಿದ್ದಾರೆ.

ಮೈಸೂರು ವಿವಿ ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರದ ವತಿಯಿಂದ ತತ್ವಶಾಸ್ತ್ರ ಅಧ್ಯಯನ ವಿಭಾಗದಲ್ಲಿ ಗುರುವಾರ ಆಯೋಜಿಸಿದ್ದ ಡಾ.ಬಿ.ಆರ್.ಅಂಬೇಡ್ಕರ್ ಅವರನ್ನು ಪ್ರಭಾವಿಸಿದ ಸಂತ ಕಬೀರ್ ದಾಸ್ ಚಿಂತನೆಗಳ ತಾತ್ವಿಕ ನೆಲೆ ವಿಷಯ ಕುರಿತು ಮಾತನಾಡಿದ ಅವರು, ಡಾ.ಅಂಬೇಡ್ಕರ್ ಅವರು ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯಕ್ಕೆ ಜ್ಞಾನ ಸಂಪಾದಿಸಿಕೊಂಡಿದ್ದರು. ಅಧ್ಯಾತ್ಮ ಮೂವ್‌ಮೆಂಟ್‌ಗೆ ನೆಲ ಮೂಲದ ಗುರುವನ್ನು ಹುಡುಕುವಾಗ ಕಬೀರ್ ಅವರು ಸಿಕ್ಕರು. ಬುದ್ಧರ ಶೂನ್ಯವಾದಕ್ಕೂ ಕಬೀರ್ ಅವರ ನಿರಾಕಾರ ನಿರ್ಗುಣಕ್ಕೂ ಬಹಳ ಸಂಬಂಧ ಇದೆ. ಈ ಗುಣವೇ ಬಾಬಾ ಸಾಹೇಬರಿಗೆ ಇಷ್ಟವಾಗಿರಬಹುದು. ಅದ್ವೈತ, ಸೂಫಿ ಇಸ್ಕ್, ಕಬೀರರ ನಿರಾಕಾರ ನಿರ್ಗುಣ, ಬೌದ್ಧರ ಶೂನ್ಯವಾದ ದೊಡ್ಡ ಸಾಮಾಜಿಕ ಕ್ರಾಂತಿಯನ್ನುಂಟು ಮಾಡಿದ ಪಂಥಗಳಾಗಿವೆ. ನೆಲಮೂಲದ ತತ್ವಶಾಸ್ತ್ರಜ್ಞರನ್ನು ಬಿಟ್ಟು ಪಾಶ್ಚಿಮಾತ್ಯ ಮತ್ತು ಸಂಸ್ಕೃತ ತತ್ವಶಾಸ್ತ್ರಕಾರರನ್ನು ಅಧ್ಯಯನ ಮಾಡುವುದು ಶೈಕ್ಷಣಿಕ ಅಪರಾಧ. ವಿದೇಶದಲ್ಲಿ ಓದಿದ ಅಂಬೇಡ್ಕರ್ ಅವರೇ ನೆಲ ಮೂಲದ ಗುರುವನ್ನು ಸ್ವೀಕರಿಸಿದರು ಎಂದರು.

ಭಾರತದ ಎಲ್ಲ ಅಧ್ಯಾತ್ಮ ಚಳವಳಿಗಳು ಜಾತಿಯ ವಿರುದ್ಧ, ವೃತ್ತಿಯ ಕೀಳರಿಮೆ ಮುಕ್ತಿಗಾಗಿ ಹೋರಾಡಿದರು, ಘನತೆ ತಂದುಕೊಟ್ಟರು. ಇದು ಬಾಬಾ ಸಾಹೇಬರಿಗೆ ಇಷ್ಟವಾಗಿರುತ್ತದೆ. ಕರ್ಮ ಮತ್ತು ಜ್ಞಾನ ಮಾರ್ಗಿಗಳ ಎರಡು ಹಾದಿಗಳು ನಮ್ಮಲ್ಲಿವೆ. ಚೈತನ್ಯ ನಮ್ಮೊಳಗೆಯೇ ಇದೆ. ಅದನ್ನು ಕಂಡುಕೊಂಡರೆ ದೈವ ಆಗುತ್ತದೆ. ಅದಕ್ಕಾಗಿ ಪ್ರಾರ್ಥಿಸುವ, ತೀರ್ಥ ಯಾತ್ರೆ ಮಾಡುವ ಅಗತ್ಯವಿಲ್ಲ ಎಂದು ಕಬೀರರು ಸೇರಿ ಅನೇಕ ಸಂತರು ಹೇಳಿದ್ದಾರೆ. ಜಾತಿ, ವರ್ಣಾಶ್ರಮ ಧರ್ಮ, ಸಂಸ್ಕೃತವನ್ನು ಸಂತರು ತಿರಸ್ಕರಿಸಿದರು. ಸ್ಥಳೀಯ ಭಾಷೆಗೆ ಆದ್ಯತೆ ಕೊಟ್ಟರು. ಗುಡಿ, ಮಸೀದಿಗಳನ್ನು ಮುಖ್ಯವಾಗಿ ಪರಿಗಣಿಸಲಿಲ್ಲ. ಮಡಿ ಮೈಲಿಗೆ ಮಾಡಲಿಲ್ಲ. ಎಲ್ಲ ಜೀವಿಗಳ ಸಮಾನತೆಯಿಂದ ಕಂಡರು. ದೈವ ಒಬ್ಬನೇ ಎಂದರು. ಕಾರ್ಯಕ್ರಮದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರದ ನಿರ್ದೇಶಕ ಪ್ರೊ.ಜೆ. ಸೋಮಶೇಖರ್, ತತ್ವಶಾಸ್ತ್ರ ಅಧ್ಯಯನ ವಿಭಾಗದ ಅಧ್ಯಕ್ಷ ಡಾ.ಎಂ.ಡ್ಯಾನಿಯಲ್ ಉಪಸ್ಥಿತರಿದ್ದರು.

ಪತ್ನಿ ಕೊಂದು ದೇಹವನ್ನು ಕುಕ್ಕರ್‌ನಲ್ಲಿ ಬೇಯಿಸಿದ ಮಾಜಿ ಯೋಧ

ಹೈದರಾಬಾದ್: ಮಾಜಿ ಯೋಧನೊಬ್ಬ ತನ್ನ ಪತ್ನಿಯನ್ನು ಕೊಲೆ ಮಾಡಿ ಆಕೆಯ ದೇಹವನ್ನು ಹಲವು ತುಂಡುಗಳಾಗಿ ಕತ್ತರಿಸಿ ಬಳಿಕ ಅದನ್ನು ಪ್ರೆಶರ್ ಕುಕ್ಕರ್‌ನಲ್ಲಿ ಬೇಯಿಸಿದ ಘಟನೆ ತೆಲಂಗಾಣದ ರಾಜಧಾನಿ ಹೈದರಾಬಾದ್‌ನಲ್ಲಿ ನಡೆದಿದೆ.



45 ವರ್ಷದ ಗುರುಮೂರ್ತಿ, ಪತ್ನಿಯನ್ನು ಭೀಭತ್ಸವಾಗಿ ಕೊಲೆ ಮಾಡಿದ ಮಾಜಿ ಯೋಧ. ಈತನ ಪತ್ನಿ ಕಾಣೆಯಾದ ಬಗ್ಗೆ ಪೊಲೀಸ್ ಕೇಸ್ ದಾಖಲಾಗಿತ್ತು. ಈ ಬಗ್ಗೆ ತನಿಖೆಗಿಳಿದ ಪೊಲೀಸರಿಗೆ ಗುರುಮೂರ್ತಿಯೇ ಪತ್ನಿಯನ್ನು ಭೀಕರವಾಗಿ ಕೊಲೆ ಮಾಡಿರುವುದು ತಿಳಿದು ಬಂದಿದೆ.

35 ವರ್ಷದ ವೆಂಕಟ್ ಮಾಧವಿ ಗಂಡನಿಂದಲೇ ಕೊಲೆಯಾದ ಮಹಿಳೆ. ಈಕೆ ಜ.16ರಿಂದ ನಾಪತ್ತೆಯಾಗಿದ್ದಳು. ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡು ಪೊಲೀಸರು ತನಿಖೆ ಮಾಡಿದಾಗ ಪೊಲೀಸರಿಗೆ ಆಕೆಯ ಗಂಡ ಗುರುಮೂರ್ತಿಯ ಮೇಲೆಯೇ ಅನುಮಾನ ಬಂದಿದೆ. ಹೀಗಾಗಿ ಆತನನ್ನು ತೀವ್ರವಾಗಿ ವಿಚಾರಣೆ ನಡೆಸಿದಾಗ ಆತ ಮಾಡಿದ ತಪ್ಪನ್ನು ಒಪ್ಪಿಕೊಂಡಿದ್ದಾನೆ.

ಆರೋಪಿ ಗುರುಮೂರ್ತಿ, ಪತ್ನಿ ವೆಂಕಟ ಮಾಧವಿಯ ದೇಹವನ್ನು ಬಾತ್‌ರೂಮ್‌ನಲ್ಲಿ ಹಲವು ಭಾಗಗಳಾಗಿ ಕತ್ತರಿಸಿ, ನಂತರ ಪ್ರೆಶರ್ ಕುಕ್ಕರ್‌ನಲ್ಲಿ ಬೇಯಿಸಿದ್ದಾನೆ. ನಂತರ ಮಾಂಸವನ್ನು ಮೂಳೆಯಿಂದ ಬೇರ್ಪಡಿಸಿದ್ದಾನೆ. ಬಳಿಕ ಮೂಳೆಗಳನ್ನು ಕುಟಾಣಿಯಿಂದ ಹುಡಿ ಮಾಡಿ ಮತ್ತೆ ಬೇಯಿಸಿದ್ದಾನೆ. ಮೂರು ದಿನಗಳ ಕಾಲ ಆತ ಹಲವು ಬಾರಿ ಮೂಳೆ ಹಾಗೂ ಮಾಂಸವನ್ನು ಬೇಯಿಸಿದ ನಂತರ ಅದನ್ನು ಪ್ಯಾಕ್ ಮಾಡಿ ಬಳಿಕ ಮೀರ್‌ಪೇಟ್ ಬಳಿಯ ಕೆರೆಗೆ ಎಸೆದಿದ್ದಾನೆ. ಕೊಲೆ ಮಾಡಿದ ಮಾಜಿ ಯೋಧ ಗುರುಮೂರ್ತಿ ಪ್ರಸ್ತುತ ಡಿಆರ್ ಡಿಒದಲ್ಲಿ ಸೆಕ್ಯೂರಿಟಿ ಗಾರ್ಡ್ ಆಗಿ ಕೆಲಸ ಮಾಡುತ್ತಿದ್ದ. ಈ ದಂಪತಿಗೆ ಒಂದು ಗಂಡು, ಒಂದು ಹೆಣ್ಣು ಮಕ್ಕಳಿದ್ದರು. ಗಂಡ–ಹೆಂಡತಿ ನಡುವೆ ಆಗಾಗ ಜಗಳಗಳು ನಡೆಯುತ್ತಿದ್ದವು ಎಂದು ತಿಳಿದುಬಂದಿದೆ. ಆದರೆ ಕೊಲೆ ಏಕೆ ಹಾಗೂ ಹೇಗೆ ನಡೆಯಿತು ಎಂಬ ಬಗ್ಗೆ ಮಾಹಿತಿ ಇಲ್ಲ, ಪೊಲೀಸರು ತನಿಖೆ ಮುಂದುವರೆಸಿದ್ದಾರೆ.

ನಾಳೆ ಮಾಗಿಯ ಕವಿಗೋಷ್ಠಿ

ಮೈಸೂರು,ಜ.23–ಕ್ರಿಯಾ, ಮೈಸೂರು ಹಾಗೂ ಸ್ಪಂದನ ಸಾಂಸ್ಕೃತಿಕ ಪರಿಷತ್ತಿನ ಸಂಯುಕ್ತ ಆಶ್ರಯದಲ್ಲಿ ಬೋಗಾದಿಯ ಕ್ರಿಯಾ ಶೈಕ್ಷಣಿಕ ಸಂಪನ್ಮೂಲ ಕೇಂದ್ರದಲ್ಲಿ ಜ.25ರಂದು ಮಧ್ಯಾಹ್ನ 3 ಗಂಟೆಗೆ 'ಮಾಗಿಯ ಕವಿಗೋಷ್ಠಿ' ನಡೆಯಲಿದೆ.

ಕವಿಗೋಷ್ಠಿಯ ಉದ್ಘಾಟನೆಯನ್ನು ದೂರದರ್ಶನ ಕೇಂದ್ರದ ವಿಶ್ರಾಂತ ನಿರ್ದೇಶಕಿ ಹಾಗೂ ಖ್ಯಾತ ಲೇಖಕಿ ಮೀನಾ ಮೈಸೂರು ನೆರವೇರಿಸುವರು. ಮೈಸೂರು ವಿಶ್ವವಿದ್ಯಾನಿಲಯದ ಮಹಾರಾಜ ಕಾಲೇಜಿನ ಕನ್ನಡ ಪ್ರಾಧ್ಯಾಪಕ ಡಾ.ಕೆ. ತಿಮ್ಮಯ್ಯ ಅಧ್ಯಕ್ಷತೆ ವಹಿಸುವರು. ಸ್ಪಂದನಾ ಸಾಂಸ್ಕೃತಿಕ ಪರಿಷತ್ತಿನ ಅಧ್ಯಕ್ಷ ಟಿ.ಸತೀಶ್ ಜವರೇಗೌಡ ಆಶಯ ನುಡಿಗಳನ್ನಾಡುವರು.

ಜ.26, ಗಣರಾಜ್ಯೋತ್ಸವ

ಮೈಸೂರು: ಶಾರದಾವಿಲಾಸ ಶಿಕ್ಷಣ ಸಂಸ್ಥೆಗಳ ಆವರಣದಲ್ಲಿ ಜ.26ರಂದು ಬೆಳಿಗ್ಗೆ 8:30ಕ್ಕೆ ಗಣರಾಜ್ಯೋತ್ಸವ ಏರ್ಪಡಿಸಲಾಗಿದೆ. ಧ್ವಜಾರೋಹಣವನ್ನು ಸಂಸ್ಥೆ ಆಡಳಿತ ಮಂಡಳಿ ಹಿರಿಯ ಸದಸ್ಯ ರಾಮಚಂದ್ರ ನೆರವೇರಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಮೈಸೂರು ವಿವಿ ಹಾಗೂ ಮುಕ್ತ ವಿವಿ ವಿಶ್ರಾಂತ ಕುಲಪತಿ, ಖ್ಯಾತ ವಿಜ್ಞಾನಿ ಕೆ.ಎಸ್.ರಂಗಪ್ಪ ಭಾಗವಹಿಸಲಿದ್ದಾರೆ.

ಇಂದು ಕುಕ್ಕರಹಳ್ಳಿ ಕೆರೆ ಏರಿ ಮೇಲೆ ನಡಿಗೆ

ಮೈಸೂರು,ಜ.23–ಕುವೆಂಪು ಅವರ ಜನ್ಮದಿನದ ಅಂಗವಾಗಿ ಕರ್ನಾಟಕ ರಾಜ್ಯ ಒಕ್ಕಲಿಗರ ವಿಕಾಸ ವೇದಿಕೆ ಮತ್ತು ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಜ.24ರಂದು ಬೆಳಗ್ಗೆ 7.15ಕ್ಕೆ ರಾಷ್ಟ್ರಕವಿ ಕುವೆಂಪು ಅವರ ಅಚ್ಚು–ಮೆಚ್ಚಿನ ಸ್ಥಳವಾದ ಕುಕ್ಕರಹಳ್ಳಿ ಕರೆಯ ಏರಿಯ ಮೇಲೆ ನಡಿಗೆ ಕಾರ್ಯಕ್ರಮ ಏರ್ಪಡಿಸಲಾಗಿದೆ. ಕಾರ್ಯಕ್ರಮದಲ್ಲಿ ಕುವೆಂಪು ವಿವಿ ವಿಶ್ರಾಂತ ಕುಲಪತಿ ಪ್ರೊ.ಕೆ.ಚಿದಾನಂದ ಗೌಡರು, ಕುವೆಂಪು ಅವರ ಪುತ್ರಿ ತಾರಿಣಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಮೈಸೂರು ವಿವಿಯ ಪ್ರಸಾರಂಗದ ನಿವೃತ್ತ ನಿರ್ದೇಶಕ ಕೆ.ಟಿ.ವೀರಪ್ಪ ಕುವೆಂಪು ಕುರಿತು ಮಾತನಾಡಲಿದ್ದಾರೆ. ಮಾಜಿ ಶಾಸಕ ಎಲ್.ನಾಗೇಂದ್ರ, ಹೆಚ್.ಕೆ.ರಾಮು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಈ ವೇಳೆ ಕಸಾಪ ಜಿಲ್ಲಾಧ್ಯಕ್ಷ ಮಡ್ಡಿಕೆರೆ ಗೋಪಾಲ್, ವೇದಿಕೆಯ ರಾಜ್ಯಾಧ್ಯಕ್ಷೆ ಹೆಚ್.ಎಲ್.ಯಮುನಾ ಉಪಸ್ಥಿತರಿರಲಿದ್ದಾರೆ

ನಿಧನ

ರಾಜಯೋಗಿನಿ ಬ್ರಹ್ಮಾಕುಮಾರಿ ರಮಾಜೀ



ನಂಜನಗೂಡು,ಜ.23–ನಂಜನಗೂಡಿನ ಥಾಮಸ್ ಲೇಔಟ್‌ನಲ್ಲಿರುವ ಅಂತರರಾಷ್ಟ್ರೀಯ ಆಧ್ಯಾತ್ಮಿಕ ಸಂಸ್ಥೆ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಮುಖ್ಯ ಸಂಚಾಲಕಿ ರಾಜಯೋಗಿನಿ ಬ್ರಹ್ಮಾಕುಮಾರಿ ರಮಾಜೀ (67) ಬುಧವಾರ ನಿಧನರಾದರು.

ಮೃತರು ಈಶ್ವರೀಯ ವಿಶ್ವವಿದ್ಯಾಲಯದಲ್ಲಿ 54 ವರ್ಷಗಳಿಂದ ಸಮರ್ಪಿತರಾಗಿ ಮೈಸೂರು, ಮಂಡ್ಯ, ಹಾಸನ, ಕೊಡಗು, ಚಾಮರಾಜನಗರ ಜಿಲ್ಲೆಗಳಲ್ಲಿ ರಾಜಯೋಗ ಶಿಕ್ಷಕಿಯಾಗಿ, ಸಂಚಾಲಕರಾಗಿ ಮಾನವೀಯ ಮೌಲ್ಯಗಳನ್ನು ಜಾಗೃತಗೊಳಿಸುವ ಅವಿರತ ಸೇವೆ ಸಲ್ಲಿಸಿದ್ದರು. ಈಶ್ವರೀಯ ವಿಶ್ವವಿದ್ಯಾಲಯಗಳ ಮೈಸೂರು ಉಪವಿಭಾಗದ ಮುಖ್ಯ ಸಂಚಾಲಕಿ ರಾಜಯೋಗಿನಿ ಬ್ರಹ್ಮಾಕುಮಾರಿ ಲಕ್ಷ್ಮೀಜೀ ಸೇರಿದಂತೆ ಹಿರಿಯ ರಾಜಯೋಗ ಶಿಕ್ಷಕಿಯರು, ನೂರಾರು ರಾಜಯೋಗ ವಿದ್ಯಾರ್ಥಿಗಳು ಹುಣಸೂರು ರಸ್ತೆಯಲ್ಲಿರುವ ರಾಜಯೋಗ ರಿಟ್ರೀಟ್ ಸೆಂಟರ್‌ನಲ್ಲಿ ಅಂತಿಮ ನಮನ ಸಲ್ಲಿಸಿದರು. ಗುರುವಾರ ಮಧ್ಯಾಹ್ನ ಹೂಟಗಳ್ಳಿಯಲ್ಲಿರುವ ಚಿರಶಾಂತಿಧಾಮದಲ್ಲಿ ಅಂತ್ಯಸಂಸ್ಕಾರ ನೆರವೇರಿತು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

24.01.2025 ಶುಕ್ರವಾರ, ಮಳೆ ನಕ್ಷತ್ರ: ಶ್ರವಣ 24.01.2025 ರಿಂದ 05.02.2025
ಕ್ರೋಧಿನಾಮ ಸಂವತ್ಸರ, ಉತ್ತರಾಯಣ, ಹೇಮಂತ ಋತು, ಪುಷ್ಯ ಮಾಸ, ಕೃಷ್ಣ ಪಕ್ಷ,
ತಿಥಿ: ದಶಮಿ, ನಕ್ಷತ್ರ: ಅನೂರಾಧ, ರಾಹುಕಾಲ: ಬೆಳಗ್ಗೆ 10.30 ರಿಂದ 12 ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಡಯಾಬಿಟಿಕ್ ರೆಟಿನೋಪತಿ, ಹಿಮ್ಮಡಿ ಮುಳ್ಳು ಮತ್ತು ಪಿತ್ತಗಂಧೆ (ಶೀತಪಿತ್ತ) ತಪಾಸಣಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9 ಗಂಟೆಗೆ.

■ **ರಾಮ್‌ಸನ್ಸ್ ಪ್ರತಿಷ್ಠಾನ:** ಬೊಂಬೆ ಮನೆ ದಸರೆ ಬೊಂಬೆ ಪ್ರದರ್ಶನ, 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10ಕ್ಕೆ

■ **ಮಲಬಾರ್ ಗೋಲ್ಡ್ ಅಂಡ್ ಡೈಮಂಡ್ಸ್ :** ಬ್ರೈಡಲ್ ಜ್ಯೂವೆಲ್ಲರಿ ಶೋ, ಸ್ಥಳ: ಮೈಸೂರು ಶೋರೂಮ್, ಬಿ.ಎನ್. ರಸ್ತೆ, ಬೆಳಗ್ಗೆ 10 ರಿಂದ.

■ **ಭಾರತೀಯ ತಾಂತ್ರಿಕ ಮತ್ತು ಆರ್ಥಿಕ ಸಹಕಾರ, ವಿದೇಶಾಂಗ ವ್ಯವಹಾರಗಳ ಸಚಿವಾಲಯ, ನವದೆಹಲಿ** : ಉದ್ಘಾಟನೆ : ಕೇಂದ್ರ ರೇಷ್ಮೆ ಮಂಡಳಿ ಸದಸ್ಯ ಕಾರ್ಯದರ್ಶಿ ಪಿ.ಶಿವ ಕುಮಾರ್, ಉಪಸ್ಥಿತರು : ಮೈಸೂರು ಕೇಂದ್ರ ರೇಷ್ಮೆ ಸಂಶೋಧನೆ ಮತ್ತು ತರಬೇತಿ ಸಂಸ್ಥೆ ನಿರ್ದೇಶಕ ಡಾ. ಎಸ್.ಗಾಂಧಿದಾಸ್, ಪದ್ಮನಾಭ ನಾಯಕ್, ಡಾ.ಆರ್.ಮಿನಾಲ್, ಸ್ಥಳ: ಕೇಂದ್ರ ರೇಷ್ಮೆ ಸಂಶೋಧನೆ ಮತ್ತು ತರಬೇತಿ ಸಂಸ್ಥೆ, ಬೆಳಗ್ಗೆ 10ಕ್ಕೆ.

■ **ಮೈಸೂರು–ಚಾಮರಾಜನಗರ ಮತ್ತು ಮಂಡ್ಯ ಜಿಲ್ಲಾ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ನೌಕರರ ಪತ್ತಿನ ಸಹಕಾರ ಸಂಘ** : ಸಂಘದ ನೂತನ ಕಟ್ಟಡ ಉದ್ಘಾಟನಾ ಸಮಾರಂಭ, ಉದ್ಘಾಟನೆ : ಶಾಸಕ ತನ್ವೀರ್ ಸೇಠ್, ಸ್ಥಳ: ಸಂಘದ ಆವರಣ, ಬೆಳಗ್ಗೆ 10ಕ್ಕೆ

■ **ಮೈಸೂರು ವಿಶ್ವವಿದ್ಯಾನಿಲಯ, ಡಾ.ಬಿ.ಆರ್. ಅಂಬೇಡ್ಕರ್ ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರ** : ಡಾ.ಬಿ.ಆರ್.ಅಂಬೇಡ್ಕರ್ ಮಾನವ ಅಭಿವೃದ್ಧಿಯ ಗ್ರಹಿಕೆ ಕುರಿತು ಕಾರ್ಯಾಗಾರ, ಸ್ಥಳ:ಪ್ರೊ.ಬೆಟ್ರಿಕ್ಸ್ ಡಿಸೋಜ ಸಭಾಂಗಣ, ಮಾನಸಗಂಗೋತ್ರಿ, ಬೆಳಗ್ಗೆ 10.30ರಿಂದ.

■ **ಮೈಸೂರು ವಿಶ್ವವಿದ್ಯಾನಿಲಯ, ಬಾಸುದೇವ ಸೋಮಾನಿ ಕಾಲೇಜು** : ಸಾಮಾಜಿಕ ಒಳಗೊಳ್ಳುವಿಕೆ ಮತ್ತು ವಿಕಸಿತ ಭಾರತ ಕುರಿತು ಕಾರ್ಯಾಗಾರ, ಅಧ್ಯಕ್ಷತೆ : ನಿವೃತ್ತ ಪ್ರಾಧ್ಯಾಪಕ ಪ್ರೊ. ಎಂ.ಉಮಾಪತಿ, ಉದ್ಘಾಟನೆ: ಪ್ರೊ. ರಮೇಶ್, ಮುಖ್ಯ ಅತಿಥಿಗಳು : ಡಾ. ಎಂ. ಪುಟ್ಟಸ್ವಾಮಿ, ಪಿ. ಗೀತಾಂಜಲಿ, ಕುಬೇರ್ ಪಿ. ಗೌಡ, ಶ್ರೀಮತಿ ಎಸ್. ಪ್ರಭಾ, ಸ್ಥಳ: ಬಾಸುದೇವ ಸೋಮಾನಿ ಕಾಲೇಜು ಆವರಣ, ಬೆಳಗ್ಗೆ 10.30ಕ್ಕೆ.

■ **ಶ್ರೀ ಮೂಲ ಅರ್ಕ ಮಹಾಗಣಪತಿ ದೇವಸ್ಥಾನ** : 31ನೇ ವಾರ್ಷಿಕೋತ್ಸವ, ಬೆಳಗ್ಗೆ 6 ರಿಂದ ಗಣಪತಿ ಪೂಜೆ, ಪುಣ್ಯಾಹ, ನಾಂದೀ, ಉತ್ತರ ಕಲಶ ಪೂಜೆ, ತತ್ತ್ವನ್ಯಾಸ, ಕಲಾನ್ಯಾಸ ಹೋಮ, ಅರ್ಕ ಮಹಾಗಣಪತಿಗೆ ಬ್ರಹ್ಮ ಕುಂಭಾಭಿಷೇಕ, ಸಹಸ್ರ ಮೋದಕ ಗಣಪತಿ ಹವನ, ಮಹಾಪೂರ್ಣಾಹುತಿ, ರಂಗಪೂಜೆ, ಮಹಾಮಂಗಳಾರತಿ, ಅಷ್ಟಾವಧಾನ ಸೇವೆ, ಪ್ರಸಾದ, ಸ್ಥಳ: ಅರ್ಕ ಫೌಂಡೇಷನ್, ಬೋಗಾದಿ –ಗದ್ದಿಗೆ ರಸ್ತೆ.

■ **ಮೈ ಭಾರತ್ ನೆಹರೂ ಯುವ ಕೇಂದ್ರ, ಮೈಸೂರು ಸಿಟಿ ಟ್ರಾಫಿಕ್ ಪೊಲೀಸ್, ಕಾವೇರಿ ಕಾಲೇಜ್ ಆಫ್ ಫಿಸಿಯೋಥೆರಪಿ** : ರಸ್ತೆ ಸುರಕ್ಷತಾ ಜಾಗೃತಿ ಅಭಿಯಾನ, ಉದ್ಘಾಟನೆ: ನಿವೃತ್ತ ಪ್ರಾದೇಶಿಕ ನಿರ್ದೇಶಕ ಎಂ.ಎನ್. ನಟರಾಜ್, ಅಧ್ಯಕ್ಷತೆ : ಕಾವೇರಿ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ ಡೀನ್ ಡಾ.ಎಸ್. ಶ್ರೀಕಂಠಸ್ವಾಮಿ, ಮುಖ್ಯ ಅತಿಥಿಗಳು: ಪೊಲೀಸ್ ಇನ್ಸ್‌ಪೆಕ್ಟರ್ ಕೆ.ವಿ. ಶ್ರೀಧರ್, ಪ್ರೊ. ಜಿ.ಪವನ್ ಕುಮಾರ್, ಸ್ಥಳ: ಕಾವೇರಿ ಕಾಲೇಜ್ ಆಫ್ ಫಿಸಿಯೋಥೆರಪಿ, ಬೆಳಗ್ಗೆ 11ಕ್ಕೆ.

■ **ಗಂಧದ ಗುಡಿ ಫೌಂಡೇಷನ್, ವಿವಿ ಪುರಂ ಸಂಚಾರ ಠಾಣೆ** : ಚಾಕೋಲೇಟ್ ಮತ್ತು ಗುಲಾಬಿ ಹೂ ನೀಡುವ ಮೂಲಕ ರಸ್ತೆ ಸುರಕ್ಷತಾ ಮಾಸಾಚರಣೆ, ಉಪಸ್ಥಿತರು: ವಿ.ವಿ.ಪುರಂ ಸಂಚಾರ ಠಾಣೆ ಪೊಲೀಸ್ ಇನ್ಸ್‌ಪೆಕ್ಟರ್ ಲವಕುಮಾರ್ ಎಂ.ಆರ್., ಸಬ್ ಇನ್ಸ್‌ಪೆಕ್ಟರ್ ಗೌತಮ್ ಗೌಡ, ಮೋಹನ್, ಫೌಂಡೇಷನ್ ರಾಜ್ಯಾಧ್ಯಕ್ಷ ಆರ್ಯನ್ ಗಂಧದಗುಡಿ, ಗೌರವಾಧ್ಯಕ್ಷ ನಾಗೇಂದ್ರ ಪ್ರಸಾದ್, ರಾಜ್ಯ ಉಪಾಧ್ಯಕ್ಷ ಮನೋಹರ್‌ಗೌಡ, ಆರ್.ಜೆ. ದುಷ್ಯಂತ್, ಪೃಥ್ವಿರಾಜ್, ಮೇಘನ್‌ಗೌಡ, ಯಶೋಧ, ಸ್ಥಳ:ಚಂದ್ರಮೌಳೇಶ್ವರ ದೇವಸ್ಥಾನ, ಕಾಳಿದಾಸ ರಸ್ತೆ, ಬೆಳಗ್ಗೆ 11ಕ್ಕೆ.

■ **ಮೈಸೂರು ವಿಶ್ವವಿದ್ಯಾನಿಲಯ, ಜೈನಶಾಸ್ತ್ರ ಮತ್ತು ಪ್ರಾಕೃತ ಅಧ್ಯಯನ ವಿಭಾಗ** : ಕನ್ನಡ ಜೈನ ಮಹಾಕಾವ್ಯಗಳ ತಾತ್ವಿಕ ಜಿಜ್ಞಾಸೆ ಕುರಿತು ವಿಚಾರ ಸಂಕಿರಣದ ಸಮಾರೋಪ ಸಮಾರಂಭ, ಸಮಾರೋಪ ನುಡಿ : ಸಾಹಿತಿ ಪ್ರೊ. ಅರವಿಂದ ಮಾಲಗತ್ತಿ, ಅಧ್ಯಕ್ಷತೆ : ಮಾಳವಿಯ ಮಿಷನ್ ಶಿಕ್ಷಕರ ತರಬೇತಿ ಕೇಂದ್ರದ ನಿರ್ದೇಶಕ ಪ್ರೊ. ಸುತ್ತೂರು ಎಸ್. ಮಾಲಿನಿ, ಉಪಸ್ಥಿತರು : ಜೈನಶಾಸ್ತ್ರ ಮತ್ತು ಪ್ರಾಕೃತ ಅಧ್ಯಯನ ವಿಭಾಗದ ಅಧ್ಯಕ್ಷ ಪ್ರೊ. ಎಸ್.ಡಿ. ಶಶಿಕಲಾ, ಸ್ಥಳ: ಜೈನಶಾಸ್ತ್ರ ಮತ್ತು ಪ್ರಾಕೃತ ಅಧ್ಯಯನ ವಿಭಾಗದ ಸೆಮಿನಾರ್ ಹಾಲ್, ಸಂಜೆ 5.15 ರಿಂದ.

■ **ಮೈಸೂರು ಜಿಲ್ಲಾ ಔಷಧಿ ವ್ಯಾಪಾರಿಗಳ ಕ್ಷೇಮಾಭಿವೃದ್ಧಿ ಸಂಘ :** 50ನೇ ವರ್ಷದ ವಾರ್ಷಿಕೋತ್ಸವದ ಅಂಗವಾಗಿ ರಕ್ತದಾನ ಶಿಬಿರ, ಮುಖ್ಯ ಅತಿಥಿಗಳು : ಶಾಸಕ ತನ್ವೀರ್ ಸೇಠ್, ಡೆಪ್ಯುಟಿ ಡ್ರಗ್ಸ್ ಕಂಟ್ರೋಲರ್ ಅರುಣ್, ಸ್ಥಳ: ಮೆಜೆಸ್ಟಿಕ್ ಹಿರಿಯ ಪ್ರಾಥಮಿಕ ಶಾಲೆ, ಉದಯಗಿರಿ, ಬೆಳಗ್ಗೆ 8ಕ್ಕೆ.


■ **ಶ್ರೀ ನಟರಾಜ ಪ್ರೌಢಶಾಲೆ** : ವಾರ್ಷಿಕೋತ್ಸವ, ಸಾನ್ನಿಧ್ಯ : ಶ್ರೀ ನಟರಾಜ ಪ್ರತಿಷ್ಠಾನ ಅಧ್ಯಕ್ಷ ಶ್ರೀ ಚಿದಾನಂದ ಸ್ವಾಮೀಜಿ, ಮುಖ್ಯ ಅತಿಥಿಗಳು : ಕಾಡಾ ಅಧ್ಯಕ್ಷ ಮರಿಸ್ವಾಮಿ, ಅಧ್ಯಕ್ಷತೆ : ಶ್ರೀ ನಟರಾಜ ಪ್ರತಿಷ್ಠಾನ ವಿಶೇಷಾಧಿಕಾರಿ ಪ್ರೊ. ಎಸ್. ಶಿವರಾಜಪ್ಪ, ಉಪಸ್ಥಿತರು : ಪ್ರೊ. ಎನ್.ಆರ್. ಚಂದ್ರೇಗೌಡ, ಮುಖ್ಯೋಪಾಧ್ಯಾಯ ಶಿವಕುಮಾರ, ಸ್ಥಳ: ಶ್ರೀ ನಟರಾಜ ಸಭಾ ಭವನ, ಬೆಳಗ್ಗೆ 11ಕ್ಕೆ

■ **ಸ್ವದೇಶಿ ಜಾಗರಣ ಮಂಚ್ :** ಸ್ವದೇಶಿ ಮೇಳ–2025, ಬೆಳಗ್ಗೆ 10.30 ರಿಂದ ಗೋಪಾಲಕರ ಸಮ್ಮೇಳನ, ಉಪಸ್ಥಿತರು : ಆರ್ಥಿಕ ತಜ್ಞ ಪ್ರೊ. ಬಿ.ಎಂ. ಕುಮಾರಸ್ವಾಮಿ, ಪ್ರವೀಣ ಸರಳಾಯ, ಸಂಜೆ 5 ರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು, ಕನ್ನಡ ನಾಡುನುಡಿ–ಗಮಕ ವಾಚನ, ವಿದುಷಿ ಪಲ್ಲವಿ ಭಟ್ ಅವರಿಂದ, ವ್ಯಾಖ್ಯಾನ : ಜಿ.ಆರ್. ಶ್ರೀವತ್ಸ, ಭಕ್ತಿ ಸಂಗೀತ–ವಿದುಷಿ ಪ್ರಿಯಾಂಕ ರಾವ್ ಮತ್ತು ತಂಡ; ಸಂಜೆ 6.30 ರಿಂದ ದ್ವಂದ್ವ ಪಿಟೀಲು ವಾದನ, ಕು. ಅಮೃತವರ್ಷಿಣಿ ಭಾರ್ಗವ, ಚಿ. ವಿಶ್ವೇಶ್ವರ ಭಾರ್ಗವ, ಸಂಜೆ 7.30 ರಿಂದ ಮಿಮಿಕ್ರಿ ಗೋಪಿ ಅವರಿಂದ ಹಾಸ್ಯ ಸಂಜೆ, ಸ್ಥಳ: ಮಹಾರಾಜ ಕಾಲೇಜು ಮೈದಾನ.

■ **ಶ್ರುತಿಮಂಜರಿ ಪ್ರತಿಷ್ಠಾನ, ರೋಟರಿ ಪಶ್ಚಿಮ** : 27ನೇ ವಾರ್ಷಿಕ ಸಂಗೀತೋತ್ಸವ, ಕರ್ನಾಟಕ ಶಾಸ್ತ್ರೀಯ ಸಂಗೀತ, ವಿದುಷಿ ಅಮೃತ ವೆಂಕಟೇಶ್–ಗಾಯನ, ವಿದ್ವಾನ್ ವೈಭವ್ ರಮಣಿ–ಪಿಟೀಲು, ವಿದ್ವಾನ್ ತುಮಕೂರ್ ಬಿ. ರವಿಶಂಕರ್–ಮೃದಂಗ, ಸ್ಥಳ: ರೋಟರಿ ಪಶ್ಚಿಮ ಸಭಾಂಗಣ, ಕಾಮಾಕ್ಷಿ ಆಸ್ಪತ್ರೆ ಎದುರು, ಸರಸ್ವತಿಪುರಂ, ಸಂಜೆ 6ಕ್ಕೆ.

■ **ನಾದಬ್ರಹ್ಮ ಸಂಗೀತ ಸಭಾ :** ಸಂಗೀತ ಕಲಾನಿಧಿ ಪರೂರು ಎಂಎಸ್‌ಜಿ ಸಂಸ್ಮರಣಾ ಕಾರ್ಯಕ್ರಮ, ವಿದ್ವಾನ್ ರಮಣ ಬಾಲಚಂದ್ರನ್ ಅವರಿಂದ ಕರ್ನಾಟಕ ಶಾಸ್ತ್ರೀಯ ವೀಣಾವಾದನ, ವಿದ್ವಾನ್ ಪತ್ರಿ ಸತೀಶ್ ಕುಮಾರ್ –ಮೃದಂಗ, ವಿದ್ವಾನ್ ಜಿ. ಗುರುಪ್ರಸನ್ನ–ಖಂಜಿರ, ಸ್ಥಳ: ನಾದಬ್ರಹ್ಮ ಸಂಗೀತ ಸಭಾ, ಜೆಎಲ್‌ಬಿ ರಸ್ತೆ, ಸಂಜೆ 6ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಬಣ್ಣದ ಬಾನಾಡಿಗಳು– ಬಾನುಲಿ ಸರಣಿ, ರಚನೆ : ಡಾ. ಕಲೀಂವುಲ್ಲಾ, ಪ್ರಸ್ತುತಿ: ಜಿ. ಶಾಂತಕುಮಾರ್, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಸಿ. ವಿಶ್ವನಾಥ್, ಅಂಬಯ್ಯನುಲಿ, ವ್ಯಾಖ್ಯಾನ –ಡಾ. ಪ್ರದೀಪ್ ಕುಮಾರ್ ಹೆಬ್ರಿ, 6.50 ರೈತರಿಗೆ ಸಲಹೆ, 7.15 KABHI ಕರ್ನಾಟಕ–ಮೆದುಳು ಆರೋಗ್ಯ ಕುರಿತ ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ನಿಮ್ಹಾನ್ಸ್ ಸಂಸ್ಥೆ, ಬೆಂಗಳೂರು, 8.30 ಕನ್ನಡ ಚಿತ್ರಗೀತೆಗಳು, 9.05 ಗರ್ಭಕಂಠದ ಕ್ಯಾನ್ಸರ್ ಕುರಿತು ಮಾಹಿತಿ, ಪ್ರಾಯೋಜಕರು: ಇಂಡಿಯನ್ ಕ್ಯಾನ್ಸರ್ ಸೊಸೈಟಿ, 9.10 ನಮ್ಮ ಆರೋಗ್ಯ 'ಚಿಕ್ಕವಯಸ್ಸಿನವರಲ್ಲಿ ಹೃದಯಾಘಾತ–ಕಾರಣಗಳು ಮತ್ತು ಪರಿಹಾರ' ಕುರಿತು ಡಾ. ಕೇಶವಮೂರ್ತಿ. ವಿ ಅವರೊಂದಿಗೆ ಮಾತುಕತೆ ಮತ್ತು 'ಆಹಾರವೇ ಆರೋಗ್ಯ' ಕುರಿತು ಮಂಡ್ಯ ಜಿಲ್ಲಾ ಆಯುಷ್ ಅಧಿಕಾರಿ ಡಾ. ಬಿ. ಎಸ್.ಸೀತಾಲಕ್ಷ್ಮೀ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ–ಬೇದ್ರೆ ಮಂಜುನಾಥ್, 9.30 ಗಾಂಧಿ ಸ್ಮೃತಿ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ : ವೊಡುಮುಡಿ ಸುಧಾಕರ್ – ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ 'ಸಂಗೀತ ಸಂಭ್ರಮ ನಾದಲಯ ಸಂಗಮ', ಪ್ರಸ್ತುತಿ : ಹೆಚ್. ಎಲ್. ಶಿವಶಂಕರಸ್ವಾಮಿ

ಮಧ್ಯಾಹ್ನ: 12.35ದೇವರನಾಮ, 12.45 ಕಾದಂಬರಿ ವಿಹಾರ – ಎಂ.ಆರ್. ಶ್ರೀನಿವಾಸಮೂರ್ತಿಯವರ 'ರಂಗಣ್ಣನ ಕನಸಿನ ದಿನಗಳು' ಕಾದಂಬರಿಯ ಬಾನುಲಿ ಓದು. ಪ್ರಸ್ತುತಿ : ಉಮೇಶ್. ಎಸ್. ಎಸ್., 1.00 ಪ್ರಗತಿ ಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 2.40 ದಾರಿ ದೀಪ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು: FEBA India, 2.55 ಸಿರಿಗನ್ನಡಂ ಗೆಲ್ಗೆ, ಪ್ರಸ್ತುತಿ : ಜಿ.ಕೆ. ರವೀಂದ್ರಕುಮಾರ್, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಲಾಲ್‌ಗುಡಿ ಶ್ರೀಮತಿ ಬ್ರಹ್ಮಾನಂದಂ ಮತ್ತು ಲಾಲ್‌ಗುಡಿ ಆರ್. ರಾಜಲಕ್ಷ್ಮೀ –ಯುಗಳ ವೈಯೋಲಿನ್ ವಾದನ, 4.00 ಮಹಿಳಾರಂಗ–ಜೀವನ್ಮುಖಿ– ಆಟೋ ಚಾಲಕಿ ದಿವ್ಯಾ. ಎನ್ ಅವರೊಂದಿಗೆ ಮಾತುಕತೆ, ಪ್ರಸ್ತುತಿ : ಕೀರ್ತನ, 4.30 ವೃತ್ತಿ ಮಾರ್ಗದರ್ಶನ 'ಲಾಜಿಸ್ಟಿಕ್ಸ್ ಅಂದರೆ ಸರಕು ಸಾಗಣೆ ವಿಷಯದಲ್ಲಿ ಇರುವ ವೃತ್ತಿಪರ ಅವಕಾಶಗಳು' ಕುರಿತು ಲಾಜಿಸ್ಟಿಕ್ಸ್ ಉದ್ಯಮಿ ವಿಠ್ಠಲ. ಹೆಚ್.ಜಿ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ : ಬೇದ್ರೆ ಮಂಜುನಾಥ್, 6.50 ಕೃಷಿರಂಗ : ಸುತ್ತೂರು ಕೃಷಿ ಮೇಳ–ಈ ಕುರಿತು ನಂಜನಗೂಡು ತಾಲೂಕು ಸುತ್ತೂರಿನ ಕೃಷಿ ವಿಜ್ಞಾನ ಕೇಂದ್ರದ ಪ್ರಧಾನ ವಿಜ್ಞಾನಿ ಡಾ.ಬಿ.ಎನ್. ಜ್ಞಾನೇಶ್ ಅವರೊಂದಿಗೆ ಸಂದರ್ಶನ. ಸಂದರ್ಶಕರು: ಎನ್. ಕೇಶವಮೂರ್ತಿ, 7.45 ಕನ್ನಡದಲ್ಲಿ ಭಾಷಣ, 8.00 ಸಂಧ್ಯಾರಾಗ, 8.30 ಹಿಂದಿ ಚಿತ್ರಗೀತೆಗಳು, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ : ಮಹಾರಾಜಪುರಂ ವಿಶ್ವನಾಥ ಅಯ್ಯರ್ – ಹಾಡುಗಾರಿಕೆ, 10.00 ತತ್ವ ಸಂಚಾರ : ಜನಪದ ಗಾಯಕರ ತತ್ವಗಾಯನ, ಪ್ರಸ್ತುತಿ: ಡಾ. ಮೈಸೂರು ಉಮೇಶ್, 10.30 ಸವಿನೆನಪು

ಮೈಸೂರು ಮಿತ್ರ ಶುಕ್ರವಾರ 24 ಜನವರಿ 2025

ಸರ್ಕಾರಿ ಅತಿಥಿಗೃಹ ಎದುರು, ಲಲಿತ ಮಹಲ್ ರಸ್ತೆಯ


ಪಾರಂಪರಿಕ 'ಸ್ವಾಗತ ಕಮಾನು'ಗಳ ಸಂರಕ್ಷಣಾ ಕಾಮಗಾರಿ

ತೇಪೆ ಹಾಕುವ ಶಾಸ್ತ್ರಕ್ಕೆ ಸೀಮಿತವಾಗದಿರಲೆಂದು ಎಚ್ಚರಿಸಿದ ನಾಗರಿಕರು

1.2 ಕೋಟಿ ರೂ. ವೆಚ್ಚದಲ್ಲಿ ಸಂರಕ್ಷಣೆಗೆ ಮುಂದಾದ ಪಾಲಿಕೆ



ಲಲಿತ ಮಹಲ್ ರಸ್ತೆಯಲ್ಲಿರುವ ಪಾರಂಪರಿಕ ಸ್ವಾಗತ ಕಮಾನು.



ಸರ್ಕಾರಿ ಅತಿಥಿಗೃಹದ ಬಳಿಯಿರುವ ಪಾರಂಪರಿಕ ಸ್ವಾಗತ ಕಮಾನು.

ಮೈಸೂರು, ಜ.23(ಪಿಎಂ)– ನಿರ್ಲಕ್ಷ್ಯಕ್ಕೆ ಒಳಗಾಗಿ ಸೂಕ್ತ ನಿರ್ವಹಣೆ ಇಲ್ಲದೆ ಹಾನಿಗೊಳಗಾಗಿರುವ ಎರಡು ಪಾರಂಪರಿಕ 'ಸ್ವಾಗತ ಕಮಾನು'ಗಳ ಸಂರಕ್ಷಣಾ ಕಾಮಗಾರಿ ಕೈಗೆತ್ತಿಕೊಳ್ಳಲು ಸಿದ್ಧತೆ ನಡೆದಿದೆ. ಮೈಸೂರಿನ ತಿ.ನರಸೀಪುರ ರಸ್ತೆಯಲ್ಲಿರುವ (ಲಲಿತ ಮಹಲ್ ರಸ್ತೆ) ಹಾಗೂ ನಜರ್‌ಬಾದಿನ ಸರ್ಕಾರಿ ಅತಿಥಿ ಗೃಹದ ಎದುರಿರುವ 'ಸ್ವಾಗತ ಕಮಾನು'ಗಳನ್ನು (ಹೆರಿಟೇಜ್ ಆರ್ಚ್) 1.2 ಕೋಟಿ ರೂ. ವೆಚ್ಚದಲ್ಲಿ ದುರಸ್ತಿಗೊಳಿಸಿ ಸಂರಕ್ಷಿಸಲು ಮೈಸೂರು ಮಹಾನಗರ ಪಾಲಿಕೆ ಮುಂದಾಗಿದೆ.

'ಮೈಸೂರು ಮಿತ್ರ' ಮತ್ತು 'ಸ್ಟಾರ್ ಆಫ್ ಮೈಸೂರ್'ನಲ್ಲಿ ಈ ಎರಡು ಸ್ವಾಗತ ಕಮಾನುಗಳ ದುಸ್ಥಿತಿ ಕುರಿತು ಅನೇಕ ಬಾರಿ ಸುದ್ದಿ ಪ್ರಕಟಿಸಿ ಸ್ಥಳೀಯ ಆಡಳಿತದ ಗಮನ ಸೆಳೆಯಲಾಗಿತ್ತು ಅದಾಗ್ಯೂ ತ್ವರಿತಗತಿಯಲ್ಲಿ ಕ್ರಮ ಕೈಗೊಳ್ಳಲು ಪಾಲಿಕೆ ಮುಂದಾಗಿರಲಿಲ್ಲ ಇದೀಗ ತಡವಾಗಿಯಾದರೂ ಸ್ಥಳೀಯ ಆಡಳಿತ ಎಚ್ಚೆತ್ತುಕೊಂಡು ಸಂರಕ್ಷಣಾ ಕಾಮಗಾರಿ ಕೈಗೊಳ್ಳಲು ನಿರ್ಧರಿಸಿದೆ.

ಮತ್ತೊಂದೆಡೆ ಇಷ್ಟು ಸುದೀರ್ಘ ಕಾಲದವರೆಗೆ ಸ್ವಾಗತ ಕಮಾನುಗಳ ನಿರ್ವಹಣೆಯನ್ನು ಪಾಲಿಕೆ ಮರೆತಿದ್ದೇ ಅವುಗಳಿಗೆ ಹಾನಿಯಾಗಲು ಕಾರಣ. ಸಾಕಷ್ಟು ಪಾರಂಪರಿಕ ಕಟ್ಟಡಗಳು ಇರುವ ಕಾರಣಕ್ಕೆ ಮೈಸೂರು, 'ಪಾರಂಪರಿಕ ನಗರ' ಎಂಬ ಹಿರಿಮೆ ಗಳಿಸಿಕೊಂಡಿದೆ. ಆದರೆ ಮೈಸೂರಿನ ಪಾರಂಪರಿಕ ಕಟ್ಟಡಗಳ ಸಂರಕ್ಷಣೆ ಸೂಕ್ತ ರೀತಿಯಲ್ಲಿ ಆಗುತ್ತಿಲ್ಲ. ಇದೀಗ ಎರಡು ಸ್ವಾಗತ ಕಮಾನುಗಳ ಸಂರಕ್ಷಣಾ ಕಾಮಗಾರಿಗೆ ಪಾಲಿಕೆ ಮುಂದಾಗಿರುವುದು ಸ್ವಾಗತಾರ್ಹ. ಆದರೆ ಈ ಕಾಮಗಾರಿ ಕೇವಲ ತೇಪೆ ಹಾಕುವ ಕೆಲಸವಾಗುವ ಮೂಲಕ ಹಳ್ಳ ಹಿಡಿಯದಿರಲಿ ಎಂದು ಹಲವು ನಾಗರಿಕರು ಎಚ್ಚರಿಸಿದ್ದಾರೆ.

> ಟೆಂಡರ್ ಕರೆಯಲಾಗಿದ್ದು, ಈ ಪ್ರಕ್ರಿಯೆ ಮುಗಿಯುತ್ತಿದ್ದಂತೆ ಸಂರಕ್ಷಣಾ ಕಾಮಗಾರಿ ಆರಂಭವಾಗಲಿದೆ. 1.2 ಕೋಟಿ ರೂ. ವೆಚ್ಚದಲ್ಲಿ ಈ ಎರಡು ಸ್ವಾಗತ ಕಮಾನುಗಳ ಸಂರಕ್ಷಣೆಗೆ ಮುಂದಾಗಲಾಗಿದೆ. ಸಂರಕ್ಷಣೆ ಸಂಬಂಧ ಈ ಹಿಂದೆ ಸಮಿತಿ ರಚಿಸಿ ಸರ್ವೇ ಕಾರ್ಯ ನಡೆಸಲಾಗಿತ್ತು.
> –ಕೆ.ಜೆ.ಸಿಂಧು, ಉಪ ಆಯುಕ್ತರು (ಅಭಿವೃದ್ಧಿ), ಮೈಸೂರು ಮಹಾನಗರ ಪಾಲಿಕೆ

ಶತಮಾನದಷ್ಟು ಪರಂಪರೆಯನ್ನು ಹೊಂದಿರುವ ಈ ಸ್ವಾಗತ ಕಮಾನುಗಳನ್ನು ಕಬ್ಬಿಣ ಮತ್ತು ಸಿಮೆಂಟ್ ಬಳಸದೇ ಸುರ್ಕಿ ಗಾರೆ (ಇಟ್ಟಿಗೆ ತುಂಡುಗಳು ಮತ್ತು ಸುಣ್ಣದ ಮಿಶ್ರಣ) ಮತ್ತು ಇಟ್ಟಿಗೆಗಳಲ್ಲಿ ಅತ್ಯಂತ ಕಲಾತ್ಮಕವಾಗಿ ನಿರ್ಮಾಣ ಮಾಡಲಾಗಿದೆ. ಸೂಕ್ತ ನಿರ್ವಹಣೆಯ ಕೊರತೆಯಿಂದ ಕಮಾನುಗಳಲ್ಲಿರುವ ಉಬ್ಬು ಚಿತ್ರಗಳ ಕಲಾತ್ಮಕತೆಯು ಸೂಕ್ಷ್ಮವಾಗಿ ನೋಡಿದರಷ್ಟೇ ಕಾಣಿಸಲಿವೆ. ಇದೇ ಕಮಾನುಗಳ ಮಾದರಿಯಲ್ಲಿ ಕೃಷ್ಣರಾಜ–ಬುಲೇವಾರ್ಡ್ ರಸ್ತೆ–ಹುಣಸೂರು ರಸ್ತೆ ಜಂಕ್ಷನ್ (ಹಳೇ ಡಿಸಿ ಆಫೀಸ್ ಬಳಿ), ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು ಆವರಣ, ಇರ್ವಿನ್ ರಸ್ತೆ ಸಬ್‌ಅರ್ಬನ್ ಬಸ್ ನಿಲ್ದಾಣದ ಸಮೀಪವೂ ಪಾರಂಪರಿಕ ಕಮಾನುಗಳು ಇವೆ.

'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಮೈಸೂರು ಜಿಲ್ಲಾ ಪರಂಪರೆ ಸಂರಕ್ಷಣಾ ಸಮಿತಿ ಸದಸ್ಯ ಪ್ರೊ.ಎನ್.ಎಸ್. ರಂಗರಾಜು, ಮೈಸೂರಿನ ಯಾವುದೇ ಪಾರಂಪರಿಕ ಕಟ್ಟಡಗಳಿಗೆ ಸಿಮೆಂಟ್ ಬಳಸಿಲ್ಲ. ಕಬ್ಬಿಣ ತೀರ ಕಡಿಮೆ ಪ್ರಮಾಣದಲ್ಲಿ ಬಳಸಿರುವುದನ್ನು ಕಾಣಬಹುದು. ಪಾರಂಪರಿಕ ನಿರ್ಮಾಣಗಳ ಸರ್ವೇ ಮತ್ತು ಅಧ್ಯಯನಕ್ಕಾಗಿ ಪರಂಪರೆ ಸಂರಕ್ಷಣಾ ಉಪಸಮಿತಿ ರಚಿಸಿದ್ದು, ಇದಕ್ಕೆ ನಾನೂ ಸದಸ್ಯ. ಇದೇ ಉಪಸಮಿತಿ ನೇತೃತ್ವದಲ್ಲಿ ಸ್ವಾಗತ ಕಮಾನುಗಳ ಸಂರಕ್ಷಣೆ ಕುರಿತು ಸರ್ವೇ ನಡೆಸಲಾಗಿದೆ ಎಂದು ತಿಳಿಸಿದರು.

ಪಾಲಿಕೆ ಆಯುಕ್ತ ಅಸಾದ್ ಉರ್ ರೆಹಮಾನ್ ಷರೀಫ್, ಪಾಲಿಕೆ ಉಪ ಆಯುಕ್ತೆ (ಅಭಿವೃದ್ಧಿ) ಕೆ.ಜೆ.ಸಿಂಧು, ಪುರಾತತ್ವ ಸಂಗ್ರಹಾಲಯ ಮತ್ತು ಪರಂಪರೆ ಇಲಾಖೆ ಉಪನಿರ್ದೇಶಕಿ ಸಿ.ಎನ್.ಮಂಜುಳಾ ಹಾಗೂ ಪಾಲಿಕೆಯ ಇಬ್ಬರು ಇಂಜಿನಿಯರ್ ಅವರೊಂದಿಗೆ ಸರ್ವೇ ಮಾಡಲಾಗಿತ್ತು. ನಗರದ ಎಲ್ಲಾ ಪಾರಂಪರಿಕ ಕಮಾನುಗಳ ಸರ್ವೇ ಮಾಡಿದ್ದು, ಸಂರಕ್ಷಣೆ ಸಂಬಂಧ ವರದಿ ಸಹ ನೀಡಲಾಗಿದೆ. ಲಲಿತ ಮಹಲ್ ರಸ್ತೆಯ ಕಮಾನಿನ ನಾಲ್ಕು ಕಂಬಗಳ ಮೇಲೆ ಐದು ದೀಪಗಳ ಗುಚ್ಛ ಇದ್ದು, ಅವು ಕಬ್ಬಿಣದ ಗುಚ್ಛಗಳಾಗಿವೆ. ಅವುಗಳನ್ನು ಉಳಿಸಿಕೊಳ್ಳಲಾಗುವುದು. ಜೊತೆಗೆ ರಸ್ತೆ ಅಗಲೀಕರಣಕ್ಕೆ ಒತ್ತು ನೀಡಲಾಗಿದೆ. ಯಾವುದೇ ರೀತಿಯಲ್ಲಿ ಪಾರಂಪರಿಕ ವಿನ್ಯಾಸಕ್ಕೆ ಧಕ್ಕೆಯಾಗದಂತೆ ಹಾಗೂ ಅದೇ ಪಾರಂಪರಿಕ ನಿರ್ಮಾಣ ತಂತ್ರಜ್ಞಾನ, ಸಾಮಗ್ರಿಗಳೊಂದಿಗೆ ಸಂರಕ್ಷಣಾ ಕಾಮಗಾರಿ ಕೈಗೊಳ್ಳಲು ವರದಿಯಲ್ಲಿ ಶಿಫಾರಸು ಮಾಡಲಾಗಿದೆ ಎಂದು ಹೇಳಿದರು.

ಎರಡನೇ ಹಂತದಲ್ಲಿ ಮಹಾರಾಣಿ ವಿಜ್ಞಾನ ಕಾಲೇಜು ಆವರಣದಲ್ಲಿರುವ ಕಮಾನು ಹಾಗೂ ಮೈಸೂರಿನ ಕೇಂದ್ರ ಕಾರಾಗೃಹದ ಸಮೀಪದ ಕಮಾನುಗಳ ಸಂರಕ್ಷಣೆ ಕಾಮಗಾರಿ ನಡೆಸಲೂ ಶಿಫಾರಸು ಮಾಡಲಾಗಿದೆ. ಮಹಾರಾಣಿ ವಿಜ್ಞಾನ ಕಾಲೇಜು ಆವರಣದಲ್ಲಿರುವ ಕಮಾನಿನ ಸಂರಕ್ಷಣೆಯೊಂದಿಗೆ ಪೀಠದೊಂದಿಗೆ ವಾಣಿವಿಲಾಸ ಸನ್ನಿಧಾನ ಅವರ ಪ್ರತಿಮೆ ಸ್ಥಾಪಿಸಲು ಹಾಗೂ ಮೈಸೂರಿನ ಅರುಣ್ ಯೋಗಿ ರಾಜ್ ಅವರಿಗೇ ಪ್ರತಿಮೆ ಕೆತ್ತನೆಗೂ ಅವಕಾಶ ಕಲ್ಪಿಸಬೇಕೆಂದು ಶಿಫಾರಸು ಮಾಡಲಾಗಿದೆ ಎಂದು ತಿಳಿಸಿದರು.

ಮಕ್ಕಳಿಂದ 'ಅಳಿಲು ರಾಮಾಯಣ' ನಾಟಕ ಪ್ರದರ್ಶನ

ರಂಗಭೂಮಿಯಿಂದ ಮಕ್ಕಳ ಸರ್ವತೋಮುಖ ವಿಕಾಸ

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್.ಮಲ್ಲಿಕಾರ್ಜುನ ಸ್ವಾಮಿ

ಮೈಸೂರು, ಜ.23(ಪಿಎಂ)– ಮಕ್ಕಳನ್ನು ರಂಗಭೂಮಿಯಲ್ಲಿ ತೊಡಗಿಸುವುದರಿಂದ ಅವರ ಸರ್ವತೋಮುಖ ವಿಕಾಸ ಸಾಧ್ಯವಾಗಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮೈಸೂರು ವಿಭಾಗದ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನಸ್ವಾಮಿ ಅಭಿಪ್ರಾಯಪಟ್ಟರು.

ಮೈಸೂರಿನ ಕಲಾಮಂದಿರ ಆವರಣದ ಕಿರುರಂಗ ಮಂದಿರದಲ್ಲಿ ಸಂಚಲನ ಮೈಸೂರು ವತಿಯಿಂದ ಹಮ್ಮಿಕೊಂಡಿರುವ ರಾಜ್ಯ ಮಟ್ಟದ ಸಂಚಲನ ಮಕ್ಕಳ ನಾಟಕೋತ್ಸವ ಮತ್ತು ಜಾನಪದ ಉತ್ಸವ 2024–25ರ ಎರಡನೇ ದಿನದ ಸಭಾ ಕಾರ್ಯಕ್ರಮದಲ್ಲಿ ಗುರುವಾರ ಅವರು ಮಾತನಾಡಿದರು.

ರಂಗಭೂಮಿಯಲ್ಲಿ ಮಕ್ಕಳನ್ನು ಪರಿಗಣಿಸುವ ಅಗತ್ಯವಿದೆ. ಹೀಗಾಗಿ ಈ ಬಾರಿ ಬಹುರೂಪಿ ನಾಟಕೋತ್ಸವದಲ್ಲಿ ಮಕ್ಕಳ ಬಹುರೂಪಿ ಕಾರ್ಯಕ್ರಮ ಸೇರ್ಪಡೆ ಮಾಡಲಾಗಿತ್ತು. ಸಾಂಸ್ಕೃತಿಕ ಆಯಾಮದ ಮೂಲಕ ಮಕ್ಕಳನ್ನು ಬೆಳೆಸಬೇಕಿದ್ದು, ಅವರ ಚಟುವಟಿಕೆಯಲ್ಲಿ ಹಿರಿಯರು ಬೆರೆಯಬೇಕು ಎಂದರು.




ಮೈಸೂರಿನ ಕಲಾಮಂದಿರ ಆವರಣದ ಕಿರುರಂಗಮಂದಿರದಲ್ಲಿ ಗುರುವಾರ ಶಾಲಾ ಮಕ್ಕಳು ಅಳಿಲು ರಾಮಾಯಣ ನಾಟಕ ಪ್ರದರ್ಶಿಸಿದರು.

ಜಿಲ್ಲಾ ತರಬೇತಿ ಶಿಕ್ಷಣ ಸಂಸ್ಥೆ ಹಿರಿಯ ಉಪನ್ಯಾಸಕ ಕೆ.ವಿ.ಸುರೇಶ್ ಮಾತನಾಡಿ, ಮಕ್ಕಳ ನಾಟಕೋತ್ಸವ ಇಂದಿನ ಜರೂರು. ಜೊತೆಗೆ ಸವಾಲು ಕೂಡ. ಅನಾದಿ ಕಾಲದಿಂದಲೂ ಮಾನವನ ಜೀವನದಲ್ಲಿ ರಂಗಭೂಮಿ ಪ್ರಮುಖ ಪಾತ್ರ ವಹಿಸುತ್ತಿದೆ. ಮಕ್ಕಳ ಭಾವನಾತ್ಮಕ ವಿಕಸನ ಹಾಗೂ ಸೃಜನಾತ್ಮಕ ಮನೋಭಾವ ಬೆಳೆಸಲು ರಂಗಭೂಮಿ ಸಹಕಾರಿ ಎಂದು ತಿಳಿಸಿದರು.

ಬಳಿಕ ಪಿಎಂ ಶ್ರೀ ಕೇಂದ್ರೀಯ ವಿದ್ಯಾಲಯದ ಬಾಲಪ್ರತಿಭೆ ರಕ್ಷಾ ಎಂ.ಹಿರೇಮಠ್ ಭರತನಾಟ್ಯ ಪ್ರದರ್ಶಿಸಿದಳು. ನಂತರ ಅಮೃತೇಶ್ವರನ ಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮಕ್ಕಳಿಂದ 'ಅಳಿಲು ರಾಮಾಯಣ' ನಾಟಕ ಪ್ರದರ್ಶನ ಕಂಡಿತು. ಜ.26ರವರೆಗೆ ಪ್ರತಿದಿನ ಸಂಜೆ 6ಕ್ಕೆ ಕಿರುರಂಗಮಂದಿರದಲ್ಲಿ ಮಕ್ಕಳಿಂದ ಜಾನಪದ ಕಾರ್ಯಕ್ರಮ ಹಾಗೂ ನಾಟಕಗಳ ಪ್ರದರ್ಶನ ನಡೆಯಲಿದೆ. ಪ್ರವೇಶ ಉಚಿತವಾಗಿದೆ. ಸಂಚಲನ ಮೈಸೂರು ಮುಖ್ಯಸ್ಥ ದೀಪಕ್ ಮೈಸೂರು, ನಾಟಕಕಾರ ಮಧು ಮಳವಳ್ಳಿ ಮತ್ತಿತರರು ಹಾಜರಿದ್ದರು.

ಸುದ್ದಿಗೋಷ್ಠಿ ನಡುವೆ ಶ್ರೀರಾಮುಲುಗೆ ಜೆ.ಪಿ.ನಡ್ಡಾ ಕರೆ: ದೆಹಲಿಗೆ ಬುಲಾವ್

ಬಳ್ಳಾರಿ, ಜ.23– ಶಾಸಕ ಜನಾರ್ದನ ರೆಡ್ಡಿ ಹಾಗೂ ಮಾಜಿ ಸಚಿವ ಬಿ.ಶ್ರೀರಾಮುಲು ನಡುವೆ ಅಸಮಾಧಾನ ಬಹಿರಂಗಗೊಂಡ ಬೆನ್ನಲ್ಲೇ ಬಿಜೆಪಿ ಹೈಕಮಾಂಡ್ ಮಧ್ಯ ಪ್ರವೇಶಿಸಿದೆ. ಶ್ರೀರಾಮುಲು ಅವರಿಗೆ ಬಿಜೆಪಿ ರಾಷ್ಟ್ರಾಧ್ಯಕ್ಷ ಜೆ.ಪಿ.ನಡ್ಡಾ ಕರೆ ಮಾಡಿ ಸಮಾಧಾನಪಡಿಸಿದ್ದಾರೆ. ಅಲ್ಲದೇ, ದೆಹಲಿಗೆ ಬರುವಂತೆ ಸೂಚಿಸಿದ್ದಾರೆ.



ಜೆ.ಪಿ. ನಡ್ಡಾ



ಬಿ.ಶ್ರೀರಾಮುಲು

ತಮ್ಮ ಮೇಲೆ ಶಾಸಕ ಜನಾರ್ದನ ರೆಡ್ಡಿ ಮಾಡಿರುವ ಆರೋಪಗಳ ಬಗ್ಗೆ ಸ್ಪಷ್ಟನೆ ನೀಡಲು ಬಿ.ಶ್ರೀರಾಮುಲು ಬಳ್ಳಾರಿಯಲ್ಲಿ ಸುದ್ದಿಗೋಷ್ಠಿ ನಡೆಸುತ್ತಿದ್ದ ಸಂದರ್ಭದಲ್ಲೇ ನಡ್ಡಾ ಅವರಿಂದ ಫೋನ್ ಕರೆ ಬಂದಿತ್ತು. ಈ ವೇಳೆ ಮಾತನಾಡಿದ ಶ್ರೀರಾಮುಲು ಬಳಿ ನಡ್ಡಾ ಅವರು ನಿನ್ನೆ ಬೆಂಗಳೂರು ಕೋರ್ ಕಮಿಟಿ ಸಭೆಯಲ್ಲಿ ನಡೆದ ಘಟನೆಯ ಬಗ್ಗೆ ಮಾಹಿತಿ ಪಡೆದರು.

ಈ ವೇಳೆ ತಮ್ಮ ಮಾತಿನಂತೆ ನಡೆದುಕೊಳ್ಳಲು ಒಪ್ಪಿದ ರಾಮುಲು ಅವರಿಗೆ ದೆಹಲಿಗೆ ಬನ್ನಿ, ಕೂತು ಮಾತಾಡೋಣ ಎಂದು ನಡ್ಡಾ ತಿಳಿಸಿದರು. ಇದೇ ವೇಳೆ ಕೋರ್ ಕಮಿಟಿ ಸಭೆಯಲ್ಲಿನ ವಿದ್ಯಮಾನದ ಬಗ್ಗೆ ಶ್ರೀರಾಮುಲು ವಿವರಣೆ ನೀಡಿದರು. ಈ ವೇಳೆ ನಡ್ಡಾ ಅವರ ಮಾತಿಗೆ ಒಪ್ಪಿಗೆ ಸೂಚಿಸಿದ ಶ್ರೀರಾಮುಲು ನಡೆದ ಎಲ್ಲ ಬೆಳವಣಿಗೆಗಳ ಬಗ್ಗೆ ಮಾಹಿತಿ ನೀಡುವುದಾಗಿ ತಿಳಿಸಿದರು. ನಡ್ಡಾ ಅವರೊಂದಿಗಿನ ಮಾತುಕತೆ ಬಳಿಕ ಮಾಧ್ಯಮದವರಿಗೆ ಪ್ರತಿಕ್ರಿಯಿಸಿದ ಶ್ರೀರಾಮುಲು, 'ದೆಹಲಿಗೆ ಯಾವಾಗ ಬರುತ್ತೀರಿ ಅಂತ ಕೇಳಿದರು. ಮುಂದಿನ ವಾರ ಬರುವುದಾಗಿ ಹೇಳಿದ್ದೇನೆ' ಎಂದರು.

ರೇಣುಕಾಸ್ವಾಮಿ ಹತ್ಯೆ ಪ್ರಕರಣ: ಇಂದು ದರ್ಶನ್ ಜಾಮೀನು ರದ್ದು ಕೋರಿ ಸುಪ್ರೀಂಕೋರ್ಟ್‌ಗೆ ಸಲ್ಲಿಸಿದ್ದ ಅರ್ಜಿ ವಿಚಾರಣೆ

ಬೆಂಗಳೂರು, ಜ.23– ರೇಣುಕಾಸ್ವಾಮಿ ಹತ್ಯೆ ಪ್ರಕರಣ ಸಂಬಂಧ ಆರೋಪಿಗಳಾಗಿರುವ ನಟ ದರ್ಶನ್, ಪವಿತ್ರಾಗೌಡ ಸೇರಿದಂತೆ ಏಳು ಮಂದಿಯ ಜಾಮೀನು ರದ್ದುಕೋರಿ ಸುಪ್ರೀಂಕೋರ್ಟ್‌ನಲ್ಲಿ ರಾಜ್ಯ ಸರಕಾರ ಮೇಲ್ಮನವಿ ಸಲ್ಲಿಸಿದ್ದು, ಜ.24ರಂದು ವಿಚಾರಣೆ ನಡೆಯಲಿದೆ.



ದರ್ಶನ್

ಪ್ರಕರಣ ಸಂಬಂಧ 1492 ಪುಟಗಳ ಕಡತವನ್ನು ರಾಜ್ಯ ಸರಕಾರ ಸುಪ್ರೀಂಕೋರ್ಟ್‌ಗೆ ಸಲ್ಲಿಕೆ ಮಾಡಿದ್ದು, ನ್ಯಾಯಮೂರ್ತಿಗಳಾದ ಜೆ.ಬಿ.ಪರ್ದಿವಾಲಾ ಹಾಗೂ ಆರ್.ಮಹದೇವನ್ ಅವರನ್ನು ಒಳಗೊಂಡ ದ್ವಿಸದಸ್ಯ ಪೀಠ ಈ ವಿಚಾರಣೆ ನಡೆಸಲಿದೆ. ಹತ್ಯೆ ಪ್ರಕರಣದಲ್ಲಿ 17 ಮಂದಿ ಆರೋಪಿಗಳಿಗೂ ಜಾಮೀನು ದೊರೆತಿದ್ದು, ಕೃತ್ಯದಲ್ಲಿ ನೇರವಾಗಿ ಭಾಗಿಯಾದರು ಎನ್ನಲಾದ ದರ್ಶನ್, ನಾಗರಾಜು, ಅನುಕುಮಾರ್, ಲಕ್ಷ್ಮಣ್, ಪವಿತ್ರಾಗೌಡ, ಜಗದೀಶ್ ಹಾಗೂ ಪ್ರದೂಷ್ ಅವರಿಗೆ ಹೈಕೋರ್ಟ್ ನೀಡಿರುವ ಜಾಮೀನು ರದ್ದುಕೋರಿ ಮೇಲ್ಮನವಿ ಸಲ್ಲಿಸಲಾಗಿದೆ.

ನಕ್ಕರೆ ಅದೇ ಸ್ವರ್ಗ

ಡಾಕ್ಟರ್ : ನಾನು ಕೊಡೋ ಚಿಕಿತ್ಸೆಯಿಂದ ಗುಣಮುಖವಾದ್ರೆ, ನೀನು ನನಗೆ ಏನ್ ಕೊಡ್ತೀಯಾ?

ತಿಮ್ಮ : ಸ್ವಾಮಿ, ನಾನು ಬಡವ. ಸ್ಮಶಾನದಲ್ಲಿ ಗುಂಡಿ ತೋಡೋನು. ನನ್ನನ್ನು ನೀವು ಬದುಕಿಸಿದ್ರೆ ನಿಮಗೆ ಫ್ರೀಯಾಗಿ ಗುಂಡಿ ತೋಡ್ತೀನಿ...!

ಮೈಸೂರು ಮಿತ್ರ

ಶುಕ್ರವಾರ, 24 ಜನವರಿ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ

(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ.........

ಇನ್ನೊಬ್ಬರಿಗೆ ಅರ್ಥ ಮಾಡಿಸಲಿಕ್ಕಾಗಿ ನಿಮ್ಮ ಸಮಯ ವ್ಯರ್ಥ ಮಾಡಿಕೊಳ್ಳಬಾರದು. ಅವರು ಹೇಳೋದನ್ನ ಕೇಳಬೇಕು ಅಷ್ಟೇ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ತಾಯಿಯನ್ನು ಹೊಡೆಯಬಾರದು, ಗುಬ್ಬಿಯ ಗೂಡನ್ನು ತೆಗೆಯಬಾರದು.

ನಿಮ್ಮ ಪತ್ರಗಳು

■ ದಕ್ಷ ಐಎಎಸ್ ಅಧಿಕಾರಿಯನ್ನು ಮೈಸೂರು ನಗರ ಪಾಲಿಕೆ ಆಯುಕ್ತರಾಗಿ ನೇಮಿಸಲಿ

ಮಾನ್ಯರೆ,

ಮುಖ್ಯಮಂತ್ರಿಗಳ ತವರಲ್ಲೇ ಅಧಿಕಾರಿಯ ಸರ್ವಾಧಿಕಾರಿ ಧೋರಣೆ, ಆಯುಕ್ತ, ಅಧಿಕಾರಿ ವಿರುದ್ಧ ಕ್ರಮಕ್ಕೆ ಅಗ್ರಹ. 'ಮೈಸೂರು ಮಿತ್ರ' ವರದಿ 21.1.25. ಸಂಬಂಧ ಈ ಪತ್ರ ಮೈಸೂರು ನಗರದಲ್ಲಿ ಈಗ ಹೇಳಿಕೊಳ್ಳುವಂತಹ ಯಾವುದೇ ಅಭಿವೃದ್ಧಿ ಕೆಲಸಗಳು ನಡೆಯುವುದು ಕಾಣುತ್ತಿಲ್ಲ. ಗುಂಡಿ ಬಿದ್ದ ರಸ್ತೆಗಳು, ಕಾಡಿನಂತೆ ಗಿಡಗಂಟಿ ಬೆಳೆದ ಪಾರ್ಕ್‌ಗಳು, ಸ್ವಚ್ಛತೆ ಕಾಣದ ಮೋರಿಗಳು, ನಿತ್ಯ ಕಸ ಸಂಗ್ರಹಣೆಯಲ್ಲಿ ಅಸಡ್ಡೆ...ಹೀಗೆ ಕ್ಲೀನ್ ಸಿಟಿ ಎನ್ನುವುದು ದೂರದ ಬೆಟ್ಟ ನುಣ್ಣಗೆ ಎನ್ನುವಂತಾಗಿದೆ.

ಹಲವು ವರ್ಷಗಳ ಹಿಂದೆ ಮೈಸೂರು ನಗರಪಾಲಿಕೆಗೆ ಈಗಿರುವಂತೆಯೇ ಕೆಎಎಸ್ ಅಧಿಕಾರಿಯನ್ನು ಪಾಲಿಕೆ ಆಯುಕ್ತರಾಗಿ ನೇಮಿಸಲಾಗಿತ್ತು. ಆಗ ಯಾವುದೋ ವಿಚಾರವಾಗಿ ಪಾಲಿಕೆ ಆಯುಕ್ತರ ವಿರುದ್ಧ ದೂರುಗಳು ಕೇಳಿ ಬಂದವು. ವಿರೋಧ ಪಕ್ಷಗಳ ನಾಯಕರು ಕೂಡ ಆಯುಕ್ತರ ವಿರುದ್ಧ ಹರಿಹಾಯ್ದು, ಮೈಸೂರು ನಗರಪಾಲಿಕೆಗೆ ಐಎಎಸ್ ಅಧಿಕಾರಿಯನ್ನು ನೇಮಿಸಬೇಕೆಂದು ಆಗ್ರಹಿಸಿದ್ದರು. ಇದರಿಂದ ಎಚ್ಚೆತ್ತ ಸರ್ಕಾರ, ಪಾಲಿಕೆಗೆ ಕೂಡಲೇ ಐಎಎಸ್ ಅಧಿಕಾರಿಯನ್ನು ನೇಮಿಸಿ ಆದೇಶ ಹೊರಡಿಸಿತ್ತು ಎಂದು ಅಂದಿನ ಪತ್ರಿಕೆಗಳಲ್ಲಿ ಓದಿದ ನೆನಪು. ಅಷ್ಟೇ ಅಲ್ಲ ಇನ್ನು ಮುಂದೆ ಐಎಎಸ್ ಅಧಿಕಾರಿಗಳನ್ನು ಮಾತ್ರ ಮೈಸೂರು ಮಹಾನಗರ ಪಾಲಿಕೆಗೆ ಆಯುಕ್ತರಾಗಿ ನೇಮಿಸಲಾಗುವುದು ಎಂದು ಕೂಡ ಸರ್ಕಾರ ಹೇಳಿಕೆ ನೀಡಿತ್ತು.

ಆದರೆ 2023 ರಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗ ಮುಖ್ಯಮಂತ್ರಿ ಸಿದ್ದರಾಮಯ್ಯನವರ ತವರಿನಲ್ಲೇ ನಿಯಮವನ್ನು ಗಾಳಿಗೆ ತೂರಿ, ತಮ್ಮ ಹಿತೈಷಿಗಳ ಅನುಕೂಲಕ್ಕೆ ತಕ್ಕಂತೆ ಕೆಎಎಸ್ ಶ್ರೇಣಿಯ ಅಧಿಕಾರಿಯನ್ನು ಆಯುಕ್ತರಾಗಿ ನೇಮಿಸಲಾಗಿದೆ. ಇದರಿಂದಾಗಿ ಪಾಲಿಕೆಯ ಆಡಳಿತದಲ್ಲಿ ದಕ್ಷತೆ ಇಲ್ಲವಾಗಿದೆ. ಬಹುಶಃ ಮೈಸೂರು ನಗರದ ಶಾಸಕರುಗಳಿಗೂ ತಾವು ಹೇಳಿದಂತೆ ಕೇಳುವ ಆಜ್ಞೆ ಪಾಲಿಸುವ ಆಯುಕ್ತರು ಬೇಕಾಗಿತ್ತು ಎಂದು ಕಾಣುತ್ತದೆ. ಆದ್ದರಿಂದಲೇ ಅವರು ಮೌನವಾಗಿದ್ದಾರೆ. ಐಎಎಸ್ ಅಧಿಕಾರಿಯಾದರೆ ಡೋಂಟ್ ಕೇರ್ ಎನ್ನುತ್ತಾರೆ. ಇದೇ ಅದರ ರಹಸ್ಯ!!

ಮುಡಾ ಹಗರಣದ ನಂತರ, ಇನ್ನು ಮುಂದೆ ಮುಡಾಕ್ಕೆ ಐಎಎಸ್ ಅಧಿಕಾರಿಯನ್ನು ಮಾತ್ರ ನೇಮಿಸಲು ನಿಯಮ ರೂಪಿಸಿರುವುದಾಗಿ ವರದಿಯಾಗಿದೆ. ಹಾಗಿದ್ದರೆ ಬೆಂಗಳೂರು ನಂತರ ರಾಜ್ಯದ ಮಹಾನಗರಗಳ ಪೈಕಿ ಅಗ್ರಸ್ಥಾನದಲ್ಲಿರುವ ಮೈಸೂರು ಮಹಾನಗರ ಪಾಲಿಕೆಗೆ ಐಎಎಸ್ ಅಧಿಕಾರಿ ಬೇಡವೇ? ಐಎಎಸ್ ಅಧಿಕಾರಿಗಳನ್ನು ಮಾತ್ರ ನೇಮಿಸಬೇಕೆಂಬ ನಿಯಮ ಗಾಳಿಗೆ ತೂರಿದ್ದೇಕೆ? ಅದನ್ನು ಕಡ್ಡಾಯ ಮಾಡಿ ಮೈಸೂರು ಮಹಾನಗರ ಪಾಲಿಕೆಗೆ ಐಎಎಸ್ ಅಧಿಕಾರಿಯನ್ನು ಮಾತ್ರ ನೇಮಿಸುವ ಆದೇಶವಾಗಲಿ.

–ಮುಳ್ಳೂರು ಪ್ರಕಾಶ್, ಕನಕದಾಸನಗರ. ಮೈಸೂರು.

■ ಮೈಕ್ರೋ ಫೈನಾನ್ಸ್ ಕಂಪನಿಗಳ ಅಟ್ಟಹಾಸ

ಮಾನ್ಯರೆ,

ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಕಂಪನಿಗಳ ಹಾವಳಿ ಮಿತಿ ಮೀರುತ್ತಿದೆ. ಈ ಬಗ್ಗೆ ಸ್ವತಃ ಗೃಹ ಸಚಿವ ಡಾ.ಪರಮೇಶ್ವರ ಅವರೇ ಕಳವಳ ವ್ಯಕ್ತಪಡಿಸಿದ್ದಾರೆ. ಸಣ್ಣಪುಟ್ಟ ವ್ಯಾಪಾರಸ್ಥರಿಗೆ, ರೈತ ಮಹಿಳೆಯರಿಗೆ ಸಾಲ ನೀಡಿ, ನಂತರ ಮರುಪಾವತಿಗಾಗಿ ನಾನಾ ರೀತಿಯ ಕಿರುಕುಳ ನೀಡುತ್ತಿರುವ ಈ ಕಂಪನಿಗಳ ಏಜೆಂಟರು, ಸಾಲಗಾರರ ಮನೆಯ ಮುಂದೆ ನಿಂತು, ಸಾಲ ಪಡೆದವರನ್ನು ಅವಾಚ್ಯ ಶಬ್ದಗಳಿಂದ ನಿಂದಿಸುತ್ತಿದ್ದಾರೆ.

ಇವರ ಕಾಟದಿಂದ ಅನೇಕ ಸಾಲಗಾರರು ಆತ್ಮಹತ್ಯೆಗೆ ಶರಣಾಗುತ್ತಿದ್ದಾರೆ. ಚಾಮರಾಜನಗರ ಜಿಲ್ಲೆಯ ಅನೇಕ ಹಳ್ಳಿಗಳ ಗ್ರಾಮಸ್ಥರು, ಈ ಕಂಪನಿಗಳ ಏಜೆಂಟರುಗಳ ಹೆದರಿಕೆಯಿಂದ ಗ್ರಾಮವನ್ನೇ ತೊರೆದು ಮೈಸೂರು ಮುಂತಾದ ನಗರಗಳಿಗೆ ಗುಳೆ ಹೋಗುತ್ತಿರುವುದು ಸಹಾ ಬೆಳಕಿಗೆ ಬಂದಿದ್ದು, ಅನೇಕ ಗ್ರಾಮಗಳಲ್ಲಿ ಪ್ರಕ್ಷುಬ್ಧ ವಾತಾವರಣ ಇದೆ ಎಂದು ಹೇಳಲಾಗುತ್ತಿದೆ. ಇಂತಹ ಮೈಕ್ರೋ ಫೈನಾನ್ಸ್ ಕಂಪನಿಗಳಿಗೆ ಕಡಿವಾಣ ಹಾಕಿ ಅವುಗಳ ಪರವಾನಗಿಯನ್ನು ರದ್ದುಪಡಿಸಿ, ಗ್ರಾಮಸ್ಥರಲ್ಲಿ ಆತ್ಮಸ್ಥೈರ್ಯವನ್ನು ತುಂಬುವ ಕೆಲಸ ರಾಜ್ಯ ಸರ್ಕಾರದಿಂದ ಆಗಬೇಕಾಗಿದೆ.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು

■ ನಟ ಡಾಲಿ ಧನಂಜಯ ನಡೆ ಮಾದರಿ

ಮಾನ್ಯರೆ,

ಕನ್ನಡದ ಖ್ಯಾತ ಚಲನಚಿತ್ರ ನಟರಾದ ಡಾಲಿ ಧನಂಜಯ ಅವರು ತಮ್ಮ ಮದುವೆಯ ಪ್ರಯುಕ್ತ ತಾವು ಓದಿದ ಹಾಸನ ಜಿಲ್ಲೆಯ ಅರಸೀಕೆರೆ ತಾಲೂಕಿನ ಕಾಳೇನಹಳ್ಳಿಹಟ್ಟಿ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯನ್ನು ನವೀಕರಣ ಮಾಡುವ ಕಾರ್ಯವನ್ನು ಹಮ್ಮಿಕೊಂಡಿರುವುದು ಒಂದು ಮಾದರಿ ನಡೆಯಾಗಿದೆ. ಧನಂಜಯ್ ಅವರು ಕೂಡ ಓದುವಾಗ ಪ್ರತಿಭಾವಂತ ವಿದ್ಯಾರ್ಥಿಯಾಗಿದ್ದರು. ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇಕಡ 95 ರಷ್ಟು ಅಂಕಗಳನ್ನು ಗಳಿಸಿದ್ದರು ಎಂಬುದು ಕೂಡ ಹೆಮ್ಮೆಯ ವಿಷಯವಾಗಿದೆ. ಕೆಲವು ಗ್ರಾಮಗಳಲ್ಲಿ ಸರ್ಕಾರಿ ಶಾಲೆಗಳು ಹಳೆಯ ಕಟ್ಟಡಗಳನ್ನು ಹೊಂದಿವೆ. ಮಳೆ ಬಂದರೆ ಮಾಳಿಗೆಗಳು ಸೋರುತ್ತವೆ. ಕಟ್ಟಡಗಳು ಕುಸಿದು ಬೀಳುವ ಪರಿಸ್ಥಿತಿ ಉಂಟಾಗುತ್ತದೆ. ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸಕ್ಕೆ ತೊಂದರೆಯಾಗುತ್ತದೆ. ಡಾಲಿ ಧನಂಜಯ್ ಅವರ ಈ ಕಾರ್ಯ ಸಾರ್ವಜನಿಕ ಮೆಚ್ಚುಗೆಗೆ ಪಾತ್ರವಾಗಿದೆ. ಇದೇ ಫೆಬ್ರವರಿ 15– 16 ರಂದು ದಾಂಪತ್ಯ ಜೀವನಕ್ಕೆ ಕಾಲಿಡುತ್ತಿರುವ ಧನಂಜಯ ಮತ್ತು ಧನ್ಯತಾ ದಂಪತಿಗಳಿಗೆ ಶುಭವಾಗಲಿ.

–ಪುಂಡಲೀಕ ಲಮಾಣಿ, ಮೈಸೂರು

■ ನೆಗಡಿ ಬಂತೆಂದು ಮೂಗನ್ನೇ ಕೊಯ್ದು ಬಿಟ್ಟರು!

ಮಾನ್ಯರೆ,

ಎಲ್ಲೆಡೆ ಗ್ರಾಹಕರಿಗೆ ಅನುಕೂಲ ಮಾಡಿಕೊಡುತ್ತಿದ್ದರೆ ಮೈಸೂರಿನ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ರೋಗಗ್ರಸ್ತವಾಗಿದ್ದ ಎಟಿಎಂ ಸಮಸ್ಯೆಯನ್ನು ಪರಿಹರಿಸಲು ಮುಂದಾಗದೇ ಸಮಸ್ಯೆಯ ಮಗುವಾದ ಆ ಎಟಿಎಂ ಅನ್ನೇ ಮುಚ್ಚಿದ್ದಾರೆ. ಇದು ನೆಗಡಿ ಬಂತೆಂದು ಮೂಗನ್ನೇ ಕೊಯ್ದವರ ಕಥೆಯಂತಿದೆ.

ಮೈಸೂರಿನ ಚಾಮರಾಜಪುರಂ ಜಯಲಕ್ಷ್ಮಿ ವಿಲಾಸ ರಸ್ತೆಯ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಎ.ಟಿ.ಎಂ ಬಾಗಿಲು ಮುಚ್ಚಿ ಗ್ರಾಹಕರಿಗೆ ಬೆನ್ನು ತೋರಿದ ಘಟನೆ ನಡೆದಿದ್ದು, ಈ ಎಟಿಎಂ ಅವಲಂಬಿತ ಸಾವಿರಾರು ಗ್ರಾಹಕರು ಕಂಗಾಲಾಗಿದ್ದಾರೆ. ಪಕ್ಕದಲ್ಲೇ ಇರುವ ಸುಸಜ್ಜಿತ 24 ಗಂಟೆಯೂ ಕಾರ್ಯ ನಿರ್ವಹಿಸುವ ಸೌತ್ ಇಂಡಿಯನ್ ಬ್ಯಾಂಕಿನ ಎಟಿಎಂಗೆ ಗ್ರಾಹಕರನ್ನು ಹೋಗುವಂತೆ ಮಾಡುವ ಹುನ್ನಾರವೂ ಈ ಎಟಿಎಂ ಮುಚ್ಚಲು ಕಾರಣವೆಂದು ಗ್ರಾಹಕರು ಸಂಶಯವನ್ನು ವ್ಯಕ್ತಪಡಿಸಿದ್ದಾರೆ. ಬ್ಯಾಂಕ್ ಈ ಎಟಿಎಂ ಅನ್ನು ಮರಳಿ ಆರಂಭಿಸಿ ಗ್ರಾಹಕರಿಗೆ ಅನುಕೂಲ ಮಾಡಿಕೊಡಲಿ.

–ಕೊ.ಸು.ನರಸಿಂಹಮೂರ್ತಿ, ಹಿರಿಯ ನಾಗರಿಕ, ಮೈಸೂರು.



ಡಾ. ವಿ. ರಂಗನಾಥ್

ಲೇಖಕರು ಹಾಗೂ ನಿವೃತ್ತ ತಹಸೀಲ್ದಾರರು

ಮೊ: 94482 08746/ 97421 79000

ಚಿಂತನೆ

ಅಯ್ಯಯೋ... ಮಾನವೀಯತೆ ಮಾರಾಟವಾಗುತ್ತಿದೆ!!

ನಮ್ಮ ಕೌಟುಂಬಿಕ ವ್ಯವಸ್ಥೆ ಇಡೀ ವಿಶ್ವದಲ್ಲೇ ವಿಶಿಷ್ಟವಾದುದು ಎಂದು ಹೇಳಲಾಗುತ್ತದೆ. ಇದು ಹೇಳಿಕೆ ಮಾತ್ರವಲ್ಲ, ಇದನ್ನು ನಾವು ಭಾರತೀಯರು ಹೆಮ್ಮೆಯಿಂದಲೂ ಹೇಳಿಕೊಂಡು ಬರುತ್ತಿದ್ದೇವೆ. ನಮ್ಮಲ್ಲಿನ ಕೌಟುಂಬಿಕ ವ್ಯವಸ್ಥೆ ಎಂದರೆ ಹಿಂದಿನಿಂದಲೂ ಹತ್ತಾರು, ನೂರಾರು ಜನರು ಒಟ್ಟಾಗಿ ಬಾಳುವುದು. ಇದು ಇತ್ತೀಚೆಗೆ ಸ್ವಲ್ಪಮಟ್ಟಿಗೆ ಕಡಿಮೆಯಾಗುತ್ತಿದ್ದರೂ, ಇಂದಿಗೂ ಊರಿನ ಜಾತ್ರೆ, ಹಬ್ಬಗಳ ಸಂದರ್ಭಗಳಲ್ಲಿ ನೆಂಟರಿಷ್ಟರು ನೂರಾರು ಸಂಖ್ಯೆಯಲ್ಲಿ ಒಟ್ಟಾಗಿ ಸೇರುತ್ತಾರೆ. ಹಾಗೆ ಸೇರುವುದನ್ನು ಪರಸ್ಪರ ಸಂಭ್ರಮಿಸುತ್ತಾರೆ. ಅದರಲ್ಲೂ ಆ ಸಮಯದಲ್ಲಿ ಹಿರಿಯರಿಗೆ ವಿಶೇಷ ಮನ್ನಣೆ.

ಪೂಜಾ ಕಾರ್ಯಗಳಿದ್ದಲ್ಲಿ ಅವರಿಂದಲೇ ಮಾಡಿಸಿ ಸಂತಸಪಡುತ್ತಾರೆ. ಆ ಕಾರ್ಯ ಮುಗಿದ ಮೇಲೆ ಭಾರವಾದ ಮನಸ್ಸಿನಿಂದಲೇ ಮರಳುತ್ತಾರೆ. ಇಂದಿಗೂ ನಾವು ಕೂಡು ಕುಟುಂಬದಲ್ಲಿ ಇಲ್ಲದಿದ್ದರೂ, ಹಬ್ಬಹರಿ ದಿನಗಳಲ್ಲಿ ಒಟ್ಟಾಗಿ ಸೇರುತ್ತೇವೆ. ಹಬ್ಬದ ಸಮಯದಲ್ಲಿ ಒಂದಿಬ್ಬರು ಕುಳಿತು ಊಟ ಮಾಡಿದರೆ ಅದು ಹಬ್ಬ ಎನ್ನಿಸುವುದಿಲ್ಲ. ಏನೋ ಮನೆಯೇ ಖಾಲಿಯಾದಂತೆ ಭಾಸವಾಗುತ್ತದೆ. ಹಬ್ಬ ಹಾಗೂ ವಿಶೇಷ ದಿನಗಳಲ್ಲಿ ಮನೆಯ ಹಿರಿಯರನ್ನು ಕಂಡು ಅವರಿಗೆ ನಮಸ್ಕರಿಸಿ ಆಶೀರ್ವಾದ ಪಡೆಯುವುದು ಎಲ್ಲೆಡೆ ಕಂಡುಬರುತ್ತದೆ. (ಮೊನ್ನೆ ನಡೆದ ಸಂಕ್ರಾಂತಿ ಸಮಯದಲ್ಲೂ ಇದನ್ನು ಗಮನಿಸಿದ್ದೇವೆ) ಇದೇ ಪದ್ಧತಿ ಅನೇಕ ಗ್ರಾಮಗಳಲ್ಲಿ, ಗ್ರಾಮ ಉತ್ಸವಗಳಲ್ಲಿ ಕಂಡುಬರುತ್ತದೆ. ಅಂದು ಆ ಗ್ರಾಮದ ಮೂಲ ನಿವಾಸಿಗಳು ದೇಶ–ವಿದೇಶಗಳಿಂದ ಬಂದು ಊರಿನಲ್ಲಿ ನೆರೆದು ಸಂಭ್ರಮಿಸುತ್ತಾರೆ. ಇದಕ್ಕಾಗಿ ಕ್ಯಾಲೆಂಡರುಗಳಲ್ಲಿ ಮುಂಚಿತವಾಗಿ ದಿನವನ್ನು ಗುರುತು ಮಾಡಿಕೊಂಡು ಊರಿಗೆ ಬರುತ್ತಾರೆ. ಅಲ್ಲೆಲ್ಲಾ ಮತ, ಜಾತಿ, ವಯಸ್ಸು ಗಣನೆಗೆ ಬರುವುದಿಲ್ಲ. ನಾವು ಊರಿನವರು ಎಂಬ ಭಾವನೆಯೇ ಅಲ್ಲಿ ಪ್ರಧಾನವಾಗಿರುತ್ತದೆ. ಒಟ್ಟಿನಲ್ಲಿ ಎಲ್ಲರೂ ವರ್ಷಕ್ಕೊಮ್ಮೆಯಾದರೂ ಸೇರಬೇಕು, ಊರಿನ ಸಂಬಂಧ ಉಳಿಸಿಕೊಳ್ಳಬೇಕು ಎಂಬುದು ಕಂಡು ಬರುತ್ತದೆ. ಇದು ಈ ದೇಶದ ಹೆಮ್ಮೆಯ ಸಂಪ್ರದಾಯ.

ಆದರೆ ಇತ್ತೀಚೆಗೆ ಈ ಸಂಬಂಧದಲ್ಲಿ ಅಲ್ಲಲ್ಲಿ ಬಿರುಕು ಮೂಡುತ್ತಿರುವುದು ಆತಂಕ ಸೃಷ್ಟಿಸುತ್ತದೆ. ಹಣವೇ ಪ್ರಧಾನ ಎಂದು ಭಾವಿಸಿ ಅದನ್ನು ಗಳಿಸಲು ಸಂಬಂಧಗಳನ್ನು ಛೇದಿಸುತ್ತಿರುವುದು ಕಂಡುಬರುತ್ತದೆ. ಹಿಂದೆಲ್ಲಾ ಒಟ್ಟು ಕುಟುಂಬದಲ್ಲಿ ಎಲ್ಲರಿಗೂ ಅವರವರ ಪಾಲಿನ ಕೆಲಸ ನಿರ್ಧಾರವಾಗಿರುತ್ತಿತ್ತು. ಅದು ಸಣ್ಣದಾಗಲಿ, ದೊಡ್ಡದಾಗಿರಲಿ ಎಲ್ಲರೂ ಮನೆಗಾಗಿ ಕೆಲಸ ಮಾಡುತ್ತಿದ್ದರು. ಹಾಗೆ ಅವರವರ ದೈಹಿಕ ಶಕ್ತಿ ಅನುಸರಿಸಿ ಅವರಿಗೆ ಕೆಲಸಗಳ ಹಂಚಿಕೆಯಾಗುತ್ತಿತ್ತು. ಇದಕ್ಕೆ ಯಾರೂ ತಕರಾರು ಎತ್ತುತ್ತಿರಲಿಲ್ಲ. ಮನೆಯ ಹಿರಿಯರ ಕೆಲಸ ಮಾರ್ಗದರ್ಶನವಾಗಿತ್ತು. ಅವರು ತಮ್ಮ ವಯಸ್ಸಿಗೆ ಅನುಗುಣವಾಗಿ ಅನುಭವ ಹೊಂದಿರುತ್ತಿದ್ದುದರಿಂದ ಅವರು ಮಾರ್ಗದರ್ಶನ ಮಾಡಿದರೆ ಸಾಕಾಗಿತ್ತು. ಎಲ್ಲರೂ ಅವರ ಮಾತನ್ನು ಕೇಳುತ್ತಿದ್ದರು. ಹೀಗಾಗಿ ಜೀವನ ಸುಖಕರವಾಗಿರುತ್ತಿತ್ತು.

ಆದರೆ ಯಾವಾಗ ಹಣವನ್ನು ನಾವು ಪ್ರಧಾನವಾಗಿ ಪರಿಗಣಿಸತೊಡಗಿದೆವೋ, ಆಗ ಸಂಬಂಧಗಳಲ್ಲಿ ಶಿಥಿಲತೆ ಕಂಡುಬರತೊಡಗಿತು. ಇತ್ತೀಚೆಗೆ ನಮ್ಮ ಜಿಲ್ಲೆಯಲ್ಲೇ ಮಗ ತಂದೆಯನ್ನು ಕೊಲೆ ಮಾಡಿದ ಪ್ರಕರಣವೊಂದು ವರದಿಯಾಗಿತ್ತು. ಕೊಲೆಗೆ ಕಾರಣ ತಂದೆಯ ಹೆಸರಿನಲ್ಲಿದ್ದ ಜೀವವಿಮೆಯ ಹಣವನ್ನು ಪಡೆಯುವುದಾಗಿತ್ತು. ತಂದೆಯ ಹೆಸರಿನಲ್ಲಿ ಜೀವವಿಮೆ ಇದೆ. ಆದರೆ, ಅದನ್ನು ಈಗಲೇ ಪಡೆಯಬೇಕಾದರೆ ಅವರು ಮರಣ ಹೊಂದಬೇಕು. ತನಗೆ ಬೇಗನೆ ಹಣ ಬೇಕು. ತಂದೆಗಿಂತ ಅವರ ಹೆಸರಿನಲ್ಲಿ ಇದ್ದ ವಿಮಾ ಹಣವೇ ಮುಖ್ಯ ಎಂದು ತಂದೆಯನ್ನು ಯಾವುದೋ ಕೆಲಸಕ್ಕೆಂದು ಹೊರಗೆ ಕಳುಹಿಸಿ, ನಂತರ ಅವರನ್ನು ಹಿಂಬಾಲಿಸಿ, ದೊಣ್ಣೆಯಿಂದ ಹೊಡೆದು ಮಗ ಕೊಲೆ ಮಾಡಿ, ಅದನ್ನು ಅಪಘಾತ ಎಂದು ಬಿಂಬಿಸಲು ಪ್ರಯತ್ನಿಸಿದ. ಆದರೆ ಕೊಲೆ ಮಾಡಿದವರು ಆತುರದಲ್ಲಿ ಏನಾದರೂ ಕುರುಹು ಬಿಟ್ಟು ಹೋಗುತ್ತಾರೆ. ಅದನ್ನು ಪೊಲೀಸರು ಪತ್ತೆ ಮಾಡಿ ಮಗನನ್ನು ಬಂಧಿಸಿದರು. ಇದು ವರದಿಯಾದ ಪ್ರಕರಣ. ಕೊಲೆಯಾದದ್ದೂ ಅನೇಕ ಸಲ ಬೆಳಕಿಗೇ ಬರುವುದಿಲ್ಲ. ಅದೇ ರೀತಿ ಆಸ್ತಿಗಾಗಿ ತಂದೆ–ತಾಯಿಯರ, ನೆಂಟರ ಕೊಲೆಗಳೂ ನಡೆಯುತ್ತಿವೆ. ಇದೆಲ್ಲಾ ಆತಂಕ ಸೃಷ್ಟಿಸುತ್ತವೆ. ನಮ್ಮ ಭಾರತೀಯ ಸಂಪ್ರದಾಯದಲ್ಲಿ ಇದೇಕೆ ಈ ರೀತಿ ಬೆಳವಣಿಗೆಗಳಾಗುತ್ತಿವೆ ಎಂದು ಬೇಸರವೂ ಆಗುತ್ತಿದೆ.

> "ನಮಗೆ ನಮ್ಮ ಧರ್ಮ ಸಂಸ್ಕೃತಿಯ ಅರಿವಿಲ್ಲ. ನಮಗೆ ಹಣವೇ ಪ್ರಧಾನ ಎನಿಸುತ್ತದೆ. ಕೋಟ್ಯಾಧಿಪತಿಗಳಾದ ವಿದೇಶಿಯರು ಈ ಸಂಸ್ಕೃತಿ ಒಪ್ಪಿಕೊಂಡು ಸನ್ಯಾಸಿಗಳಂತೆ ಜೀವನ ಮಾಡ ಬಯಸುತ್ತಾರೆ. ನಾವು ಮೊದಲು ಈ ದೇಶದ ಬಗ್ಗೆ ಅಭಿಮಾನ ಹೊಂದಬೇಕು. ಹಣಕ್ಕಾಗಿ ಮಾನವೀಯತೆ ಕಳೆದುಕೊಳ್ಳಬಾರದು.



ಇತ್ತೀಚೆಗೆ ಪತ್ರಿಕೆಯಲ್ಲಿ ಬಂದ ಎರಡು ವರದಿಗಳು ಮನುಷ್ಯನ ವಿವಿಧ ಮುಖಗಳನ್ನು ಪರಿಚಯಿಸುತ್ತವೆ. ಒಂದನೇ ಪ್ರಕರಣ ನಡೆದಿದ್ದು, ದೇಶದ ಅತ್ಯಂತ ಪವಿತ್ರ ಕ್ಷೇತ್ರ ಎಂದು ಭಾವಿಸುವ ವಾರಣಾಸಿ ನಮಗೆ ಗೊತ್ತಿದೆ. ಈ ದೇಶದ ಅನೇಕ ಹಿರಿಯರು ತಮ್ಮ ಕೊನೇ ದಿನಗಳನ್ನು ವಾರಣಾಸಿ(ಕಾಶಿ)ಯಲ್ಲಿ ಕಳೆಯ ಬಯಸುತ್ತಾರೆ. ಅಂತಹವರಿಗಾಗಿ ಅಲ್ಲಿ ಕೆಲವು ವಸತಿಗಳಿವೆ. ನಾವು ಕಂಡಂತೆ ಅನೇಕರು ಸಾಯುವ ಪೂರ್ವದಲ್ಲಿ ತಮಗೆ ತಮ್ಮ ಸಾವು ಹತ್ತಿರ ದಲ್ಲಿರುವುದನ್ನು ಕಂಡು ವಿವರಿಸಿದವರಿದ್ದಾರೆ. ಹಾಗೆ ತಮಗೆ ಇನ್ನೇನು ಸಾವು ಬರುತ್ತದೆ ಎನ್ನುವಾಗ ಅವರು ತಮ್ಮದೆಲ್ಲವನ್ನೂ ಬಿಟ್ಟು ಕಾಶಿಗೆ ಹೋಗಿ ಅಲ್ಲಿ ಕೆಲವು ದಿನಗಳ ಕಾಲ ವಸತಿನಿಲಯದಲ್ಲಿದ್ದು, ಅಲ್ಲೇ ಪ್ರಾಣ ಬಿಡುತ್ತಾರೆ. ಕೊನೆಗೆ ತಮ್ಮ ಅಂತ್ಯಸಂಸ್ಕಾರಕ್ಕೂ ಹಣ ಮೊದಲೇ ನೀಡಿ ಪ್ರಾಣ ಬಿಡುತ್ತಾರೆ. ಕಾಶಿಯಲ್ಲಿ ಪ್ರಾಣಬಿಟ್ಟರೆ ಕೈಲಾಸ ದೊರಕುತ್ತದೆ, ಜೀವಕ್ಕೆ ಮೋಕ್ಷ ಸಿಗುತ್ತದೆ ಎಂದು ಹಲವರು ನಂಬುತ್ತಾರೆ. ಅದಕ್ಕಾಗಿ ಅಲ್ಲಿ ವ್ಯವಸ್ಥೆಗಳೂ ಇವೆ.

ಅಂತಹ ಕಾಶಿಯಲ್ಲಿ ಒಬ್ಬರ ನಿಧನದ ಸುದ್ದಿ ಪತ್ರಿಕೆಯಲ್ಲಿ ಇತ್ತೀಚೆಗೆ ಬಂದಿತ್ತು. ಕೋಟಿಗಟ್ಟಲೆ ಆಸ್ತಿ, ಮಕ್ಕಳಿದ್ದರೂ ಖ್ಯಾತ ಲೇಖಕರೊಬ್ಬರು ತಮ್ಮ ಕೊನೆಯ ದಿನಗಳನ್ನು ಅಲ್ಲಿನ ವೃದ್ಧಾಶ್ರಮದಲ್ಲಿ ಕಳೆದು ಅನಾಥರಂತೆಯೇ ಜೀವ ತ್ಯಜಿಸಿದರು ಎಂಬುದು ಸುದ್ದಿ. ಆದರೆ ಆತ ಸಾಮಾನ್ಯ ಮನುಷ್ಯನಾಗಿರಲಿಲ್ಲ. ಅವರ ಹೆಸರು ಶ್ರೀನಾಥ್ ಖಂಡೇಲ್ವಾಲ್ ಎಂದು. ಅವರಿಗೆ 80 ವರ್ಷ ವಯಸ್ಸಾಗಿತ್ತು. ಅವರು ಉತ್ತರಪ್ರದೇಶದ ಒಬ್ಬ ಖ್ಯಾತ ಲೇಖಕರಾಗಿದ್ದರು. ಅವರು ವೃದ್ಧಾಶ್ರಮದಲ್ಲಿ ವಾಸಿಸುತ್ತಿದ್ದು ಅಲ್ಲಿಯೇ ಮೃತಪಟ್ಟರು. ಇಂತಹ ಘಟನೆಗಳು ದೇಶದ ಎಲ್ಲಾ ಕಡೆ ನಡೆಯುತ್ತಿರುತ್ತವೆ. ಆದರೆ ಈ ವ್ಯಕ್ತಿ ಬಗ್ಗೆ ವಿವರ ತಿಳಿದಾಗ ಮನಸ್ಸು ಭಾರವಾಗುತ್ತದೆ. ಅವರು 400ಕ್ಕೂ ಹೆಚ್ಚು ಪುಸ್ತಕಗಳನ್ನು ಬರೆದಿದ್ದರು. ಅದರಲ್ಲಿ ಮುಖ್ಯವಾಗಿ ಶಿವಪುರಾಣ ಮತ್ತು ಮತ್ಸ್ಯ ಪುರಾಣವನ್ನು ಅವರು ಹಿಂದಿಗೆ ಭಾಷಾಂತರಿಸಿದ್ದರು, ಈ ಗ್ರಂಥಗಳಿಂದಾಗಿ ಅವರಿಗೆ ಹೆಚ್ಚಿನ ಹೆಸರು ಬಂದಿತ್ತು. ಇವರ ಪುಸ್ತಕಗಳು ಹಿಂದಿ ಭಾಷೆಯ ಜೊತೆಯಲ್ಲಿ ಸಂಸ್ಕೃತ, ಅಸ್ಸಾಮಿ ಮತ್ತು ಬಂಗಾಳಿ ಭಾಷೆಗಳಿಗೂ ಭಾಷಾಂತರಗೊಂಡಿವೆ. 2023ರಲ್ಲಿ ಇವರಿಗೆ ಪದ್ಮಶ್ರೀ ಪ್ರಶಸ್ತಿಯೂ ಸಂದಿತ್ತು. ಇದಕ್ಕಿಂತ ವಿಶೇಷ ಎಂದರೆ ಅವರು 80 ಕೋಟಿ ರೂಪಾಯಿಗಳ ಆಸ್ತಿಯ ಒಡೆಯರಾಗಿದ್ದರು. ಇವರ ಪುತ್ರ ಒಬ್ಬ ದೊಡ್ಡ ಉದ್ಯಮಿ, ಮತ್ತೊಬ್ಬ ಪುತ್ರ ಸರ್ವೋಚ್ಚ ನ್ಯಾಯಾಲಯದಲ್ಲಿ ನ್ಯಾಯವಾದಿ. ಇಷ್ಟಾದರೂ ಇವರು ವೃದ್ಧಾಶ್ರಮದಲ್ಲಿ ಕಾಲಕಳೆದು ಕಡೆಗೆ ಅಲ್ಲಿಯೇ ಪ್ರಾಣಬಿಟ್ಟರು. ದುರ್ದೈವ ಎಂದರೆ ಅವರ ಅಂತ್ಯಕ್ರಿಯೆಗೆ ಮಕ್ಕಳು ಆಗಮಿಸಲಿಲ್ಲ. ಇದಕ್ಕೆ ಕಾರಣ ಅವರ ಮಗ ತಂದೆಗೆ ಮೋಸ ಮಾಡಿ 80 ಕೋಟಿ ಆಸ್ತಿಯನ್ನು ತನ್ನದಾಗಿಸಿಕೊಂಡಿದ್ದ. ಇದರಿಂದಾಗಿ ಅವರು ತಮ್ಮದೆಲ್ಲವನ್ನೂ ಕಳೆದುಕೊಂಡು ವೃದ್ಧಾಶ್ರಮದಲ್ಲಿದ್ದರು. ಇವರು ಮೃತರಾದ ಬಗ್ಗೆ ಮಕ್ಕಳಿಗೆ ತಿಳಿಸಿದರೂ ಅವರುಗಳು ಅಂತಿಮ ದರ್ಶನ ಹಾಗೂ ಅಂತಿಮ ಸಂಸ್ಕಾರಕ್ಕೂ ಬರಲೇ ಇಲ್ಲ ಎಂದು ವರದಿ ಹೇಳುತ್ತದೆ. ಎಂತಹ ದುರ್ದೈವ ಎನ್ನಿಸುತ್ತದೆ. ತಂದೆತಾಯಿಯರು ತಮ್ಮ ಮಕ್ಕಳು ಚೆನ್ನಾಗಿ ಬದುಕಬೇಕು ಎಂದು ಜೀವಮಾನಪೂರ್ತಿ ದುಡಿಯುತ್ತಾರೆ. ತಮಗಾಗಿ ಏನನ್ನೂ ಮಾಡಿಕೊಳ್ಳದ ಅವರು ಮಕ್ಕಳಿಗಾಗಿ, ಅವರ ಭವಿಷ್ಯಕ್ಕಾಗಿ ಕೂಡಿಡುತ್ತಾರೆ. ಅವರ ನಿಧನದ ನಂತರ ಅವರ ಗಳಿಕೆ ಎಲ್ಲವೂ ಮಕ್ಕಳಿಗೇ ಸೇರುತ್ತದೆ. ಆದರೆ ಆತುರದ ಮನೋಭಾವದ ಮಕ್ಕಳು ಮೋಸದಿಂದ ಅದನ್ನು ಕಸಿದುಕೊಂಡು ಅವರು ಅನಾಥರಾಗಿ ಬಾಳುವಂತೆ ಮಾಡುತ್ತಾರೆ. ಅಷ್ಟು ದೊಡ್ಡ ಸಾಹಿತಿ ಹಾಗೂ ಪದ್ಮಶ್ರೀ ಪುರಸ್ಕೃತ ವ್ಯಕ್ತಿ ಅನಾಥ ಶವವಾಗುತ್ತಾರೆ ಎಂದರೆ ಹಣದ ವ್ಯಾಮೋಹ ಮಕ್ಕಳನ್ನು ನಮ್ಮ ಸಂಸ್ಕೃತಿಯಿಂದ ದೂರಮಾಡುತ್ತಿದೆ, ಹಣಕ್ಕಾಗಿ ಮಕ್ಕಳು ಮಾನವೀಯತೆ ಮರೆತಿದ್ದಾರೆ ಎಂಬುದು ಇಂತಹ ಘಟನೆಗಳಿಂದ ಕಂಡುಬರುತ್ತದೆ.

ಇದಕ್ಕೆ ವ್ಯತಿರಿಕ್ತವಾದ ಮತ್ತೊಂದು ವರದಿ ಕಳೆದ ವಾರ ಬಂದಿತ್ತು. ('ಮೈಸೂರು ಮಿತ್ರ'ದಲ್ಲೂ ಬಂದಿತ್ತು). ವರದಿಯ ಶೀರ್ಷಿಕೆ 'ಮೊಬೈಲ್ ಗಾಗಿ ಮಗ ಆತ್ಮಹತ್ಯೆ, ಮನನೊಂದು ಅಪ್ಪನೂ ನೇಣಿಗೆ ಶರಣು' ಎಂಬುದಾಗಿತ್ತು. 16 ವರ್ಷದ, ಹತ್ತನೇ ತರಗತಿಯ ಮಗ ತನ್ನ ತಂದೆ ಮೊಬೈಲ್ ಕೊಡಿಸಲಿಲ್ಲ ಎಂದು ಆತ್ಮಹತ್ಯೆ ಮಾಡಿಕೊಂಡ. ರೈತನಾಗಿರುವ, ಆರ್ಥಿಕವಾಗಿ ಸಬಲನಾಗಿಲ್ಲದ ತಂದೆಗೆ ಮಗನ ಆಸೆ ಈಡೇರಿಸಲಾಗಲಿಲ್ಲ. ಈ ಕೊರಗಿನಲ್ಲಿ ತಾನೂ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡ ಎಂಬುದು ವರದಿ. ಮತ್ತೊಂದು ಮನಕರಗುವ ವಿಚಾರ ಎಂದರೆ ಮಗ ನೇಣು ಬಿಗಿದುಕೊಂಡಿದ್ದ ಹಗ್ಗದಿಂದಲೇ, ಅದೇ ಮರದಲ್ಲಿಯೇ ತಾನೂ ನೇಣು ಹಾಕಿಕೊಂಡ ಎಂಬುದು. ಎಂತಹ ದುರಂತ ಅಲ್ಲವೇ. ತಂದೆಗೆ ಮಗನಿಗೆ ಮೊಬೈಲ್ ಕೊಡಿಸಬಾರದು ಎಂಬ ಉದ್ದೇಶವಿಲ್ಲ. ಆದರೆ ಕೊಡಿಸಲು ಹಣವಿಲ್ಲ. ಇದನ್ನು ಅರ್ಥ ಮಾಡಿಕೊಳ್ಳದ ಮಗ ಜೀವನ ಅಂತ್ಯಗೊಳಿಸಿದ. ಮಗನನ್ನು ಅಗಾಧವಾಗಿ ಪ್ರೀತಿಸುತ್ತಿದ್ದ ತಂದೆಗೆ ಮುಂದೆ ತನ್ನ ಜೀವನ ಬೇಕೆನಿಸಲಿಲ್ಲ. ಅವನೂ ಜೀವನ ಅಂತ್ಯಗೊಳಿಸಿದ. ಇದೊಂದು ಸಂದಿಗ್ಧ ಪ್ರಕರಣ. ಮಕ್ಕಳು ಈ ಮೊಬೈಲ್ ವ್ಯಾಮೋಹದಲ್ಲಿ ತಮ್ಮ ಜೀವನ ಕಳೆದುಕೊಳ್ಳುತ್ತಾರೆ. ತಂದೆ–ತಾಯಿಯರ ಆರ್ಥಿಕ ಶಕ್ತಿಯ ಬಗ್ಗೆ ಅವರಿಗೆ ಅರಿವಿಲ್ಲ ಎಂದಲ್ಲ. ಆದರೆ ತನ್ನ ಆಸೆ ಈಡೇರಬೇಕು ಅಷ್ಟೇ. ಮಕ್ಕಳನ್ನು ಪ್ರೀತಿಸುವ ತಂದೆತಾಯಿ ಮಕ್ಕಳು ಸತ್ತ ನಂತರ ತಮ್ಮ ಜೀವನಕ್ಕೆ ಅರ್ಥವಿಲ್ಲ ಎಂದು ಭಾವಿಸಿ ತಾವೂ ಮರಣ ಹೊಂದುತ್ತಾರೆ.

ಇಂತಹ ಹಲವು ಘಟನೆಗಳು ವರದಿಯಾಗುತ್ತಿರುತ್ತವೆ. ವೃದ್ಧ ಪತಿ ನಿಧನರಾದ ಸುದ್ದಿ ಕೇಳಿ ಪತ್ನಿ ಆಘಾತದಿಂದ ಸಾವನ್ನಪ್ಪಿದ ಘಟನೆಯೂ ವರದಿಯಾಗುತ್ತದೆ. ಇದು ಈ ದೇಶದ ಬಾಂಧವ್ಯದ ಸಂಸ್ಕೃತಿ ಎಂದು ಹೇಳಬಹುದು. ಮನೆಯಲ್ಲಿ ಪತಿ–ಪತ್ನಿ ಹಾಗೂ ಮಕ್ಕಳು ಒಂದು ಕುಟುಂಬವಾಗಿ ನೆಮ್ಮದಿಯ ಜೀವನ ಕಾಣುತ್ತಿರುತ್ತಾರೆ. ಅವರಲ್ಲಿ ಒಬ್ಬರಿಗೆ ತೊಂದರೆಯಾದರೆ ಇಡೀ ಕುಟುಂಬ ಅನಾಥ ಭಾವವನ್ನು ಹೊಂದುತ್ತದೆ. ಆದರೆ ಇತ್ತೀಚೆಗೆ ವ್ಯತಿರಿಕ್ತ ವರದಿಗಳನ್ನೂ ಕೇಳುತ್ತಿದ್ದೇವೆ.

ತಂದೆ–ತಾಯಿ ಎಂದರೆ ತಮ್ಮನ್ನು ಸಾಕಬೇಕು, ಎಲ್ಲಾ ಸವಲತ್ತು ಒದಗಿಸಬೇಕು, ಅವರು ಸಂಪಾದಿಸಿದ್ದೆಲ್ಲಾ ತಮಗೆ ಬೇಕು. ಆದರೆ ಅವರನ್ನು ನೋಡಿಕೊಳ್ಳುವ ಜವಾಬ್ದಾರಿ ಮಾತ್ರ ಬೇಡ ಎಂಬುದು ದುರಂತದ ಸಂಗತಿಯಾಗಿ ಕಾಣುತ್ತದೆ. ನಮ್ಮ ದೇಶದ ಧರ್ಮದ ಬಗ್ಗೆ ನಮಗೆ ಅಭಿಮಾನವಿಲ್ಲ. ನಮಗೆ ವಿದೇಶೀ ಸಂಸ್ಕೃತಿಯೇ ಆಕರ್ಷಣೆ. ಆದರೆ ಇತ್ತೀಚೆಗೆ ವಿದೇಶಿಯರು ಭಾರತೀಯ ಸಂಸ್ಕೃತಿಯನ್ನು ಇಷ್ಟಪಟ್ಟು ಈ ದೇಶಕ್ಕೆ ಬರುತ್ತಿದ್ದಾರೆ. ಇದಕ್ಕೆ ಇತ್ತೀಚಿನ ಸೇರ್ಪಡೆ ಎಂದರೆ ವಿಶ್ವವಿಖ್ಯಾತವಾದ ಆಪಲ್ ಕಂಪನಿಯ ಮಾಲೀಕ ಸ್ಟೀವ್‌ಜಾಬ್ ಅವರ ಪತ್ನಿ ಲಾರೆನ್ ಈಗ ಪ್ರಯಾಗ್ ರಾಜ್‌ನಲ್ಲಿ ನಡೆಯುತ್ತಿರುವ ಕುಂಭಮೇಳದಲ್ಲಿ ಭಾಗವಹಿಸುತ್ತಿದ್ದಾರೆ. ಅವರು ಒಂದು ರೀತಿ ಇಲ್ಲಿನ ಧರ್ಮವನ್ನು ಒಪ್ಪಿಕೊಂಡು ತಮ್ಮ ಹೆಸರನ್ನು ಕಮಲಾ ಎಂದು ಬದಲಿಸಿಕೊಂಡು ಈಗ ಕಲ್ಪವ್ರತ ಮಾಡುತ್ತಿದ್ದಾರೆ. ಅವರು ಕುಂಭಮೇಳದ ಜಾಗಕ್ಕೆ ಬರುವ ಪೂರ್ವದಲ್ಲಿಯೇ ಕೇಸರಿ ಬಟ್ಟೆ ಧರಿಸಿ ಬಂದಿದ್ದಾರೆ. ಈ ಕುಂಭಮೇಳದಲ್ಲಿ ಬಹು ದೊಡ್ಡ ಸಂಖ್ಯೆಯಲ್ಲಿ ವಿದೇಶಿಯರೂ ಭಾರತೀಯರಂತೆ ಭಾಗವಹಿಸಿ, ಪುಣ್ಯ ಸ್ನಾನ ಮಾಡಿ ಪುನೀತರಾದ ಭಾವನೆ ತಳೆಯುತ್ತಿದ್ದಾರೆ.

ಇದು ಒಂದು ರೀತಿ ವಿಚಿತ್ರ. ನಮಗೆ ನಮ್ಮ ಧರ್ಮ ಸಂಸ್ಕೃತಿಯ ಅರಿವಿಲ್ಲ. ನಮಗೆ ಹಣವೇ ಪ್ರಧಾನ ಎನ್ನಿಸುತ್ತದೆ. ಕೋಟ್ಯಾಧಿಪತಿಗಳಾದ ವಿದೇಶಿಯರು ಈ ಸಂಸ್ಕೃತಿ ಒಪ್ಪಿಕೊಂಡು ಸನ್ಯಾಸಿಗಳಂತೆ ಜೀವನ ಮಾಡಬಯಸುತ್ತಾರೆ. ನಾವು ಮೊದಲು ಈ ದೇಶದ ಬಗ್ಗೆ ಅಭಿಮಾನ ಹೊಂದಬೇಕು. ಹಣಕ್ಕಾಗಿ ಮಾನವೀಯತೆ ಕಳೆದುಕೊಳ್ಳಬಾರದು.

ಮೈಕ್ರೋ ಫೈನಾನ್ಸ್ ಕಿರುಕುಳಕ್ಕೆ ಗಂಡನ ಸಾವು; ಸಿಎಂ, ಗೃಹ ಸಚಿವರಿಗೆ ಮಾಂಗಲ್ಯ ಸರ ಕಳಿಸಿದ ಹೆಂಡತಿ!

ಆರಂಭವಾಯ್ತು 'ಮಾಂಗಲ್ಯ ಸರ ಉಳಿಸಿ' ಅಭಿಯಾನ




ಹಾವೇರಿ, ಜ.23– ಮೈಕ್ರೋ ಫೈನಾನ್ಸ್ ಕಂಪನಿಗಳ ಕಿರುಕುಳಕ್ಕೆ ಬೇಸತ್ತ ಮಹಿಳೆಯರು ಇದೀಗ ಮಾಂಗಲ್ಯ ಸರ ಉಳಿಸಿ ಅಭಿಯಾನ ಎಂಬ ವಿನೂತನ ಹೋರಾಟ ಒಂದನ್ನು ಆರಂಭಿಸಿದ್ದಾರೆ. ಇದರ ಭಾಗವಾಗಿ ಅವರು ಇದೀಗ ಸ್ವತಃ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಗೃಹ ಸಚಿವ ಜಿ.ಪರಮೇಶ್ವರ್ ಅವರಿಗೆ ಪೋಸ್ಟ್ ಮೂಲಕ ತಾಳಿ ಸರ ರವಾನಿಸುವ ಮೂಲಕ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.ಮೈಕ್ರೋಫೈನಾನ್ಸ್ ಕಂಪನಿಗಳ ಹಾವಳಿ ಹೆಚ್ಚಾಗಿದ್ದು ಕೆಲವು ಊರುಗಳಲ್ಲಿ ಜನರು ಮನೆಯನ್ನೇ ಬಿಟ್ಟು ಓಡಿ ಹೋಗುವ ಸ್ಥಿತಿ ನಿರ್ಮಾಣವಾಗಿತ್ತು. ಈ ಹಿನ್ನೆಲೆಯಲ್ಲಿ ಸಿಎಂ ಸಿದ್ದರಾಮಯ್ಯನವರು ಮೈಕ್ರೋ ಫೈನಾನ್ಸ್‌ಗಳ ಕಿರುಕುಳ ಸಹಿಸುವುದಿಲ್ಲ. ಅಂಥವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದ್ದರು. ಅದರ ಹೊರತಾಗಿಯೂ ರಾಜ್ಯದ ಹಲವೆಡೆ ಮೈಕ್ರೋ ಫೈನಾನ್ಸ್ ಸಿಬ್ಬಂದಿ ಕಿರುಕುಳ ಮುಂದುವರೆದಿತ್ತು. ಈ ಹಿನ್ನೆಲೆಯಲ್ಲಿ ರೊಚ್ಚಿಗೆದ್ದಿರುವ ಮಹಿಳೆಯರು ಸಿಎಂ ಸಿದ್ದರಾಮಯ್ಯ, ಗೃಹ ಸಚಿವ ಜಿ ಪರಮೇಶ್ವರ್ ವಿರುದ್ಧ ವಿನೂತನ ಅಭಿಯಾನ ಒಂದನ್ನು ಆರಂಭಿಸಿದ್ದಾರೆ.

ಹಾವೇರಿಯಲ್ಲಿ ಮೈಕ್ರೋ ಫೈನಾನ್ಸ್‌ನವರ ಕಿರುಕುಳಕ್ಕೆ ಪತಿ ಬಲಿಯಾಗಿದ್ದು, ಮಾಂಗಲ್ಯ ಉಳಿಸದ ಆಡಳಿತ ವ್ಯವಸ್ಥೆಯ ವಿರುದ್ಧ ಮಾಂಗಲ್ಯ ಸರವನ್ನೇ ಗೃಹ ಮಂತ್ರಿಗೆ ಪೋಸ್ಟ್ ಮಾಡಿರುವ ನೊಂದ ಮಹಿಳೆ ಸರ್ಕಾರ ವಿರುದ್ಧ ವಿನೂತನ ಅಭಿಯಾನ ಆರಂಭಿಸಿದ್ದಾರೆ. ರಾಯಚೂರು ಜಿಲ್ಲೆಯ ಮಾನವಿ ತಾಲೂಕಿನಲ್ಲಿ ಕಪಗಲ್‌ನಲ್ಲಿ ಇತ್ತೀಚೆಗೆ 30 ವರ್ಷದ ಶರಣಬಸವ ಎಂಬಾತ ಮೈಕ್ರೋಫೈನಾನ್ಸ್ ಕಿರುಕುಳಕ್ಕೆ ಬೇಸತ್ತು ಆತ್ಮಹತ್ಯೆ ಮಾಡಿಕೊಂಡಿದ್ದ.

ಪತಿಯ ಸಾವಿಗೆ ನ್ಯಾಯ ನೀಡುವಂತೆ ಮಾಂಗಲ್ಯ ಸರವನ್ನೇ ಗೃಹಮಂತ್ರಿ ಜಿ.ಪರಮೇಶ್ವರ್ ಅವರಿಗೆ ಪೋಸ್ಟ್ ಮೂಲಕ ಕಳುಹಿಸಿದ ಮೃತನ ಪತ್ನಿ ಪಾರ್ವತಿ, ಸರ್ಕಾರ ವಿರುದ್ಧ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಮೈಕ್ರೋ ಫೈನಾನ್ಸ್ ಹೆಸರಲ್ಲಿ ಬ್ಯಾಂಕ್‌ಗಳು ನಡೆಸುತ್ತಿರುವ ಅನ್ಯಾಯದ ವಿರುದ್ಧ ಬೇಸರ ವ್ಯಕ್ತಪಡಿಸಿದ್ದಾರೆ. 5 ಲಕ್ಷ ಸಾಲ ನೀಡಿದ್ದ ಮೈಕ್ರೋಫೈನಾನ್ಸ್‌ನವರು ಪಡೆದ ಸಾಲಕ್ಕೆ ಬಡ್ಡಿ ಹಾಗೂ ಅಸಲು ಕಟ್ಟುವಂತೆ ಕಿರುಕುಳ ನೀಡಿದ್ದರು. ಹಗಲು ರಾತ್ರಿ ಕಾಡಿದ್ದರಿಂದ ಶರಣಬಸವ ಅವರು ಮನೆ ಬಿಟ್ಟು ಹೋಗಿದ್ದರು. ಕೊನೆಗೂ ಮನವೊಲಿಸಿ ಮನೆಗೆ ಕರೆತಂದಾಗ ಬಾಯಿಗೆ ಬಂದಂತೆ ಬೈದು ಮೈಕ್ರೋ ಫೈನಾನ್ಸ್ ಸಿಬ್ಬಂದಿ ಅವಮಾನಿಸಿದ್ದರಂತೆ.

ಸಮಯ ಕೇಳಿದರೂ ನೀಡದೇ ಮನಬಂದಂತೆ ಬೈದ ಪರಿಣಾಮ ಶರಣಬಸವ ಅವರು ಕ್ರಿಮಿನಾಶಕ ಸೇವಿಸಿ ಆತ್ಮಹತ್ಯೆಗೆ ಶರಣಾಗಿದ್ದರು. ಈ ಹಿನ್ನೆಲೆ ಪತಿಯ ಸಾವಿಗೆ ಸರ್ಕಾರವೇ ಹೊಣೆ ಎಂದು ಆರೋಪಿಸಿ ಜಿ.ಪರಮೇಶ್ವರ್ ಅವರಿಗೆ ಮಾಂಗಲ್ಯ ಸರ ಕಳುಹಿಸಿರುವ ಪತ್ನಿ ಪಾರ್ವತಿ ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ. ಮಾಂಗಲ್ಯ ಉಳಿಸಿ ಅಭಿಯಾನ ಆರಂಭಿಸಿರುವ ಹಾವೇರಿ ಜಿಲ್ಲೆಯ ನೊಂದ ಮಹಿಳೆಯರು ಹಾಗೂ ರೈತ ಮುಖಂಡರು 'ಮಾಂಗಲ್ಯ ಉಳಿಸಿ' ಎಂಬ ಅಭಿಯಾನದ ಮೂಲಕ ಹಾವೇರಿ ನಗರದ ಅಂಚೆ ಕಚೇರಿ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಮಾಂಗಲ್ಯ ಸರ ರವಾನೆ ಮಾಡಿದ್ದಾರೆ. ಮನೆ ಬಾಗಿಲಿಗೆ ಬಂದು ಮೈಕ್ರೋ ಫೈನಾನ್ಸ್ ಸಿಬ್ಬಂದಿ ಕಿರುಕುಳ ನೀಡುತ್ತಿದ್ದಾರೆ. ಮನೆಯಲ್ಲಿ ನೆಮ್ಮದಿಯಾಗಿ ಇರುವಂತಿಲ್ಲ ಎಂದು ನೊಂದ ಮಹಿಳೆಯರು ಆರೋಪಿಸಿದ್ದಾರೆ.


ಏಪ್ರಿಲ್ ತಿಂಗಳ ತಿರುಪತಿ ದರ್ಶನ ಟಿಕೆಟ್ ಬುಕ್ಕಿಂಗ್ ದಿನಾಂಕ ಪ್ರಕಟ



ತಿರುಪತಿ,ಜ.23–ತಿರುಮಲ ತಿರುಪತಿ ದೇವಸ್ಥಾನಂ ಬೋರ್ಡ್ (ಟಿಟಿಡಿ) ಏಪ್ರಿಲ್‌ನಲ್ಲಿ ನಿಗದಿಯಾಗಿರುವ ವಿವಿಧ ದರ್ಶನಗಳಿಗೆ ಟಿಕೆಟ್‌ಗಳನ್ನು ಬಿಡುಗಡೆ ಮಾಡಲು ಸಿದ್ಧತೆ ನಡೆಸುತ್ತಿದ್ದು, ಇಂದಿನಿಂದ ಆನ್‌ಲೈನ್ ಬುಕಿಂಗ್‌ಗಳು ಪ್ರಾರಂಭವಾಗಿದೆ. ಇದು ಎರಡು ದಿನಗಳವರೆಗೆ ಮುಂದುವರಿಯಲಿದೆ. ಭಕ್ತರು ಇಂದು ವಿಶೇಷ ದರ್ಶನ ಟಿಕೆಟ್‌ಗಳನ್ನು ಆನ್‌ಲೈನ್‌ನಲ್ಲಿ ಪಡೆಯಬಹುದು. ಬೆಳಿಗ್ಗೆ 10 ಗಂಟೆಗೆ ಅಂಗ ಪ್ರದಕ್ಷಿಣೆ ಟೋಕನ್‌ಗಳು ಮಾರಾಟವಾಗಿದ್ದು, 11 ಗಂಟೆಗೆ ಶ್ರೀವಾಣಿ ದರ್ಶನ ಟಿಕೆಟ್‌ಗಳು ಮತ್ತು ಮಧ್ಯಾಹ್ನ 3 ಗಂಟೆಗೆ ವೃದ್ಧರು ಮತ್ತು ಅಂಗವಿಕಲರಿಗೆ ದರ್ಶನ ಟಿಕೆಟ್‌ಗಳನ್ನು ಬಿಡುಗಡೆ ಮಾಡಿದೆ.

ಇದಲ್ಲದೆ, ಟಿಟಿಡಿ ನಾಳೆ ಬೆಳಿಗ್ಗೆ 10 ಗಂಟೆಯಿಂದ ಪ್ರಾರಂಭವಾಗುವ 300 ರೂ.ಗಳ ವಿಶೇಷ ಪ್ರವೇಶ ದರ್ಶನ ಟಿಕೆಟ್‌ಗಳನ್ನು ನೀಡಲಿದೆ. ಇತ್ತೀಚೆಗೆ ತಿರುಮಲದಲ್ಲಿ ವೈಕುಂಠದ್ವಾರ ದರ್ಶನದ ನಂತರ ಭಕ್ತರ ಸಂಖ್ಯೆ ಸ್ಥಿರವಾಗಿ ಹೆಚ್ಚುತ್ತಿದೆ. ವರದಿಯಾಗಿರುವಂತೆ ಭಕ್ತರು ಪ್ರಸ್ತುತ ಆರು ವಿಭಾಗಗಳಲ್ಲಿ ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆಯುತ್ತಿದ್ದಾರೆ. ಇದರಿಂದಾಗಿ ಟೋಕನ್ ಇಲ್ಲದೆ ಶ್ರೀವಾರಿಯ ದರ್ಶನ ಪಡೆಯಲು ಸುಮಾರು 8 ಗಂಟೆಗಳ ಕಾಲ ಕಾಯುವ ಸಮಯ ಬಂದಿದೆ. ಜನವರಿ 23 ರಿಂದ ತಿರುಮಲಕ್ಕೆ ಭೇಟಿ ನೀಡುವ ಭಕ್ತರಿಗೆ ಹಿಂದಿನ ಪದ್ಧತಿಯಂತೆ ಸರ್ವದರ್ಶನ ಟೋಕನ್‌ಗಳು ಲಭ್ಯವಿರಲಿದೆ ಎಂದು ಟಿಟಿಡಿ ಈಗಾಗಲೇ ತಿಳಿಸಿದೆ. ಅಲಿಪಿರಿ ಬಳಿಯ ಭೂದೇವಿ ಸಂಕೀರ್ಣ, ರೈಲ್ವೆ ನಿಲ್ದಾಣದಲ್ಲಿರುವ ವಿಷ್ಣು ನಿವಾಸ ಮತ್ತು ಬಸ್ ನಿಲ್ದಾಣದಲ್ಲಿರುವ ಶ್ರೀನಿವಾಸಂ ಕೌಂಟರ್‌ಗಳು ಸೇರಿದಂತೆ ಗೊತ್ತುಪಡಿಸಿದ ಸ್ಥಳಗಳಲ್ಲಿ ಟೋಕನ್‌ಗಳನ್ನು ಸಂಗ್ರಹಿಸಬಹುದು. ಈ ತಿಂಗಳ 10 ರಿಂದ 19 ರವರೆಗೆ ವೈಕುಂಠ ದರ್ಶನ ಅವಧಿ ಇದ್ದ ಕಾರಣಕ್ಕಾಗಿ ಎಂದಿನ ಸರ್ವದರ್ಶನ ಟಿಕೆಟ್ ಅನ್ನು ರದ್ದು ಮಾಡಲಾಗಿತ್ತು. ವೈಕುಂಠ ದ್ವಾರ ದರ್ಶನ ಟಿಕೆಟ್ ಇದ್ದವರಿಗೆ ಮಾತ್ರವೇ 10ರಿಂದ 19ರವರೆಗೆ ತಿಮ್ಮಪ್ಪನ ದರ್ಶನಕ್ಕೆ ಅವಕಾಶ ನೀಡಲಾಗಿತ್ತು.

ನಟನದಲ್ಲಿ ನಾಟಕ 'ಪ್ರಮೀಳಾರ್ಜುನೀಯಂ'




ಮೈಸೂರು,ಜ.23–ಮೈಸೂರಿನ ಮತ್ತು ಸುತ್ತಮುತ್ತಲಿನ ಸದಭಿರುಚಿಯ, ಸಹೃದಯ ರಂಗಾಸಕ್ತರಿಗಾಗಿ ನಟನವು ವಾರಾಂತ್ಯ ರಂಗ ಪ್ರದರ್ಶನಗಳನ್ನು ನಡೆಸುತ್ತಿದ್ದು, ಜ.26ರಂದು ಸಂಜೆ 6.30ಕ್ಕೆ ಮೈಸೂರಿನ ನಟನ ರಂಗಶಾಲೆಯಲ್ಲಿ ನಟನ ಪಯಣ: ರೆಪರ್ಟರಿ ತಂಡದ ಪ್ರಯೋಗ 'ಪ್ರಮೀಳಾರ್ಜುನೀಯಂ' ಪ್ರದರ್ಶನಗೊಳ್ಳಲಿದೆ. ಎಂ.ಎಲ್ ಶ್ರೀಕಂಠೇಶ ಗೌಡ ಅವರ ರಚನೆಯ ಈ ನಾಟಕಕ್ಕೆ ಸಂಗೀತ ದಿಗ್ವಿಜಯ ಹೆಗ್ಗೋಡು ಅವರದ್ದು. ನಟನದ ಪ್ರಾಂಶುಪಾಲರಾದ ಮೇಘ ಸಮೀರ ಅವರು ನಾಟಕವನ್ನು ವಿನ್ಯಾಸಗೊಳಿಸಿ ನಿರ್ದೇಶಿಸಿದ್ದಾರೆ. ಮಾಹಿತಿಗೆ 7259537777, 9480468327, 9845595505 ಸಂಪರ್ಕಿಸಬಹುದು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಮೈಸೂರು ಮಿತ್ರ ಶುಕ್ರವಾರ 24 ಜನವರಿ 2025

ಇಸ್ರೋದ ಮಹತ್ವಾಕಾಂಕ್ಷಿ ಯೋಜನೆಯಾದ ಮಾನವರಹಿತ ಗಗನಯಾನದ ಮಾಡ್ಯೂಲ್ ರವಾನೆ



ಬೆಂಗಳೂರು, ಜ.23– ಇಸ್ರೋದ ಮಹತ್ವಾಕಾಂಕ್ಷಿ ಯೋಜನೆಯಾದ ಮಾನವರಹಿತ ಗಗನಯಾನ ಮಿಷನ್‌ನ ಕ್ರ್ಯೂ (ಸಿಬ್ಬಂದಿ) ಮಾಡ್ಯೂಲ್ ಅನ್ನು ಇಲ್ಲಿನ ಎಲ್‌ಪಿಎಸ್‌ನಿಂದ ಶ್ರೀಹರಿ ಕೋಟಾದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರಕ್ಕೆ ರವಾನಿಸಲಾಗಿದೆ.

ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ ಇಸ್ರೋ, ಲಿಕ್ವಿಡ್ ಪ್ರೊಪಲ್ಷನ್ ಸಿಸ್ಟಮ್ ಏಕೀಕರಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ನಂತರ, ಮೊದಲ ಸಿಬ್ಬಂದಿರಹಿತ ಗಗನಯಾನ ಯೋಜನೆಯ ಭಾಗವಾಗಿ ಇದನ್ನು ಕಳಿಸಲಾಗಿದೆ ಎಂದು ಮಾಹಿತಿ ನೀಡಿದೆ.

ಅಂತೆಯೇ, ವಿಕ್ರಂ ಸಾರಾಭಾಯಿ ಬಾಹ್ಯಾಕಾಶ ಕೇಂದ್ರದಲ್ಲಿ ವಿನ್ಯಾಸಗೊಳಿಸಲಾದ, ಕ್ರ್ಯೂ ಮಾಡ್ಯೂಲ್ ಎಂತಹ ಪರಿಸ್ಥಿತಿಯಲ್ಲೂ ನೇರವಾಗಿ, ಸ್ಥಿರವಾಗಿರುವಂತೆ ನೋಡಿಕೊಳ್ಳುವ ಸಿಎಂಯುಎಸ್ ಅನ್ನೂ ಸಿಬ್ಬಂದಿ ಮಾಡ್ಯೂಲ್‌ಗೆ ಜೋಡಿಸಲಾಗಿದೆ. ಫೆಬ್ರವರಿಯಲ್ಲಿ ಇದರ ಪರೀಕ್ಷೆ ನಡೆಯಲಿದೆ. ಗಗನಯಾನವು ಮಾನವರನ್ನು ಬಾಹ್ಯಾಕಾಶಕ್ಕೆ ಕರೆದೊಯ್ಯುವ ಯೋಜನೆಯಾದರೂ, ಮೊದಲಿ ಪ್ರಾಯೋಗಿಕವಾಗಿ ಮನುಷ್ಯರ ಜಾಗದಲ್ಲಿ ಮಾನವಾಕೃತಿಗಳನ್ನಿರಿಸಿ ಕಳಿಸಲಾಗುವುದು. ಇದು ಯಶಸ್ವಿಯಾದರೆ, ನಂತರ ಗಗನಯಾತ್ರಿಗಳನ್ನು ಕರೆದೊಯ್ಯಲಾಗುವುದು ಎಂದು ಇಸ್ರೋ ತಿಳಿಸಿದೆ.

ಸರ್ಕಾರಿ ಕರ್ತವ್ಯಕ್ಕೆ ಅಡ್ಡಿಪಡಿಸಿದ ಮೂವರಿಗೆ ಜೈಲು ಶಿಕ್ಷೆ



ಮೈಸೂರು, ಜ.23(ಆರ್‌ಕೆ)– ಕರ್ತವ್ಯನಿರತ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿ ಮೇಲೆ ತಿರುಗಿಬಿದ್ದು ಅವರ ಕರ್ತವ್ಯಕ್ಕೆ ಅಡ್ಡಿಪಡಿಸಿದ್ದ ಮೂವರಿಗೆ ಮೈಸೂರು ನ್ಯಾಯಾಲಯ ಜೈಲು ಶಿಕ್ಷೆ ವಿಧಿಸಿದೆ.

ಆನಂದ್, ಅಕ್ಷಯ್, ಕಿರಣ್ ಶಿಕ್ಷೆಗೆ ಗುರಿಯಾದವರು. 2018ರ ಜುಲೈ 15ರಂದು ಕೆಆರ್‌ಎಸ್ ರಸ್ತೆಯ ಸುನಂದ ಚೆಕ್‌ಪೋಸ್ಟ್ ಬಳಿ ವಿವಿಪುರಂ ಸಂಚಾರ ಠಾಣೆ ಪೊಲೀಸರು, ವಾಹನ ತಪಾಸಣೆ ಮಾಡುತ್ತಿದ್ದಾಗ ಮದ್ಯಪಾನ ಮಾಡಿದ್ದ ಬೈಕ್ ಸವಾರನೋರ್ವ ನಿಯಂತ್ರಣ ತಪ್ಪಿ ಬ್ಯಾರಿಕೇಡ್ ಸಮೇತ ರಸ್ತೆಗೆ ಬಿದ್ದರು.

ತಕ್ಷಣ ಆತನನ್ನು ಆಸ್ಪತ್ರೆಗೆ ಕರೆದೊಯ್ಯುವಾಗ ಪೊಲೀಸ್ ಅಧಿಕಾರಿಗಳನ್ನು ತಡೆದು ಕರ್ತವ್ಯಕ್ಕೆ ಅಡ್ಡಿಪಡಿಸಿದ್ದರಿಂದ ಪ್ರಕರಣ ದಾಖಲಿಸಿಕೊಂಡಿದ್ದ ಮೇಟಗಳ್ಳಿ ಠಾಣೆ ಪೊಲೀಸರು ಮೂವರ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು. ಪ್ರಕರಣದ ವಿಚಾರಣೆ ನಡೆಸಿದ ಮೈಸೂರಿನ 7ನೇ ಅಧಿಕ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯದ ನ್ಯಾಯಾಧೀಶರಾದ ಅನುರಾಧ ಅವರು ವಾದ–ಪ್ರತಿವಾದ ಆಲಿಸಿದ ಬಳಿಕ ಸಾಕ್ಷ್ಯಾಧಾರಗಳಿಂದ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಮೂವರು ಆರೋಪಿಗಳಿಗೆ ಐಪಿಸಿ ಸೆಕ್ಷನ್ 341ರಡಿ ಅಪರಾಧಕ್ಕೆ 1 ತಿಂಗಳ ಸಾದಾ ಶಿಕ್ಷೆ ಮತ್ತು ಕಲಂ 353ಕ್ಕೆ 1 ವರ್ಷ ಸಾದಾ ಶಿಕ್ಷೆ ಹಾಗೂ 5,000 ರೂ. ದಂಡ ವಿಧಿಸಿ ತೀರ್ಪು ನೀಡಿದ್ದಾರೆ. ಸಹಾಯಕ ಸರ್ಕಾರಿ ಅಭಿಯೋಜಕಿ ಕೆ.ಪಿ. ನೇತ್ರಾವತಿ ಅವರು ಸರ್ಕಾರದ ಪರವಾಗಿ ವಾದ ಮಂಡಿಸಿದ್ದರು.

ಗಜಮುಖ ಯುವಕರ ಬಳಗದಿಂದ ಶ್ರೀ ರಾಮನಿಗೆ ವಿಶೇಷ ಪೂಜೆ, ಅನ್ನದಾನ



ಗಜಮುಖ ಯುವಕರ ಬಳಗದ ವತಿಯಿಂದ ಶ್ರೀ ರಾಮನಿಗೆ ವಿಶೇಷ ಪೂಜೆ.

ಮೈಸೂರು, ಜ.23–ಮೈಸೂರಿನ ಕುವೆಂಪುನಗರದ ಎಂ–ಬ್ಲಾಕ್‌ನಲ್ಲಿ ಅಯೋಧ್ಯ ರಾಮಮಂದಿರ ಮೊದಲ ವಾರ್ಷಿಕೋತ್ಸವ ಅಂಗವಾಗಿ ಗಜಮುಖ ಯುವಕರ ಬಳಗದ ವತಿಯಿಂದ ಶ್ರೀ ರಾಮನಿಗೆ ವಿಶೇಷ ಪೂಜೆ ಹಾಗೂ ಭಕ್ತಾದಿಗಳಿಗೆ ಅನ್ನ ಸಂತರ್ಪಣೆ ಮಾಡಲಾಯಿತು.

ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಶಾಸಕ ಟಿ.ಎಸ್. ಶ್ರೀವತ್ಸ ಮಾತನಾಡಿ, ಅಯೋಧ್ಯೆಯನ್ನು ಪ್ರಭು ಶ್ರೀರಾಮನ ಜನ್ಮಸ್ಥಳ ಎಂದು ಹಿಂದೂ ಧಾರ್ಮಿಕ ಗ್ರಂಥಗಳಲ್ಲಿ ಉಲ್ಲೇಖಿಸಲಾಗಿದೆ. 2024ರಲ್ಲಿ ಅಯೋಧ್ಯೆಯಲ್ಲಿ ರಾಮ ದೇವಾಲಯದ ನಿರ್ಮಾಣ ಪೂರ್ಣಗೊಂಡು ಲಕ್ಷಾಂತರ ಜನರು ಇಲ್ಲಿನ ರಾಮನ ದರ್ಶನವನ್ನು ಪಡೆದುಕೊಂಡಿದ್ದಾರೆ. ಅಯೋಧ್ಯೆಯಲ್ಲಿನ ರಾಮಮಂದಿರವು ಹಿಂದೂ ಧರ್ಮಿಯರ ಜೀವಾಳವಾಗಿದೆ. ಇಂದಿಗೆ ಅಯೋಧ್ಯೆಯ ಬಾಲರಾಮನ ಪ್ರತಿಷ್ಠಾಪನೆಯಾಗಿ ದೇಶಾದ್ಯಂತ ಮೊದಲ ವಾರ್ಷಿಕೋತ್ಸವ ಆಚರಿಸಲಾಗುತ್ತಿದೆ ಎಂದು ಹೇಳಿದರು.

ಕೃಷ್ಣರಾಜ ಕ್ಷೇತ್ರದ ಬಿಜೆಪಿ ಅಧ್ಯಕ್ಷ ಗೋಪಾಲರಾಜ್ ಅರಸ್, ರಾಜಗೋಪಾಲ್, ಗಜಮುಖ ಯುವಕರ ಬಳಗ ಅಧ್ಯಕ್ಷ ಹೇಮಂತ್, ರಾಜೇಶ್, ಸುಮಿತ್ರ, ಮಂಜುಳಾ, ಚೇತನ್, ಮಂಜು, ರಾಜು, ರಾಘವೇಂದ್ರ, ಕೆಂಚಪ್ಪ, ಲಿಂಗರಾಜು, ಶ್ರೀನಿವಾಸ್ ಹಾಗೂ ಇನ್ನಿತರರು ಹಾಜರಿದ್ದರು.

ಎಚ್.ಕೆ. ರಾಜಗೋಪಾಲ್‌ಗೆ ಅಭಿನಂದನೆ



ಮೈಸೂರಿನ ಸರಸ್ವತಿಪುರಂನಲ್ಲಿರುವ ರಾಮಾನುಜ ಅಭ್ಯುದಯ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಎಚ್.ಕೆ. ರಾಜಗೋಪಾಲ್ ಅವರನ್ನು ಶಾಸಕ ಟಿ.ಎಸ್. ಶ್ರೀವತ್ಸ ಅಭಿನಂದಿಸಿದರು. ಮೈಸೂರು ಜಿಲ್ಲಾ ಬ್ರಾಹ್ಮಣ ಯುವ ವೇದಿಕೆಯ ಪ್ರಧಾನ ಕಾರ್ಯದರ್ಶಿ ವಿಕ್ರಂ ಅಯ್ಯಂಗಾರ್, ಸಂಸ್ಕೃತಿ ಚಿಂತಕ ಗಣೇಶ್ ದೀಕ್ಷಿತ್, ಹೇಮಂತ್, ರಾಜೇಶ್ ಜಾದವ್, ಗಿರೀಶ್ ಗೌಡ, ಕಿಶೋರ್, ಮಧುಸೂದನ್ ಇನ್ನಿತರರು ಉಪಸ್ಥಿತರಿದ್ದರು.

ಡಾ.ಶ್ವೇತಾ ಜಿ.ವೈಗೆ ಪಿಹೆಚ್.ಡಿ ಪದವಿ



ಮೈಸೂರು: ಮೈಸೂರಿನ ವಿದ್ಯಾವರ್ಧಕ ಇಂಜಿನಿಯರಿಂಗ್ ಕಾಲೇಜಿನ ಎಂಬಿಎ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ಶ್ವೇತಾ ಜಿ.ವೈ ಅವರು ಡಾ.ಮೌಸುಮಿ ಸೇನ್ ಗುಪ್ತಾ ಅವರ ಮಾರ್ಗದರ್ಶನದಲ್ಲಿ ಮ್ಯಾನೇಜ್‌ಮೆಂಟ್ ಸೈನ್ಸ್‌ನ ಭಾರತೀಯ ಐಟಿ ವಲಯದಲ್ಲಿನ ಹಸಿರು ಹೆಚ್.ಆರ್.ಎಂ ನೀತಿಗಳು ಮತ್ತು ಅಭ್ಯಾಸಗಳ ಜಿಇಎನ್‌ಝಡ್ (GENZ) ಉದ್ಯೋಗಿಗಳ ಗ್ರಹಿಕೆ ಅಡಿಯಲ್ಲಿ ಸಂಶೋಧನೆ ನಡೆಸಿದ ಮಹಾಪ್ರಬಂಧಕ್ಕೆ ಮೈಸೂರು ವಿಶ್ವವಿದ್ಯಾಲಯ ಪಿಹೆಚ್.ಡಿ ಪದವಿಗೆ ಅಂಗೀಕರಿಸಿದೆ.


ಮೈಸೂರಿನ ಕುವೆಂಪುನಗರದಲ್ಲಿ ಚಿರತೆ ಪ್ರತ್ಯಕ್ಷ ಆತಂಕ

ಅರಣ್ಯ ಇಲಾಖೆಯಿಂದ ಕಾರ್ಯಾಚರಣೆ; ಗಂಟೆಗಳ ಕಾಲ ಜಾಲಾಡಿದರೂ ಚಿರತೆ ಸುಳಿವಿಲ್ಲ

ಮೈಸೂರು,ಜ.23(ಆರ್‌ಕೆ)– ಮೈಸೂರಿನ ಕುವೆಂಪುನಗರ ನ್ಯೂ ಕಾಂತರಾಜ ಅರಸ್ ರಸ್ತೆ ಹಿಂಭಾಗ ವಿಜಯ ಬ್ಯಾಂಕ್ ಸರ್ಕಲ್ ಬಳಿ ಗುರುವಾರ ಮುಂಜಾನೆ ಚಿರತೆ ಕಂಡಿದ್ದಾಗಿ ನಿವಾಸಿಯೊಬ್ಬರು ತೀವ್ರ ಆತಂಕ ವ್ಯಕ್ತಪಡಿಸಿದರು. ಈ ಹಿನ್ನೆಲೆಯಲ್ಲಿ ತಕ್ಷಣ ಕಾರ್ಯಾಚರಣೆಗಿಳಿದರೂ ಚಿರತೆ ಸುಳಿವೇ ಸಿಗಲಿಲ್ಲ.

ವಿಶ್ವಾನಂದ ಪಾರ್ಕ್‌ನಲ್ಲಿರುವ ಮೈಸೂರು ಮಹಾನಗರಪಾಲಿಕೆಯ ಶುದ್ಧ ಕುಡಿಯುವ ನೀರಿನ ಘಟಕದ ಎದುರಿನ ಕೆ.ನರಸಿಂಹಮೂರ್ತಿ ಎಂಬುವವರ ಎಲ್‌ಐಜಿ ಮನೆ ಸಂಖ್ಯೆ 130ರ ಮೆಟ್ಟಿಲ ಮೂಲಕ ತಾರಸಿಗೆ ಚಿರತೆ ಹೋಗುತ್ತಿದ್ದ ದೃಶ್ಯವನ್ನು ಮುಂಜಾನೆ ಸುಮಾರು 5.35ರಲ್ಲಿ ಪಕ್ಕದ ಮನೆ (ಎಲ್‌ಐಜಿ 129ರ) ನಿವಾಸಿ ನಾಗರತ್ನಮ್ಮ ಅವರು ವೇಳೆ ನೋಡಿದ್ದಾಗಿ ತಿಳಿಸಿದ್ದಾರೆ. ಅದಕ್ಕೂ ಮೊದಲೇ ಬೀದಿ ನಾಯಿಗಳು ಒಮ್ಮೆಗೆ ಬೊಗಳಲಾರಂಭಿಸಿದ್ದರಿಂದ ನನಗೆ ಎಚ್ಚರವಾಯಿತು. ಮನೆ ಕಿಟಕಿ ಮೂಲಕ ನೋಡಿದಾಗ ಪಕ್ಕದ ಮನೆಯ ಗೇಟ್‌ನಿಂದ ಒಳ ಹೋದ ಚಿರತೆ ಮೆಟ್ಟಿಲು ಮೂಲಕ ತಾರಸಿಗೆ ಹೋಗುತ್ತಿದ್ದುದನ್ನು ನೋಡಿದೆ ಎಂದು ತಿಳಿಸಿದ್ದಾರೆ.

ಗಾಬರಿಯಿಂದ ತಾವು ತಮ್ಮ ಮಗನಿಗೂ ವಿಷಯ ತಿಳಿಸಿದ ಹಿನ್ನೆಲೆಯಲ್ಲಿ ಅವರು ಹೊರಗೆ ಬಂದು ಅಕ್ಕಪಕ್ಕದ ಮನೆಯವರನ್ನು ಎಬ್ಬಿಸಿ ನೋಡಿದರು.



ಚಿರತೆ ಕಂಡಿದ್ದಾಗಿ ನಿವಾಸಿಯೊಬ್ಬರು ತೀವ್ರ ಆತಂಕ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ತಕ್ಷಣ ಕಾರ್ಯಾಚರಣೆಗಿಳಿದು ಕೂಂಬಿಂಗ್ ಕಾರ್ಯಾಚರಣೆ ನಡೆಸಿದ ಅರಣ್ಯ ಅಧಿಕಾರಿಗಳು.

ಆದರೆ ಚಿರತೆ ಯಾರ ಕಣ್ಣಿಗೂ ಬೀಳಲಿಲ್ಲ. ಕೊನೆಗೆ ಕುವೆಂಪುನಗರ ಠಾಣೆಗೆ ವಿಷಯ ತಿಳಿಸಲಾಗಿ, ಇನ್‌ಸ್ಪೆಕ್ಟರ್ ಅರುಣ್ ಹಾಗೂ ಸಿಬ್ಬಂದಿ ಸ್ಥಳಕ್ಕೆ ಧಾವಿಸಿದರು. ಅವರೇ ಅರಣ್ಯ ಇಲಾಖೆಯವರಿಗೂ ದೂರವಾಣಿ ಮೂಲಕ ಮಾಹಿತಿ ನೀಡಿದರು. ಸ್ಥಳಕ್ಕೆ ಬಂದ ಅರಣ್ಯ ಸಿಬ್ಬಂದಿ ಸುಮಾರು 3 ಗಂಟೆ ಕಾರ್ಯಾಚರಣೆ ನಡೆಸಿ, ಶೋಧಿಸಿದರೂ ಚಿರತೆ ಮಾತ್ರ ಪತ್ತೆಯಾಗಲಿಲ್ಲ.

ಆದರೆ, ಚಿರತೆ ತಾರಸಿಯನ್ನೇರಿತು ಎನ್ನಲಾದ ಮನೆ ಮೇಲೆ ಪರಿಶೀಲಿಸಿದಾಗ ಅಲ್ಲಿ ಯಾವುದೋ ಪ್ರಾಣಿ ಮೂತ್ರ ವಿಸರ್ಜನೆ ಮಾಡಿರುವುದು ಪತ್ತೆಯಾಯಿತು. ಅದನ್ನು ಪರಿಶೀಲಿಸಿದ ಅರಣ್ಯ ಇಲಾಖೆ ಅಧಿಕಾರಿಗಳು ಅದು ನಾಯಿಯ ಮೂತ್ರ, ಚಿರತೆಯದ್ದಲ್ಲ ಎಂದು ತಿಳಿಸಿದರು. ಮನೆಯ ಸುತ್ತಮುತ್ತ ಚರಂಡಿಗಳಲ್ಲಿ, ಎದುರಿನ ಪಾರ್ಕ್ ಹಾಗೂ ಫುಟ್‌ಪಾತ್ ಮೇಲೆ ಬೆಳೆದಿರುವ ಗಿಡಗಂಟಿಗಳ ನಡುವೆ ಶೋಧಿಸಿದರಾದರೂ ಚಿರತೆಯಾಗಲೀ ಅದರ ಹೆಜ್ಜೆ ಗುರುತಾಗಲೀ ಸಿಗಲಿಲ್ಲ.

ಕೇವಲ ರಾತ್ರಿ ವೇಳೆ ಮಾತ್ರ ಸಂಚರಿಸುವ ಚಿರತೆ ಹಗಲಿನಲ್ಲಿ ನಿರ್ಜನ ಪ್ರದೇಶದ ಪೊದೆಯೊಳಗೆ ಅಡಗಿ ಕುಳಿತಿರುತ್ತದೆ ಎಂದ ಅರಣ್ಯಾಧಿಕಾರಿಗಳು ಅದು ಇಂತಹ ಜನ ವಸತಿ ಪ್ರದೇಶಕ್ಕೆ ಬರುವ ಸಾಧ್ಯತೆ ಕಡಿಮೆ ಎಂಬ ತೀರ್ಮಾನಕ್ಕೆ ಬಂದರು. ಆದರೂ ಆತಂಕಗೊಂಡ ಅಲ್ಲಿನ ನಿವಾಸಿಗಳು ಬೆಳಗ್ಗೆ 11 ಗಂಟೆವರೆಗೂ ಮನೆಯಿಂದ ಹೊರ ಬರಲು ಹಿಂದೆ ಮುಂದೆ ನೋಡಿದರು. ಈ ಆತಂಕದ ನಡುವೆ ವಿಶ್ವಮಾನವ ಜೋಡಿ ರಸ್ತೆಯ ಚಂದ್ರಮೌಳೇಶ್ವರ ದೇವಸ್ಥಾನವನ್ನು ಬೆಳಗ್ಗೆ ಮುಂಜಾಗ್ರತಾ ಕ್ರಮವಾಗಿ ಒಂದು ಗಂಟೆ ಬಂದ್ ಮಾಡಲಾಗಿತ್ತು. ಅಲ್ಲದೇ, ಪಕ್ಕದ ಪೂರ್ಣಪ್ರಜ್ಞ ವಿದ್ಯಾಶಾಲೆಯನ್ನು 1 ಗಂಟೆ ತಡವಾಗಿ ತೆರೆಯಲಾಯಿತು.

ದೇವಸ್ಥಾನದ ಟ್ರಸ್ಟಿ ಹಾಗೂ ವಕೀಲ ಕುವೆಂಪುನಗರ ನಿವಾಸಿ ಅರವಿಂದ್ ಹಾಗೂ ಬೆಳಗಿನ ವಾಯುವಿಹಾರಿಗಳು ಸಹ ಅರಣ್ಯ ಇಲಾಖೆ ಹಾಗೂ ಪೊಲೀಸರಿಗೆ ಶೋಧ ಕಾರ್ಯದಲ್ಲಿ ನೆರವಾದರು. ಈ ವೇಳೆ ಧ್ವನಿವರ್ಧಕಗಳ ಮೂಲಕ ಪ್ರಕಟಣೆ ನೀಡಿದ ಅಧಿಕಾರಿಗಳು ಚಿರತೆ ಪ್ರತ್ಯಕ್ಷವಾಗಿರುವ ಮಾಹಿತಿ ಇರುವುದರಿಂದ ಸಾರ್ವಜನಿಕರು ಮುನ್ನೆಚ್ಚರಿಕೆ ಕ್ರಮ ವಹಿಸಬೇಕು. ಹಾಗೂ ಚಿರತೆ ಕಂಡಲ್ಲಿ ಅರಣ್ಯ ಇಲಾಖೆಗೆ ಮಾಹಿತಿ ನೀಡಬೇಕು ಎಂದು ಮನವಿ ಮಾಡಿದರು.

ಅರಣ್ಯಾಧಿಕಾರಿಗಳು ಅಲ್ಲಿನ ಮನೆಗಳಲ್ಲಿ ಅಳವಡಿಸಿರುವ ಸಿಸಿ ಕ್ಯಾಮರಾಗಳ ಫುಟೇಜ್‌ಗಳನ್ನು ಪಡೆದಿದ್ದು, ಒಂದು ವೇಳೆ ಚಿರತೆ ಬಂದಿದ್ದರೆ ಅದರ ಚಲನವಲನಗಳ ಬಗ್ಗೆ ಪರಿಶೀಲಿಸಿ, ಮುಂದಿನ ಕ್ರಮ ವಹಿಸುವುದಾಗಿ ತಿಳಿಸಿದ್ದಾರೆ. ಇಂದು ರಾತ್ರಿಯೂ ಸ್ಥಳಕ್ಕೆ ಧಾವಿಸಿ, ನಿಗಾವಹಿಸುವುದಾಗಿ ತಿಳಿಸಿ, ಸಾರ್ವಜನಿಕರು ಆತಂಕಗೊಳ್ಳದೆ ಇರುವಂತೆ ತಿಳಿ ಹೇಳಿದರು.

ದಟ್ಟಗಳ್ಳಿಯಲ್ಲಿ ನಾಯಿ ಮೇಲೆ ಚಿರತೆ ದಾಳಿ

ಮೈಸೂರು, ಜ.23(ಆರ್‌ಕೆ)– ಮೈಸೂರಿನ ದಟ್ಟಗಳ್ಳಿಯ ಮನೆಯೊಂದರ ಸಾಕು ನಾಯಿ ಮೇಲೆ ಚಿರತೆ ದಾಳಿ ಮಾಡಿರುವ ಘಟನೆ ಕಳೆದ ರಾತ್ರಿ ಸಂಭವಿಸಿದೆ. ಅಲ್ಲಿನ ಮಣಿಕಂಠ ಎಂಬುವರ ನಾಯಿ ಮೇಲೆ ಬುಧವಾರ ರಾತ್ರಿ ಸುಮಾರು 11 ಗಂಟೆ ವೇಳೆಗೆ ದಾಳಿ ಮಾಡಿದೆ. ಗಾಯಗೊಂಡ ನಾಯಿಗೆ ಚಿಕಿತ್ಸೆ ಕೊಡಿಸಿದರೂ, ಫಲಕಾರಿಯಾಗದೇ ಸಾವನ್ನಪ್ಪಿದೆ ಎಂದು ಮಣಿಕಂಠ 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.


ಪ್ರವಾಸೋದ್ಯಮ ಇಲಾಖೆಗೆ ಸವಿತಾರ ಮರುನೇಮಕಕ್ಕೆ ಆಗ್ರಹ



ಮೈಸೂರು, ಜ.23(ಎಸ್‌ಬಿಡಿ)– ಮೈಸೂರು ವಿಶ್ವವಿದ್ಯಾನಿಲಯದ ಕುಲಸಚಿವೆಯಾಗಿ ವರ್ಗಾವಣೆಗೊಂಡ ಎಂ.ಕೆ.ಸವಿತಾ ಅವರನ್ನು ಪ್ರವಾಸೋದ್ಯಮ ಇಲಾಖೆಗೆ ಮರುನೇಮಕ ಮಾಡುವಂತೆ ಮೈಸೂರು ಟ್ರಾವೆಲ್ಸ್ ಅಸೋಸಿಯೇಷನ್ ಆಗ್ರಹಿಸಿದೆ. ಪ್ರವಾಸೋದ್ಯಮ ಇಲಾಖೆಯಲ್ಲಿ ಜಂಟಿ ನಿರ್ದೇಶಕರಾಗಿ ಸೇವೆ ಸಲ್ಲಿಸುತ್ತಿದ್ದ ಎಂ.ಕೆ.ಸವಿತಾ ಅವರನ್ನು ಎರಡು ದಿನಗಳ ಹಿಂದೆ ಮೈಸೂರು ವಿಶ್ವವಿದ್ಯಾನಿಲಯಕ್ಕೆ ವರ್ಗಾವಣೆ ಮಾಡಲಾಗಿದೆ. ಅದು ಆಡಳಿತಾತ್ಮಕ ನಿರ್ಧಾರವಾದರೂ ಮೈಸೂರಿನ ಪ್ರವಾಸೋದ್ಯಮದ ಏಳಿಗೆಗೆ ಅವಿರತವಾಗಿ ಶ್ರಮಿಸುತ್ತಿದ್ದ ಅವರನ್ನು ವರ್ಗಾವಣೆ ಮಾಡಬಾರದಿತ್ತು. ಅವರು ಮೈಸೂರಿನ ಪ್ರವಾಸೋದ್ಯಮ ಪಾಲುದಾರರೊಂದಿಗೆ ನಿರಂತರ ಸಂಪರ್ಕದಲ್ಲಿದ್ದು ವಿವಿಧ ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸಿದ್ದಾರೆ. ಪ್ರವಾಸೋದ್ಯಮ ಇಲಾಖೆಗೆ ಇಂಥಹ ದಕ್ಷ ಹಾಗೂ ಕ್ರಿಯಾಶೀಲ ಅಧಿಕಾರಿಯ ಅವಶ್ಯಕತೆ ಇದೆ. ಸವಿತಾ ಅವರ ಉತ್ತಮ ಕಾರ್ಯದಿಂದ ಮೈಸೂರು ಪ್ರವಾಸೋದ್ಯಮ ಮತ್ತಷ್ಟು ಅಭಿವೃದ್ಧಿಯಾಗಬೇಕಿದೆ. ಆದ್ದರಿಂದ ಸರ್ಕಾರ ಇವರನ್ನು ಪ್ರವಾಸೋದ್ಯಮ ಇಲಾಖೆಗೆ ಮರುನೇಮಕ ಮಾಡಬೇಕು ಎಂದು ಅಸೋಸಿಯೇಶನ್ ಅಧ್ಯಕ್ಷ ಬಿ.ಎಸ್. ಪ್ರಶಾಂತ್ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

ಮೈಸೂರು ಹೋಟೆಲ್ ಮಾಲೀಕರ ಸಂಘವೂ ನಿನ್ನೆ ಎಂ.ಕೆ.ಸವಿತಾ ಅವರ ವರ್ಗಾವಣೆಯನ್ನು ರದ್ದುಪಡಿಸಿ, ಪ್ರವಾಸೋದ್ಯಮ ಇಲಾಖೆಯಲ್ಲಿಯೇ ಮುಂದುವರೆಸಬೇಕೆಂದು ಆಗ್ರಹಿಸಿದ್ದನ್ನು ಸ್ಮರಿಸಬಹುದು.

ಮಂಗಳೂರು ಬ್ಯಾಂಕ್ ದರೋಡೆ ಕೇಸ್; ಕದ್ದ ಎಲ್ಲಾ ಹಣ, ಚಿನ್ನಾಭರಣ ವಶಕ್ಕೆ



ಬೆಂಗಳೂರು, ಜ.23– ಮಂಗಳೂರು ಬ್ಯಾಂಕ್ ದರೋಡೆ ಕೇಸ್‌ನಲ್ಲಿ ಕದ್ದ ಎಲ್ಲಾ ಹಣ ಮತ್ತು ಚಿನ್ನಾಭರಣಗಳನ್ನು ರಿಕವರಿ ಮಾಡಲಾಗಿದೆ ಎಂದು ಗೃಹ ಸಚಿವ ಜಿ ಪರಮೇಶ್ವರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ಮಂಗಳೂರು ದರೋಡೆ ಕೇಸ್‌ನಲ್ಲಿ 6 ಜನರು ಇದ್ದಾರೆ ಎಂದು ಮಾಹಿತಿ ಇತ್ತು. ಈಗಾಗಲೇ 3 ಜನರ ಬಂಧನ ಮಾಡಲಾಗಿದೆ. 10–12 ಕೋಟಿ ಹಣ ಮತ್ತು ಬಂಗಾರವನ್ನು ರಿಕವರಿ ಮಾಡಿದ್ದೇವೆ. ಉಳಿದವರ ಹುಡುಕಾಟಕ್ಕೆ ತನಿಖೆ ನಡೆಯುತ್ತಿದೆ. ಅವರ ಲೊಕೇಶನ್ ಕೂಡ ಪತ್ತೆ ಹಚ್ಚಲಾಗಿದೆ. ಅವರನ್ನು ಬೇಗ ಅರೆಸ್ಟ್ ಮಾಡುತ್ತೇವೆ.

ದರೋಡೆ ಕೇಸ್‌ನಲ್ಲಿ ಸ್ಥಳೀಯರ ಕೈವಾಡ ಇದೆ ಎಂಬ ಬಿಜೆಪಿ ಶಾಸಕರ ಹೇಳಿಕೆಗೆ ಪ್ರತಿಕ್ರಿಯಿಸಿ, ಅದರ ಬಗ್ಗೆಯೂ ತನಿಖೆ ಆಗುತ್ತದೆ. ಬಿಜೆಪಿ ಶಾಸಕರಿಗೆ ಗೊತ್ತಿದ್ದರೆ ಮೊದಲೇ ಹೇಳಬೇಕಿತ್ತು. ಈಗ ತನಿಖೆ ನಡೆಯುತ್ತಿದೆ. ತನಿಖೆಯಲ್ಲಿ ಎಲ್ಲಾ ಗೊತ್ತಾಗುತ್ತದೆ. ಬೀದರ್ ಎಟಿಎಂ ದರೋಡೆ ಕೇಸ್‌ನಲ್ಲಿ ಬಹಳ ಹತ್ತಿರದಲ್ಲಿ ಬಂದಿದ್ದೇವೆ. ಯುಪಿಯಿಂದಲೇ ಬೈಕ್ ತಂದಿದ್ದಾರೆ ಎಂಬ ಮಾಹಿತಿ ಇದೆ. ಆದಷ್ಟು ಬೇಗ ಈ ಕೇಸ್ ಕೂಡ ಇತ್ಯರ್ಥ ಮಾಡುತ್ತೇವೆ ಎಂದರು. ಕರ್ನಾಟಕ ದರೋಡೆ ರಾಜ್ಯ ಆಗುತ್ತಿದೆ ಎಂಬ ಬಿಜೆಪಿ ಮತ್ತು ವಿಪಕ್ಷ ನಾಯಕ ಅಶೋಕ್ ಆರೋಪಕ್ಕೆ ಪ್ರತಿಕ್ರಿಯಿಸಿ, ಬಿಜೆಪಿಯವರ ಸರ್ಕಾರದಲ್ಲಿ ಯಾವ ರಾಜ್ಯ ಇತ್ತು ಎಂದು ಅಂಕಿ ಅಂಶಗಳ ಸಮೇತ ಹೇಳುತ್ತೇನೆ ಎಂದು ಟಾಂಗ್ ಕೊಟ್ಟರು.

ಮಹಿಳೆಯರ ತಾಳಿ ಕಿತ್ತುಕೊಳ್ಳುತ್ತಿರುವ ಮೈಕ್ರೋ ಫೈನಾನ್ಸ್ ನಿಯಂತ್ರಿಸುವಲ್ಲಿ ಸರ್ಕಾರ ವಿಫಲ

ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಆರೋಪ



ಹುಬ್ಬಳ್ಳಿ, ಜ.23– ರಾಜ್ಯದಲ್ಲಿ ಹೆಣ್ಣು ಮಕ್ಕಳ ತಾಳಿ ಕಿತ್ತುಕೊಳ್ಳುತ್ತಿರುವ ಮೈಕ್ರೋ ಫೈನಾನ್ಸ್ ಮೇಲೆ ಸರ್ಕಾರದ ನಿಯಂತ್ರಣ ತಪ್ಪಿದೆ. ಬಹಳಷ್ಟು ಕುಟುಂಬಗಳು ಮನೆ ಬಿಟ್ಟು ಹೋಗಿ ಆತ್ಮಹತ್ಯೆ ಮಾಡಿಕೊಳ್ಳುವಂತಹ ಪರಿಸ್ಥಿತಿ ನಿರ್ಮಾಣ ಆಗಿದೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ.

ಹುಬ್ಬಳ್ಳಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಾನೂನು ಇದ್ದರೂ ಕೂಡ ಸರ್ಕಾರ ಕಾನೂನಿನ ಪ್ರಯೋಗ ಮಾಡುತ್ತಿಲ್ಲ. ಯಾರಿಗೂ ಭಯ ಇಲ್ಲ. ವಸೂಲಿಗೆ ರೌಡಿಗಳನ್ನು ಬಿಟ್ಟಿದ್ದಾರೆ. ಸರ್ಕಾರ ಒಂದು ಕಡೆ ಮಹಿಳೆಯರಿಗೆ ಕಾರ್ಯಕ್ರಮ ಮಾಡುತ್ತೇನೆ ಎಂದು ಹೇಳುತ್ತಾರೆ. ಇನ್ನೊಂದು ಕಡೆ ಮಹಿಳೆಯರ ತಾಳಿ ಕಿತ್ತುಕೊಳ್ಳುತ್ತಿರುವಂತಹ ಮೈಕ್ರೊ ಫೈನಾನ್ಸ್ ನಿಯಂತ್ರಣ ಮಾಡಲು ಸರ್ಕಾರಕ್ಕೆ ಸಾಧ್ಯವಾಗುತ್ತಿಲ್ಲ ಎಂದು ದೂರಿದರು.

ಹಿಂದೆ ಹೆಚ್.ಡಿ.ಕುಮಾರಸ್ವಾಮಿಯವರು ಮುಖ್ಯಮಂತ್ರಿ ಆಗಿದ್ದಾಗ ಹೆಚ್ಚು ಬಡ್ಡಿ ವಸೂಲಿ ಮಾಡುವವರ ನಿಯಂತ್ರಣಕ್ಕೆ ಕಾನೂನು ತಂದಿದ್ದರು. ಅದು ಕೋರ್ಟ್‌ನಲ್ಲಿ ಸ್ಟೇ ಆಗಿದೆ. ಈ ಸರ್ಕಾರ ಕೂಡಲೇ ಅದನ್ನು ತೆರವುಗೊಳಿಸಿ ಕಠಿಣ ಕ್ರಮ ಕೈಗೊಳ್ಳುವ ಅಧಿಕಾರ ಪಡೆದು, ಮೈಕ್ರೊ ಫೈನಾನ್ಸ್‌ಗಳನ್ನು ನಿಯಂತ್ರಿಸಬೇಕು ಎಂದು ಆಗ್ರಹಿಸಿದರು.

ಮೈಕ್ರೋ ಫೈನಾನ್ಸ್ ಸಂಸ್ಥೆಗಳಿಂದ ತೊಂದರೆ; ನಾಳೆ ಸಿಎಂ ಸಿದ್ದರಾಮಯ್ಯ ಸಭೆ



ಬೆಂಗಳೂರು, ಜ23– ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಸಂಸ್ಥೆಗಳಿಂದ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಗಳ ಕುರಿತು ಚರ್ಚಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜ.25ರಂದು ಗೃಹ ಕಚೇರಿ ಕೃಷ್ಣಾದಲ್ಲಿ ಸಭೆ ನಡೆಸಲಿದ್ದಾರೆ. ಈ ಬಗ್ಗೆ ಮುಖ್ಯಮಂತ್ರಿ ಅವರ ವಿಶೇಷ ಕರ್ತವ್ಯಾಧಿಕಾರಿ ಹಾಗೂ ಸರ್ಕಾರದ ಅಪರ ಕಾರ್ಯದರ್ಶಿ ಕೆ. ಚಿರಂಜೀವಿ ಅವರು ಸಭೆಗೆ ಸಂಬಂಧಿಸಿದ ಸೂಚನಾ ಪತ್ರ ಪ್ರಕಟಿಸಿದ್ದಾರೆ. ಸಂಬಂಧಿತ ಮಾಹಿತಿಯೊಂದಿಗೆ ಸಭೆಗೆ ಹಾಜರಾಗುವಂತೆ ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಮೈಕ್ರೋ ಫೈನಾನ್ಸ್ ಕಂಪನಿಗಳ ಕಿರುಕುಳಕ್ಕೆ ಸಂಬಂಧಿಸಿದಂತೆ ಪ್ರಜಾವಾಣಿ ಸೇರಿದಂತೆ ಹಲವು ಮಾಧ್ಯಮಗಳು ವರದಿಗಳನ್ನು ಪ್ರಕಟಿಸಿವೆ. ಇದರಿಂದ ಎಚ್ಚೆತ್ತಿರುವ ಸಿಎಂ, ಶನಿವಾರ ಸಭೆ ಕರೆದಿದ್ದಾರೆ. ಬೆಳಿಗ್ಗೆ 11ಕ್ಕೆ ಸಭೆ ಆರಂಭವಾಗಲಿದೆ.

ಜನರ ರಕ್ತ ಹೀರುತ್ತಿರುವ ಮೈಕ್ರೋ ಫೈನಾನ್ಸ್ ಹಾವಳಿ ನಿರ್ಧಯವಾಗಿ ಹತ್ತಿಕ್ಕಿ

ರಾಜ್ಯ ಸರ್ಕಾರಕ್ಕೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಆಗ್ರಹ

ಸಾಲ ಶೂಲದಿಂದ ಜನರನ್ನು ಪಾರು ಮಾಡಲು ಋಣಮುಕ್ತ ಕಾಯ್ದೆ ಜಾರಿ ಮಾಡಿದ್ದೆ; ಅದನ್ನು ಕಸದ ಬುಟ್ಟಿಗೆ ಹಾಕಿದರು



ಬೆಂಗಳೂರು, ಜ.23– ರಾಜ್ಯದಲ್ಲಿ ಬಡ, ಮಧ್ಯಮ ವರ್ಗದ ಜನರ ರಕ್ತ ಹೀರುತ್ತಿರುವ ಮೈಕ್ರೋ ಫೈನಾನ್ಸ್ ಗಳ ಹಾವಳಿಯನ್ನು ನಿರ್ಧಯವಾಗಿ ಹತ್ತಿಕ್ಕಬೇಕು ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ರಾಜ್ಯ ಸರಕಾರವನ್ನು ಆಗ್ರಹಿಸಿದರು. ನಗರದಲ್ಲಿ ಈ ಬಗ್ಗೆ ಮಾಧ್ಯಮಗಳು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಇದನ್ನು ಅಧಿಕಾರಿಗಳು ಅಥವಾ ಜಿಲ್ಲಾಧಿಕಾರಿ ಮಾಡಲು ಸಾಧ್ಯವಿಲ್ಲ. ಸರಕಾರವೇ ಕಠಿಣ ನಿರ್ಧಾರಗಳನ್ನು ಕೈಗೊಳ್ಳಬೇಕು ಎಂದರು.

2018ರಲ್ಲಿ ನಾನು ಮುಖ್ಯಮಂತ್ರಿಯಾಗಿದ್ದಾಗ ಇಂತಹ ಕಿಡಿಗೇಡಿ ಫೈನಾನ್ಸ್‌ಗಳಿಂದ ಜನರನ್ನು ರಕ್ಷಣೆ ಮಾಡಬೇಕು ಎಂದು ಋಣಮುಕ್ತ ಕಾಯ್ದೆ ಜಾರಿಗೆ ತಂದೆ. ನನ್ನ ಸರಕಾರ ಹೋಯಿತು, ಆ ಕಾಯ್ದೆಯನ್ನು ಕಸದ ಬುಟ್ಟಿಗೆ ಹಾಕಿದರು ಎಂದು ಅವರು ಬೇಸರ ವ್ಯಕ್ತಪಡಿಸಿದರು. ಅಷ್ಟೇ ಅಲ್ಲ, ಜನರು ಪಡೆದ ಸಾಲವನ್ನು ತೀರಿಸಲಾಗದ ಪರಿಸ್ಥಿತಿ ಸೃಷ್ಟಿಯಾದರೆ ಅದಕ್ಕೆ ಪರಿಹಾರೋಪಾಯ ಏನು ಎಂಬ ಬಗ್ಗೆ ನಾನು ಆಗ ಆಲೋಚನೆ ಮಾಡಿದ್ದೆ. ಆ ಸಂದರ್ಭದಲ್ಲಿ ಕೇರಳ ಸರ್ಕಾರ ಈ ಸಮಸ್ಯೆ ಬಗೆಹರಿಸಲು ಒಂದು ಆಯೋಗವನ್ನು ರಚನೆ ಮಾಡಿತ್ತು. ಆ ಮಾಹಿತಿ ನನಗಿತ್ತು. ಕೇರಳಕ್ಕೆ ತೆರಳಿ ಖುದ್ದು ಆ ಬಗ್ಗೆ ಅಧ್ಯಯನ ಮಾಡುವ ಉದ್ದೇಶದಿಂದ ನಾನು ಅಂದಿನ ನನ್ನ ಸಂಪುಟದಲ್ಲಿ ಸಹಕಾರ ಸಚಿವರಾಗಿದ್ದ ಬಂಡೆಪ್ಪ ಕಾಶೆಂಪೂರ್ ನೇತೃತ್ವದ ನಿಯೋಗವನ್ನು ಕೇರಳಕ್ಕೆ ಕಳಿಸಿದ್ದೆ.

ಅದನ್ನು ಆಧಾರವಾಗಿ ಇಟ್ಟುಕೊಂಡು ನಾನು ಇಲ್ಲಿ ಋಣಮುಕ್ತ ಕಾಯ್ದೆಯನ್ನು ಜಾರಿಗೆ ತಂದೆ. ನನ್ನ ಸರ್ಕಾರ ಹೋದ ನಂತರ ಬಂದ ಸರ್ಕಾರಗಳು ಈ ಕಾಯ್ದೆಯ ಮಹತ್ವವನ್ನೇ ಅರಿತು ಕೊಳ್ಳಲಿಲ್ಲ. ಅದರ ಪರಿಣಾಮವೇ ಮೈಕ್ರೋ ಫೈನಾನ್ಸ್‌ಗಳ ಉಪಟಳ ಜಾಸ್ತಿ ಆಗಿರುವುದು. ಖಾಸಗಿ ಹಣಕಾಸು ಸಂಸ್ಥೆಗಳು ಯಾವುದೇ ಪರವಾನಗಿ ಅಥವಾ ಅನುಮತಿಯನ್ನೇ ಪಡೆಯದೇ ಕಾನೂನುಬಾಹಿರವಾಗಿ ಈ ರೀತಿ ಹೆಚ್ಚಿನ ಬಡ್ಡಿಗೆ ಸಾಲ ನೀಡಿ ಜನರಿಗೆ ಕಿರುಕುಳ ನೀಡುತ್ತಿವೆ. ಇದನ್ನು ತಾಳಲಾರದೆ ಜನರು ಆತ್ಮಹತ್ಯೆ ಮಾಡಿಕೊಳ್ಳುವ, ಊರನ್ನೇ ಖಾಲಿ ಮಾಡಿ ಹೋಗುವ ದುಸ್ಥಿತಿ ಸೃಷ್ಟಿಯಾಗಿದೆ ಎಂದು ಸಚಿವರು ಕಳವಳ ವ್ಯಕ್ತಪಡಿಸಿದರು. ಚಾಮರಾಜನಗರ ಜಿಲ್ಲೆಯಲ್ಲಿ ಜನರು ಹಳ್ಳಿಗಳನ್ನು ಬಿಟ್ಟಿದ್ದರು. ಮನೆಗಳಿಗೆ ಬೀಗ ಹಾಕಿ ಸಾಲಗಾರರಿಂದ ತಪ್ಪಿಸಿಕೊಂಡರೆ ಸಾಕು ಎನ್ನುವ ಭೀತಿಗೆ ಸಿಲುಕಿದ್ದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪದೇ ಪದೆ ಹೇಳುತ್ತಾರೆ, ನಾನು ಇಪ್ಪತ್ತು ಸಲವೋ ಮೂವತ್ತು ಸಲವೋ ಚಾಮರಾಜನಗರಕ್ಕೆ ಭೇಟಿ ನೀಡಿದ್ದೇನೆ. ನನ್ನ ಅಧಿಕಾರ ಹೋಗಿಲ್ಲ, ಗಟ್ಟಿಯಾಗಿದ್ದೇನೆ ಎಂದು ಹೇಳುತ್ತಾರೆ. ಅವರೇನೋ ಗಟ್ಟಿಯಾಗಿದ್ದಾರೆ. ಆದರೆ, ನಿಮ್ಮನ್ನು ಮುಖ್ಯಮಂತ್ರಿ ಜಾಗದಲ್ಲಿ ಕೂರಿಸಿರುವ ಆ ಜನ ಏನಾಗಿದ್ದಾರೆ ಅವರನ್ನು ಗಟ್ಟಿ ಮಾಡಲಿಕ್ಕೆ ಏನು ಮಾಡಿದ್ದೀರಿ. ಅದು ನನ್ನ ಪ್ರಶ್ನೆ ಎಂದು ಕೇಂದ್ರ ಸಚಿವರು ಆಕ್ರೋಶ ವ್ಯಕ್ತಪಡಿಸಿದರು. ರಾಜ್ಯದಲ್ಲಿ ಆಡಳಿತ ವ್ಯವಸ್ಥೆ ಸಂಪೂರ್ಣವಾಗಿ ಕುಸಿದಿದೆ. ಹಾಡಹಗಲೇ ಬ್ಯಾಂಕ್‌ಗಳಿಗೆ ನುಗ್ಗಿ ಲೂಟಿ ಮಾಡಲಾಗುತ್ತಿದೆ. ಎಟಿಎಂಗಳಿಗೆ ಹಣ ತುಂಬುವ ಸಿಬ್ಬಂದಿಯನ್ನು ಗುಂಡಿಟ್ಟು ಕೊಂದು ಹಗಲಲ್ಲೇ ಹಣ ದೋಚಿ ನೆರೆ ರಾಜ್ಯಕ್ಕೆ ಪರಾರಿ ಆಗುವುದು. ಹೀಗೆ ಅಪರಾಧ ಚಟುವಟಿಕೆಗಳು ರಾಜಾರೋಷವಾಗಿ ನಡೆಯುತ್ತಿವೆ. ರಾಜ್ಯದಲ್ಲಿ ಇಷ್ಟೆಲ್ಲಾ ನಡೆಯುತ್ತಿದ್ದರೂ ನನಗೇನು ಸಂಬಂಧ ಇಲ್ಲವೆಂದು ಗೃಹ ಸಚಿವರು ಹೇಳಿದರೆ ಅರ್ಥವೇನು ಎಂದು ಕುಮಾರಸ್ವಾಮಿ ಅವರು ಆಕ್ರೋಶ ವ್ಯಕ್ತಪಡಿಸಿದರು. ಕಾನೂನು ಬಾಹಿರವಾಗಿ ಮೈಕ್ರೋ ಫೈನಾನ್ಸ್ ಮಾಡಲಿಕ್ಕೆ ಖಾಸಗಿ ಕಂಪನಿಗಳಿಗೆ ಅನುಮತಿ ಕೊಟ್ಟವರು ಯಾರು. ಸರ್ಕಾರ ಅನುಮತಿ ಕೊಟ್ಟಿದೆಯಾ. ರಾಷ್ಟ್ರೀಕೃತ ಬ್ಯಾಂಕ್‌ಗಳು, ಸಹಕಾರಿ ಬ್ಯಾಂಕ್‌ಗಳು ಸರಿಯಾದ ರೀತಿಯಲ್ಲಿ ಸಾಲ ಸೌಲಭ್ಯ ನೀಡಿದರೆ ಮೈಕ್ರೋ ಫೈನಾನ್ಸ್‌ಗಳ ಬಳಿಗೆ ಸಾಲಕ್ಕೆ ಏತಕ್ಕೆ ಹೋಗುತ್ತಾರೆ ಎಂದು ಕೇಂದ್ರ ಸಚಿವರು ರಾಜ್ಯ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು.

ಮೈಕ್ರೋ ಫೈನಾನ್ಸ್, ಖಾಸಗಿ ಹಣಕಾಸು ಸಂಸ್ಥೆಗಳ ಹಾವಳಿಗೆ ಕಡಿವಾಣ ಹಾಕಲು ಎಸ್‌ಯುಸಿಐ (ಕಮ್ಯೂನಿಸ್ಟ್) ಒತ್ತಾಯ

ಮೈಸೂರು,ಜ.23–ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಮತ್ತು ಖಾಸಗಿ ಹಣಕಾಸು ಸಂಸ್ಥೆಗಳ ಹಾವಳಿಯು ದಿನೇ ದಿನೇ ಹೆಚ್ಚಾಗುತ್ತಿದೆ. ಈ ಸಂಸ್ಥೆಗಳ ಸಾಲ ವಸೂಲಿಗಾರರ ಕಿರುಕುಳವನ್ನು ತಾಳಲಾರದೇ ಚಾಮರಾಜನಗರ, ಮೈಸೂರು, ಹಾವೇರಿ, ಬೆಳಗಾವಿ ಹೀಗೆ ಅನೇಕ ಜಿಲ್ಲೆಗಳ ಹತ್ತಾರು ಗ್ರಾಮಗಳ ನೂರಾರು ಮಂದಿ ಮನೆ, ಮಠ, ಜಮೀನು ತೊರೆದಿದ್ದಾರೆ. ಅಲ್ಲದೇ ಮೊನ್ನೆಯಷ್ಟೇ ರಾಮನಗರದಲ್ಲಿ ಮಹಿಳೆಯೊಬ್ಬರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಕಳೆದ ಐದಾರು ತಿಂಗಳುಗಳ ಅವಧಿಯಲ್ಲಿ ಇದೇ ರೀತಿಯ ಆತ್ಮಹತ್ಯೆ, ಕಿರುಕುಳದಂತಹ ಹಲವಾರು ಪ್ರಕರಣಗಳು ವರದಿಯಾಗುತ್ತಿರುವುದು ಈ ಸಮಸ್ಯೆಯ ಗಂಭೀರತೆಗೆ ಹಿಡಿದ ಕೈಗನ್ನಡಿಯಾಗಿದೆ.

ನಿರಂತರವಾಗಿ ಹೆಚ್ಚಾಗುತ್ತಿರುವ ಕೃಷಿ ಕ್ಷೇತ್ರದ ಬಿಕ್ಕಟ್ಟು, ಬೆಲೆ ಏರಿಕೆ, ನಿರುದ್ಯೋಗ, ಆರೋಗ್ಯ,ಶಿಕ್ಷಣದಂತಹ ಕ್ಷೇತ್ರಗಳ ಖಾಸಗೀಕರಣಗಳಿಂದಾಗಿ ಬಡ ಮತ್ತು ಮಧ್ಯಮ ವರ್ಗದ ಜನತೆ ಸಂಕಷ್ಟಕ್ಕೀಡಾಗಿದ್ದಾರೆ. ಬಂಡವಾಳಶಾಹಿ ವ್ಯವಸ್ಥೆಯು ಜನರಲ್ಲಿ ಕೊಳ್ಳುವ ಶಕ್ತಿಯನ್ನು ಬೆಳೆಸಲು ಅಸಾಧ್ಯವಾದ ಕಾರಣ, ಹೆಚ್ಚೆಚ್ಚು ಸಾಲ ನೀಡುವ ಮೂಲಕ ಬೇಡಿಕೆಯನ್ನು ಸೃಷ್ಟಿಸಲು ಇಂದು ಬ್ಯಾಂಕುಗಳು ಮುಂದಾಗಿವೆ. ಹಾಗಾಗಿ ಒಟ್ಟಾರೆ ಆರ್ಥಿಕತೆಯೇ ಇಂದು ಸಾಲಾಧಾರಿತವಾಗಿದೆ.

ಸಾಲ ಪಡೆದವರು ಮರುಪಾವತಿ ಮಾಡಲಾರದೇ ವಿಫಲವಾದ ಸಂದರ್ಭದಲ್ಲಿ ಅವರ ಮನೆ ಮುಂದೆ ನಿಲ್ಲುವುದು, ಅವಾಚ್ಯವಾಗಿ ನಿಂದಿಸುವುದು, ಮನೆಗಳ ಗೋಡೆ ಮೇಲೆ ಬರೆಯುವುದು, ಅಳಿದುಳಿದ ಆಸ್ತಿಯನ್ನು ಮುಟ್ಟುಗೋಲು ಹಾಕುವುದು ಇತ್ಯಾದಿ ವಿಧಾನಗಳನ್ನು ಅನುಸರಿಸಿ ಸಾಲ ವಸೂಲಾತಿ ಮಾಡಲಾಗುತ್ತಿದೆ. ಇದರಿಂದ ಸಾಲ ಪಡೆದವರ ಮಾನ ಹರಾಜಾಗುತ್ತಿದ್ದು ತತ್ಪರಿಣಾಮವಾಗಿ ನಾಪತ್ತೆ, ಆತ್ಮಹತ್ಯೆ ಪ್ರಕರಣಗಳು ಹೆಚ್ಚಾಗುತ್ತಿವೆ.

ಮೈಕ್ರೋ ಫೈನಾನ್ಸ್‌ಗಳ ನಿಯಂತ್ರಣಕ್ಕೆ ಸ್ಪಷ್ಟವಾದ ಮಾರ್ಗಸೂಚಿ ಮತ್ತು ಸಮನ್ವಯದ ಕೊರತೆ ನೋಟಿಸ್ ಅವುಗಳ ಲಾಭಕೋರತನ ಮತ್ತು ಹಾವಳಿ ಹೆಚ್ಚಾಗಲು ಮುಖ್ಯ ಕಾರಣವಾಗಿದೆ. ಇದನ್ನೇ ಉಪಯೋಗಿಸಿಕೊಂಡಿರುವ ಈ ಸಂಸ್ಥೆಗಳು ಎಲ್ಲೆಂದರಲ್ಲಿ ನಾಯಿಕೊಡೆಗಳಂತೆ ತಲೆ ಎತ್ತುತಿವೆ. ಇವುಗಳ ಸಂಖ್ಯೆ ಹೆಚ್ಚಾದಂತೆಲ್ಲಾ ಅನಾರೋಗ್ಯಕರ ಸ್ಪರ್ಧೆ ಏರ್ಪಟ್ಟಿದ್ದು, ಜನತೆಯ ಸಂಕಷ್ಟದ ಪರಿಸ್ಥಿತಿಯನ್ನೇ ಬಳಸಿಕೊಂಡು, ಅವರನ್ನು ಶೋಷಿಸಲು ನಿಂತಿವೆ.

ಹೀಗಾಗಿ ಈ ಕೂಡಲೇ ಸರ್ಕಾರಗಳು ಮಧ್ಯ ಪ್ರವೇಶಿಸಿ ಈ ಸಂಸ್ಥೆಗಳಿಗೆ ಮೂಗುದಾರ ಹಾಕುವ ಮೂಲಕ ಜನರನ್ನು ಇವುಗಳ ಕಿರುಕುಳದಿಂದ ರಕ್ಷಿಸಬೇಕೆಂದು ಸೋಷಲಿಸ್ಟ್ ಯೂನಿಟಿ ಸೆಂಟರ್ ಆಫ್ ಇಂಡಿಯಾ ಕಮ್ಯುನಿಸ್ಟ್ ಪಕ್ಷದ ರಾಜ್ಯ ಸಮಿತಿಯು ಒತ್ತಾಯಿಸುತ್ತದೆ.

ಮನ್‌ಮುಲ್ ಚುನಾವಣೆ: ಎನ್‌ಡಿಎ ಅಭ್ಯರ್ಥಿಗಳ ಪರ ಮತದಾರರ ಕೈ ಬಿಡುತ್ತಿರುವ ಆರೋಪ

ಸಹಕಾರಿ ಉಪನಿಬಂಧಕರ ವಿರುದ್ಧ ಜೆಡಿಎಸ್, ಬಿಜೆಪಿ ಪ್ರತಿಭಟನೆ

ಮಂಡ್ಯ,ಜ.23– ಫೆಬ್ರವರಿ 2 ರಂದು ನಡೆಯಲಿರುವ ಮಂಡ್ಯ ಜಿಲ್ಲಾ ಸಹಕಾರ ಹಾಲು ಒಕ್ಕೂಟದ ಚುನಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿಗಳ ಪರ ಇರುವ ಸಹಕಾರಿ ಮತದಾರರನ್ನು ಕಾರಣವಿಲ್ಲದೇ ಸಹಕಾರ ಸಂಘದ ಉಪನಿಬಂಧಕರು ಕೈಬಿಡಲು ಮುಂದಾಗಿದ್ದು, ಇದರಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಕೈವಾಡವಿದೆ ಎಂದು ಆರೋಪಿಸಿ, ಜೆಡಿಎಸ್ ಮತ್ತು ಬಿಜೆಪಿ ಮುಖಂಡರು ಗುರುವಾರ ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ನೇತೃತ್ವದಲ್ಲಿ ಜಮಾಯಿಸಿದ ನೂರಾರು ಮಂದಿ ಕಾರ್ಯಕರ್ತರು, ರಾಜ್ಯ ಕಾಂಗ್ರೆಸ್ ಸರ್ಕಾರ, ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಹಾಗೂ ಸಹಕಾರಿ ಇಲಾಖೆ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು, ಈ ಬಾರಿಯ ಮನ್ಮುಲ್ ಚುನಾವಣೆಯಲ್ಲಿ ಮೈತ್ರಿ ಅಭ್ಯರ್ಥಿಗಳ ಗೆಲುವಿಗೆ ಪೂರಕ ವಾತಾವರಣವಿದೆ. ಇದನ್ನು ಸಹಿಸಲಾಗದೇ ಜಿಲ್ಲಾ ಉಸ್ತುವಾರಿ ಸಚಿವರು ಸಹಕಾರ ಸಂಘದ ಉಪನಿಬಂಧಕ ನಾಗಭೂಷಣ್ ಮೂಲಕ ಜೆಡಿಎಸ್ ಮತ್ತು ಬಿಜೆಪಿ ಅಭ್ಯರ್ಥಿಗಳ ಪರ ಇರುವ ಅರ್ಹ ಮತದಾರರನ್ನು ಸೂಕ್ತ ಕಾರಣವಿಲ್ಲದೇ ಮತದಾರರ ಪಟ್ಟಿಯಿಂದ ಕೈಬಿಡಲು ಮುಂದಾಗಿದ್ದಾರೆ. ಇದು ಯಾವ ನ್ಯಾಯ ಎಂದು ಪ್ರಶ್ನಿಸಿದರು.

ಈಗಾಗಲೇ ಚುನಾವಣೆ ಘೋಷಣೆಯಾಗಿದೆ. ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ನಡೆಯುತ್ತಿದೆ. ಇಂತಹ ಸಂದರ್ಭದಲ್ಲಿ ಮತದಾರರನ್ನು ಪಟ್ಟಿಯಿಂದ ಕೈಬಿಡುವುದು ಎಲ್ಲಾದರೂ ಉಂಟೇ? ಸಚಿವ ಚಲುವರಾಯಸ್ವಾಮಿ ಮಾತು ಕೇಳಿಕೊಂಡು ಸಹಕಾರಿ ಇಲಾಖೆ ಅಧಿಕಾರಿಗಳು ಇಂತಹ ದುಶ್ಕೃತ್ಯಕ್ಕೆ ಮುಂದಾಗಿದ್ದಾರೆ ಎಂದು ಕಿಡಿಕಾರಿದರು.



ಜೆಡಿಎಸ್ ಮತ್ತು ಬಿಜೆಪಿ ಮುಖಂಡರು ಗುರುವಾರ ಮಂಡ್ಯದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

12 ಸ್ಥಾನಗಳ ಪೈಕಿ 11ರಲ್ಲಿ ಜೆಡಿಎಸ್, ಒಂದರಲ್ಲಿ ಬಿಜೆಪಿ ಸ್ಪರ್ಧಿಸುತ್ತಿದೆ. ಎಲ್ಲಾ ಕಡೆ ಜೆಡಿಎಸ್ ಮತ್ತು ಬಿಜೆಪಿಗೆ ಗೆಲ್ಲುವ ವಾತಾವರಣವಿದೆ. ಇದರಿಂದ ಕಾಂಗ್ರೆಸ್ಸಿಗರು ಹತಾಶರಾಗಿದ್ದಾರೆ. ಜೊತೆಗೆ ಹೇಗಾದರೂ ಮಾಡಿ ವಾಮಮಾರ್ಗದಿಂದ ಚುನಾವಣೆ ಗೆಲ್ಲಲು ಈ ರೀತಿ ಕುತಂತ್ರವನ್ನು ಹೆಣೆದಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಮಾಜಿ ಶಾಸಕ ಡಾ.ಕೆ.ಅನ್ನದಾನಿ ಮಾತನಾಡಿ, ಮತದಾನಕ್ಕೆ ಕೆಲವೇ ಕೆಲವು ದಿನ ಇರುವಾಗ ಅರ್ಹ ಮತದಾರರ ಪಟ್ಟಿಯಿಂದ ಮತದಾರರನ್ನು ಕೈಬಿಡಲು ಮುಂದಾಗಿರುವುದು ಇದೇ ಮೊದಲು. ಕಾಂಗ್ರೆಸ್‌ಗೆ ಸಂವಿಧಾನದ ಬಗ್ಗೆ ಕಿಂಚಿತ್ತೂ ಗೌರವವಿಲ್ಲ. ಪ್ರತಿಯೊಬ್ಬನಿಗೂ ಮತದಾನದ ಹಕ್ಕು ಕೊಟ್ಟಿರುವುದೇ ಸಂವಿಧಾನ. ಅಂತಹ ಸಂವಿಧಾನದ ಮೇಲೆ ದಬ್ಬಾಳಿಕೆ ಮಾಡಲು ಈ ಸರ್ಕಾರ ಮುಂದಾಗಿದೆ. ಈ ಕೂಡಲೇ ಇಂತಹ ಕೆಲಸವನ್ನು ನಿಲ್ಲಿಸದಿದ್ದರೆ ಪ್ರತಿ ತಾಲೂಕು ಕೇಂದ್ರದಲ್ಲೂ ಪ್ರತಿಭಟಿಸಲಾಗುವುದು ಎಂದು ಎಚ್ಚರಿಸಿದರು.

ಶಾಸಕ ಹೆಚ್.ಟಿ.ಮಂಜು ಮಾತನಾಡಿ, ನಾನು ಸಹ ಮನ್ಮುಲ್ ಚುನಾವಣಾ ಅಖಾಡದಲ್ಲಿದ್ದು, ನಮ್ಮ ಪರ ಇರುವ ಮತದಾರರನ್ನೇ ಸಚಿವರು ಮತ್ತು ಸಹಕಾರಿ ಇಲಾಖೆಯ ಅಧಿಕಾರಿಗಳು ಟಾರ್ಗೆಟ್ ಮಾಡಿದ್ದಾರೆ. ತಾಕತ್ತಿದ್ದರೆ ನೇರವಾಗಿ ಚುನಾವಣೆ ಎದುರಿಸಬೇಕು. ಅದನ್ನು ಬಿಟ್ಟು ಕುತಂತ್ರದಿಂದ ಚುನಾವಣೆ ಗೆಲ್ಲಲು ಮುಂದಾದರೆ ಅದಕ್ಕೆ ಫಲ ಸಿಗುವುದಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಡಾ.ಕುಮಾರ ಅವರಿಗೆ ಮುಖಂಡರುಗಳು ಮನವಿ ಸಲ್ಲಿಸಿದರು. ಪ್ರತಿಭಟನೆಯಲ್ಲಿ ವಿಧಾನಪರಿಷತ್ ಮಾಜಿ ಸದಸ್ಯ ಕೆ.ಟಿ.ಶ್ರೀಕಂಠೇಗೌಡ, ಮನ್ಮುಲ್ ಚುನಾವಣೆಯ ಅಭ್ಯರ್ಥಿಗಳಾದ ಬಿ.ಆರ್.ರಾಮಚಂದ್ರ, ಎಂ.ಎಸ್.ರಘುನಂದನ್, ನಗರಸಭೆ ಅಧ್ಯಕ್ಷ ಎಂ.ವಿ.ಪ್ರಕಾಶ್, ಜೆಡಿಎಸ್ ಜಿಲ್ಲಾಧ್ಯಕ್ಷ ಡಿ.ರಮೇಶ್, ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಸಿ.ಪಿ.ಉಮೇಶ್, ಮುಖಂಡರಾದ ಸಾತನೂರು ಜಯರಾಂ, ಸಿ.ಟಿ.ಮಂಜುನಾಥ್, ಶ್ರೀಧರ್, ರಾಮಲಿಂಗಯ್ಯ ಸೇರಿದಂತೆ ನೂರಾರು ಮಂದಿ ಭಾಗವಹಿಸಿದ್ದರು.

ಮಕ್ಕಳಿಗೆ ಶಿಕ್ಷಣದೊಂದಿಗೆ ಸಂಸ್ಕಾರ, ಸದ್ಗುಣಗಳನ್ನು ಕಲಿಸಿ

ಡಾ.ವಿರೇಂದ್ರಹೆಗ್ಡೆಯವರ ಪುತ್ರಿ ಶ್ರದ್ಧಾ ಅಮಿತ್ ಕರೆ



ಮಹಿಳಾ ವಿಚಾರಗೋಷ್ಠಿಯನ್ನು ಉದ್ಘಾಟಿಸುತ್ತಿರುವ ಶ್ರದ್ಧಾಅಮಿತ್.

ಪಾಂಡವಪುರ, ಜ.23– ಮಹಿಳೆಯರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವುದರ ಜೊತೆಗೆ ಸಂಸ್ಕಾರ, ಸದ್ಗುಣಗಳನ್ನು ಕೂಡ ಕಲಿಸಿಕೊಡಬೇಕು ಎಂದು ಬೆಂಗಳೂರಿನ ಕ್ಷೇಮವನ ಪ್ರಕೃತಿ ಚಿಕಿತ್ಸಾ ಕೇಂದ್ರದ ಕಾರ್ಯನಿರ್ವಹಣಾಧಿಕಾರಿ ಹಾಗೂ ಧರ್ಮಸ್ಥಳದ ಧರ್ಮಾಧಿಕಾರಿ ಡಾ.ವೀರೇಂದ್ರ ಹೆಗ್ಗಡೆಯವರ ಪುತ್ರಿ ಶ್ರದ್ಧಾ ಅಮಿತ್ ತಿಳಿಸಿದರು.

ತಾಲೂಕಿನ ಎಲೆಕೆರೆ ಹ್ಯಾಂಡ್‌ಪೋಸ್ಟ್‌ನ ರುತ್ವಿ ಅಕ್ಷಯ ಕನ್ವೆನ್ಷನ್ ಹಾಲ್‌ನಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿ.ಸಿ. ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ತಾಲೂಕು ಮಟ್ಟದ ಮಹಿಳಾ ವಿಚಾರಗೋಷ್ಠಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆಯರು ಅಬಲೆಯರಲ್ಲ, ಸ್ವಾತಂತ್ರ್ಯ, ಸ್ವಾಯತ್ತೆಯಿಂದ ಎಲ್ಲಾ ಕ್ಷೇತ್ರಗಳಲ್ಲೂ ಮುಂಚೂಣಿಯಲ್ಲಿದ್ದಾರೆ. ಮೊದಲೆಲ್ಲಾ ಮಹಿಳೆಯರಲ್ಲಿ ಉಳಿತಾಯದ ಮನೋಭಾವ ಇರಲಿಲ್ಲ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಅವರಲ್ಲಿ ಉಳಿತಾಯ ಮನೋಭಾವ ಬೆಳೆಸಿದೆ ಎಂದರು. ರೈತ ಸಂಘದ ವರಿಷ್ಠರಾದ ಸುನಿತಾ ಪುಟ್ಟಣ್ಣಯ್ಯ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಅಖಿಲ ಕರ್ನಾಟಕ ಜಿಲ್ಲಾ ಜನಜಾಗೃತಿ ವೇದಿಕೆ ಅಧ್ಯಕ್ಷ ಸೋಮಶೇಖರ್ ಅಂದನಹಳ್ಳಿ ಮಾತನಾಡಿದರು. ಡಿಸಿಸಿ ಬ್ಯಾಂಕ್ ನಿರ್ದೇಶಕ ಪಿ.ಚಲುವರಾಜ್, ವೀಣಾ ಚಲುವರಾಜ್, ಧರ್ಮಸ್ಥಳ ಸಂಸ್ಥೆಯ ಜಿಲ್ಲಾ ನಿರ್ದೇಶಕ ಎಚ್.ಎಲ್.ಮುರಳಿಧರ್, ಜಿಪಂ ಮಾಜಿ ಸದಸ್ಯ ಶಾಂತಲಾ ರಾಮಕೃಷ್ಣ, ಧರ್ಮಸ್ಥಳ ಯೋಜನೆಯ ಪ್ರಾದೇಶಿಕ ನಿರ್ದೇಶಕ ಜಯರಾಮ್, ಉಮಾ, ನಳಿನ, ಅಶ್ವತ್‌ಕುಮಾರೇಗೌಡ, ಎಸ್.ಯಶವಂತ್, ಬಿ.ಸರೋಜ ಪಾಲ್ಗೊಂಡಿದ್ದರು.

ಎಸ್‌ಎಸ್‌ಎಲ್‌ಸಿ ಫಲಿತಾಂಶ ಹೆಚ್ಚಿಸಲು ವಿದ್ಯಾರ್ಥಿಗಳ ಮನೆಗಳಿಗೆ ಭೇಟಿ ನೀಡಿ ಪೋಷಕರೊಂದಿಗೆ ಚರ್ಚೆ

ಕೆ.ಆರ್.ಪೇಟೆ ಶಿಕ್ಷಣ ಇಲಾಖೆಯಿಂದ ಮಹತ್ವದ ಹೆಜ್ಜೆ

ಕೆ.ಆರ್.ಪೇಟೆ,ಜ.23– ಎಸ್‌ಎಸ್‌ಎಲ್‌ಸಿ ಫಲಿತಾಂಶದ ಪ್ರಮಾಣವನ್ನು ಹೆಚ್ಚಿಸುವ ಉದ್ದೇಶದಿಂದ ಶಿಕ್ಷಣ ಇಲಾಖೆ ವತಿಯಿಂದ ಎಸ್‌ಎಸ್‌ಎಲ್‌ಸಿ ಓದುತ್ತಿರುವ ಮಕ್ಕಳ ಮನೆಗಳಿಗೆ ಭೇಟಿ ನೀಡಿ ಪೋಷಕರು ಮತ್ತು ಮಕ್ಕಳೊಂದಿಗೆ ಚರ್ಚಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ವೈ.ಕೆ.ತಿಮ್ಮೇಗೌಡ ತಿಳಿಸಿದರು.

ತಾಲೂಕಿನ ಅಗ್ರಹಾರಬಾಚಹಳ್ಳಿ ಸರ್ಕಾರಿ ಪ್ರೌಢಶಾಲೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಮನೆಗೆ ಶಿಕ್ಷಕರ ತಂಡ ಹಾಗೂ ಎಸ್‌ಡಿಎಂಸಿ ಸದಸ್ಯರೊಂದಿಗೆ ಭೇಟಿ ನೀಡಿ ವಿದ್ಯಾರ್ಥಿಗಳು ಮತ್ತು ಪೋಷಕರೊಂದಿಗೆ ಚರ್ಚೆ ನಡೆಸಿ ಮನೆಯಲ್ಲಿ ಮಕ್ಕಳ ಕಲಿಕೆ ಹೇಗಿದೆ ಎಂದು ಪರಿಶೀಲನೆ ನಡೆಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಶಾಲೆಯಲ್ಲಿ ಕೇವಲ 6 ಗಂಟೆ ಮಾತ್ರ ಇರುತ್ತಾರೆ. ಉಳಿದ 18 ಗಂಟೆ ಪೋಷಕರೊಂದಿಗೆ ಇರುವ ಕಾರಣ ಓದಿನ ಕಡೆಗೆ ಹೆಚ್ಚಿನ ಗಮನ ಹರಿಸಬೇಕು. ಯಾವುದೇ ಭಯವಿಲ್ಲದೇ ಧೈರ್ಯವಾಗಿ ಪರೀಕ್ಷೆ ಎದುರಿಸಬೇಕು. ಈ ಬಗ್ಗೆ ಮಕ್ಕಳಲ್ಲಿ ಜಾಗೃತಿ ಮೂಡಿಸಿ, ಪರೀಕ್ಷೆಯಲ್ಲಿ ಫಲಿತಾಂಶವನ್ನು ಹೆಚ್ಚಿಸಿ, ಗುಣಮಟ್ಟದ ಶಿಕ್ಷಣಕ್ಕೆ ಒತ್ತು ನೀಡುವ ಉದ್ದೇಶದಿಂದ ಈ ಮನೆ ಮನೆ ಭೇಟಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಪೋಷಕರು ತಮ್ಮ ಮಕ್ಕಳಿಗೆ ಇಂತಿಷ್ಟೇ



ವಿದ್ಯಾರ್ಥಿಗಳ ಮನೆಗೆ ಕ್ಷೇತ್ರ ಶಿಕ್ಷಣಾಧಿಕಾರಿ ತಿಮ್ಮೇಗೌಡ ಅವರ ನೇತತ್ವದಲ್ಲಿ ಶಿಕ್ಷಕರ ತಂಡ ಭೇಟಿ ನೀಡಿ ಚರ್ಚೆ ನಡೆಸಿತು.

ಅಂಕಗಳನ್ನು ಪಡೆದುಕೊಳ್ಳಬೇಕೆಂಬ ಒತ್ತಡವನ್ನು ಹೇರಬಾರದು. ಚೆನ್ನಾಗಿ ಓದು ಫಲಿತಾಂಶ ಏನೇ ಆಗಲಿ ಎಂದು ಹುರಿದುಂಬಿಸಿ, ಪ್ರೋತ್ಸಾಹಿಸಬೇಕು ಎಂದು ಪೋಷಕರಿಗೂ ಸಲಹೆ ನೀಡಿದರು.

ವಿದ್ಯಾರ್ಥಿಗಳು ಹಳೆಯ ಪ್ರಶ್ನೆ ಪತ್ರಿಕೆಗಳನ್ನು ಶಿಕ್ಷಕರ ಬಳಿ ಪಡೆದುಕೊಂಡು ಯಾವ ರೀತಿ ಪರೀಕ್ಷೆ ಬರೆಯಬೇಕು ಎಂದು ತಿಳಿದುಕೊಳ್ಳಬೇಕು. ತಮ್ಮ ಪಠ್ಯದಲ್ಲಿನ ಪಾಠಗಳನ್ನು ಹಾಗೂ ಶಿಕ್ಷಕರು ಬರೆಸಿದ ಉತ್ತರಗಳನ್ನು ಎರಡು–ಮೂರು ಸಲ ಬರೆದು, ಓದಿ ಪುನರ್ ಮನನ ಮಾಡಿಕೊಳ್ಳಬೇಕು. ಬರೆದು ಓದುವುದರಿಂದ ಆ ಉತ್ತರವು ಸುಲಭವಾಗಿ ಪರೀಕ್ಷೆಯಲ್ಲಿ ಉತ್ತರಿಸಲು ಸಹಕಾರಿಯಾಗುತ್ತದೆ. ಪರೀಕ್ಷೆಯಲ್ಲಿ ಯಾವ ಪ್ರಶ್ನೆಗಳಿಗೆ ಸರಿಯಾಗಿ ಉತ್ತರ ಗೊತ್ತಿದೆಯೋ ಅದನ್ನು ಪ್ರಶ್ನೆ ಸಂಖ್ಯೆ ಹಾಕಿ ಮೊದಲು ಉತ್ತರ ಬರೆಯಬೇಕು. ನಂತರ ಬೇರೆ ಪ್ರಶ್ನೆಗಳತ್ತ ಗಮನ ಹರಿಸಬೇಕು ಎಂದು ಬಿ.ಇ.ಓ ತಿಮ್ಮೇಗೌಡ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಅಗ್ರಹಾರ ಬಾಚಹಳ್ಳಿ ಸರ್ಕಾರಿ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಡಿ.ಎಸ್.ಪುಟ್ಟರಾಜು, ಎಸ್‌ಎಸ್‌ಎಲ್‌ಸಿ ನೋಡಲ್ ಅಧಿಕಾರಿ ಹರೀಶ್, ಎಸ್‌ಡಿಎಂಸಿ ಅಧ್ಯಕ್ಷ ಎ.ಆರ್.ಕುಮಾರ್, ಶಿಕ್ಷಕರಾದ ಪ್ರವೀಣ್‌ಕುಮಾರ್, ಸುಂದರೇಶ್ ಸೇರಿದಂತೆ ಎಲ್ಲಾ ಶಿಕ್ಷಕರು ಹಾಗೂ ಎಸ್‌ಡಿಎಂಸಿ ಸದಸ್ಯರು ಉಪಸ್ಥಿತರಿದ್ದರು.

ಆನಂದೂರು ಗ್ರಾಮದಲ್ಲಿ ಇಂದು ಶ್ರೀ ಅರ್ಕೇಶ್ವರ ಮಹಾಗಣಪತಿ, ಸುಬ್ರಹ್ಮಣ್ಯ ಸ್ವಾಮಿ ದೇವಾಲಯದ ವಾರ್ಷಿಕೋತ್ಸವ



ಶ್ರೀರಂಗಪಟ್ಟಣ, ಜ.23– ತಾಲೂಕಿನ ಹೊಸ ಆನಂದೂರು ಗ್ರಾಮದಲ್ಲಿ ಜ. 24 ಮತ್ತು 25 ರಂದು ಶ್ರೀ ಅರ್ಕೇಶ್ವರ ಮಹಾಗಣಪತಿ, ಸುಬ್ರಹ್ಮಣ್ಯ ಸ್ವಾಮಿ ದೇವಾಲಯದ ಪ್ರಥಮ ವರ್ಷದ ವಾರ್ಷಿಕೋತ್ಸವ, ಕುಂಭಾಬಿಷೇಕ ಹಾಗೂ ನೂತನ ನವಗ್ರಹ ದೇವಾಲಯ ನಾಗಶಿಲಾ ಪ್ರತಿಷ್ಠಾಪನೆ ನಡೆಯಲಿದೆ.

ಆದಿಚುಂಚನಗಿರಿ ಮೈಸೂರು ಶಾಖಾಮಠದ ಶ್ರೀ ಸೋಮನಾಥನಂದ ಸ್ವಾಮಿಜಿ ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ಬೆಳಗೊಳ ಗ್ರಾಮದ ಶ್ರೀ ವಿಶ್ವಮಂಗಳ ಲಕ್ಷ್ಮೀ ನರಸಿಂಹ ಸ್ವಾಮಿ ದೇವಸ್ಥಾನದ ಸಂಸ್ಥಾಪಕರಾದ ಶ್ರೀ ಉಭಯ ವೇದಾಂತ ವಿದ್ವಾನ್ ವಿ.ಲಕ್ಷ್ಮೀನಾರಾಯಣ್, ಶಾಸಕ ರಮೇಶಬಾಬು ಬಂಡಿಸಿದ್ದೇಗೌಡ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಮಾಜಿ ಶಾಸಕ ರವೀಂದ್ರ ಶ್ರೀಕಂಠಯ್ಯ, ವಿಧಾನ ಪರಿಷತ್ ಸದಸ್ಯ ವಿವೇಕಾನಂದ, ಮಾಜಿ ಸದಸ್ಯ ಮರಿತಿಬ್ಬೇಗೌಡ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಜ.25ರ ಮಧ್ಯಾಹ್ನ 1 ಗಂಟೆಗೆ ಪ್ರಸಾದ ವಿನಿಯೋಗ ಏರ್ಪಡಿಸಿದ್ದು, ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವಂತೆ ಕೋರಲಾಗಿದೆ.

ಒಂದನೇ ಪುಟದಿಂದ

ವೈಭವದ ಜಾತ್ರಾ ಮಹೋತ್ಸವ

ಈ ಕುರಿತು ಮಾಹಿತಿ ನೀಡಿ, ಜಾತ್ರೆ ಆಚರಣೆಗೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ. ಮುಖ್ಯಮಂತ್ರಿ, ಕೇಂದ್ರ ಹಾಗೂ ರಾಜ್ಯ ಸಚಿವರು, ಸಂಸದರು, ಶಾಸಕರು, ಗಣ್ಯರು, ವಿವಿಧ ಮಠಗಳ ಮಠಾಧೀಶರು, ಸಾಹಿತಿಗಳು ಭಾಗವಹಿಸಲಿದ್ದಾರೆ. ಈ ವರ್ಷ 31ನೇ ರಾಜ್ಯಮಟ್ಟದ ಭಜನಾ ಮತ್ತು ಏಕತಾರಿ ಸ್ಪರ್ಧೆ ಏರ್ಪಡಿಸಲಾಗಿದೆ. ರಾಜ್ಯ ಹಾಗೂ ಹೊರರಾಜ್ಯ ಗಳಿಂದ ಸುಮಾರು 800ಕ್ಕೂ ಹೆಚ್ಚು ಪುರುಷ, ಮಹಿಳಾ, ಮಕ್ಕಳ ತಂಡಗಳು ಭಾಗವಹಿಸಲಿದ್ದು, ಪ್ರತಿ ವಿಭಾಗಕ್ಕೂ ಪ್ರತ್ಯೇಕ ಬಹುಮಾನ ನೀಡಲಾಗುತ್ತದೆ ಎಂದರು.

ಆಕರ್ಷಕ ವಸ್ತುಪ್ರದರ್ಶನ: ಜಾತ್ರೆಯ ಪ್ರಮುಖ ಆಕರ್ಷಣೆಯಾದ ವಸ್ತು ಪ್ರದರ್ಶನದಲ್ಲಿ ಕೈಗಾರಿಕೋತ್ಪನ್ನಗಳು, ಕೈಮಗ್ಗ, ಜವಳಿ, ಕರಕುಶಲ ಉತ್ಪನ್ನಗಳು, ಗ್ರಾಮೀಣ ಉತ್ಪನ್ನಗಳು, ಸ್ವಸಹಾಯ ಸಂಘಗಳು, ಸ್ತ್ರೀ ಶಕ್ತಿ ಸಂಘಗಳು ತಯಾರಿಸಿದ ಗೃಹಬಳಕೆ ಉತ್ಪನ್ನಗಳು ಹಾಗೂ ಗುಡಿ ಕೈಗಾರಿಕೆ ವಸ್ತುಗಳ ಪ್ರದರ್ಶನ ಹಾಗೂ ಮಾರಾಟದ ವ್ಯವಸ್ಥೆ ಮಾಡಲಾಗಿದೆ. ಜೆಎಸ್‌ಎಸ್ ಪ್ರೌಢಶಾಲೆಗಳ ವಿದ್ಯಾರ್ಥಿಗಳು ಸಿದ್ಧಪಡಿಸಿರುವ 200ಕ್ಕೂ ಹೆಚ್ಚು ಶಿಕ್ಷಣ ಮತ್ತು ವಿಜ್ಞಾನಕ್ಕೆ ಸಂಬಂಧಿಸಿದ ಮಾದರಿಗಳಿರುತ್ತವೆ. ಸರ್ಕಾರದ ಅಭಿವೃದ್ಧಿ ಇಲಾಖೆಗಳು, ಕೈಗಾರಿಕಾ ಸಂಸ್ಥೆಗಳು ಹಾಗೂ ಮಹಿಳಾ ಉದ್ಯಮಿಗಳು ಪಾಲ್ಗೊಳ್ಳಲಿದ್ದಾರೆ. ವೈದ್ಯಕೀಯ ಹಾಗೂ ತಾಂತ್ರಿಕ ವಸ್ತುಪ್ರದರ್ಶನ ಇರಲಿದೆ ಎಂದು ಮಾಹಿತಿ ನೀಡಿದರು.

ಚಿತ್ರಕಲೆ, ಗಾಳಿಪಟ ಸ್ಪರ್ಧೆ, ಚಿತ್ರಸಂತೆ: 29ರಂದು 10ನೇ ತರಗತಿಯ ವಿದ್ಯಾರ್ಥಿಗಳಿಗೆ ಬೇರೆ ಬೇರೆ ವಿಭಾಗಗಳಲ್ಲಿ, ಸ್ಥಳದಲ್ಲೇ ವಿವಿಧ ವಿಷಯಗಳ ಕುರಿತು ಚಿತ್ರ ರಚಿಸುವ ರಾಜ್ಯಮಟ್ಟದ ಮಕ್ಕಳ ಚಿತ್ರಕಲಾ ಸ್ಪರ್ಧೆ ಮತ್ತು ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ಗಾಳಿಪಟ ಸ್ಪರ್ಧೆ ಆಯೋಜಿಸಲಾಗಿದೆ. ರಾಜ್ಯ ಹಾಗೂ ಹೊರರಾಜ್ಯ ಕಲಾವಿದರುಗಳ ಕಲಾಕೃತಿಗಳ ಪ್ರದರ್ಶನ, ಮಾರಾಟ ಹಾಗೂ ಸ್ಥಳದಲ್ಲೇ ಸಾರ್ವಜನಿಕರ ಭಾವಚಿತ್ರ ರಚನೆ ಮಾಡಿ ಮಾರಾಟ ಮಾಡುವ ವ್ಯವಸ್ಥೆ ಜಾತ್ರೆಯ ಎಲ್ಲಾ ದಿನಗಳಲ್ಲಿಯೂ ಇರುತ್ತದೆ.

ಕುಸ್ತಿ ಪಂದ್ಯಾವಳಿ: ಜ.30ರಂದು ರಾಷ್ಟ್ರಮಟ್ಟದ ನಾಡಕುಸ್ತಿ ಪಂದ್ಯಗಳು ನಡೆಯಲಿವೆ. ಈ ಬಾರಿ ಎರಡು ಮಾರ್ಪಿಟ್ ಕುಸ್ತಿಗಳಿರುತ್ತವೆ. ರಾಷ್ಟ್ರಮಟ್ಟದ ಕುಸ್ತಿ ಸ್ಪರ್ಧೆಯಲ್ಲಿ ವಿಜೇತರಿಗೆ ಸುತ್ತೂರು ಕೇಸರಿ ಪ್ರಶಸ್ತಿ ಹಾಗೂ ಸ್ಥಳೀಯ ಉತ್ತಮ ಕುಸ್ತಿ ಸ್ಪರ್ಧೆ ವಿಜೇತರಿಗೆ ಸುತ್ತೂರು ಕುಮಾರ ಪ್ರಶಸ್ತಿ ನೀಡಲಾಗುತ್ತದೆ. ಜ.26ರಿಂದ 31ರವರೆಗೆ ಜಾತ್ರೆಯ ಎಲ್ಲಾ ದಿನಗಳು ಆರೋಗ್ಯ ತಪಾಸಣೆ ಮಾಡಲಾಗುತ್ತದೆ.

ದೋಣಿ ವಿಹಾರ, ದೇಸಿ ಆಟ: ಸಾರ್ವಜನಿಕರ ಮನೋರಂಜನೆಗಾಗಿ ಜಾತ್ರೆಯ ಎಲ್ಲ ದಿನಗಳಲ್ಲಿ ದೋಣಿ ವಿಹಾರ ಏರ್ಪಡಿಸಲಾಗಿದೆ. ಜತೆಗೆ ಪುರುಷರಿಗೆ ಜ.28ರಂದು, ಮಹಿಳೆಯರಿಗೆ 29ರಂದು, ಜೆಎಸ್‌ಎಸ್ ಸಂಸ್ಥೆಯ ಪ್ರಾಥಮಿಕ ಮತ್ತು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ 28ರಿಂದ 30ರವರೆಗೆ ಸ್ಪರ್ಧೆಗಳು ನಡೆಯಲಿವೆ. ದೇಸಿ ಆಟಗಳಾದ ಕೆಸರುಗದ್ದೆ ಓಟ, ಹಗ್ಗ–ಜಗ್ಗಾಟ, ಕುಂಟೆಬಿಲ್ಲೆ, ಅಳಿಗುಳಿ ಮನೆ, ಆಣೆಕಲ್ಲು, ಚದುರಂಗ, ಬುಗುರಿ, ಚೌಕಬಾರದ ಜತೆಗೆ 50 ಕೆಜಿ ಭಾರದ ಚೀಲ ಹೊತ್ತು ಓಡುವುದು, ಕಲ್ಲುಗುಂಡು ಎತ್ತುವುದು, ತುಂಬಿದ ಬಿಂದಿಗೆಯನ್ನು ತಲೆಯ ಮೇಲೆ ಹೊತ್ತು ಓಡುವ ಸ್ಪರ್ಧೆ ಆಯೋಜಿಸಲಾಗಿದೆ. ವಿಜೇತರಾದವರಿಗೆ ನಗದು ಬಹುಮಾನ, ನೆನಪಿನ ಕಾಣಿಕೆ ಹಾಗೂ ಪ್ರಶಸ್ತಿಪತ್ರ ನೀಡಲಾಗುವುದು ಎಂದು ವಿವರಿಸಿದರು.

54ನೇ ದನಗಳ ಪರಿಷೆ: ಪ್ರತಿ ವರ್ಷದಂತೆ ಈ ವರ್ಷವೂ ದನಗಳ ಜಾತ್ರೆ ನಡೆಯಲಿದೆ. ರೈತರು ಎತ್ತು, ಹಸು, ಹೋರಿಗಳನ್ನು ಕೊಂಡುಕೊಳ್ಳಲು ಹಾಗೂ ಮಾರಾಟ ಮಾಡಲು ಅವಕಾಶವಿರುತ್ತದೆ. ಪಶುಪಾಲನಾ ಹಾಗೂ ಪಶುವೈದ್ಯಕೀಯ ಇಲಾಖೆ ವತಿಯಿಂದ ಉಚಿತ ಆರೋಗ್ಯ ತಪಾಸಣೆ ನಡೆಸಲಾಗುತ್ತದೆ. ಉತ್ತಮ ರಾಸುಗಳಿಗೆ ಬಹುಮಾನ ನೀಡಿ ಪ್ರೋತ್ಸಾಹಿಸಲಾಗುವುದು ಎಂದು ಅವರು ಇದೇ ವೇಳೆ ತಿಳಿಸಿದರು.

ಕಪಿಲಾರತಿ, ಸಾಂಸ್ಕೃತಿಕ ಮೇಳ: ಜ.30ರ ತೆಪ್ಪೋತ್ಸವದಂದು ನಂಜನಗೂಡಿನ ಯುವ ಬ್ರಿಗೇಡ್ ಸಹಯೋಗದಲ್ಲಿ ಕಪಿಲಾರತಿ ಏರ್ಪಡಿಸಲಾಗಿದೆ. ಜೆಎಸ್‌ಎಸ್ ಅಂತರಸಂಸ್ಥೆಗಳ ಸಾಂಸ್ಕೃತಿಕ ಮೇಳದಲ್ಲಿ 3,500ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ. ಭರತನಾಟ್ಯ, ಸಾಮೂಹಿಕ ನೃತ್ಯ, ಶಾಸ್ತ್ರೀಯ ಸಂಗೀತ, ವಚನಾಧಾರಿತ ನೃತ್ಯ, ಸಾಮೂಹಿಕ ಗಾಯನ ಸ್ಪರ್ಧೆಗಳ ಮೂಲಕ ಸುಮಾರು 400ಕ್ಕೂ ಹೆಚ್ಚು ಕಾರ್ಯಕ್ರಮ ಆಯೋಜಿಸಲಾಗಿದೆ. ಗದ್ದುಗೆಯ ಆವರಣದಲ್ಲಿ ನಗರಪ್ರದೇಶಗಳ ವೃತ್ತಿಪರ ಹಾಗೂ ಹವ್ಯಾಸಿ ಕಲಾವಿದರಿಂದ ಗಾಯನ, ನೃತ್ಯ ಹಾಗೂ ನಾಟಕ ಪ್ರದರ್ಶನವಿರಲಿದೆ. ಜತೆಗೆ ಕರ್ನಾಟಕ, ಮಹಾರಾಷ್ಟ್ರ, ತಮಿಳುನಾಡು ರಾಜ್ಯಗಳ ಕಲಾತಂಡಗಳು ಕಲಾಪ್ರದರ್ಶನ ನೀಡಲಿವೆ ಎಂದು ತಿಳಿಸಿದರು.

ಪ್ರಭಾತ್ ಪೇರಿ: 28ರಿಂದ 31ರವರೆಗೆ ಪ್ರತಿದಿನ ಬೆಳಗ್ಗೆ ಜೀಮರಹಳ್ಳಿ, ನಗರ್ಲೆ, ಆಯರಹಳ್ಳಿ, ಬಸಳ್ಳಿಹುಂಡಿ ಮತ್ತು ಸೋಮೇಶ್ವರಪುರ ಗ್ರಾಮಗಳಲ್ಲಿ ಸ್ನೇಹ–ಸೌಹಾರ್ದ–ಶಾಂತಿ ಪ್ರಾರ್ಥನಾ ಸಂಚಲನದ ಪ್ರಭಾತ್ ಪೇರಿ ನಡೆಯಲಿದೆ. ನಂತರ ಒಬ್ಬ ಶ್ರೀಗಳು ಧ್ವಜಾರೋಹಣ ನೆರವೇರಿಸುತ್ತಾರೆ, ಮತ್ತೊಬ್ಬರು ಧರ್ಮ ಸಂದೇಶ ನೀಡುತ್ತಾರೆ. 27ರಂದು ಶ್ರೀಕ್ಷೇತ್ರದ ಗದ್ದುಗೆ ಆವರಣದಲ್ಲಿ ಧ್ವಜಾರೋಹಣ ಮತ್ತು ಧರ್ಮ ಸಂದೇಶವಿರಲಿದೆ. ಗೋಷ್ಠಿಯಲ್ಲಿ ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯದರ್ಶಿ ಶಿವಕುಮಾರಸ್ವಾಮಿ, ಆಡಳಿತಾಧಿಕಾರಿ ಉದಯಶಂಕರ್ ಉಪಸ್ಥಿತರಿದ್ದರು.

ದಾಸೋಹಕ್ಕೆ ಸಾವಿರ ಕ್ವಿಂಟಾಲ್ ಅಕ್ಕಿ


ದಾಸೋಹ ಸಮಿತಿಯ ಸಂಚಾಲಕ ಡಾ.ಸುಬ್ಬಪ್ಪ ಮಾತನಾಡಿ, ಈ ವರ್ಷದ



ಜಾತ್ರಾ ಮಹೋತ್ಸವಕ್ಕೆ ಹೆಚ್ಚು ಜನ ಆಗಮಿಸುವ ನಿರೀಕ್ಷೆಯಿದೆ. ಇದಕ್ಕಾಗಿ ಜಾತ್ರಾ ಮಹೋತ್ಸವದಲ್ಲಿ ಭಾಗವಹಿಸುವ ಭಕ್ತಾದಿಗಳಿಗೆ ಪ್ರತಿನಿತ್ಯ ಬೆಳಗ್ಗೆ, ಮಧ್ಯಾಹ್ನ ಹಾಗೂ ರಾತ್ರಿ ಪ್ರಸಾದದ ವ್ಯವಸ್ಥೆ ಮಾಡಲಾಗಿದೆ. ಒಟ್ಟು 6 ದಿನಗಳ ಪ್ರಸಾದ ತಯಾರಿಕೆಗೆ 1000 ಕ್ವಿಂಟಾಲ್ ಅಕ್ಕಿ, 240 ಕ್ವಿಂಟಾಲ್ ತೊಗರಿಬೇಳೆ, 1500 ಕ್ಯಾನ್ ರಿಫೈನ್ಡ್ ಅಡುಗೆ ಎಣ್ಣೆ, 12 ಟನ್ ಬೆಲ್ಲ, 3500 ಕೆ.ಜಿ. ಖಾರದಪುಡಿ, 200 ಕ್ವಿಂಟಾಲ್ ಸಕ್ಕರೆ, 110 ಕ್ವಿಂಟಾಲ್ ಕಡ್ಲೆಹಿಟ್ಟು, 500 ಕೆ.ಜಿ. ನಂದಿನಿ ತುಪ್ಪ, 800 ಕೆ.ಜಿ. ದ್ರಾಕ್ಷಿ, ಗೋಡಂಬಿ, 8000 ಲೀ ಹಾಲು, 28,000 ಲೀಟರ್ ಮೊಸರು, 25,000 ತೆಂಗಿನಕಾಯಿ, 5000 ಕೆಜಿ ಉಪ್ಪಿನಕಾಯಿ ಬಳಸಲಾಗುತ್ತದೆ. ಲಾಡು, ಬಾದುಷಾ, ಮೈಸೂರು ಪಾಕ್, ಕೊಬ್ಬರಿ ಮಿಠಾಯಿ ತಲಾ 1 ಲಕ್ಷ, 50 ಕ್ವಿಂಟಾಲ್ ಖಾರಾ ಬೂಂದಿ, 50 ಕ್ವಿಂಟಾಲ್ ಸಿಹಿ ಬೂಂದಿ ತಯಾರಿಸಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಕೃಷಿ ಬ್ರಹ್ಮಾಂಡ

ಈ ವರ್ಷ ಸುಸ್ಥಿರ ಕೃಷಿಗಾಗಿ ನಿಖರ ಬೇಸಾಯ ತಾಂತ್ರಿಕತೆ ಶೀರ್ಷಿಕೆಯಡಿ ಸಾಂಪ್ರದಾಯಿಕ ಹಾಗೂ ಆಧುನಿಕ ತಂತ್ರ ಜ್ಞಾನಾಧಾರಿತ ಕೃಷಿ ಮೇಳ ಆಯೋಜಿಸಲಾಗಿದೆ. ಒಂದು ಎಕರೆ ಕೃಷಿ ಬ್ರಹ್ಮಾಂಡ,



ನೆರಳುಮನೆಯಲ್ಲಿ ಬೆಳೆದ ಹಲವಾರು ದೇಸಿ ಹಾಗೂ ವಿದೇಶಿ ತರಕಾರಿಗಳು, ಏಕದಳ, ದ್ವಿದಳ ಧಾನ್ಯಗಳು, ಎಣ್ಣೆಕಾಳುಗಳು, ವಾಣಿಜ್ಯ ಬೆಳೆಗಳು, ಮೇವಿನ ಬೆಳೆಗಳು, ವಿವಿಧ ಫಲಪುಷ್ಪಗಳು, ತೋಟಗಾರಿಕೆ ಬೆಳೆಗಳು. ರೇಷ್ಮೆ ಕೃಷಿ ಹನಿ ಮತ್ತು ತುಂತುರು ನೀರಾವರಿ ಪದ್ಧತಿಗಳನ್ನು ಅನುಸರಿಸಿ ಬೆಳೆದಿರುವ ಸುಮಾರು 300 ಬೆಳೆಗಳು ಹಾಗೂ ವಿವಿಧ ತಳಿಗಳ ಪ್ರಾತ್ಯಕ್ಷಿಕೆಯ ಪ್ರದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ. ಕೃಷಿ ಯಂತ್ರೋಪಕರಣಗಳ ಪ್ರದರ್ಶನ ಹಾಗೂ ಮಾರಾಟದ ವ್ಯವಸ್ಥೆ ಮಾಡಲಾಗಿದೆ. ದೇಸಿ ತಳಿಗಳ ಹಸು, ಕುರಿ, ಮೇಕೆ, ಕೋಳಿಗಳ ಪ್ರದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ. ಜತೆಗೆ ಜ.29ರಂದು ಸುಸ್ಥಿರ ಕೃಷಿಗಾಗಿ ನಿಖರ ಬೇಸಾಯ ಕ್ರಮಗಳು ಕುರಿತು ವಿಚಾರಸಂಕಿರಣ ಏರ್ಪಡಿಸಲಾಗಿದ್ದು, ರೈತರು ಹಾಗೂ ಅವರ ಮಕ್ಕಳಿಗಾಗಿ ಕೃಷಿ ರಸಪ್ರಶ್ನೆ ಸ್ಪರ್ಧೆ ಆಯೋಜಿಸಲಾಗಿದೆ ಎಂದು ಮಂಜುನಾಥ್ ತಿಳಿಸಿದರು.



ಗಣರಾಜ್ಯೋತ್ಸವ ಆಚರಣೆ

ಜ.26ರಂದು ಬೆಳಗ್ಗೆ 4 ಗಂಟೆಯಿಂದ ಕರ್ತೃಗದ್ದುಗೆ ಅನುಜ್ಞೆ, ಮಹಾಸಂಕಲ್ಪಪೂರ್ವಕ ಮತ್ತು ಮಹಾರುದ್ರಾಭಿಷೇಕ ಸೇರಿದಂತೆ ವಿವಿಧ ಪೂಜಾ ಉತ್ಸವವು 8 ಗಂಟೆವರೆಗೆ ನಡೆಯಲಿದ್ದು, ನಂತರ 8 ಗಂಟೆಗೆ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ ಆವರಣದಲ್ಲಿ 76ನೇ ಗಣರಾಜ್ಯೋತ್ಸವ ನಡೆಯಲಿದೆ. ಶ್ರೀಗುರುಮಲ್ಲೇಶ್ವರ ದಾಸೋಹ ಮಹಾಸಂಸ್ಥಾನ ಮಠದ ಶ್ರೀ ಮಹಾಂತ ಸ್ವಾಮಿ ಮತ್ತು ಶ್ರೀ ಸೂರ್ಯಸಿಂಹಾಸನ ಮಠದ ಶ್ರೀ ಸಿದ್ದಲಿಂಗ ಶಿವಾಚಾರ್ಯ ಸ್ವಾಮಿ ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ. ಮಾಜಿ ಮುಖ್ಯಮಂತ್ರಿ ಡಿ.ವಿ.ಸದಾನಂದಗೌಡ ಧ್ವಜಾರೋಹಣ ಮಾಡಲಿದ್ದಾರೆ. ನಿವೃತ್ತ ಡಿಜಿಪಿ ಹಾಗೂ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಜ್ಯಾಧ್ಯಕ್ಷ ಶಂಕರ ಎಂ.ಬಿದರಿ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಮಾಜಿ ಸಚಿವ ವೆಂಕಟರಾವ್ ನಾಡಗೌಡ, ಎಂಎಲ್‌ಸಿ ಕೆ.ವಿವೇಕಾನಂದ, ವೀರಶೈವ ಲಿಂಗಾಯತ ಮಹಾ ವೇದಿಕೆಯ ಅಧ್ಯಕ್ಷ ಪ್ರಶಾಂತ್ ಕಲ್ಲೂರ್, ಉದ್ಯಮಿ ಜೆ.ಡಿ.ವೀರಪ್ಪ, ಮೈಮುಲ್ ಅಧ್ಯಕ್ಷ ಆರ್.ಚೆಲುವರಾಜು ಸೇರಿದಂತೆ ಮತ್ತಿತರರು ಭಾಗವಹಿಸಲಿದ್ದಾರೆ.

ವಸ್ತುಪ್ರದರ್ಶನ, ಕೃಷಿ, ಸಾಂಸ್ಕೃತಿಕ ಮೇಳ, ದೋಣಿ ವಿಹಾರ ಉದ್ಘಾಟನೆ

ಜ.26ರಂದು ಸಂಜೆ 4 ಗಂಟೆಗೆ ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ನಿರ್ಮಲಾನಂದನಾಥ ಸ್ವಾಮಿ, ಶ್ರೀ ಪಂಚಮಸಾಲಿ ಜಗದ್ಗುರು ಪೀಠದ ಶ್ರೀ ಮಹದೇವ ಶಿವಾಚಾರ್ಯ ಸ್ವಾಮಿ ದಿವ್ಯ ಸಾನ್ನಿಧ್ಯದಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ವಸ್ತುಪ್ರದರ್ಶನ ಉದ್ಘಾಟಿಸಲಿದ್ದಾರೆ. ಕೃಷಿ ಮೇಳಕ್ಕೆ ಕೃಷಿ ಸಚಿವ ಎನ್.ಚಲುವರಾಸ್ವಾಮಿ ಚಾಲನೆ ನೀಡಲಿದ್ದಾರೆ. ವಿಪಕ್ಷ ನಾಯಕ ಆರ್.ಅಶೋಕ್ ಸಾಂಸ್ಕೃತಿಕ ಮೇಳ ಉದ್ಘಾಟಿಸಲಿದ್ದಾರೆ. ಸಂಸದ ಡಾ.ಕೆ.ಸುಧಾಕರ್ ಆರೋಗ್ಯ ತಪಾಸಣಾ ಶಿಬಿರಕ್ಕೆ ಚಾಲನೆ ನೀಡಲಿದ್ದಾರೆ. ಎ.ಬಿ.ರಮೇಶ್ ಬಂಡಿಸಿದ್ದೇಗೌಡ ದೋಣಿ ವಿಹಾರಕ್ಕೆ ಹಸಿರು ನಿಶಾನೆ ತೋರಲಿದ್ದಾರೆ.

ಅಧಿಕಾರಿಗಳದ್ದೇ ಲೋಪವಂತೆ

ಲಭ್ಯವಾಗಿಲ್ಲ. ನಿವೇಶನ ಹಂಚಿಕೆ ವಿಚಾರದಲ್ಲಿ ಮುಡಾ ಅಧಿಕಾರಿ ಗಳು ಲೋಪವೆಸಗಿರುವುದು ಕಂಡು ಬಂದಿದೆ ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

ಸದರಿ ಜಮೀನು ಮೊದಲು ದೇವರಾಜು ತಂದೆಯಿಂದ ದೇವರಾಜು ಸಹೋದರನಿಗೆ, ನಂತರ ದೇವರಾಜು ಅವರಿಗೆ ಬಂದಿತ್ತು. ಈ ಜಮೀನನ್ನು ಅವರ ಕುಟುಂಬದವರೇ ವರ್ಗಾವಣೆ ಮಾಡಿಕೊಂಡಿದ್ದರಾದರೂ, ಮಾಲೀಕತ್ವ ವರ್ಗಾವಣೆ ಬಗ್ಗೆ ಸರ್ಕಾರಿ ದಾಖಲೆಗಳಲ್ಲಿ ನಮೂದಿಸದೇ ಇರುವುದು ಅವರ ಕುಟುಂಬದವರ ನಿರ್ಲಕ್ಷ್ಯ ಎಂದು ತಿಳಿಸಲಾಗಿದೆ. ದೇವರಾಜು ತನಗೆ ಬಂದ ಭೂಮಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಭಾಮೈದ ಮಲ್ಲಿಕಾರ್ಜುನ ಸ್ವಾಮಿಗೆ ಮಾರಾಟ ಮಾಡಿದ್ದು, ಅವರು ಭೂ ಪರಿವರ್ತನೆ ಮಾಡಿಸಿಕೊಂಡಿದ್ದಾರೆ. ಈ ಸಂದರ್ಭದಲ್ಲಿ ಮುಡಾ ಹಾಗೂ ಜಿಲ್ಲಾಧಿಕಾರಿ ಕಚೇರಿ ಅಧಿಕಾರಿಗಳು ಸರಿಯಾಗಿ ಪರಿಶೀಲನೆ ನಡೆಸದೇ ಭೂ ಪರಿವರ್ತನೆ ಮಾಡುವ ಮೂಲಕ ಲೋಪವೆಸಗಿದ್ದಾರೆ. ಭೂ ಪರಿವರ್ತನೆ ವಿಚಾರದಲ್ಲಿ ಮುಖ್ಯಮಂತ್ರಿ ಹಾಗೂ ಅವರ ಕುಟುಂಬದವರ ಹಸ್ತಕ್ಷೇಪವಿಲ್ಲ ಎಂಬುದು ಸ್ಪಷ್ಟವಾಗಿದೆ.

ಮಲ್ಲಿಕಾರ್ಜುನ ಸ್ವಾಮಿಯವರು ತಮ್ಮ ಸಹೋದರಿಗೆ ಭೂಮಿಯನ್ನು ದಾನ ಮಾಡಿದ್ದು, ಸದರಿ ಭೂಮಿಯಲ್ಲಿ ಬಡಾವಣೆ ನಿರ್ಮಿಸಿದ್ದ ಮುಡಾದಿಂದ ಪರಿಹಾರವಾಗಿ ಪ್ರತಿಷ್ಠಿತ ವಿಜಯನಗರ ಬಡಾವಣೆಯಲ್ಲಿ 14 ನಿವೇಶನಗಳನ್ನು ಮುಖ್ಯಮಂತ್ರಿಗಳ ಪತ್ನಿ ಶ್ರೀಮತಿ ಪಾರ್ವತಿ ಅವರಿಗೆ ನೀಡಿರುವ ವಿಚಾರದಲ್ಲಿ ಮುಡಾ ಅಧಿಕಾರಿಗಳು ಲೋಪವೆಸಗಿರುವುದು ಕಂಡು ಬಂದಿದೆ. ಈವರೆಗಿನ ತನಿಖೆಯಲ್ಲಿ ಯಾವ ಹಂತದಲ್ಲೂ ಮುಖ್ಯಮಂತ್ರಿ ಹಾಗೂ ಅವರ ಕುಟುಂಬದವರು ಹಸ್ತಕ್ಷೇಪ ಮಾಡಿರುವುದಕ್ಕೆ ಯಾವುದೇ ಪುರಾವೆ ದೊರೆತಿಲ್ಲ ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ ಎನ್ನಲಾಗಿದೆ.

ಲೋಕಾಯುಕ್ತ ಪೊಲೀಸರ ತನಿಖೆ ಇಂದು ಕೂಡ (ಗುರುವಾರ) ಮುಂದುವರೆದಿದ್ದು, ತನಿಖೆಯು ಪೂರ್ಣ ಪ್ರಮಾಣದಲ್ಲಿ ಮುಗಿದಿಲ್ಲ. ಹೈಕೋರ್ಟ್ ಸೂಚನೆಯಂತೆ ತನಿಖೆಯ ಪ್ರಗತಿ ವರದಿಯನ್ನಷ್ಟೇ ತನಿಖಾಧಿಕಾರಿಗಳು ಸಲ್ಲಿಸಲಿದ್ದಾರೆ ಎಂದು ಹೇಳಲಾಗಿದೆ.

ಮುಡಾ ಪ್ರಕರಣದಲ್ಲಿ ತನಿಖೆಗಾಗಿ ದೂರುದಾರರು ಮನವಿ ಸಲ್ಲಿಸಿದ್ದರು. ಅದರಂತೆ ಲೋಕಾಯುಕ್ತ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಜ.25ರೊಳಗಾಗಿ ಹೈಕೋರ್ಟ್‌ಗೆ ತನಿಖಾ ವರದಿ ಸಲ್ಲಿಕೆಯಾಗಬಹುದು. ಲೋಕಾಯುಕ್ತ ಸಂಸ್ಥೆ ಪಾರದರ್ಶಕವಾಗಿ ಹಾಗೂ ಸ್ವತಂತ್ರವಾಗಿ ತನಿಖೆ ನಡೆಸುತ್ತಿದೆ. ಅನುಮಾನ ಎಂಬುದು ಕಾಯಿಲೆ ಇದ್ದಂತೆ. ಬಿಜೆಪಿಯವರು ಈ ಕಾಯಿಲೆಯಿಂದ ಬಳಲುತ್ತಿದ್ದಾರೆ. ಹೀಗಾಗಿ ಇಲ್ಲ–ಸಲ್ಲದ ಆರೋಪ ಮಾಡುತ್ತಿದ್ದಾರೆ.



– ಎ.ಎಸ್.ಪೊನ್ನಣ್ಣ, ಮುಖ್ಯಮಂತ್ರಿಗಳ ಕಾನೂನು ಸಲಹೆಗಾರರು ಹಾಗೂ ವಿರಾಜಪೇಟೆ ಕ್ಷೇತ್ರದ ಶಾಸಕರು

ಲೋಕಾಯುಕ್ತದಿಂದ ಕ್ಲೀನ್ ಚಿಟ್!

ಹೋರಾಟ ಮಾಡುತ್ತೇವೆ. ಮುಖ್ಯಮಂತ್ರಿಗಳ ಒತ್ತಡಕ್ಕೆ ಮಣಿದು ಕ್ಲೀನ್ ಚಿಟ್ ನೀಡಬಹುದೆಂದು ಈ ಮೊದಲೇ ವ್ಯಕ್ತಪಡಿಸಿದ್ದ ಅನುಮಾನಗಳು ಸತ್ಯವಾದಂತೆ ಕಾಣುತ್ತಿವೆ ಎಂದರು. ಜಾರಿ ನಿರ್ದೇಶನಾಲಯ (ಇ.ಡಿ.) ಇತ್ತೀಚೆಗೆ ಪತ್ರಿಕಾ ಪ್ರಕಟಣೆ ನೀಡಿ, ಮುಡಾದಲ್ಲಿ ಎಷ್ಟು ಕೋಟಿ ರೂ. ಹಗರಣ ನಡೆದಿದೆ ಎಂಬುದನ್ನು ತಿಳಿಸಿತ್ತು. ರಾಜ್ಯ ಹೈಕೋರ್ಟ್ ಸಹ ಮುಡಾ ಹಗರಣವನ್ನು ಎಳೆಎಳೆಯಾಗಿ ಬಿಚ್ಚಿಟ್ಟಿದೆ. ಮುಖ್ಯಮಂತ್ರಿ ಸೇರಿದಂತೆ ಇಡೀ ಸರ್ಕಾರ ರಾಜ್ಯಪಾಲರ ಕುರಿತು ಅವಹೇಳನಕಾರಿ ಹೇಳಿಕೆಗಳನ್ನು ನೀಡಿತ್ತು. ಹೈಕೋರ್ಟ್ ತೀರ್ಪು ಬರುವ ವೇಳೆಯಲ್ಲೇ ಲೋಕಾಯುಕ್ತದ ಕ್ಲೀನ್ ಚಿಟ್ ವರದಿ ಸರಿಯಲ್ಲ, ಇದಕ್ಕೆ ಯಾವುದೇ ಪಾವಿತ್ರ್ಯತೆ ಇಲ್ಲ. ಒತ್ತಡಕ್ಕೆ ಮಣಿದು ಕ್ಲೀನ್ ಚಿಟ್ ಕೊಡಲಾಗಿದೆ ಎಂಬುದು ನಮ್ಮೆಲ್ಲರ ಸ್ಪಷ್ಟ ಅಭಿಪ್ರಾಯ. ಇ.ಡಿ. ಆಧಾರರಹಿತ ಹೇಳಿಕೆಗಳನ್ನು ಮಾಧ್ಯಮಗಳಿಗೆ ನೀಡಲು ಸಾಧ್ಯವಿಲ್ಲ, ಮುಡಾ ಹಗರಣ ನಡೆದಿರುವುದಕ್ಕೆ ಆಧಾರಗಳಿರುತ್ತವೆ. ಇ.ಡಿ. ವರದಿ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಆತುರಾತುರವಾಗಿ ಕ್ಲೀನ್ ಚಿಟ್ ಪಡೆಯುವ ಪ್ರಯತ್ನ ಮಾಡಿದ್ದಾರೆ ಎಂದರು.

ಮುಡಾ ಪ್ರಕರಣ ಮುಚ್ಚಿ ಹಾಕುವ ಯತ್ನ

ಮುಖ್ಯಮಂತ್ರಿ ಸಿದ್ದರಾಮಯ್ಯ 14 ನಿವೇಶನಗಳನ್ನು ವಾಪಸ್ ನೀಡಿರುವುದು ತಪ್ಪನ್ನು ಒಪ್ಪಿಕೊಂಡಂತಾಗಿದೆ ಎಂದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಡಾ ಪ್ರಕರಣವನ್ನು ಸಿಬಿಐಗೆ ವಹಿಸಬೇಕೆಂದು ಆಗ್ರಹಿಸಲಾಗಿದೆ, ಹಗರಣದಲ್ಲಿ ಅಧಿಕಾರಿಗಳು ತಪ್ಪು ಮಾಡಿದ್ದಾರೆ ಎನ್ನಲಾಗುತ್ತಿದೆ. ಆದರೆ, ಇದರ ಹಿಂದೆ ಸಿದ್ದರಾಮಯ್ಯ ಇರುವುದನ್ನು ಮುಚ್ಚಿಹಾಕಲಾಗುತ್ತಿದೆ. ಇದರ ವಿರುದ್ಧ ಬಿಜೆಪಿ ಹೋರಾಟ ಮುಂದುವರಿಸಲಿದೆ ಎಂದರು. ಲೋಕಾಯುಕ್ತ ಪೊಲೀಸ್ ರಾಜ್ಯ ಸರ್ಕಾರದ ಅಡಿಯಲ್ಲಿ ಕೆಲಸ ಮಾಡುತ್ತದೆ. ಪೊಲೀಸರಿಗೂ ವರ್ಗಾವಣೆ, ಬಡ್ತಿ ಬೇಕಿರುತ್ತದೆ ಆದ್ದರಿಂದ, ತನಿಖೆ ಈ ರೀತಿ ನಡೆಯುತ್ತಿದೆ ಪೊಲೀಸರು ವರದಿ ನೀಡಿದರೂ ಸಿಎಂ ಸಿದ್ದರಾಮಯ್ಯ ಅವರಿಗೆ ಕ್ಲೀನ್ ಚಿಟ್ ನೀಡುವುದು ಖಚಿತ ಎಂದರು.

ಬೆಂಕಿ ತಗುಲಿ ಕೊಡಗಾಪುರದಲ್ಲಿ ಮನೆ ಭಸ್ಮ



ಕೊಡಗಾಪುರ ಗ್ರಾಮದಲ್ಲಿ ಮನೆಯೊಂದಕ್ಕೆ ಬಿದ್ದಿರುವುದು.

ಗುಂಡ್ಲುಪೇಟೆ, ಜ.23–ನೀರು ಕಾಯಿಸಲು ಒಲೆಗೆ ಬೆಂಕಿ ಹಾಕಿದ್ದಾಗ ಮನೆಯೊಂದು ಭಸ್ಮವಾಗಿರುವ ಘಟನೆ ತಾಲೂಕಿನ ಕೊಡಗಾಪುರ ಗ್ರಾಮದಲ್ಲಿ ಗುರುವಾರ ರಾತ್ರಿ ನಡೆದಿದೆ. ಗ್ರಾಮದ ಮಠದ ಮುಂಭಾಗದ ಮನೆಯೊಂದರಲ್ಲಿ ರಾತ್ರಿ ನೀರು ಕಾಯಿಸಲು ಒಲೆಗೆ ಬೆಂಕಿ ಹಾಕಿ ಮನೆಯಿಂದ ಆಚೆ ಹೋದಾಗ ಬೆಂಕಿ ಜ್ವಾಲೆ ಹರಡಿ ಮನೆ ಸುಟ್ಟು ಹೋಗಿದೆ. ಇದರಿಂದ ಮನೆಯಲ್ಲಿದ್ದ ಲಕ್ಷಾಂತರ ಬೆಲೆಬಾಳುವ ಆಹಾರ ಪದಾರ್ಥಗಳು ಸೇರಿದಂತೆ ಸಾಮಗ್ರಿಗಳು ಬೆಂಕಿಗಾಹುತಿಯಾಗಿವೆ. ಗ್ರಾಮಸ್ಥರೆಲ್ಲ ಸೇರಿ ಬೆಂಕಿ ನಂದಿಸಿದರು. ಯಾವುದೇ ಪ್ರಾಣಾಪಾಯವಾಗಿಲ್ಲ.

ಶ್ರೀರಾಮುಲು ಸೆಳೆಯಲು ಯತ್ನಾಳ್ ಟೀಂ ಯತ್ನ

ಬೆಂಗಳೂರು, ಜ.23– ಮಾಜಿ ಸಚಿವ ಜನಾರ್ಧನ ರೆಡ್ಡಿ ವಿರುದ್ಧ ಸಮರ ಸಾರಿರುವ ಮಾಜಿ ಸಚಿವ ಶ್ರೀರಾಮುಲು ಅವರನ್ನು ತಮ್ಮ ಬಣಕ್ಕೆ ಸೆಳೆಯಲು ಬಸನಗೌಡ ಪಾಟೀಲ್ ಯತ್ನಾಳ್ ನೇತೃತ್ವದ ಬಿಜೆಪಿಯ ಟೀಂ ಮುಂದಾಗಿದೆ.

ಗುರುವಾರ ಸಂಜೆ ಸದಾಶಿವ ನಗರದಲ್ಲಿರುವ ಮಾಜಿ ಸಚಿವ ಕುಮಾರ ಬಂಗಾರಪ್ಪ ಅವರ ನಿವಾಸದಲ್ಲಿ ನಡೆದ ಸಭೆಯಲ್ಲಿ ಶ್ರೀರಾಮುಲು ಅವರನ್ನು ತಮ್ಮ ಟೀಂ ಜೊತೆ ಸೇರಿಸಿಕೊಳ್ಳುವ ಬಗ್ಗೆ ಚರ್ಚಿಸಲಾಯಿತು ಎಂದು ಹೇಳಲಾಗಿದೆ. ಶ್ರೀರಾಮುಲು ಬುಧವಾರ ನಡೆದ ಬಿಜೆಪಿ ಕೋರ್ ಕಮಿಟಿ ಸಭೆಯಲ್ಲಿ ರಾಜ್ಯ ಬಿಜೆಪಿ ಉಸ್ತುವಾರಿ ರಾಧಾ ಮೋಹನ್ ದಾಸ್ ಅಗರ್‌ವಾಲ್ ಮತ್ತು ಒಂದು ಕಾಲದ ತಮ್ಮ ಆಪ್ತ ಗೆಳೆಯ ಜನಾರ್ಧನ ರೆಡ್ಡಿ ವಿರುದ್ಧ ಸಿಡಿದೆದ್ದಿದ್ದಲ್ಲದೆ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಕೂಡ ತಮ್ಮ ಸಹಾಯಕ್ಕೆ ಬಂದಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದರು.

ಮೈಸೂರು ಮಿತ್ರ

ಮೈಸೂರು ಜಿಲ್ಲಾ ಪೊಲೀಸರಿಂದ 24 ಕೆಜಿ ಗಾಂಜಾ ನಾಶ



ಮೈಸೂರು ಜಿಲ್ಲಾ ಪೊಲೀಸರು ಮಾದಕ ವಸ್ತುಗಳನ್ನು ನಾಶಪಡಿಸಿದರು.

ಮೈಸೂರು,ಜ.23(ಪಿಎಂ)–ಜಿಲ್ಲಾ ಪೊಲೀಸರು ವಶಪಡಿಸಿಕೊಂಡಿದ್ದ 4,99,400 ರೂ. ಅಂದಾಜು ಮೌಲ್ಯದ ಒಟ್ಟು 24 ಕೆಜಿ 97 ಗ್ರಾಂ ತೂಕದ ಮಾದಕ ವಸ್ತುಗಳನ್ನು (ಗಾಂಜಾ) ನಿಯಮಾನುಸಾರ ನಾಶಪಡಿಸಲಾಯಿತು.

19 ಪ್ರಕರಣಗಳಲ್ಲಿ ಜಿಲ್ಲೆಯ ವಿವಿಧ ಪೊಲೀಸ್ ಠಾಣೆಗಳಿಂದ ವಶಪಡಿಸಿಕೊಂಡಿದ್ದ ಈ ಮೌಲ್ಯದ ಮಾದಕ ವಸ್ತುಗಳನ್ನು ಮಾದಕ ವಿಲೇವಾರಿ ಸಮಿತಿ ವತಿಯಿಂದ ಮೈಸೂರು ಜಿಲ್ಲೆ ವ್ಯಾಪ್ತಿಯ ಜಯಪುರ ಪೊಲೀಸ್ ಠಾಣಾ ಸರಹದ್ದಿನ ಗುಜ್ಜೇಗೌಡನಪುರ ಗ್ರಾಮದಲ್ಲಿರುವ ಜಿಐಪಿಎಸ್ ಬಯೋಟೆಕ್ ಕುಲುಮೆಯಲ್ಲಿ ನಿಯಮಾನುಸಾರ ನಾಶಪಡಿಸಲಾಯಿತು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳೂ ಆದ ಮಾದಕ ವಸ್ತು ವಿಲೇವಾರಿ ಸಮಿತಿ ಮೈಸೂರು ಜಿಲ್ಲೆಯ ಅಧ್ಯಕ್ಷ ಎನ್.ವಿಷ್ಣುವರ್ಧನ ಸೇರಿದಂತೆ ಇನ್ನಿತರ ಪೊಲೀಸ್ ಅಧಿಕಾರಿಗಳು ಈ ವೇಳೆ ಹಾಜರಿದ್ದರು.

ಶ್ರೀ ನಟರಾಜ ಪಬ್ಲಿಕ್ ಶಾಲೆ ವಾರ್ಷಿಕೋತ್ಸವ



ಶ್ರೀ ನಟರಾಜ ಪಬ್ಲಿಕ್ ಶಾಲಾ ವಾರ್ಷಿಕೋತ್ಸವದಲ್ಲಿ ಮಕ್ಕಳಿಗೆ ಬಹುಮಾನ ವಿತರಣೆ.

ಮೈಸೂರು, ಜ.23– ಮಕ್ಕಳು ಪಠ್ಯಕ್ಕೆ ಸೀಮಿತವಾಗಿರದೇ ಸಾಂಸ್ಕೃತಿಕ, ಪಠ್ಯೇತರ ಚಟುವಟಿಕೆಗಳಲ್ಲಿಯೂ ತೊಡಗಿಸಿಕೊಳ್ಳುವಂತೆ ಪೋಷಕರು ಪ್ರೇರೇಪಿಸಬೇಕೆಂದು ಮೈಸೂರು ಬಣ್ಣ ಮತ್ತು ಅರಗು ಕಾರ್ಖಾನೆ ಮಾಜಿ ಅಧ್ಯಕ್ಷ ಎಚ್.ಎ. ವೆಂಕಟೇಶ್ ಹೇಳಿದರು.

ಶ್ರೀ ನಟರಾಜ ಪಬ್ಲಿಕ್ ಶಾಲೆಯ 23ನೇ ವಾರ್ಷಿಕ ಮಹೋತ್ಸವವನ್ನು ಶ್ರೀ ನಟರಾಜ ಆಡಿಟೋರಿಯಂನಲ್ಲಿ ಉದ್ಘಾಟಿಸಿ ಮಾತನಾಡಿದರು. ಶಿಕ್ಷಣ ಕ್ಷೇತ್ರ ಎಲ್ಲರಿಗೂ ಅಚ್ಚುಮೆಚ್ಚಾಗಿದ್ದು, ಅತ್ಯಂತ ಪೈಪೋಟಿಯಿಂದ ಕೂಡಿದೆ. ಮಕ್ಕಳಿಗೆ ಉನ್ನತ ಶಿಕ್ಷಣ ಕೊಡಲು ಪೋಷಕರು ಹೆಚ್ಚಿನ ಒತ್ತಡ ಹಾಕಬಾರದು. ಅವರ ಪ್ರತಿಭೆಯನ್ನು ಪ್ರೋತ್ಸಾಹಿಸಿ ಮುನ್ನೆಲೆಗೆ ತರುವ ಕೆಲಸವನ್ನು ಮಾಡಬೇಕಿದೆ ಎಂದು ಹೇಳಿದರು.

ಈಗಿನ ಸಮಾಜದಲ್ಲಿ ಶಿಕ್ಷಣ ಎಂಬುದು ಸುಲಭದ ಮಾತಲ್ಲ. ದೇವಸ್ಥಾನಕ್ಕಿಂತಲೂ ಶಿಕ್ಷಣ ಕ್ಷೇತ್ರ ಅತ್ಯಂತ ಪುಣ್ಯಕ್ಷೇತ್ರವಾಗಿದೆ. ಬದುಕನ್ನು ರೂಪಿಸಿಕೊಳ್ಳುವಲ್ಲಿ ಶಿಕ್ಷಣ ಪ್ರಮುಖ ಪಾತ್ರ ವಹಿಸುತ್ತದೆ. ಮಕ್ಕಳನ್ನು ಪರಸ್ಪರ ಅಂಕ ಅಥವಾ ಪ್ರತಿಭೆಗಳಿಂದ ಹೋಲಿಕೆ ಮಾಡುವ ಮನಸ್ಥಿತಿಯಿಂದ ಹೊರ ಬರಬೇಕು. ಅವರಿಗೆ ಇಷ್ಟವಾಗಿರುವಂತೆ ಕಲಿಕೆ ವಾತಾವರಣ ನಿರ್ಮಿಸಬೇಕಿದೆ. ಸೋಷಿಯಲ್ ಮಿಡಿಯಾ, ದೃಶ್ಯಮಾಧ್ಯಮಗಳಿಂದ ದೂರವಿಟ್ಟು ಹೆಚ್ಚು ಪುಸ್ತಕಗಳ ಓದಿನ ಕಡೆ ಗಮನಹರಿಸುವಂತೆ ಮಾಡಬೇಕು. ಇಂದಿನ ವಾತಾವರಣದಲ್ಲಿ ಪೋಷಕರ ಹೆಚ್ಚಿನ ಕಾಳಜಿ ಮಕ್ಕಳ ಮೇಲಿರಲಿ ಎಂದು ಸಲಹೆ ನೀಡಿದರು.

ಬಹುಮಾನ ವಿತರಣೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು. ಇದೇ ವೇಳೆ ಶಾಲೆಯ ಟಾಪರ್ ಆದ ಆರ್.ಹಮ್ಸಿಕ್ ವಿದ್ಯಾರ್ಥಿನಿಯನ್ನು ಸನ್ಮಾನಿಸಲಾಯಿತು. ನಟರಾಜ ಪ್ರತಿಷ್ಠಾನದ ಶ್ರೀ ಚಿದಾನಂದ ಸ್ವಾಮೀಜಿ, ಶ್ರೀ ನಟರಾಜ ಪ್ರತಿಷ್ಠಾನದ ವಿಶೇಷಾಧಿಕಾರಿ ಡಾ.ಶಿವರಾಜಪ್ಪ, ನಟರಾಜ ಪಬ್ಲಿಕ್ ಶಾಲೆಯ ಪ್ರಾಂಶುಪಾಲರಾದ ಸೌಮ್ಯ ಬಿ.ನಾಯಕ್ ಇನ್ನಿತರರು ಉಪಸ್ಥಿತರಿದ್ದರು.

ನಾಳೆ ಪತ್ರ ಬರಹಗಾರರ ಒಕ್ಕೂಟದ ಉದ್ಘಾಟನೆ

ಮೈಸೂರು,ಜ.23(ಎಂಟಿವೈ)–ಮೈಸೂರಿನ ವಿಶ್ವೇಶ್ವರನಗರದ ಖಾಸಗಿ ಸಭಾಂಗಣದಲ್ಲಿ ಜ.25ರಂದು ಬೆಳಗ್ಗೆ 11ಕ್ಕೆ ನೂತನವಾಗಿ ಅಸ್ತಿತ್ವಕ್ಕೆ ತರಲಾಗಿರುವ ಮೈಸೂರು ನಗರ ಮತ್ತು ತಾಲೂಕು ಪತ್ರಬರಹಗಾರರ ಒಕ್ಕೂಟದ ಉದ್ಘಾಟನಾ ಸಮಾರಂಭ ನಡೆಯಲಿದೆ ಎಂದು ಒಕ್ಕೂಟದ ಕಾರ್ಯದರ್ಶಿ ಕೆ.ಆರ್.ಉದಯ್‌ಕುಮಾರ್ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರು ನಗರ ಮತ್ತು ತಾಲೂಕಿನ ಪತ್ರಬರಹಗಾರರು ಸೇರಿ ಹೊಸದಾಗಿ ಒಕ್ಕೂಟವೊಂದನ್ನು ರಚಿಸಿದ್ದು, ಸದಸ್ಯರ ಕ್ಷೇಮಾಭಿವೃದ್ಧಿಗಾಗಿ ವಿವಿಧ ಕಾರ್ಯಕ್ರಮ ರೂಪಿಸಲು ನಿರ್ಧರಿಸಲಾಗಿದೆ. ಹೊಸದಾಗಿ ಸ್ಥಾಪಿಸಿರುವ ಒಕ್ಕೂಟವನ್ನು ಜಿಲ್ಲಾ ನೋಂದಣಾಧಿಕಾರಿ ವಿಜಯಲಕ್ಷ್ಮಿ ಆರ್.ಇನಾಂದಾರ್ ಉದ್ಘಾಟಿಸಲಿದ್ದಾರೆ. ಅಧ್ಯಕ್ಷತೆಯನ್ನು ಒಕ್ಕೂಟದ ಅಧ್ಯಕ್ಷ ನಿಸಾರ್ ಅಹಮದ್ ಖಾನ್ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ವಿವಿಧ ಉಪನೋಂದಣಾಧಿಕಾರಿಗಳು ಪಾಲ್ಗೊಳ್ಳಲಿದ್ದಾರೆ ಎಂದರು. ಗೋಷ್ಠಿಯಲ್ಲಿ ಮೈಸೂರು ನಗರ–ತಾಲೂಕು ಪತ್ರಬರಹಗಾರರ ಒಕ್ಕೂಟದ ಉಪಾಧ್ಯಕ್ಷ ಧನಂಜಯ, ಖಜಾಂಚಿ ನರಸಿಂಹಮೂರ್ತಿ, ನಿರ್ದೇಶಕ ನಾಗಭೂಷಣ ಆರಾಧ್ಯ ಇದ್ದರು.

ಬಾಲಿವುಡ್ ಖ್ಯಾತ ಹಾಸ್ಯನಟರು, ನೃತ್ಯ ನಿರ್ದೇಶಕನಿಗೆ ಜೀವ ಬೆದರಿಕೆ


ಮುಂಬೈ, ಜ.23– ಬಾಲಿವುಡ್‌ನ ಖ್ಯಾತ ಹಾಸ್ಯನಟರಾದ ಕಪಿಲ್ ಶರ್ಮಾ, ರಾಜ್‌ಪಾಲ್ ಯಾದವ್, ಸುಗಂಧಾ ಮಿಶ್ರಾ ಮತ್ತು ನೃತ್ಯ ನಿರ್ದೇಶಕರಾದ ರೆಮೋ ಡಿಸೋಜಾ ಅವರಿಗೆ ಇಮೇಲ್ ಮೂಲಕ ಕೊಲೆ ಬೆದರಿಕೆ ಬಂದಿದೆ ಎಂದು ವರದಿಯಾಗಿದೆ.



ವಿಷ್ಣು ಎಂಬ ವ್ಯಕ್ತಿಯಿಂದ ರಾಜ್‌ಪಾಲ್ ಯಾದವ್ ಅವರ ಇಮೇಲ್ ಖಾತೆಗೆ ಬೆದರಿಕೆ ಸಂದೇಶವನ್ನು ಕಳುಹಿಸಲಾಗಿದೆ. ಅದರಲ್ಲಿ ಕಪಿಲ್ ಶರ್ಮಾ, ಅವರ ಕುಟುಂಬ, ಅವರ ಸಹಚರರು ಮತ್ತು ರಾಜ್‌ಪಾಲ್ ಯಾದವ್ ಅವರನ್ನು ಕೊಲ್ಲಲಾಗುವುದು ಎಂದು ಬೆದರಿಕೆಯೊಡ್ಡಲಾಗಿದೆ. ಈ ಸಂಬಂಧ ದೂರು ದಾಖಲಾಗಿದೆ. don99284@gmail.com ಎಂಬ ಇಮೇಲ್ ವಿಳಾಸದಿಂದ ರಾಜ್‌ಪಾಲ್ ಯಾದವ್ ತಂಡದ ಇಮೇಲ್ ಖಾತೆ teamrajpalyadav@gmail.comಗೆ ಬೆದರಿಕೆ ಸಂದೇಶ ಬಂದಿದೆ. ಈ ಸಂಬಂಧ ಯಾದವ್ ಅವರ ಪತ್ನಿ ರಾಧಾ ರಾಜ್‌ಪಾಲ್ ಯಾದವ್ ಅವರು ಮುಂಬೈನ ಅಂಬೋಲಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಪೊಲೀಸರು ಭಾರತೀಯ ನ್ಯಾಯ ಸಂಹಿತೆ ಸೆಕ್ಷನ್ 351(3) ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡಿದ್ದು, ತನಿಖೆ ಕೈಗೊಂಡಿದ್ದಾರೆ.

ಜನಸಾಮಾನ್ಯರ ಜೇಬು ಖಾಲಿ ಖಾಲಿ; ರಾಜಕಾರಣಿ, ಉದ್ಯಮಿಗಳಲ್ಲಿ ಝಣ ಝಣ ಕಾಂಚಾಣ

ಮಾಜಿ ಸಂಸದ ಪ್ರತಾಪ್ ಸಿಂಹ ಸತ್ಯ ಸಂಗತಿ ವಿವರಣೆ



ಮೈಸೂರಿನ ಪಿರಿಯಾಪಟ್ಟಣದ ವಿದ್ಯಾವಿಕಾಸ ಕಾಲೇಜು ಆವರಣದಲ್ಲಿ ಒಕ್ಕಲಿಗ ಯುವ ಬ್ರಿಗೇಡ್ ಆಯೋಜಿಸಿದ್ದ ಶ್ರೀ ಬಾಲಗಂಗಾಧರನಾಥ ಸ್ವಾಮೀಜಿ ಅವರ ಜಯಂತ್ಯುತ್ಸವ ಹಾಗೂ ರೈತರ ಮಕ್ಕಳಿಗೆ ಉಚಿತ ಉದ್ಯೋಗ ಮೇಳ ಕಾರ್ಯಕ್ರಮವನ್ನು ಮಾಜಿ ಸಂಸದ ಪ್ರತಾಪ್ ಸಿಂಹ ಉದ್ಘಾಟಿಸಿದರು.

ಪಿರಿಯಾಪಟ್ಟಣ, ಜ.23(ಬಿಎಲ್‌ಯು)– ಜನಸಾಮಾನ್ಯರ ಜೇಬು ಖಾಲಿಯಾಗಿದೆ. ಆದರೆ ರಾಜಕಾರಣಿ ಹಾಗೂ ಲ್ಯಾಂಡ್ ಡೆವಲಪರ್ಸ್‌ಗಳ ಬಳಿ ಹಣ ಹರಿದಾಡುತ್ತಿದೆ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ಅಸಮಾಧಾನ ವ್ಯಕ್ತಪಡಿಸಿದರು.

ಪಿರಿಯಾಪಟ್ಟಣದ ವಿದ್ಯಾವಿಕಾಸ ಕಾಲೇಜು ಆವರಣದಲ್ಲಿ ಒಕ್ಕಲಿಗ ಯುವ ಬ್ರಿಗೇಡ್ ಆಯೋಜಿಸಿದ್ದ ಶ್ರೀ ಬಾಲಗಂಗಾಧರನಾಥ ಸ್ವಾಮೀಜಿ ಅವರ ಜಯಂತ್ಯುತ್ಸವ ಹಾಗೂ ರೈತರ ಮಕ್ಕಳಿಗೆ ಉಚಿತ ಉದ್ಯೋಗ ಮೇಳ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ನಾಡಿನ ಅಭಿವೃದ್ಧಿ ಹಾಗೂ ಸಮಾಜ ಕಲ್ಯಾಣ ಕಾರ್ಯಕ್ರಮಗಳಿಂದ ನಮ್ಮ ಹಿಂದಿನ ರಾಜಕಾರಣಿಗಳು ಜನರ ಮನಸ್ಸಿನಲ್ಲಿ ಉಳಿಯುತ್ತಿದ್ದರು ಎಂದರು.

ಆದರೆ ಇತ್ತೀಚಿನ ದಿನದಲ್ಲಿ ಧರ್ಮ ಮತ್ತು ಜಾತಿ ಆಧಾರದ ಮೇಲೆ ರಾಜಕಾರಣಿಗಳನ್ನು ಗುರುತಿಸುವ ಆತಂಕಕಾರಿ ಬೆಳವಣಿಗೆ ನಡೆಯುತ್ತಿದೆ. ಅನೇಕ ರಾಜಕಾರಣಿಗಳು ರಿಯಲ್ ಎಸ್ಟೇಟ್ ಉದ್ಯಮಿಗಳಾಗಿದ್ದು, ಬಡವರ ಸಂಕಷ್ಟ ಅವರಿಗೆ ತಿಳಿಯುತ್ತಿಲ್ಲ ಎಂದು ಪ್ರತಾಪ್ ಸಿಂಹ ಬೇಸರ ವ್ಯಕ್ತಪಡಿಸಿದರು.

ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ 6559 ಸಾಫ್ಟ್‌ವೇರ್ ಕಂಪನಿಗಳಿವೆ. ಆದರೆ ಮೈಸೂರಿನಲ್ಲಿ ಇವುಗಳ ಸಂಖ್ಯೆ ವಿರಳವಾಗಿದೆ. ಇದರಿಂದ ಮೈಸೂರಿನ ಯುವ ಜನತೆ ಉದ್ಯೋಗಕ್ಕಾಗಿ ಬೆಂಗಳೂರಿಗೆ ಹೋಗಬೇಕಾದ ಪರಿಸ್ಥಿತಿ ಇದೆ. ಈ ಹಿನ್ನೆಲೆ ಮೈಸೂರಿನಲ್ಲಿ ಹೊಸ ಸಾಫ್ಟ್‌ವೇರ್ ಕಂಪನಿಗಳು ಆರಂಭವಾಗಬೇಕು. ಈ ಮೂಲಕ ಮೈಸೂರಿನ ಜನರಿಗೆ ಉದ್ಯೋಗವಕಾಶ ದೊರೆಯಬೇಕು ಎಂದು ಅಭಿಪ್ರಾಯಪಟ್ಟರು.

ಮೈಸೂರು ಬೆಂಗಳೂರು ಎಕ್ಸ್‌ಪ್ರೆಸ್ ಹೈವೆ ನಿರ್ಮಾಣವಾಗಿದೆ. ಬೆಂಗಳೂರು ಕೊಡಗನ್ನು ಸಂಪರ್ಕಿಸುವ ಶ್ರೀರಂಗಪಟ್ಟಣದಿಂದ ಗುಡ್ಡೆ ಹೊಸೂರು ತನಕ 4126 ಕೋಟಿ ವೆಚ್ಚದ ಹೆದ್ದಾರಿ ನಿರ್ಮಾಣ ಆರಂಭವಾಗಿದೆ. ಇದು ಇನ್ನು 20 ತಿಂಗಳಲ್ಲಿ ಮುಗಿಯಲಿದೆ ಎಂದು ಪ್ರತಾಪ್ ಸಿಂಹ ವಿಶ್ವಾಸ ವ್ಯಕ್ತಪಡಿಸಿದರು.

ಅಧಿಕಾರದಲ್ಲಿ ಇದ್ದಾಗ ಅಧಿಕಾರ ಬಲದಿಂದ ಕೆಲಸ ಮಾಡಿದ್ದೇನೆ, ಅಧಿಕಾರ ಇಲ್ಲದಿರುವ ಈ ಸಂದರ್ಭದಲ್ಲಿ ಹೋರಾಟದ ಬಲದಿಂದ ಕೆಲಸ ಮಾಡುತ್ತೇನೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾತನಾಡಿದ ಬೆಂಗಳೂರಿನ ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಉತ್ತರಾಧಿಕಾರಿ ಡಾ.ನಿಶ್ಚಲಾನಂದನಾಥ ಸ್ವಾಮಿ, ಭಾರತದಲ್ಲಿ ಆರ್ಥಿಕವಾಗಿ ಸ್ಥಿತಿವಂತರ ಸಂಖ್ಯೆ ಶೇಕಡ 15 ರಷ್ಟಿದ್ದರೆ, ಬಡತನದಲ್ಲಿರುವರ ಸಂಖ್ಯೆ ಶೇಕಡ 85ರಷ್ಟಿದೆ. ರೈತರು ಹಾಗೂ ಗ್ರಾಮೀಣ ಪ್ರದೇಶದ ಜನರಿಗೆ ಆರ್ಥಿಕ ಸದೃಢತೆ ನೀಡಿದಾಗ ದೇಶದ ಬೆಳವಣಿಗೆ ಹೆಚ್ಚಾಗುತ್ತದೆ ಎಂದರು.

ಇಸ್ಕಾನ್ ಸಂಸ್ಥೆ ಉಪಾಧ್ಯಕ್ಷ ಕಾರುಣ್ಯ ಸಾಗರ್ ಪ್ರಭು ಮಾತನಾಡಿ, ವ್ಯವಸಾಯ ರಾಷ್ಟ್ರದ ಬೆನ್ನೆಲುಬಾಗಿದ್ದು, ಆಹಾರ ಪದಾರ್ಥಗಳನ್ನು ಯಥೇಚ್ಛವಾಗಿ ಉತ್ಪಾದಿಸಿದರೆ ನಾಡು ಸಮೃದ್ಧವಾಗುತ್ತದೆ ಎಂದು ಹೇಳಿದರು.

ಚಲನಚಿತ್ರ ನಿರ್ದೇಶಕಿ ಡಿ.ಸುಮನ್ ಕಿತ್ತೂರು ಮಾತನಾಡಿ, ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಸದೃಢರಾಗಿರುತ್ತಾರೆ. ಅವರಿಗೆ ಉತ್ತಮ ಉದ್ಯೋಗದ ಅವಕಾಶ ದೊರೆತರೆ ಜೀವನದಲ್ಲಿ ಯಶಸ್ಸು ಸಾಧಿಸಲಿದ್ದಾರೆ ಎಂದು ತಿಳಿಸಿದರು.

ಪ್ರಾಸ್ತಾವಿಕ ನುಡಿಗಳನ್ನಾಡಿದ ಒಕ್ಕಲಿಗ ಯುವ ಬ್ರಿಗೇಡ್ ಸಂಸ್ಥಾಪಕ ಅಧ್ಯಕ್ಷ ನಂಜೇಗೌಡ, ಬೆಂಗಳೂರು, ಮೈಸೂರು, ತುಮಕೂರು ಸೇರಿದಂತೆ ಇತರೆಡೆ ನಡೆದ ಉದ್ಯೋಗ ಮೇಳದಲ್ಲಿ 2500 ಜನರಿಗೆ ಉದ್ಯೋಗ ದೊರೆತಿದೆ. ಇಲ್ಲಿ ನಡೆಯುತ್ತಿರುವ ಉದ್ಯೋಗ ಮೇಳದಲ್ಲಿ 38 ಕಂಪನಿಗಳು ಭಾಗವಹಿಸಿದ್ದು, ಅರ್ಹರಿಗೆ ಉದ್ಯೋಗ ದೊರೆಯಲಿದೆ ಎಂದರು.

ವಿದ್ಯಾವಿಕಾಸ ಶಿಕ್ಷಣ ಸಂಸ್ಥೆ ಅಧ್ಯಕ್ಷ ಹೆಚ್.ಸಿ.ಬಸವರಾಜ್, ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಬಿ.ಆರ್.ಸತ್ಯನಾರಾಯಣ, ತಂಬಾಕು ಮಂಡಳಿ ಸದಸ್ಯ ಜಿ.ಸಿ.ವಿಕ್ರಂರಾಜ್ ಕಾರ್ಯಕ್ರಮದಲ್ಲಿದ್ದರು.

ಚಲನಚಿತ್ರ ರಾಜ್ಯ ಪ್ರಶಸ್ತಿ ನಿರಾಕರಿಸಿದ ನಟ ಕಿಚ್ಚ ಸುದೀಪ್

ಬೆಂಗಳೂರು,ಜ.23–2019ನೇ ಸಾಲಿನ ರಾಜ್ಯ ವಾರ್ಷಿಕ ಚಲನಚಿತ್ರ ಪ್ರಶಸ್ತಿಯನ್ನು ನಿರಾಕರಿಸಿರುವ ಸುದೀಪ್ ಈ ಕುರಿತು ಸುದೀರ್ಘವಾಗಿ ಸೋಶಿಯಲ್ ಮೀಡಿಯಾದಲ್ಲಿ ಬರೆದುಕೊಂಡಿದ್ದಾರೆ.

ಅತ್ಯುತ್ತಮ ನಟ ವಿಭಾಗದಲ್ಲಿ ರಾಜ್ಯ ಪ್ರಶಸ್ತಿಯನ್ನು ಪಡೆದಿರುವುದು ನಿಜಕ್ಕೂ ಒಂದು ಸೌಭಾಗ್ಯ. ಈ ಗೌರವಕ್ಕಾಗಿ ಗೌರವಾನ್ವಿತ ತೀರ್ಪುಗಾರರಿಗೆ ನನ್ನ ಹೃತ್ಪೂರ್ವಕ ಧನ್ಯವಾದಗಳು. ಪ್ರಶಸ್ತಿಗಳನ್ನು ನಾನು ಎಂದೂ ನಿರೀಕ್ಷಿಸಲ್ಲ. ಹಲವು ವರ್ಷಗಳಿಂದ ನಾನು ಪ್ರಶಸ್ತಿ ಸ್ವೀಕರಿಸುವುದನ್ನು ನಿಲ್ಲಿಸಿದ್ದೇನೆ. ವೈಯಕ್ತಿಕ ಕಾರಣಗಳಿಗಾಗಿ ನಾನು ಈ ಪ್ರಶಸ್ತಿಯನ್ನು ನಿರಾಕರಿಸುತ್ತಿದ್ದೇನೆ. ಅನೇಕ ಅರ್ಹ ನಟರು ಸಿನಿಮಾಗಾಗಿ ಕಷ್ಟಪಟ್ಟಿದ್ದಾರೆ.



ಅವರಲ್ಲಿ ಒಬ್ಬರು ಈ ಪ್ರಶಸ್ತಿ ಸ್ವೀಕರಿಸುವುದನ್ನು ನೋಡಲು ಖುಷಿ ಕೊಡುತ್ತದೆ. ನನ್ನ ಗುರಿ ಜನರನ್ನು ರಂಜಿಸುವುದು. ಅದು ಯಾವಾಗಲೂ ಪ್ರಶಸ್ತಿಗಳ ನಿರೀಕ್ಷೆಯಿಲ್ಲದೆಯೇ ಇರುತ್ತದೆ ಎಂದು ಸುದೀಪ್ ಸೋಶಿಯಲ್ ಮೀಡಿಯಾದಲ್ಲಿ ಬರೆದುಕೊಂಡಿದ್ದಾರೆ.

ನನ್ನನ್ನು ರಾಜ್ಯ ಪ್ರಶಸ್ತಿಗಾಗಿ ಆಯ್ಕೆ ಮಾಡಿದ್ದಕ್ಕಾಗಿ ನಾನು ಪ್ರತಿಯೊಬ್ಬ ಜ್ಯೂರಿ ಸದಸ್ಯರಿಗೆ ಕೃತಜ್ಞನಾಗಿದ್ದೇನೆ. ನನ್ನ ಕಲೆಯನ್ನು ನೀವು ಗುರುತಿಸಿರುವುದು ನನ್ನ ಕೆಲಸಕ್ಕೆ ಸಿಕ್ಕಿರುವ ತಕ್ಕ ಪ್ರತಿಫಲ. ನನ್ನ ನಿರ್ಧಾರವು ಬೇಸರವುಂಟು ಮಾಡಬಹುದು. ತೀರ್ಪುಗಾರರಿಗೆ ಮತ್ತು ರಾಜ್ಯ ಸರ್ಕಾರಕ್ಕೆ ನಾನು ಪ್ರಾಮಾಣಿಕವಾಗಿ ಕ್ಷಮೆಯಾಚಿಸುತ್ತೇನೆ. ನೀವು ನನ್ನ ಆಯ್ಕೆಯನ್ನು ಗೌರವಿಸುತ್ತೀರಿ ಹಾಗೂ ನನ್ನ ಆಯ್ಕೆ ಮಾಡಿದ ಹಾದಿಯಲ್ಲಿ ನನ್ನನ್ನು ಬೆಂಬಲಿಸುತ್ತೀರಿ ಎಂದು ನಾನು ನಂಬುತ್ತೇನೆ. ಮತ್ತೊಮ್ಮೆ ನನ್ನ ಕೆಲಸವನ್ನು ಗುರುತಿಸಿ ಈ ಪ್ರಶಸ್ತಿಗೆ ಪರಿಗಣಿಸಿದ್ದಕ್ಕಾಗಿ ತೀರ್ಪುಗಾರರ ಸಮಿತಿಯ ಗೌರವಾನ್ವಿತ ಸದಸ್ಯರಿಗೆ ಮತ್ತು ರಾಜ್ಯ ಸರ್ಕಾರಕ್ಕೆ ನಾನು ಧನ್ಯವಾದಗಳನ್ನು ಅರ್ಪಿಸುತ್ತೇನೆ ಎಂದು ನಟ ಬರೆದುಕೊಂಡಿದ್ದಾರೆ.

ಸನ್ಮಾನ



ಶ್ರೀ ರಾಮಾನುಜ ಸಹಕಾರ ಸಂಘದಲ್ಲಿ ನಡೆದ ವಿಶೇಷ ಸಭೆಯಲ್ಲಿ ನೂತನ ಅಧ್ಯಕ್ಷ ಎಚ್.ಕೆ.ರಾಜಗೋಪಾಲ್, ಉಪಾಧ್ಯಕ್ಷ ಹೆಚ್.ವಿ.ಎಲ್.ಎನ್ ಆಚಾರ್ ಅವರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ನಿರ್ದೇಶಕರಾದ ಶ್ರೀನಿವಾಸ್ ಪ್ರಸಾದ್, ಪುಟ್ಟಸ್ವಾಮಿ, ರಾಮಸ್ವಾಮಿ ಅಯ್ಯಂಗಾರ್, ಟಿ.ಎಸ್. ಅರುಣ್, ಚಕ್ರಪಾಣಿ, ಅನಂತ್ ಕೃಷ್ಣ, ಕೇಶವ ಅನುರಾಧ, ಕಾರ್ಯದರ್ಶಿ ಮಹಾಲಕ್ಷ್ಮಿ ಉಪಸ್ಥಿತರಿದ್ದರು.

ರಾಷ್ಟ್ರೀಯ ರಸ್ತೆ ಸುರಕ್ಷತೆ ಸಪ್ತಾಹ; ರಸ್ತೆ ಸುರಕ್ಷತೆ ಬಗ್ಗೆ ಅರಿವು



ಮೈಸೂರಿನ ನರಸಿಂಹರಾಜ ಸಂಚಾರ ಪೊಲೀಸ್ ಠಾಣೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ರಾಷ್ಟ್ರೀಯ ರಸ್ತೆ ಸುರಕ್ಷತೆ ಸಪ್ತಾಹದ ಅಂಗವಾಗಿ ಮೈಸೂರು ಮಹಾನಗರಪಾಲಿಕೆ ಸಿಬ್ಬಂದಿಗಳಿಗೆ ರಸ್ತೆ ಸುರಕ್ಷತೆ ಬಗ್ಗೆ ಅರಿವು ಮೂಡಿಸಿದರು.

ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣ

ಮುಂದಿನ ವಿಚಾರಣೆ ವೇಳೆ ತನಿಖಾ ವರದಿ ಸಲ್ಲಿಸಲು ಕೋರ್ಟ್ ಸೂಚನೆ



ಬೆಂಗಳೂರು, ಜ.23– ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿನ ಹಣ ದುರ್ಬಳಕೆ ಆರೋಪಕ್ಕೆ ಸಂಬಂಧಿಸಿದಂತೆ ಸಿಬಿಐ ಸಂಪೂರ್ಣ ಸ್ಥಿತಿಗತಿ ವರದಿ ಸಲ್ಲಿಸಿದಲ್ಲಿ ಎಲ್ಲ ಅಂಶಗಳು ಬೆಳಕಿಗೆ ಬರಲಿವೆ ಎಂದು ಮೌಖಿಕವಾಗಿ ತಿಳಿಸಿರುವ ಹೈಕೋರ್ಟ್ ನ್ಯಾಯಪೀಠ, ಮುಂದಿನ ವಿಚಾರಣೆ ವೇಳೆ ತನಿಖಾ ವರದಿ ಸಲ್ಲಿಸುವಂತೆ ಸೂಚನೆ ನೀಡಿದೆ.

ವಾಲ್ಮೀಕಿ ನಿಗಮದ ಹಣ ದುರ್ಬಳಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾದ ಕೆಲವು ಅಧಿಕಾರಿಗಳ ವಿರುದ್ಧ ಕೇಂದ್ರೀಯ ತನಿಖಾ ದಳವು(ಸಿಬಿಐ) ದಾಖಲಿಸಿರುವ ಎಫ್‌ಐಆರ್ ಕುರಿತಂತೆ ತನಿಖೆ ನಡೆಸಿ, ಸಕ್ಷಮ ನ್ಯಾಯಾಲಯಕ್ಕೆ ಅಂತಿಮ ವರದಿ ಸಲ್ಲಿಸಲು ಆದೇಶಿಸುವಂತೆ ಕೋರಿ ಬಿಜೆಪಿ ಶಾಸಕರಾದ ಬಸನಗೌಡ ಪಾಟೀಲ್ ಯತ್ನಾಳ್, ರಮೇಶ್ ಜಾರಕಿಹೊಳಿ ಹಾಗೂ ಮಾಜಿ ಶಾಸಕರಾದ ಅರವಿಂದ್ ಲಿಂಬಾವಳಿ ಮತ್ತು ಕುಮಾರ ಬಂಗಾರಪ್ಪ ಅರ್ಜಿ ಸಲ್ಲಿಸಿದ್ದರು. ಈ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರ ಏಕಸದಸ್ಯ ಪೀಠ ಈ ಸೂಚನೆ ನೀಡಿ ವಿಚಾರಣೆಯನ್ನು ಮುಂದೂಡಿತು.

ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ವಾಲ್ಮೀಕಿ ನಿಗಮದ ಹಗರಣ ಸಂಬಂಧ ಜಾರಿ ನಿರ್ದೇಶನಾಲಯ ವರದಿ ಸಲ್ಲಿಸಿದ್ದು, ಅಕ್ರಮ ಹಣವನ್ನು ಬಳ್ಳಾರಿ ಲೋಕಸಭಾ ಚುನಾವಣೆಗೆ ಬಳಕೆ ಮಾಡಲಾಗಿದೆ ಎಂದು ಹೇಳಲಾಗಿದೆ. ಸುಮಾರು 20 ಕೋಟಿ ರೂ.ಗಳು ಬಳ್ಳಾರಿ ಲೋಕಸಭಾ ಚುನಾವಣೆಗೆ ಬಳಕೆ ಮಾಡಲಾಗಿದೆ. ಅಂದಿನ ಹಣಕಾಸು ಇಲಾಖೆ ಮತ್ತು ಹಣಕಾಸು ಸಚಿವರ ಸಹಮತಿ ಇಲ್ಲದೇ ಇಂಥ ಹಗರಣ ನಡೆಯುವುದಕ್ಕೆ ಅವಕಾಶವಿಲ್ಲ ಎಂದು ಪೀಠಕ್ಕೆ ತಿಳಿಸಿದರು.

ಅಲ್ಲದೇ, ಭ್ರಷ್ಟಾಚಾರ ನಿಯಂತ್ರಣಾ ಕಾಯಿದೆ ಅಡಿ ಸಿಬಿಐ ಎಲ್ಲವನ್ನೂ ತನಿಖೆ ನಡೆಸಲು ಸ್ವತಂತ್ರವಾಗಿದೆ ಎಂದು ಇದೇ ಪೀಠ ಆದೇಶಿಸಿದೆ ಎಂದರು.

ಸಿಬಿಐ ಪ್ರತಿನಿಧಿಸಿದ್ದ ವಿಶೇಷ ಸರ್ಕಾರಿ ಅಭಿಯೋಜಕ ಪಿ ಪ್ರಸನ್ನಕುಮಾರ್, ಜ.15 ರವರೆಗೂ ನಡೆದಿರುವ ತನಿಖೆಯ ಸ್ಥಿತಿಗತಿ ವರದಿ ಸಲ್ಲಿಸಿದ್ದೇವೆ. ರಾಜ್ಯ ಸರ್ಕಾರವು ನೇಮಿಸಿದ್ದ ವಿಶೇಷ ತನಿಖಾ ದಳ (ಎಸ್‌ಐಟಿ)ಕ್ಕೆ ಗೊತ್ತಾಗದ ಹಲವು ಬ್ಯಾಂಕ್ ಖಾತೆಗಳನ್ನು ಪತ್ತೆ ಮಾಡ ಲಾಗಿದೆ ಎಂದು ವಿವರಿಸಿದರು. ಇದಕ್ಕೆ ಪೀಠ, ಮುಚ್ಚಿದ ಲಕೋಟೆಯಲ್ಲಿ ಸಿಬಿಐ ಸಲ್ಲಿಸಿದ್ದ ತನಿಖಾ ವರದಿಯನ್ನು ಪರಿಶೀಲಿಸಿತು. ಆನಂತರ ಪ್ರಕರಣದ ಮೇಲೆ ನ್ಯಾಯಾಲಯ ನಿಗಾ ಇರಿಸಿದೆ. ಸಂಪೂರ್ಣ ಸ್ಥಿತಿಗತಿ ವರದಿ ಬರಲಿ, ಎಲ್ಲವೂ ಬೆಳಕಿಗೆ ಬರಲಿದೆ ಎಂದು ತಿಳಿಸಿ ವಿಚಾರಣೆ ಮುಂದೂಡಿತು.

ವಿದ್ಯಾವರ್ಧಕ ಇಂಜಿನಿಯರಿಂಗ್ ಕಾಲೇಜಲ್ಲಿ 'ಎನ್ವೆಂಚರ್ ಆಟೋಡೆಸ್ಕ್ ಸೆಂಟರ್ ಆಫ್ ಎಕ್ಸಲೆನ್ಸ್' ಜ.27ಕ್ಕೆ ಉದ್ಘಾಟನೆ

ಮೈಸೂರು,ಜ.23(ಎಂಟಿವೈ)– ಮೈಸೂರಿನ ವಿದ್ಯಾವರ್ಧಕ ಕಾಲೇಜ್ ಆಫ್ ಇಂಜಿನಿಯರಿಂಗ್ (ವಿವಿಸಿಇ) ಆವರಣದಲ್ಲಿ ಸ್ಥಾಪಿಸಲಾಗಿರುವ 'ಎನ್ವೆಂಚರ್ ಆಟೋಡೆಸ್ಕ್ ಸೆಂಟರ್ ಆಫ್ ಎಕ್ಸಲೆನ್ಸ್' ಅನ್ನು ಜ.27ರಂದು ಬೆಳಗ್ಗೆ 9 ಗಂಟೆಗೆ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಉದ್ಘಾಟಿಸಲಿದ್ದಾರೆ ಎಂದು ಎನ್ವೆಂಚರ್ ಇಂಜಿನಿಯರಿಂಗ್‌ನ ಸಿಇಒ ಮತ್ತು ಅಧ್ಯಕ್ಷ ಅನಿಲ್ ಶಿಮಾಸ್ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರದ ಬೆಂಗಳೂರು ಬಿಯಾಂಡ್ ಯೋಜನೆಯನ್ನು ಎರಡನೇ ಹಂತದ ನಗರಗಳಿಗೆ ವಿಸ್ತರಣೆ ಮಾಡುವ ಮೊದಲ ಹೆಜ್ಜೆಯಾಗಿ ನಗರದ ವಿವಿಸಿಇ ಕಾಲೇಜು ಆವರಣದಲ್ಲಿ 'ಎನ್ವೆಂಚರ್ ಆಟೋಡೆಸ್ಕ್ ಸೆಂಟರ್ ಆಫ್ ಎಕ್ಸಲೆನ್ಸ್' ಸ್ಥಾಪಿಸಲಾಗಿದೆ. ಈ ಸೌಲಭ್ಯವು ಬಹುಮಹಡಿ ಕಟ್ಟಡಗಳು, ಕ್ರೀಡಾಂಗಣಗಳು, ಹೋಟೆಲ್‌ಗಳು ಮತ್ತು ಆಸ್ಪತ್ರೆಗಳನ್ನು ಒಳಗೊಂಡಿದ್ದು, ಅಮೆರಿಕಾದ ಗ್ರಾಹಕರನ್ನು ಕೇಂದ್ರೀಕರಿಸಿ ವಿನ್ಯಾಸಗೊಳಿಸಲಾಗಿದೆ. ಅಲ್ಲದೆ, ಇದು ಮೈಸೂರಿನಲ್ಲಿ ಸ್ಥಳೀಯ ಉದ್ಯೋಗಾವಕಾಶಗಳನ್ನು ಸೃಷ್ಟಿಸುತ್ತದೆ ಎಂದರು.

1997ರಲ್ಲಿ ಸ್ಥಾಪನೆಯಾದ ಎನ್ವೆಂಚರ್ ಯುಎಸ್‌ಎ, ಕೆನಡಾ ಮತ್ತು ಯುರೋಪ್ ದೇಶಗಳಲ್ಲಿ ಕಾರ್ಯಾಚರಣೆ ನಡೆಸುತ್ತಿದೆ. ತಂತ್ರಜ್ಞಾನ ಕ್ಷೇತ್ರದಲ್ಲಿ ಕೆಲಸ ಒದಗಿಸಲಾಗುತ್ತಿದೆ. ಕಾಲೇಜಿನ ಸಹಯೋಗದೊಂದಿಗೆ ಸ್ಥಾಪಿಸಲಾದ ಈ ಕೇಂದ್ರದ ಹೊಸ ಸೌಲಭ್ಯವು ವಿದ್ಯಾರ್ಥಿಗಳು ಮತ್ತು ಅಧ್ಯಾಪಕರಿಗೆ ಸುಧಾರಿತ ಉಪಕರಣಗಳು ಮತ್ತು ತಂತ್ರಜ್ಞಾನಗಳ ಕುರಿತು ವಿಶೇಷ ತರಬೇತಿಯನ್ನು ನೀಡುತ್ತದೆ. ಇದು ಸಿವಿಲ್, ಎಲೆಕ್ಟ್ರಿಕಲ್ ಮತ್ತು ಮೆಕ್ಯಾನಿಕಲ್ ಎಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ವೃತ್ತಿ ಅವಕಾಶಗಳನ್ನು ಸೃಷ್ಟಿಸುವ ಗುರಿ ಹೊಂದಿದೆ, ಸ್ಥಳೀಯ ಪ್ರತಿಭೆಗಳನ್ನು ಮತ್ತಷ್ಟು ಪೋಷಿಸಲು ಮತ್ತು ಸ್ಥಳೀಯ ಆರ್ಥಿಕತೆಯನ್ನು ಬಲಪಡಿಸಲು ಸಹಕಾರಿಯಾಗಿದೆ ಎಂದರು.

ಇದೇ ವೇಳೆ ಈ ಒಡಂಬಡಿಕೆ ಕುರಿತು ಕಾಲೇಜಿನ ಪ್ರಾಂಶುಪಾಲ ಸದಾಶಿವೇಗೌಡ ಮಾತನಾಡಿ, ಕಳೆದ ವರ್ಷ ಎನ್ವೆಂಚರ್ ನೊಂದಿಗೆ ಒಡಂಬಡಿಕೆ ಮಾಡಿಕೊಂಡಿದ್ದು, ಇದರ ಭಾಗವಾಗಿ 7ನೇ ಸೆಮಿಸ್ಟರ್‌ನಲ್ಲಿ ಓದುತ್ತಿರುವ ಸಿವಿಲ್, ಎಲೆಕ್ಟ್ರಿಕಲ್ ಮತ್ತು ಮೆಕ್ಯಾನಿಕಲ್ ಎಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ತರಬೇತಿ ಜೊತೆ ಸಂಬಳ ನೀಡಲಾಗುತ್ತದೆ. ಪ್ರತಿ ವರ್ಷ ಸುಮಾರು 30ರಿಂದ 35 ವಿದ್ಯಾರ್ಥಿಗಳಿಗೆ ಉತ್ತಮ ಸಂಬಳದೊಂದಿಗೆ ಪೂರ್ಣಾವಧಿ ಕೆಲಸಕ್ಕೆ ನೇಮಕ ಮಾಡಿಕೊಳ್ಳಲಾಗುತ್ತದೆ. ಇದಕ್ಕೆ ವಿದ್ಯಾರ್ಥಿಗಳು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ, ಮುಂಬರುವ ವರ್ಷಗಳಲ್ಲಿ ನೂರಾರು ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಅಗತ್ಯ ಮೂಲಸೌಕರ್ಯವನ್ನು ಒದಗಿಸಿದ್ದೇವೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಎನ್ವೆಂಚರ್ ಎಂಜಿನಿಯರಿಂಗ್‌ನ ನಿರ್ವಹಣಾ ವ್ಯವಸ್ಥಾಪಕ ವಿ.ಮುರಳಿ ಉಪಸ್ಥಿತರಿದ್ದರು.

ದೇಶ - ವಿದೇಶ

ಲಾಸ್ ಏಂಜಲೀಸ್‌ನಲ್ಲಿ ಕಾಡ್ಗಿಚ್ಚು: 50,000ಕ್ಕೂ ಹೆಚ್ಚು ಜನರ ಸ್ಥಳಾಂತರಕ್ಕೆ ಆದೇಶ

ಕ್ಯಾಲಿಫೋರ್ನಿಯಾ: ಲಾಸ್ ಏಂಜಲೀಸ್‌ನ ಉತ್ತರಕ್ಕೆ ಕಡಿದಾದ ಪರ್ವತಗಳಲ್ಲಿ ಬೃಹತ್ ಮತ್ತು ವೇಗವಾಗಿ ಕಾಡ್ಗಿಚ್ಚು ವ್ಯಾಪಿಸಿದ್ದು, 50,000ಕ್ಕೂ ಹೆಚ್ಚು ಜನರನ್ನು ಸ್ಥಳಾಂತರಿಸಲು ಆದೇಶಿಸಲಾಗಿದೆ.



ಹ್ಯೂಸ್ ಬೆಂಕಿಯು ಬೆಳಗಿನ ಜಾವದಲ್ಲಿ ಆವರಿಸಿದ್ದು ಆರು ಗಂಟೆಗಳಲ್ಲಿ ಸುಮಾರು 15 ಚದರ ಮೈಲುಗಳಲ್ಲಿ (39 ಚದರ ಕಿಲೋಮೀಟರ್) ಮರಗಳು ಮತ್ತು ಪೊದೆಗಳನ್ನು ಸುಟ್ಟುಹಾಕಿದೆ, ಈಟನ್ ಮತ್ತು ಪಾಲಿಸೇಡ್ಸ್ ಬೆಂಕಿಯಿಂದ ಸುಮಾರು 40 ಮೈಲುಗಳು (64 ಕಿಲೋಮೀಟರ್) ದೂರದಲ್ಲಿರುವ ಜನಪ್ರಿಯ ಮನರಂಜನಾ ಪ್ರದೇಶವಾಗಿದೆ.

ಈ ಪ್ರದೇಶವು ತೀವ್ರ ಎಚ್ಚರಿಕೆ ಎದುರಿಸುತ್ತಿದ್ದು, ಬೆಂಕಿ ಹೊತ್ತಿಕೊಂಡಾಗ ಗಾಳಿಯು ವೇಗವಾಗಿರಲಿಲ್ಲ, ಇದು ಅಗ್ನಿಶಾಮಕ ವಿಮಾನಗಳು ಹತ್ತಾರು ಸಾವಿರ ಗ್ಯಾಲನ್‌ಗಳಷ್ಟು ಅಗ್ನಿಶಾಮಕ ನಿರೋಧಕವನ್ನು ಸುರಿಯಲು ಅವಕಾಶ ಮಾಡಿಕೊಟ್ಟಿತು. ಇಂದು ನಾವು ಇರುವ ಪರಿಸ್ಥಿತಿಯು 16 ದಿನಗಳ ಹಿಂದೆ ನಾವು ಇದ್ದ ಪರಿಸ್ಥಿತಿಗಿಂತ ಬಹಳ ಭಿನ್ನವಾಗಿದೆ ಎಂದು ಲಾಸ್ ಏಂಜಲೀಸ್ ಕೌಂಟಿ ಅಗ್ನಿಶಾಮಕ ಮುಖ್ಯಸ್ಥ ಆಂಥೋನಿ ಮರ್ರೋನ್ ಹೇಳಿದ್ದಾರೆ.

ಮಂಗಳೂರಿನ ಮಸಾಜ್ ಸೆಂಟರ್ ಮೇಲೆ ರಾಮಸೇನೆ ಕಾರ್ಯಕರ್ತರ ದಾಳಿ

ಮಂಗಳೂರು: ಮಂಗಳೂರಿನ ಕೆಎಸ್‌ಆರ್‌ಟಿಸಿ ಬಳಿಯ ಮಸಾಜ್ ಸೆಂಟರ್ ಮೇಲೆ ರಾಮಸೇನೆ ಕಾರ್ಯಕರ್ತರು ಗುರುವಾರ ದಾಳಿ ನಡೆಸಿದ್ದು, ವೇಶ್ಯಾವಾಟಿಕೆ ದಂಧೆ ನಡೆಸುತ್ತಿರುವುದಾಗಿ ಆರೋಪಿಸಿದ್ದಾರೆ.



ಕಲರ್ಸ್ ಹೆಸರಿನ ಮಸಾಜ್ ಸೆಂಟರ್ ಮೇಲೆ ರಾಮಸೇನೆ ಸಂಸ್ಥಾಪಕ ಪ್ರಸಾದ್ ಅತ್ತಾವರ ನೇತೃತ್ವದಲ್ಲಿ ಕಾರ್ಯಕರ್ತರು ದಾಳಿ ನಡೆಸಿದ್ದಾರೆ. ರಾಮಸೇನೆ ಕಾರ್ಯಕರ್ತರು ಮಸಾಜ್ ಸೆಂಟರ್‌ನ ಗಾಜುಗಳನ್ನು ಪುಡಿಗೈದು, ಪೀಠೋಪಕರಣ ಮತ್ತು ಕಂಪ್ಯೂಟರ್‌ಗಳನ್ನು ಧ್ವಂಸಗೊಳಿಸಿದ್ದು, ಅಲ್ಲಿದ್ದ ಕೆಲವು ಹುಡುಗಿಯರ ಮೂಲಕ ನೀವು ವೇಶ್ಯಾವಾಟಿಕೆ ದಂಧೆ ನಡೆಸುತ್ತಿದ್ದೀರಿ ಎಂದು ಆವಾಜ್ ಹಾಕಿದ್ದಾರೆ. ಈ ವೇಳೆ ಹುಡುಗಿಯರು ಕೈಮುಗಿದು ನಮ್ಮ ಮೇಲೆ ಹಲ್ಲೆ ಮಾಡಬೇಡಿ ಎಂದು ಬೇಡಿಕೊಳ್ಳುವ ವಿಡಿಯೋ ವೈರಲ್ ಆಗಿದೆ. ರಾಮಸೇನೆ ಕಾರ್ಯಕರ್ತರೇ ತಾವು ದಾಳಿ ನಡೆಸಿದ ಕೃತ್ಯವನ್ನು ವಿಡಿಯೋ ಮಾಡಿ, ಬಿಡುಗಡೆ ಮಾಡಿದ್ದಾರೆ. ಅಲ್ಲದೆ, ಮಂಗಳೂರು ನಗರದಾದ್ಯಂತ ಇರುವ ಮಸಾಜ್ ಸೆಂಟರ್‌ಗಳನ್ನು ಮುಚ್ಚುವಂತೆ ಆಗ್ರಹಿಸಿದ್ದಾರೆ. ಈ ಸಂಬಂಧ 14ಕ್ಕೂ ಹೆಚ್ಚು ರಾಮಸೇನಾ ಕಾರ್ಯಕರ್ತರನ್ನು ಬಂಧಿಸಿದ್ದಾರೆ.

ಅಮೆರಿಕದಲ್ಲಿ ಸೌದಿ ಅರೇಬಿಯಾ ಬಂಡವಾಳ ಹೂಡಿಕೆ ಮಾತುಕತೆ

ಸೌದಿ ಅರೇಬಿಯಾ: ಮುಂದಿನ ನಾಲ್ಕು ವರ್ಷದಲ್ಲಿ ಅಮೆರಿಕದ ಜೊತೆಗೆ ಬಂಡವಾಳ ಹೂಡಿಕೆ ವಿಸ್ತರಣೆ ಹಾಗೂ ವ್ಯವಹಾರ ವೃದ್ಧಿಸಲು ಸೌದಿ ಅರೇಬಿಯಾವು 600 ಬಿಲಿಯನ್ ಬಂಡವಾಳ ಹೂಡಿಕೆ ಮಾಡಲಿದೆ ಎಂದು ಸೌದಿ ಅರೇಬಿಯಾ ರಾಜ ಮಹಮ್ಮದ್ ಬಿನ್ ಸಲ್ಮಾನ್ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಜೊತೆಗೆ ಮಾತುಕತೆ ನಡೆಸಿದ್ದಾರೆಂದು ಸೌದಿಯ ನ್ಯೂಸ್ ಏಜೆನ್ಸಿ ಗುರುವಾರ ಮುಂಜಾನೆ ಪ್ರಕಟ ಮಾಡಿದೆ.



ಇಬ್ಬರು ನಾಯಕರ ನಡುವಿನ ದೂರವಾಣಿ ಕರೆಯಲ್ಲಿ, ಸೌದಿ ದೊರೆ ಟ್ರಂಪ್ ಆಡಳಿತದ ಅವಧಿಯಲ್ಲಿ ನಿರೀಕ್ಷಿತ ಸುಧಾರಣೆಗಳು, ಅಭೂತಪೂರ್ವ ಆರ್ಥಿಕ ಸಮೃದ್ಧಿಯನ್ನು ರಚಿಸಬಹುದು ಎಂದು ಹೇಳಿದ್ದಾರೆ ಎಂಬುದಾಗಿ ರಾಜ್ಯ ಸುದ್ದಿ ಸಂಸ್ಥೆ ವರದಿ ಮಾಡಿದೆ.


ಸೌದಿ ಅರೇಬಿಯಾ ತನ್ನ ಬೃಹತ್ ಮೊತ್ತದ ಹೂಡಿಕೆ ಮೂಲಕ ಸದ್ಯದ ಪರಿಸ್ಥಿತಿಗಳ ಲಾಭ ಪಡೆಯಲು ಬಯಸುತ್ತದೆ ಎಂದು ವರದಿ ಹೇಳಿದೆ. ಇದು 600 ಬಿಲಿಯನ್ ಬಂಡವಾಳದ ಮೂಲವನ್ನು ವಿವರಿಸಿಲ್ಲ. ಅಲ್ಲದೆ ಈ ಬಂಡವಾಳವು ಸಾರ್ವಜನಿಕ ಅಥವಾ ಖಾಸಗಿ ಖರ್ಚು ಅಥವಾ ಹಣವನ್ನು ಹೇಗೆ ನಿಯೋಜಿಸಲಾಗುವುದು ಎಂಬುದನ್ನು ಕೂಡಾ ವಿವರಿಸಿಲ್ಲ.

ಭಾರತ–ಬಾಂಗ್ಲಾ ಗಡಿಯಲ್ಲಿ ಕಾನೂನುಬಾಹಿರ ಚಟುವಟಿಕೆ ತಡೆಯಲು ಸಭೆ

ಮಾಲ್ಡಾ: ಬಾಂಗ್ಲಾ–ಭಾರತ ಗಡಿ ಸಮಸ್ಯೆ ಬಗೆಹರಿಸಲು ಎರಡೂ ದೇಶಗಳು ಮುಂದಾಗಿವೆ. ಎದುರಾಗಿರುವ ಸಮಸ್ಯೆ ಪರಿಹರಿಸಿ, ಶಾಂತಿ ಕಾಪಾಡಿಕೊಳ್ಳಲು ಹಾಗೂ ಗಡಿಯಾಚೆಗಿನ ಅಕ್ರಮ ಚಟುವಟಿಕೆಗಳನ್ನು ತಡೆಯಲು ಗಡಿ ಭದ್ರತಾ ಪಡೆ (ಬಿಎಸ್‌ಎಫ್) ಮತ್ತು ಬಾಂಗ್ಲಾದೇಶ ಗಡಿ ಕಾವಲು ಪಡೆ (ಬಿಜಿಬಿ) ಸಮನ್ವಯ ಸಭೆ ನಡೆಸಲಾಯಿತು. ಬಾಂಗ್ಲಾದೇಶದ ಸೋನಾ ಮಾಸ್ಜಿದ್‌ನ ಗಡಿ ಹೊರಠಾಣೆ (ಬಿಒಪಿ)ಯಲ್ಲಿ ಸಭೆ ನಡೆಯಿತು. ಬಿಎಸ್‌ಎಫ್ ಮಾಲ್ಡಾ ವಲಯದ ಡಿಐಜಿ ತರುಣ್‌ಕುಮಾರ್ ಗೌತಮ್, ಬಿಜಿಬಿ ರಾಜಶಾಹಿ ವಲಯದ ಕಮಾಂಡರ್ ಕರ್ನಲ್ ಮೊಹಮ್ಮದ್ ಇಮ್ರಾನ್ ಇಬ್ನೆ ರೌಫ್ ಸಭೆಯ ಅಧ್ಯಕ್ಷತೆ ವಹಿಸಿದ್ದರು. ದ್ವಿಪಕ್ಷೀಯ ಸಹಕಾರವನ್ನು ಬಲಪಡಿಸುವುದು, ಅಕ್ರಮ ಚಟುವಟಿಕೆಗಳನ್ನು ನಿಯಂತ್ರಿಸುವುದು, ಅಂತರರಾಷ್ಟ್ರೀಯ ಗಡಿಯಲ್ಲಿ ಅನಧಿಕೃತ ಚಲನೆಯನ್ನು ತಡೆಗಟ್ಟುವ ಬಗ್ಗೆ ಚರ್ಚೆಗಳು ನಡೆದವು ಎಂದು ತಿಳಿಸಿವೆ. ಸಭೆಯಲ್ಲಿ ಮಾತುಕತೆ ಮತ್ತು ಒಮ್ಮತದ ಮೂಲಕ ಗಡಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ಎರಡೂ ಕಡೆಯ ಅಧಿಕಾರಿಗಳು ಸಮ್ಮತಿಸಿದ್ದಾರೆ. ಈ ಉನ್ನತ ಮಟ್ಟದ ಸಭೆಗಳು ಭಾರತ ಮತ್ತು ಬಾಂಗ್ಲಾದೇಶದ ನಡುವಿನ ಬಲವಾದ ಪಾಲುದಾರಿಕೆಯನ್ನು ಸಂಕೇತಿಸುತ್ತವೆ ಎಂದು ಬಿಎಸ್‌ಎಫ್ ದಕ್ಷಿಣ ಬಂಗಾಳ ಗಡಿನಾಡಿನ ವಕ್ತಾರ ಎನ್.ಕೆ.ಪಾಂಡೆ ಹೇಳಿದರು.

ಬ್ರಹ್ಮಪುತ್ರ ನದಿಗೆ ಚೀನಾದಿಂದ ವಿಶ್ವದ ಅತಿದೊಡ್ಡ ಅಣೆಕಟ್ಟು

ಬೀಜಿಂಗ್: ಕಳೆದ ತಿಂಗಳು ಟಿಬೆಟ್‌ನ ಯಾರ್ಲುಂಗ್ ಜಂಗ್ಬೋ ನದಿಗೆ 'ಸೂಪರ್ ಅಣೆಕಟ್ಟು' ನಿರ್ಮಿಸಲು ಚೀನಾ ಸರ್ಕಾರ ನಿರ್ಧರಿಸಿದೆ. ಈ ನದಿಯನ್ನು ಭಾರತದಲ್ಲಿ ಬ್ರಹ್ಮಪುತ್ರ ಎಂದು ಕರೆಯಲಾಗುತ್ತದೆ ಎಂಬುದು ಗಮನಾರ್ಹವಾದ ಸಂಗತಿ. ಆದರೆ ಈ ಅಣೆಕಟ್ಟನ್ನು ಭಾರತದ ವಿರುದ್ಧ ಚೀನಾ ದೊಡ್ಡ ಅಸ್ತ್ರವಾಗಿ ಬಳಸಿಕೊಳ್ಳಬಹುದು ಎಂಬ ಆತಂಕವಿದೆ. ಏತನ್ಮಧ್ಯೆ, ಬ್ರಹ್ಮಪುತ್ರ ನದಿಗೆ ಅಡ್ಡಲಾಗಿ ಕಟ್ಟಲಾಗುತ್ತಿರುವ ವಿಶ್ವದ ಅತೀ ದೊಡ್ಡ ಅಣೆಕಟ್ಟನ್ನು ಭಾರತದ ವಿರುದ್ಧ ವಾಟರ್ ಬಾಂಬ್ ಆಗಿ ಅಲ್ಲ ಎಂದು ಚೀನಾ ಸರ್ಕಾರ ಸ್ಪಷ್ಟಪಡಿಸಿದೆ.



ಭಾರತದ ಚೀನಾ ರಾಯಭಾರಿಯಾಗಿರುವ ಚಾರ್ಜ್ ಡಿ ಅಫೇರ್ಸ್ ವಾಂಗ್ ಲೀ ಅವರು ಪತ್ರಿಕೆಯೊಂದಕ್ಕೆ ಬರೆದ ತಮ್ಮ ಲೇಖನದಲ್ಲಿ ಅಣೆಕಟ್ಟಿನಿಂದ ಭಾರತಕ್ಕೆ ಯಾವುದೇ ಹಾನಿ ಮಾಡಲಾಗುವುದಿಲ್ಲ ಎಂದು ಹೇಳಿದ್ದಾರೆ. ಭಾರತದ ಪರಿಸರವಾದಿಗಳು ಹಾಗೂ ಗುಡ್ಡಗಾಡು ಪ್ರದೇಶಗಳಲ್ಲಿ ನೆಲೆಸಿರುವ ಜನರು ಚೀನಾದ ಈ ಬೃಹತ್ ಯೋಜನೆಯಿಂದ ಭಾರತ ಮತ್ತು ಬಾಂಗ್ಲಾದೇಶದ ಈಶಾನ್ಯ ರಾಜ್ಯಗಳಲ್ಲಿ ನೀರಿನ ಹರಿವಿನ ಮೇಲೆ ಪರಿಣಾಮ ಬೀರಬಹುದು ಎಂದು ಕಳವಳ ವ್ಯಕ್ತಪಡಿಸುತ್ತಾರೆ.

ಮೈಸೂರು ಮಿತ್ರ ಶುಕ್ರವಾರ 24 ಜನವರಿ 2025

ಇಂದಿನಿಂದ ರಾಜಾಸೀಟ್‌ನಲ್ಲಿ ಫಲಪುಷ್ಪ ಪ್ರದರ್ಶನ

● ಮಡಿಕೇರಿ ಗಾಂಧಿ ಮೈದಾನದಲ್ಲಿ ವಸ್ತು ಪ್ರದರ್ಶನ ● ಜಿಲ್ಲಾಧಿಕಾರಿ ವೆಂಕಟ್ ರಾಜಾ ಮಾಹಿತಿ

ಮಡಿಕೇರಿ, ಜ.23–ಪ್ರತಿವರ್ಷದಂತೆ ಈ ಬಾರಿಯೂ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ತೋಟಗಾರಿಕೆ ಇಲಾಖೆ ವತಿಯಿಂದ ನಗರದ ರಾಜಾಸೀಟ್ ಉದ್ಯಾನದಲ್ಲಿ ಜ.24 ರಿಂದ 27ರವರೆಗೆ ಫಲಪುಷ್ಪ ಪ್ರದರ್ಶನ ಏರ್ಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ವೆಂಕಟ್ ರಾಜಾ ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಕ್ಕಳಿಗೆ ಆಕರ್ಷಣೀಯವಾಗುವ ನಿಟ್ಟಿನಲ್ಲಿ ವಿವಿಧ ಕಲಾಕೃತಿಗಳ ಫಲಪುಷ್ಪ ಪ್ರದರ್ಶನ ಆಯೋಜಿಸಲಾಗಿದೆ. ಜೊತೆಗೆ ಗಾಂಧಿ ಮೈದಾನದಲ್ಲಿ ವಸ್ತುಪ್ರದರ್ಶನಕ್ಕೆ ಅವಕಾಶ ನೀಡಲಾಗಿದೆ. ಶಾಲಾ ಸಮವಸ್ತ್ರದಲ್ಲಿ ಬರುವ ವಿದ್ಯಾರ್ಥಿಗಳಿಗೆ ಉಚಿತ ಪ್ರವೇಶ ಕಲ್ಪಿಸಲಾಗಿದ್ದು, ವಯಸ್ಕರಿಗೆ 20 ರೂ. ಪ್ರವೇಶ ಶುಲ್ಕ ನಿಗದಿಪಡಿಸಲಾಗಿದೆ ಬೆಳಿಗ್ಗೆ 8 ರಿಂದ ರಾತ್ರಿ 8.30ರವರೆಗೆ ಫಲಪುಷ್ಪ ಪ್ರದರ್ಶನ ವೀಕ್ಷಿಸಬಹುದಾಗಿದೆ ಎಂದು ಮಾಹಿತಿ ನೀಡಿದರು.

ಈ ಬಾರಿ ನಾಲ್ಕು ದಿನಗಳ ಕಾಲ ಫಲಪುಷ್ಪ ಪ್ರದರ್ಶನ ನಡೆಯುತ್ತಿರುವುದು ವಿಶೇಷವಾಗಿದೆ ಕಳೆದ ಬಾರಿ 32 ಲಕ್ಷ ರೂ. ವೆಚ್ಚವಾಗಿದ್ದು, ಈ ಬಾರಿ 35 ಲಕ್ಷ ರೂ. ವೆಚ್ಚ ಮಾಡಲಾಗುತ್ತಿದೆ. ತೋಟಗಾರಿಕೆ ಇಲಾಖೆಯಿಂದ ರಾಜ್ಯದಲ್ಲಿ ಉತ್ಪತ್ತಿಯಾಗುವ ಜೇನು ತುಪ್ಪವನ್ನು ರಾಷ್ಟ್ರೀಯ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರಸಿದ್ಧಿಗೊಳಿಸಿ ಮಾರಾಟ ಮಾಡುವ ಉದ್ದೇಶದಿಂದ 'ಝೇಂಕಾರ' ಬ್ರಾಂಡ್ ಅಡಿಯಲ್ಲಿ ನೋಂದಾಯಿಸಲ್ಪಟ್ಟಿದ್ದು, 'ಝೇಂಕಾರ ಬ್ರಾಂಡ್ ಹಾಗೂ ಕೊಡಗು ಜೇನಿನ ಕೂರ್ಗ್ ಹನಿ' ಮಾರಾಟ ಬ್ರ್ಯಾಂಡ್‌ಗಳ ವಿವಿಧ ಕಲಾಕೃತಿಗಳನ್ನು ಹೂವುಗಳಿಂದ ಅಲಂಕರಿಸಿ ನಿರ್ಮಿಸಲಾಗಿದೆ ಎಂದರು.

ನಗರದಲ್ಲಿ ಪುಟಾಣಿ ರೈಲು ಸಂಬಂಧ ಮೈಸೂರಿನಿಂದ ರೈಲ್ವೆ ತಜ್ಞ ಇಂಜಿನಿಯರ್‌ಗಳನ್ನು ಕರೆಸಲಾಗಿತ್ತು. ತಾಂತ್ರಿಕ ತಜ್ಞರು ವೀಕ್ಷಿಸಿದ್ದು, ವರದಿ ಬಂದ ನಂತರ ಇದನ್ನು ಸರಿಪಡಿಸಲಾಗುವುದು. ಸಂಗೀತ ಕಾರಂಜಿ ಸರಿಪಡಿಸಲು ತಂತ್ರಜ್ಞರು ಮುಂದೆ ಬರುತ್ತಿಲ್ಲ. ಈ ಹಿನ್ನೆಲೆ ದೆಹಲಿಯಿಂದ ತಾಂತ್ರಿಕ ತಜ್ಞರನ್ನು ಕರೆಸಲಾಗಿದ್ದು, ಶೀಘ್ರ ಸರಿಪಡಿಸಲಾಗುವುದು ಎಂದು ಜಿಲ್ಲಾಧಿಕಾರಿ ತಿಳಿಸಿದರು.

ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಹೆಚ್.ಆರ್.ಯೋಗೇಶ್ ಮಾತನಾಡಿ, ಫಲಪುಷ್ಪ ಪ್ರದರ್ಶನ ಪ್ರಯುಕ್ತ ನಗರದ ಗಾಂಧಿ ಮೈದಾನದಲ್ಲಿ ವಿವಿಧ ಇಲಾಖೆ, ಏಜೆನ್ಸಿಗಳು, ಸಂಸ್ಥೆಗಳು 60 ಮಳಿಗೆಯನ್ನು ನಿರ್ಮಿಸಲಾಗಿದೆ. ಇದರಲ್ಲಿ 10 ಮಳಿಗೆಯನ್ನು ತೋಟಗಾರಿಕೆ, ಕಾಫಿ ಮಂಡಳಿ, ಕೃಷಿ, ಪಶುಪಾಲನೆ, ಮೀನುಗಾರಿಕೆ, ಹಾಪ್ಸ್, ಕೈಗಾರಿಕೆ, ವಾಣಿಜ್ಯ ಇಲಾಖೆ ಹಾಗೂ ಇತರೆ ಇಲಾಖೆಗಳಿಗೆ ಕಾಯ್ದಿರಿಸಲಾಗಿದೆ. 50 ಮಳಿಗೆಯಲ್ಲಿ ನರ್ಸರಿ ಗಿಡಗಳ ಮಾರಾಟ, ಕೃಷಿ ಪರಿಕರಗಳ ಪ್ರದರ್ಶನ ಹಾಗೂ ಯಂತ್ರೋಪಕರಣಗಳ ಮಾರಾಟ ಮಳಿಗೆಗಳನ್ನು ತೆರೆಯಲಾಗಿದೆ ಎಂದು ಮಾಹಿತಿ ನೀಡಿದರು.

ತೋಟಗಾರಿಕೆಯಲ್ಲಿ ಆಸಕ್ತಿಇರುವ ಮಹಿಳೆಯರು ಹಾಗೂ ಸಾರ್ವಜನಿಕರಿಗೆ ಒಣ, ಬಿಡಿ ಹೂಗಳ ಜೋಡಣೆ, ಇಕೆಬಾನ, ರಂಗೋಲಿ ಸ್ಪರ್ಧೆಗಳನ್ನು ರಾಜಾಸೀಟಿನ ಒಳಭಾಗದಲ್ಲಿ ಆಯೋಜಿಸಲಾಗಿದೆ. ಆಸಕ್ತರು (ಮೊ.ಸಂ: 9448613355) ಹೆಸರು ನೋಂದಾಯಿಸಿಕೊಳ್ಳಬೇಕು ಎಂದರು.

ಜಾನಪದ ಪರಿಷತ್ ಮಡಿಕೇರಿ ತಾಲೂಕು ಅಧ್ಯಕ್ಷ ಹೆಚ್.ಟಿ.ಅನಿಲ್ ಮಾತನಾಡಿ, ಫಲಪುಷ್ಪ ಪ್ರದರ್ಶನ ಸಂದರ್ಭದಲ್ಲಿ ವಾಹನ ದಟ್ಟಣೆಯಿಂದ ಹಿರಿಯ ನಾಗರಿಕರು ಹಾಗೂ ಮಕ್ಕಳಿಗೆ ಕಿರಿಕಿರಿ ಉಂಟಾಗಲಿದೆ. ಆದ್ದರಿಂದ ಸುಗಮ ಸಂಚಾರಕ್ಕೆ ವ್ಯವಸ್ಥೆ ಮಾಡಬೇಕು ಎಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಅಪರ ಜಿಲ್ಲಾಧಿಕಾರಿ ಆರ್.ಐಶ್ವರ್ಯ, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಸುಂದರರಾಜ್, ತೋಟಗಾರಿಕೆ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ಫಣೀಂದ್ರ, ಸಹಾಯಕ ನಿರ್ದೇಶಕ ಬಿ.ಎಸ್. ಮುತ್ತಪ್ಪ ಇದ್ದರು.



ಸುದ್ದಿಗೋಷ್ಠಿಯಲ್ಲಿ ಜಿಲ್ಲಾಧಿಕಾರಿ ವೆಂಕಟ್ ರಾಜಾ ಮಾತನಾಡಿದರು.

> ರೈತರು ಬೆಳೆದಿರು ಹಣ್ಣುಗಳು, ತರಕಾರಿ, ತೋಟದ ಬೆಳೆಗಳು, ಸಾಂಬಾರು ಬೆಳೆಗಳ ಪ್ರದರ್ಶಿಸಲು ಉದ್ದೇಶಿಸಲಾಗಿದೆ. ಅತ್ಯುತ್ತಮ ಪ್ರದರ್ಶಿಕೆಗಳಿಗೆ ಬಹುಮಾನ ನೀಡಲಾಗುವುದು. ಆಸಕ್ತರು ತೋಟಗಾರಿಕೆ ಇಲಾಖೆಗೆ ಪ್ರದರ್ಶಿಕೆಗಳನ್ನು ತಂದು ಹೆಸರು ನೋಂದಾಯಿಸಿಕೊಳ್ಳಬೇಕು.
>
> –ಹೆಚ್.ಆರ್.ಯೋಗೇಶ್, ತೋಟಗಾರಿಕೆ ಇಲಾಖೆ ಉಪನಿರ್ದೇಶಕ

ಸಿಎನ್‌ಸಿ ರಿಟ್ ಅರ್ಜಿ ವಿಚಾರಣೆ ಮಾ.11ಕ್ಕೆ ಮುಂದೂಡಿಕೆ

ಮಡಿಕೇರಿ, ಜ.23–ಕೊಡವ ಲ್ಯಾಂಡ್ ಭೂ ರಾಜಕೀಯ ಸ್ವಾಯತ್ತತೆ ಮತ್ತು ಎಸ್‌ಟಿ ಟ್ಯಾಗ್ ಕುರಿತು ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆಯ ಬೇಡಿಕೆಗೆ ಪೂರಕವಾಗಿ ಆಯೋಗ ರಚಿಸಬೇಕು ಎಂದು ಖ್ಯಾತ ಅರ್ಥಶಾಸ್ತ್ರಜ್ಞ ಹಾಗೂ ಕೇಂದ್ರ ಮಾಜಿ ಸಚಿವ ಡಾ.ಸುಬ್ರಮಣಿಯನ್‌ಸ್ವಾಮಿ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ರಿಟ್ ಅರ್ಜಿ ವಿಚಾರಣೆಯನ್ನು ಹೈಕೋರ್ಟ್ ಮಾರ್ಚ್ 11ಕ್ಕೆ ಮುಂದೂಡಿದೆ.

ಗುರುವಾರ ಮುಖ್ಯ ನ್ಯಾಯಮೂರ್ತಿ ಎನ್.ವಿ.ಅಂಜರಿಯಾ ಹಾಗೂ ನ್ಯಾಯಮೂರ್ತಿ ಕೆ.ವಿ.ಅರವಿಂದ್ ಅವರ ವಿಭಾಗೀಯ ಪೀಠ ರಿಟ್ ಅರ್ಜಿ ವಿಚಾರಣೆ ನಡೆಸಿತು. ಡಾ.ಸುಬ್ರಮಣಿಯನ್‌ಸ್ವಾಮಿ ಹಾಗೂ ಅವರ ಕಾನೂನು ಸಹಾಯಕ ಹೈಕೋರ್ಟ್ ವಕೀಲ ಕಿರಣ್ ನಾರಾಯಣ್ ವಿಚಾರಣೆಯಲ್ಲಿ ಭಾಗಿಯಾಗಿದ್ದರು.

ಇದೇ ವೇಳೆ ಸಿಎನ್‌ಸಿ ಅಧ್ಯಕ್ಷ ಎನ್.ಯು. ನಾಚಪ್ಪ ಮಾತನಾಡಿ, ಕಳೆದ 35 ವರ್ಷಗಳಿಂದ ಸಿಎನ್‌ಸಿ ಸಂಘಟನೆ ಕೊಡವರ ಸಾಂವಿಧಾನಿಕ ಹಕ್ಕುಗಳಿಗಾಗಿ ಶಾಂತಿಯುತ ಹೋರಾಟ ನಡೆಸಿಕೊಂಡು ಬರುತ್ತಿದೆ. ಕೊಡವರಿಗೆ ಕೊಡವ ಲ್ಯಾಂಡ್ ಬಿಟ್ಟರೆ ಬೇರೆ ಪ್ರದೇಶವಿಲ್ಲ. ಸಂವಿಧಾನದ ಆಶಯಗಳಿಗೆ ಪೂರಕವಾಗಿ ಕಾನೂನು ಹೋರಾಟದಿಂದ ಕೊಡವ ಬುಡಕಟ್ಟು ಜನಾಂಗಕ್ಕೆ ನ್ಯಾಯ ಸಿಗಲಿದ್ದು, ಕೊಡವ ಲ್ಯಾಂಡ್ ಭೂ ರಾಜಕೀಯ ಸ್ವಾಯತ್ತತೆ ಮತ್ತು ಎಸ್‌ಟಿ ಟ್ಯಾಗ್ ಪಡೆಯುವ ವಿಶ್ವಾಸವಿದೆ. ಕೊಡವ ಲ್ಯಾಂಡ್ ಬೇಡಿಕೆ ತಾರ್ಕಿಕ ಅಂತ್ಯ ಕಾಣುವವರೆಗೆ ಹೋರಾಟ ಅಚಲ ಮತ್ತು ಮುಂದುವರಿಯಲಿದೆ ಎಂದರು.

ವಿರಾಟ್ ಹಿಂದೂಸ್ತಾನ್ ಸಂಘದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಜಗದೀಶ್ ಶೆಟ್ಟಿ, ವಿಎಚ್‌ಎಸ್ ರಾಜ್ಯಾಧ್ಯಕ್ಷ ನಿಖಿಂಜ್ ಶಾ, ಸಿಎನ್‌ಸಿ ಕಲಿಯಂಡ ಪ್ರಕಾಶ್, ಕಾಂಡೇರ ಸುರೇಶ್, ಕಾಟುಮಣಿಯಂಡ ಉಮೇಶ್, ಬೊಟ್ಟಂಗಡ ಗಿರೀಶ್, ಕಿರಿಯಮಾಡ ಶೆರಿನ್, ಚಂಬಂಡ ಜನತ್, ಪಾರ್ವಂಗಡ ನವೀನ್, ವಿಹೆಚ್‌ಎಸ್ ಸದಸ್ಯರಾದ ರವಿಶಂಕರ್, ಶಿವು ಹಾಜರಿದ್ದರು.



ಹೈಕೋರ್ಟ್‌ನಲ್ಲಿ ನಡೆದ ಸಿಎನ್‌ಸಿ ರಿಟ್ ಅರ್ಜಿ ವಿಚಾರಣೆ ವೇಳೆ ಡಾ.ಸುಬ್ರಮಣಿಯನ್ ಸ್ವಾಮಿ, ವಕೀಲ ಕಿರಣ್ ನಾರಾಯಣ್, ಎನ್.ಯು.ನಾಚಪ್ಪ ಇದ್ದರು.

ಹಾಸ್ಟೆಲ್, ಶಾಲಾ ಹೊರಗುತ್ತಿಗೆ ನೌಕರರ ಪ್ರತಿಭಟನೆ

ಮಡಿಕೇರಿ, ಜ.23–ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ರಾಜ್ಯ ಸರ್ಕಾರಿ ಹಾಸ್ಟೆಲ್ ಮತ್ತು ವಸತಿ ಶಾಲಾ ಹೊರಗುತ್ತಿಗೆ ನೌಕರರ ಸಂಘದ ಕೊಡಗು ಜಿಲ್ಲಾ ಸಮಿತಿ ವತಿಯಿಂದ ಗುರುವಾರ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ಜಿಲ್ಲಾಧಿಕಾರಿ ಕಚೇರಿ ಎದುರು ಜಮಾಯಿಸಿದ ಸಂಘದ ಪ್ರಮುಖರು ಹಾಗೂ ಹೊರಗುತ್ತಿಗೆ ನೌಕರರು, ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಅಸಮಾಧಾನ ವ್ಯಕ್ತಪಡಿಸಿದರು.

ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಕೆ.ಹನುಮೇಗೌಡ ಮಾತನಾಡಿ, ಹಿಂದುಳಿದ ವರ್ಗ, ಸಮಾಜ ಕಲ್ಯಾಣ, ಅಲ್ಪಸಂಖ್ಯಾತ, ಪರಿಶಿಷ್ಟ ಕಲ್ಯಾಣ ಇಲಾಖೆ ಹಾಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳಲ್ಲಿ ಕಳೆದ 15–20 ವರ್ಷಗಳಿಂದ ನೌಕರರು ಕಡಿಮೆ ಸಂಬಳಕ್ಕೆ ಯಾವುದೇ ಭದ್ರತೆ ಇಲ್ಲದೆ ದುಡಿಯುತ್ತಿದ್ದಾರೆ. ತಮ್ಮ ಕುಟುಂಬದವರನ್ನು ಮರೆತು ಹಾಸ್ಟೆಲ್ ವಿದ್ಯಾರ್ಥಿಗಳನ್ನು ನಮ್ಮ ಮಕ್ಕಳಂತೆ ನೋಡಿಕೊಂಡು, ನಿರಂತರವಾಗಿ ಕೆಲಸ ಮಾಡುತ್ತಿದ್ದೇವೆ. ಆದರೆ, ಸರ್ಕಾರಿ ಹಾಸ್ಟೆಲ್ ಮತ್ತು ವಸತಿ ಶಾಲಾ ಹೊರಗುತ್ತಿಗೆ ನೌಕರರ ಸಮಸ್ಯೆಗಳಿಗೆ ಸರ್ಕಾರ ಸ್ಪಂದಿಸದೆ ಇರುವುದು ಖಂಡನೀಯ ಎಂದರು.

ಕನಿಷ್ಠ ವೇತನ 31 ಸಾವಿರ ರೂ. ಪಾವತಿ ಮಾಡಬೇಕು. ನೇರವಾಗಿ ಇಲಾಖೆಯಿಂದ ವೇತನ ನೀಡಬೇಕು. ಸಮಾನ ಕೆಲಸಕ್ಕೆ ಸಮಾನ ವೇತನ ನೀಡಬೇಕು. ಸಿಬ್ಬಂದಿ ಸಂಖ್ಯೆ ಕಡಿತ ಆದೇಶ ರದ್ದು ಮಾಡಬೇಕು. ಜೀತ ಪದ್ಧತಿಯಿಂದ ಮುಕ್ತಿಗೊಳಿಸಬೇಕು. ಬೀದರ್ ಮಾದರಿಯ ಸಹಕಾರ ಸಂಘವನ್ನು ಎಲ್ಲಾ ಜಿಲ್ಲೆಗಳಿಗೆ ವಿಸ್ತರಣೆ ಮಾಡಬೇಕು. ವಾರದ ರಜೆ, ಬಾಕಿ ಸಂಬಳ, ಹೆರಿಗೆ ರಜೆ ವೇತನವನ್ನು ನೀಡಬೇಕು ಎಂದು ಒತ್ತಾಯಿಸಿದರು.

ಇಎಸ್‌ಐ ಮತ್ತು ಪಿಎಫ್ ನೀಡಬೇಕು ಸೇರಿದಂತೆ ವಿವಿಧ ಬೇಡಿಕೆಗಳನ್ನು ತಕ್ಷಣ ಈಡೇರಿಸುವಂತೆ ಒತ್ತಾಯಿಸಿದರು. ಸರ್ಕಾರ ನಿರ್ಲಕ್ಷ್ಯ ತೋರಿದರೆ ಮುಂದಿನ ಬಜೆಟ್ ಅಧಿವೇಶನದ ಸಂದರ್ಭ ಬೆಂಗಳೂರಿನ ಫ್ರೀಡಂಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಸಿದರು. ಬಳಿಕ ಪ್ರತಿಭಟನಾಕಾರರು ಮನವಿ ಪತ್ರವನ್ನು ಜಿಲ್ಲಾಡಳಿತಕ್ಕೆ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ಸಮಿತಿ ಜಿಲ್ಲಾಧ್ಯಕ್ಷ ಜಿ.ಕೆ.ದಿನೇಶ್, ಪ್ರಧಾನ ಕಾರ್ಯದರ್ಶಿ ಹೆಚ್.ಎಸ್.ಯೋಗೇಶ್, ಮುಖಂಡರಾದ ಎಸ್.ಟಿ.ಸೌಭಾಗ್ಯ, ಪ್ರೇಮಾ, ನೇತ್ರ, ವಸಂತಿ, ರೂಪಾ, ಮಹೇಶ್, ಭಾಗ್ಯಮ್ಮ, ಭಾನುಮತಿ, ಪುಷ್ಪಾ, ರತ್ನಮ್ಮ, ಜ್ಯೋತಿ, ಪದಾಧಿಕಾರಿಗಳು ಹಾಗೂ ನೌಕರರು ಪಾಲ್ಗೊಂಡಿದ್ದರು.



ಮಡಿಕೇರಿ ಜಿಲ್ಲಾಧಿಕಾರಿ ಕಚೇರಿ ಎದುರು ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಶಾಲಾ ಹೊರಗುತ್ತಿಗೆ ನೌಕರರು ಪ್ರತಿಭಟನೆ ನಡೆಸಿದರು.

ಸುನೀಲ್ ಮುದ್ದಯ್ಯಗೆ ನೆನಪಿನ ಕಾಣಿಕೆ...



ವಿರಾಜಪೇಟೆ ಬಳಿಯ ಕೊಡಗು ದಂತ ವೈದ್ಯಕೀಯ ಮಹಾವಿದ್ಯಾಲಯದ ಬೆಳ್ಳಿಹಬ್ಬ ಸಮಾರಂಭದಲ್ಲಿ ದಂತ ಮಹಾವಿದ್ಯಾಲಯದ ಡೀನ್ ಸುನೀಲ್ ಮುದ್ದಯ್ಯ ಅವರಿಗೆ ಉತ್ತಮ ಸೇವೆಗಾಗಿ ಮೈಸೂರಿನ ಶ್ರೀ ಕಾವೇರಿ ಕೊಡವ ಅಸೋಸಿಯೇಷನ್ ವತಿಯಿಂದ ನೆನಪಿನ ಕಾಣಿಕೆ ನೀಡಲಾಯಿತು. ಶಾಸಕ ಎ.ಎಸ್.ಪೊನ್ನಣ್ಣ, ಕಾವೇರಿ ಕೊಡವ ಅಸೋಸಿಯೇಷನ್ ಅಧ್ಯಕ್ಷ ಕಡೆಮಾಡ ಬೆಳ್ಯಪ್ಪ, ಉಪಾಧ್ಯಕ್ಷ ಪಿ.ಪದ್ಮಬೋಪಯ್ಯ, ಕಾರ್ಯದರ್ಶಿ ಪಿ.ದೇವಯ್ಯ, ಖಜಾಂಚಿ ಪಿ.ಚರ್ಮಣ್ಣ, ಸದಸ್ಯರು ಇದ್ದರು.

ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಹೇಳಿಕೆ ಖಂಡನೀಯ

ಮಡಿಕೇರಿ, ಜ.23–ಅಯೋಧ್ಯೆಯ ರಾಮಮಂದಿರದಲ್ಲಿ ಬಾಲರಾಮನ ಪ್ರಾಣ ಪ್ರತಿಷ್ಠಾಪನೆಯಾದ ದಿನವೇ ಭಾರತಕ್ಕೆ ನಿಜವಾದ ಸ್ವಾತಂತ್ರ್ಯ ದೊರೆಯಿತು ಎಂದು ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ನೀಡಿರುವ ಹೇಳಿಕೆಯನ್ನು ಪ್ರೊ.ಬಿ.ಕೃಷ್ಣಪ್ಪ ಸ್ಥಾಪಿತ ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಕೊಡಗು ಜಿಲ್ಲಾ ಘಟಕ ತೀವ್ರವಾಗಿ ಖಂಡಿಸುತ್ತದೆ ಎಂದು ಸಮಿತಿ ಸಂಚಾಲಕಿ ಗಾಯತ್ರಿ ನರಸಿಂಹ ತಿಳಿಸಿದ್ದಾರೆ.

ಮೋಹನ್ ಭಾಗವತ್ ಹೇಳಿಕೆಯನ್ನು ಕೇಂದ್ರ ಸರ್ಕಾರ ದೇಶ ವಿರೋಧಿ ಎಂದು ಪರಿಗಣಿಸಿ ಕಾನೂನು ಕ್ರಮ ಕೈಗೊಳ್ಳಬೇಕು. ಭಾರತ 1947ರ ಆಗಸ್ಟ್ 15ರಂದು ಸ್ವಾತಂತ್ರ ಪಡೆದುದರ ಹಿಂದೆ ಬಹುದೊಡ್ಡ ಹೋರಾಟವೇ ಇತ್ತು, ದೇಶಾದ್ಯಂತ ಚಳುವಳಿ ನಡೆದಿದೆ. ಆದರೆ, ಭಾಗವತ್ ಅವರು ತಮ್ಮ ಹೇಳಿಕೆ ಮೂಲಕ ಇದನ್ನು ನಿರಾಕರಿಸಿದಂತಾಗಿದೆ. ದೇಶ ತನ್ನದೇ ಸಂವಿಧಾನ ಹೊಂದಿದೆ. ಭಾರತದ ಗಣರಾಜ್ಯ ಈ ಸಂವಿಧಾನದ ಮೌಲ್ಯಗಳ ಮೇಲೆ ಸ್ಥಾಪಿತವಾಗಿದೆ ಎಂದರು.



ಗಾಯತ್ರಿ ನರಸಿಂಹ

ಸಾಗುವಳಿ ಚೀಟಿ ವಿತರಣೆಗೆ ಕ್ರಮ: ಪುಟ್ಟರಂಗಶೆಟ್ಟಿ



ಚಾಮರಾಜನಗರ ತಾಲೂಕು ಕಚೇರಿ ಸಭಾಂಗಣದಲ್ಲಿ ಶಾಸಕ ಸಿ.ಪುಟ್ಟರಂಗಶೆಟ್ಟಿ ಅಧ್ಯಕ್ಷತೆಯಲ್ಲಿ ಬಗರ್‌ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿ ಸಭೆ ನಡೆಯಿತು.

ಚಾಮರಾಜನಗರ: ನಗರದ ತಾಲೂಕು ಕಚೇರಿ ಸಭಾಂಗಣದಲ್ಲಿ ಗುರುವಾರ ಶಾಸಕ ಸಿ.ಪುಟ್ಟರಂಗಶೆಟ್ಟಿ ಅಧ್ಯಕ್ಷತೆಯಲ್ಲಿ ಬಗರ್‌ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿ ಸಭೆ ನಡೆಯಿತು.

ಕಡತ ಪರಿಶೀಲಿಸಿ ಮಾತನಾಡಿದ ಶಾಸಕರು, ಕಳೆದ ನ.28ರಂದು ನಡೆದ ಸಮಿತಿ ಸಭೆಯಲ್ಲಿ 7 ಅರ್ಜಿ, ಜ.6ರಂದು ನಡೆದ 2ನೇ ಹಂತದ ಸಭೆಯಲ್ಲಿ 13 ಹಾಗೂ ಇಂದಿನ ಸಭೆಯಲ್ಲಿ ಹರವೆ ಹಾಗೂ ಹರದನಹಳ್ಳಿ ಹೋಬಳಿ ವ್ಯಾಪ್ತಿಯ ಗ್ರಾಮಗಳ ಫಲಾನುಭವಿಗಳು 15 ಅರ್ಜಿ ಸಲ್ಲಿಸಿದ್ದಾರೆ. ಇವುಗಳಲ್ಲಿ 1 ತಿರಸ್ಕೃತ, 2 ಅರ್ಜಿಗಳು ಪರಿಶೀಲನೆಗೆ ಹೋಗಿವೆ. ಮುಂದಿನ ಸಭೆಯಲ್ಲಿ ಅನುಮೋದನೆಯಾಗಿರುವ ಸಾಗುವಳಿ ಚೀಟಿಗಳನ್ನು ಫಲಾನುಭವಿಗಳಿಗೆ ವಿತರಿಸಲು ಕ್ರಮ ವಹಿಸಲಾಗುವುದು ಎಂದರು.

ಸಭೆಯಲ್ಲಿ ಸಮಿತಿ ಸದಸ್ಯರಾದ ಬಿಸಲವಾಡಿ ರವಿ, ಅರಕಲವಾಡಿ ಮಲ್ಲಿಕಾಚನ್ನೇಗೌಡ, ಬೋಗಾಪುರ ಮಹಾಲಿಂಗ, ತಹಸೀಲ್ದಾರ್ ಗಿರಿಜಾ, ವಿಷಯ ನಿರ್ವಾಹಕ ಅವಿನಾಶ್, ಜಿಲ್ಲಾ ಭೂ ಸಮಾಲೋಚಕ ರಾಜೇಂದ್ರ, ಶಿರಸ್ತೇದಾರ್ ಬಿ.ಎನ್.ವಿನು, ರಾಜಸ್ವ ನಿರೀಕ್ಷಕರು, ಗ್ರಾಮಾಡಳಿತಾಧಿಕಾರಿಗಳು ಹಾಜರಿದ್ದರು.

ಗೃಹರಕ್ಷಕರು ಪೊಲೀಸ್ ಇಲಾಖೆಯ ಭಾಗ

● ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ.ಕವಿತಾ ಹೇಳಿಕೆ ● ಚಾ.ನಗರದಲ್ಲಿ ಗೃಹರಕ್ಷಕ ದಳ ದಿನಾಚರಣೆ

ಚಾಮರಾಜನಗರ, ಜ.23–ಉತ್ಸವ, ಬಂದೋಬಸ್ತ್ ಸೇರಿದಂತೆ ಇತರೆ ಕಠಿಣ ಸಂದರ್ಭಗಳಲ್ಲಿ ಪೊಲೀಸರ ಮಾದರಿಯಲ್ಲಿ ಸಮವಸ್ತ್ರ ಧರಿಸಿ ಶಿಸ್ತುಬದ್ಧವಾಗಿ ಶ್ರದ್ಧೆಯಿಂದ ಕೆಲಸ ನಿರ್ವಹಿಸುವ ಗೃಹರಕ್ಷಕರನ್ನು ಪೊಲೀಸ್ ಇಲಾಖೆಯ ಒಂದು ಭಾಗವಾಗಿ ಪರಿಗಣಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ.ಕವಿತಾ ತಿಳಿಸಿದರು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಗುರುವಾರ ಜಿಲ್ಲಾ ಗೃಹರಕ್ಷಕರ ದಳ ಆಯೋಜಿಸಿದ್ದ ಅಖಿಲ ಭಾರತ ಗೃಹ ರಕ್ಷಕ ದಳದ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ದೇಶದ ಗಡಿ ಭದ್ರತಾ ಪಡೆಯು ಅಗತ್ಯ ಸಮಯದಲ್ಲಿ ಗೃಹರಕ್ಷಕರ ಸಹಾಯ ಪಡೆಯಲಿದೆ. ಇಂತಹ ಮಹತ್ವದ ಕಾರ್ಯಗಳಲ್ಲಿ ತೊಡಗುವ ಗೃಹರಕ್ಷಕರು ಉತ್ತಮ ಆರೋಗ್ಯ ಕಾಪಾಡಿಕೊಳ್ಳಲು ಗಮನ ಹರಿಸಬೇಕು ಎಂದರು.

ಪೊಲೀಸರಂತೆ ಗೃಹರಕ್ಷಕರಿಗೂ ಒತ್ತಡಗಳಿವೆ. ಒತ್ತಡದ ಜೀವನ ಕ್ರಮದಿಂದ ಗೃಹರಕ್ಷಕರು ಎದೆಗುಂದದೇ ಉತ್ತಮ ಜೀವನಶೈಲಿ ರೂಢಿಸಿಕೊಳ್ಳಬೇಕು. ಸದೃಢ ದೇಹದಲ್ಲಿ ಮನಸ್ಸು ಗಟ್ಟಿ ಇರುತ್ತದೆ. ಸಾರ್ವಜನಿಕ ರಕ್ಷಣೆ, ಕಾನೂನು ಸುವ್ಯವಸ್ಥೆ ಸಂಬಂಧಿಸಿದಂತೆ ಎಂತಹುದೇ ಕಠಿಣ ಪರಿಸ್ಥಿತಿಯಲ್ಲಿ ಪೊಲೀಸರಿಗೆ ನೆರವಾಗುವ ಗೃಹರಕ್ಷಕರು ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಸಲಹೆ ನೀಡಿದರು.

ಪ್ರತಿಜ್ಞಾವಿಧಿ ಬೋಧಿಸಿ ಮಾತನಾಡಿದ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಎನ್.ಶಶಿಧರ್, ಗೃಹರಕ್ಷಕರು ಸಾರ್ವಜನಿಕ ಸೇವೆಗೆ ತಮ್ಮನ್ನು ಅರ್ಪಿಸಿಕೊಳ್ಳುವ ನಿಟ್ಟಿನಲ್ಲಿ ಪೊಲೀಸರಿಗೆ ಸಹಾಯ ಹಸ್ತ ಚಾಚಬೇಕು. ಕೌಟುಂಬಿಕ ಜೀವನ ಹಾಗೂ ವೈಯುಕ್ತಿಕ ಆರೋಗ್ಯದ ಬಗ್ಗೆಯೂ ನಿಗಾ ವಹಿಸಬೇಕು. ಪೊಲೀಸ್ ಮಾದರಿಯಲ್ಲಿ ಉತ್ತಮ ಸೇವೆ ಪರಿಗಣಿಸಿ, ಗೃಹರಕ್ಷಕರಿಗೂ ವಾರ್ಷಿಕ ಪ್ರಶಸ್ತಿ ದೊರೆಯುವಂತಾಗಬೇಕು ಎಂದರು.

ಉಪವಿಭಾಗಾಧಿಕಾರಿ ಬಿ.ಆರ್.ಮಹೇಶ್ ಮಾತನಾಡಿ, ಶಿಸ್ತುಬದ್ಧ ಸೇವಾ ಕಾರ್ಯಕ್ಕೆ ಹೆಸರಾಗಿರುವ ಗೃಹರಕ್ಷಕರನ್ನು ಪೊಲೀಸರಂತೆ ಗೌರವಿಸಲಾಗುತ್ತಿದೆ ಇದಕ್ಕೆ ಗೃಹರಕ್ಷಕರ ಸಮವಸ್ತ್ರವೇ ಕಾರಣ. ಬಂದೋಬಸ್ತ್ ಹಾಗೂ ಪ್ರಕೃತಿ ವಿಕೋಪ ಸಮಯದಲ್ಲಿ ಗೃಹರಕ್ಷಕರ ಸೇವೆ ಅನನ್ಯವಾಗಿದೆ ಯಾವುದೇ ಸಂದರ್ಭದಲ್ಲಿ ಎದುರಾಗುವ ಒತ್ತಡವನ್ನು ಬದಿಗೊತ್ತಿ ಕರ್ತವ್ಯ ನಿಷ್ಠೆ ಮೆರೆಯುವ ಗೃಹರಕ್ಷಕರ ಸಾಮಾಜಿಕ ಕಳಕಳಿ ಮಾದರಿಯಾಗಿದೆ ಎಂದು ತಿಳಿಸಿದರು.

ಗೃಹರಕ್ಷಕರ ದಳ ಜಿಲ್ಲಾ ಸಮಾದೇಷ್ಠ ಎಸ್.ಜಿ.ಮಹಾಲಿಂಗಸ್ವಾಮಿ ಮಾತನಾಡಿ, ಜಿಲ್ಲೆಯಲ್ಲಿ ಗೃಹರಕ್ಷಕ ದಳದ 9 ಘಟಕಗಳು ಸಾರ್ವಜನಿಕ ಸೇವಾ ಕಾರ್ಯದಲ್ಲಿ ಅವಿರತವಾಗಿ ಕಾರ್ಯ ನಿರ್ವಹಿಸುತ್ತಿವೆ. ಮುಂದಿನ ದಿನಗಳಲ್ಲಿ ಗೃಹರಕ್ಷಕ ದಳದ ಘಟಕಗಳನ್ನು ಹೆಚ್ಚು ಸುಸಜ್ಜಿತಗೊಳಿಸಲು ಶ್ರಮಿಸಲಾಗುವುದು ಎಂದರು. ಇದೇ ವೇಳೆ ನಿವೃತ್ತ ಗೃಹರಕ್ಷಕರು ಹಾಗೂ ಸಾಧನೆಗೈದ ಗೃಹರಕ್ಷಕರನ್ನು ಸನ್ಮಾನಿಸಲಾಯಿತು. ಗೃಹರಕ್ಷಕ ದಳದ ಎಲ್ಲಾ ಘಟಕಾಧಿಕಾರಿಗಳು, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.



ಚಾಮರಾಜನಗರದ ಅಂಬೇಡ್ಕರ್ ಭವನದಲ್ಲಿ ನಡೆದ ಗೃಹರಕ್ಷಕ ದಳದ ದಿನಾಚರಣೆಯಲ್ಲಿ ನಿವೃತ್ತ ಗೃಹರಕ್ಷಕ ಹಾಗೂ ಸಾಧನೆಗೈದ ಗೃಹರಕ್ಷಕರನ್ನು ಸನ್ಮಾನಿಸಲಾಯಿತು.

ಬಾಲಕರ ವಸತಿ ನಿಲಯ ನಿರ್ಮಾಣಕ್ಕೆ ಚಾಲನೆ



ಗುಂಡ್ಲುಪೇಟೆಯಲ್ಲಿ ಬಾಲಕರ ವಸತಿ ನಿಲಯ ನಿರ್ಮಾಣ ಕಾಮಗಾರಿಗೆ ಶಾಸಕ ಗಣೇಶ್ ಪ್ರಸಾದ್ ಭೂಮಿಪೂಜೆ ನೆರವೇರಿಸಿದರು.

ಗುಂಡ್ಲುಪೇಟೆ, ಜ.23–ವಿದ್ಯಾರ್ಥಿಗಳ ಉತ್ತಮ ವಿದ್ಯಾಭ್ಯಾಸಕ್ಕಾಗಿ ಪಟ್ಟಣದಲ್ಲಿ ಸುಸಜ್ಜಿತ ವಸತಿ ನಿಲಯ ನಿರ್ಮಾಣ ಮಾಡಲಾಗುತ್ತಿದೆ ಎಂದು ಶಾಸಕ ಹೆಚ್.ಎಂ.ಗಣೇಶ್ ಪ್ರಸಾದ್ ಹೇಳಿದರು.

ಪಟ್ಟಣದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಪರಿಶಿಷ್ಟ ಜಾತಿಯ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, 70 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸುತ್ತಿರುವ ಸುಸಜ್ಜಿತ ವಸತಿ ನಿಲಯದಲ್ಲಿ 160 ವಿದ್ಯಾರ್ಥಿಗಳು ಉಳಿದುಕೊಳ್ಳಬಹುದು. ವಿದ್ಯಾರ್ಥಿಗಳಿಗೆ ಅನಾರೋಗ್ಯವಾದರೆ ಪ್ರತ್ಯೇಕವಾಗಿ ಇರಿಸಿ ಚಿಕಿತ್ಸೆ ನೀಡುವ ಕೊಠಡಿಯನ್ನು ನಿರ್ಮಿಸಲಾಗುವುದು. ಗುಣಮಟ್ಟದ ಕಾಮಗಾರಿ ಮುಗಿಸಿ ಬಳಕೆಗೆ ನೀಡುವಂತೆ ಗುತ್ತಿಗೆದಾರರಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪುರಸಭೆ ಸದಸ್ಯರಾದ ಮಧು, ಶಶಿಧರ ದೀಪು, ಕಣ್ಣಪ್ಪ, ಕಿರಣ್‌ಗೌಡ, ರಾಜ್‌ಗೋಪಾಲ್ ಇತರರು ಇದ್ದರು.

ಸಹೋದರತ್ವಕ್ಕೆ ಸ್ವಾಮಿ ವಿವೇಕಾನಂದರು ಹೆಸರುವಾಸಿ

ಕೊಳ್ಳೇಗಾಲ, ಜ.23–ರಾಷ್ಟ್ರೀಯ ಯುವ ದಿನ ಶಿಸ್ತು, ಜವಾಬ್ದಾರಿ ಮತ್ತು ಆಧ್ಯಾತ್ಮಿಕ ಬೆಳವಣಿಗೆಯಂತಹ ಗುಣಗಳನ್ನು ಅಳವಡಿಸಿಕೊಳ್ಳಲು ಪ್ರೋತ್ಸಾಹಿಸುತ್ತದೆ ಎಂದು ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಟಿ.ಸಿ.ಶ್ರೀಕಾಂತ್ ಹೇಳಿದರು.

ಪಟ್ಟಣದ ಮುಡಿಗುಂಡ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ತಾಲೂಕು ಕಾನೂನು ಸೇವೆಗಳ ಸಮಿತಿ ವಕೀಲರ ಸಂಘದ ವತಿಯಿಂದ ರಾಷ್ಟ್ರೀಯ ಯುವ ದಿನ ಅಂಗವಾಗಿ ನಡೆದ ಕಾನೂನು ಅರಿವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ವಿವೇಕಾನಂದರ ಬೋಧನೆಗಳನ್ನು ಪ್ರತಿಬಿಂಬಿಸುವ ಮೂಲಕ ರಾಷ್ಟ್ರ ನಿರ್ಮಾಣ, ಸಾಮಾಜಿಕ ಪ್ರಗತಿ ಮತ್ತು ಜಾಗತಿಕ ಶಾಂತಿಯಲ್ಲಿ ಯುವಕರ ಮಹತ್ವವನ್ನು ಈ ದಿನ ಒತ್ತಿಹೇಳುತ್ತದೆ. ಈ ದಿನದ ಇತಿಹಾಸ, ಹಿಂದೂ ಧರ್ಮದ ಪುನರುಜ್ಜೀವನಕ್ಕೆ ನೀಡಿದ ಕೊಡುಗೆಗಳು ಮತ್ತು ಸಾರ್ವತ್ರಿಕ ಸಹೋದರತ್ವಕ್ಕಾಗಿ ಸ್ವಾಮಿ ವಿವೇಕಾನಂದರು ಹೆಸರುವಾಸಿಯಾಗಿದ್ದರು ಎಂದರು.

1985ರಲ್ಲಿ ಸರ್ಕಾರ ರಾಷ್ಟ್ರೀಯ ಯುವ ದಿನವೆಂದು ಸ್ಥಾಪಿಸುವ ಮೂಲಕ ವಿವೇಕಾನಂದರ ದೃಷ್ಟಿಕೋನ ಮತ್ತು ದೇಶದ ಭವಿಷ್ಯವನ್ನು ನಿರ್ಧರಿಸುವಲ್ಲಿ ಯುವಕರ ಮಹತ್ವದ ಕಾರ್ಯವನ್ನು ಗೌರವಿಸಿತು. ಅಂದಿನಿಂದ ಶಿಕ್ಷಣ ಸಂಸ್ಥೆಗಳಲ್ಲಿ ಯುವಜನರನ್ನು ಪ್ರೇರೇಪಿಸಲು ಮತ್ತು ಪ್ರೋತ್ಸಾಹಿಸಲು ಚರ್ಚೆ, ಕಾರ್ಯಾಗಾರ, ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಮತ್ತು ವಿಚಾರ ಸಂಕಿರಣಗಳು ನಡೆಯುತ್ತಿವೆ ಎಂದು ತಿಳಿಸಿದರು.

ವಕೀಲೆ ನಿರ್ಮಲ ಮಧುಸೂದನ್ ಮಾತನಾಡಿ, ಪ್ರತಿವರ್ಷ ಯುವಜನರ ಮೇಲೆ ಪರಿಣಾಮ ಬೀರುವ ಪ್ರಮುಖ ಸಮಸ್ಯೆಗಳ ತೋರಿಸುವ ಗುರಿ ಹೊಂದಿರುವ ಥೀಮ್‌ನೊಂದಿಗೆ ರಾಷ್ಟ್ರೀಯ ಯುವ ದಿನವನ್ನು ಸ್ಮರಿಸಲಾಗುತ್ತಿದೆ. ಈ ಬಾರಿ 'ಸುಸ್ಥಿರ ಭವಿಷ್ಯಕ್ಕಾಗಿ ಯುವಕರು: ಸ್ಥಿತಿಸ್ಥಾಪಕತ್ವ ಮತ್ತು ಜವಾಬ್ದಾರಿಯೊಂದಿಗೆ ರಾಷ್ಟ್ರ ರೂಪಿಸುವುದು?' ಕುರಿತು ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ನ್ಯಾಯಾಧೀಶೆ ಸುನೀತಾ, ವಕೀಲರ ಸಂಘದ ಉಪಾಧ್ಯಕ್ಷೆ ಸಿ.ಆರ್.ನಿರ್ಮಲ, ಕಾರ್ಯದರ್ಶಿ ಸಿ.ಬಿ. ಮಹೇಶ್ ಕುಮಾರ್, ಖಜಾಂಚಿ ರೋಹಿತ್, ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಪ್ರಾಂಶುಪಾಲ ಎಂ.ಎನ್.ಮುರಳೀಧರ, ಬೋಧಕ ವರ್ಗದವರು ಹಾಜರಿದ್ದರು.



ಮುಡಿಗುಂಡ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ನಡೆದ ಕಾನೂನು ಅರಿವು ಕಾರ್ಯಕ್ರಮವನ್ನು ನ್ಯಾಯಾಧೀಶ ಟಿ.ಸಿ.ಶ್ರೀಕಾಂತ್ ಉದ್ಘಾಟಿಸಿದರು.

ನಾಳೆ ಹೆಬ್ಬಸೂರಿನಲ್ಲಿ ಅಂಬೇಡ್ಕರ್ ಪ್ರತಿಮೆ ಅನಾವರಣ

ಚಾಮರಾಜನಗರ: ತಾಲೂಕಿನ ಹೆಬ್ಬಸೂರು ಗ್ರಾಮದಲ್ಲಿ ಜ.25ರಂದು ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆ ಅನಾವರಣಗೊಳಿಸಲಾಗುವುದು ಎಂದು ಗ್ರಾಮದ ಮುಖಂಡ ರಂಗಸ್ವಾಮಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಗ್ಗೆ 11 ಗಂಟೆಗೆ ಮೈಸೂರಿನ ಉರಿಲಿಂಗಿಪೆದ್ದಿ ಮಠಾಧ್ಯಕ್ಷ ಶ್ರೀ ಜ್ಞಾನಪ್ರಕಾಶ ಸ್ವಾಮೀಜಿ ಹಾಗೂ ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಪ್ರತಿಮೆ ಅನಾವರಣಗೊಳಿಸಲಿದ್ದಾರೆ. ಚೆನ್ನಲಿಂಗಾನಹಳ್ಳಿ ಜೇತವನ ಬುದ್ಧವಿಹಾರದ ಮನೋರಖಿತ ಬಂತೇಜಿ ಸಾನಿಧ್ಯ ವಹಿಸಲಿದ್ದು, ಶಾಸಕ ಸಿ.ಪುಟ್ಟರಂಗಶೆಟ್ಟಿ ಅಧ್ಯಕ್ಷತೆ ವಹಿಸಲಿದ್ದಾರೆ. ಸಂಸದ ಸುನೀಲ್ ಬೋಸ್, ಶಾಸಕರಾದ ಎ.ಆರ್.ಕೃಷ್ಣಮೂರ್ತಿ, ದರ್ಶನ್ ಧ್ರುವನಾರಾಯಣ, ಹೆಚ್.ಎಂ.ಗಣೇಶ್ ಪ್ರಸಾದ್, ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್, ಜಿಪಂ ಮಾಜಿ ಸದಸ್ಯ ಎ.ಆರ್.ಬಾಲರಾಜು ಭಾಗವಹಿಸಲಿದ್ದು, ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ.ದೀಪಕ್ ಮುಖ್ಯ ಭಾಷಣ ಮಾಡಲಿದ್ದಾರೆ ಎಂದರು.

20 ಲಕ್ಷ ರೂ. ವೆಚ್ಚದಲ್ಲಿ ಪ್ರತಿಮೆ ನಿರ್ಮಿಸಲಾಗಿದ್ದು, ಕಾರ್ಯಕ್ರಮದಲ್ಲಿ 4–5 ಸಾವಿರ ಜನರು ಭಾಗವಹಿಸಲಿದ್ದಾರೆ. ಎಲ್ಲರಿಗೂ ಊಟದ ವ್ಯವಸ್ಥೆ ಮಾಡಲಾಗಿದೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ವೀರಭದ್ರಸ್ವಾಮಿ, ಉಮೇಶ್, ಗ್ರಾಪಂ ಮಾಜಿ ಉಪಾಧ್ಯಕ್ಷ ನಂಜುಂಡಸ್ವಾಮಿ, ಯಜಮಾನ ಸೋಮಣ್ಣ, ಜೈ ಭೀಮ್ ಯುವಕ ಸಂಘದ ಅಧ್ಯಕ್ಷ ಎಚ್.ಎನ್. ಮಹೇಶ್, ಕಾರ್ಯದರ್ಶಿ ನಂಜುಂಡಸ್ವಾಮಿ ಹಾಜರಿದ್ದರು.

ಅನಂತ ಪದ್ಮನಾಭರಾವ್ ನಿಧನ

ಯಳಂದೂರು, ಜ.23–ಯಳಂದೂರು ಸುವರ್ಣ ತಿರುಮಲ ದೇಗುಲದ ಸಂಸ್ಥಾಪಕ ಅಧ್ಯಕ್ಷ ಹಾಗೂ ಜ್ಯೋತಿಷಿ ಅನಂತ ಪದ್ಮನಾಭರಾವ್ (67) ಅನಾರೋಗ್ಯದಿಂದ ಬುಧವಾರ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರರು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಮೈಸೂರಿನ ಚಾಮುಂಡಿಬೆಟ್ಟ ತಪ್ಪಲಿನ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನೆರವೇರಿತು.



ದುನಿಯಾ ವಿಜಯ್ 'ಲ್ಯಾಂಡ್‌ಲಾರ್ಡ್'



ಭೀಮ ಯಶಸ್ಸಿನ ನಂತರ ದುನಿಯಾ ವಿಜಯ್ ನಟನೆಯ 'ಲ್ಯಾಂಡ್‌ಲಾರ್ಡ್' ಚಿತ್ರದಲ್ಲಿ ಅವರ ಮಗಳು ರಿತನ್ಯ ಮಗಳಾಗೇ ಕಾಣಿಸಿಕೊಂಡಿದ್ದಾರೆ. ಕಾಟೇರ ಕಥೆಗಾರ ಜಡೇಶ್ ಹಂಪಿ ಅವರ ನಿರ್ದೇಶನದ ಈ ಚಿತ್ರದ ಸಾಹಸ ದೃಶ್ಯದ ಚಿತ್ರೀಕರಣ ನೆಲಮಂಗಲದ ಬಳಿ ನಡೆಯುತ್ತಿತ್ತು, ವಿಜಯ್ ಅವರ ಹುಟ್ಟುಹಬ್ಬದ ದಿನ ಚಿತ್ರೀಕರಣ ವೀಕ್ಷಣೆಗೆ ಮಾಧ್ಯಮದವರನ್ನು ಆಹ್ವಾನಿಸಲಾಗಿತ್ತು,

ಸಿನಿಮಾ ಕುರಿತಂತೆ ಮಾತನಾಡಿದ ನಿರ್ದೇಶಕ ಜಡೇಶ್, ಲ್ಯಾಂಡ್‌ಲಾರ್ಡ್ ಹಳ್ಳಿ ಹಿನ್ನೆಲೆಯಲ್ಲಿ ತಂದೆ ಮಗಳ ಸಂಬಂಧದ ಸುತ್ತ ನಡೆಯುವ ಕಥೆ. ವಿಜಯ್ ಅವರಿಗೆ 80ರ ದಶಕದ ಈ ಕಥೆ ಹೇಳಿದಾಗ ತುಂಬಾ ಇಷ್ಟಪಟ್ಟರು, ಮಗಳ ಪಾತ್ರಕ್ಕೆ ರಿತನ್ಯ ಇದ್ದರೆ ಚೆನ್ನಾಗಿರುತ್ತೆ ಎಂದು ಒಪ್ಪಿಸಿದೆ, ಸಾರಥಿ ಖ್ಯಾತಿಯ ಸತ್ಯಪ್ರಕಾಶ್ ಅವರ ನಿರ್ಮಾಣದಲ್ಲಿ ಚಿತ್ರ ಅದ್ಧೂರಿಯಾಗಿ ಮೂಡಿಬರುತ್ತಿದೆ. ಈಗಾಗಲೇ 60 ಭಾಗದ ಶೂಟಿಂಗ್ ಮುಗಿದಿದೆ. ತಾವರಕೆರೆ ಬಳಿ ಹಳ್ಳಿಯ ಸೆಟ್ ಹಾಕಿದ್ದೆವು ಎಂದರು.

ನಂತರ ಮಾತನಾಡಿದ ನಿರ್ಮಾಪಕ ಸತ್ಯಪ್ರಕಾಶ್, ನಾನು ಆಕಸ್ಮಿಕವಾಗಿ ಚಿತ್ರರಂಗಕ್ಕೆ ಬಂದೆ. ಅದೇನು ಅದೃಷ್ಟವೋ ಗೊತ್ತಿಲ್ಲ, ಮೊದಲ ಚಿತ್ರವೇ ದೊಡ್ಡ ಗೆಲುವು ತಂದುಕೊಟ್ಟಿತು, ಆನಂತರ ಹಲವಾರು ಕಥೆಗಳನ್ನು ಕೇಳಿದರೂ ಇಷ್ಟವಾಗಲಿಲ್ಲ, ಜಡೇಶ್ ಒಳ್ಳೇ ಕಥೆ ತಂದಿದ್ದರು ಎಂದರು. ದುನಿಯಾ ವಿಜಯ್ ಮಾತನಾಡುತ್ತ, ಇದು ಒಬ್ಬ ಬಡವನ ಮನೆಯ ಕಥೆ. ಆಗ ಕಾಸಿನ ವ್ಯವಹಾರ ಜಾಸ್ತಿ ಇರುತ್ತಿರಲಿಲ್ಲ, ಧಾನ್ಯ ಕೊಟ್ಟು ತರಕಾರಿ ಪಡೆಯುತ್ತಿದ್ದೆವು, ಕರೆಂಟ್ ಕೂಡ ಇರಲಿಲ್ಲ, ದೀಪದ ಬೆಳಕಲ್ಲೇ ಬದುಕು ನಡೆಯುತ್ತಿತ್ತು, ರಿತು ನನ್ನ ಮಗಳ ಪಾತ್ರದಲ್ಲೇ ಅಭಿನಯಿಸುತ್ತಿದ್ದಾಳೆ. ಇದು ಆಳಿದವರ ಕಥೆಯಲ್ಲ, ಅಳಿದು ಉಳಿದವರ ಕಥೆ. ಜಡೇಶ್ ಒಳ್ಳೆಯ ಕಾನ್ಸೆಪ್ಟ್ ಮಾಡಿಕೊಂಡಿದ್ದಾರೆ. ಬಹಳ ವರ್ಷಗಳ ನಂತರ ಸತ್ಯಪ್ರಕಾಶ್ ಅವರು ನಿರ್ಮಾಣಕ್ಕೆ ಮರಳಿದ್ದಾರೆ ಎಂದರು. ನಂತರ ಮೊದಲ ಬಾರಿಗೆ ಕ್ಯಾಮೆರಾ ಎದುರಿಸುತ್ತಿರುವ ರಿತನ್ಯ ಮಾತನಾಡುತ್ತ, ನನ್ನ ಮೊದಲ ಚಿತ್ರದಲ್ಲೇ ಅಪ್ಪನ ಜೊತೆಗೆ ನಟಿಸುತ್ತಿರುವುದಕ್ಕೆ ತುಂಬಾ ಖುಷಿಯಾಗುತ್ತಿದೆ. ಅಭಿನಯಕ್ಕೆ ಹೆಚ್ಚು ಅವಕಾಶವಿರುವ ಪಾತ್ರವಿದು ಎಂದರು. ಛಾಯಾಗ್ರಾಹಕ ಸ್ವಾಮಿ, ಸೂರಜ್‌ಗೌಡ, ಸಂಭಾಷಣೆಗಾರ ಮಾಸ್ತಿ ಚಿತ್ರದ ಬಗ್ಗೆ ಮಾತನಾಡಿದರು.

ದೇಶಪ್ರೇಮದ ಕಥೆ 'ಹೈನ'ಗೆ ತೇಜಸ್ವಿ ಸೂರ್ಯ ಸಾಥ್



ಕೆಂಪಿರ್ವೆ, ಬಬ್ಲೂಷದಂಥ ವಿಭಿನ್ನ ಚಿತ್ರಗಳನ್ನೇ ನಿರ್ದೇಶಿಸಿರುವ ವೆಂಕಟ್ ಭಾರದ್ವಾಜ್ ಅವರ ನಿರ್ದೇಶನದ ಮತ್ತೊಂದು ಚಿತ್ರ ಹೈನ. ಪೆಟ್ರಿಯಾಟಿಕ್ ಕಥಾಹಂದರ ಹೊಂದಿರುವ ಈ ಚಿತ್ರ ಜ.31ರಂದು ತೆರೆಗೆ ಬರಲಿದೆ. ಇತ್ತೀಚೆಗೆ ಸಂಸದ ತೇಜಸ್ವಿ ಸೂರ್ಯ, ಈ ಚಿತ್ರದ ಟ್ರೈಲರ್ ಬಿಡುಗಡೆಗೊಳಿಸಿದರು. ನಂತರ ಮಾತನಾಡಿದ ತೇಜಸ್ವಿ ಸೂರ್ಯ, ಸಮಾಜಕ್ಕೆ ಉತ್ತಮ ಸಂದೇಶ ನೀಡುವ ಇಂಥ ಚಿತ್ರಗಳು ಹೆಚ್ಚು ಹೆಚ್ಚು ಬರಬೇಕು. ಪ್ರಚಲಿತ ವಿಷಯಗಳನ್ನೇ ಇಟ್ಟುಕೊಂಡು ಜನರಲ್ಲಿ ಅರಿವು. ಜಾಗೃತಿ ಮೂಡಿಸುವ ಪ್ರಯತ್ನವನ್ನು ನಿರ್ದೇಶಕ ವೆಂಕಟ್ ಈ ಚಿತ್ರದ ಮೂಲಕ ಮಾಡಿರುವುದು ಮೆಚ್ಚುವಂಥದ್ದು. ಅವರ ಪ್ರಯತ್ನಕ್ಕೆ ಜಯ ಸಿಗಲಿ ಎಂದು ಹಾರೈಸಿದರು,

ಚಿತ್ರಕಥೆ ಬರೆದು ನಿರ್ದೇಶಿಸಿರುವ ವೆಂಕಟ್ ಭಾರದ್ವಾಜ್ ಮಾತನಾಡುತ್ತ, ಇಂತಹ ದೇಶಪ್ರೇಮ ಸಾರುವ ಚಿತ್ರವನ್ನು ನಿರ್ದೇಶನ ಮಾಡಿದ್ದು ನನಗೆ ತೃಪ್ತಿ ತಂದಿದೆ. ಗುಪ್ತಚರ ಇಲಾಖೆ, ಪೊಲೀಸ್ ಇಲಾಖೆ ಹಾಗೂ ರಕ್ಷಣಾ ಇಲಾಖೆಯ ಕಾರ್ಯವೈಖರಿಯ ಬಗ್ಗೆ ನಮ್ಮ ಚಿತ್ರದಲ್ಲಿ ಹೇಳಿದ್ದೇವೆ. ನಮ್ಮ ಚಿತ್ರದಲ್ಲಿ ಬೇರೆ ದೇಶಗಳ ಹೆಸರುಗಳನ್ನು ಬಳಸಿದ್ದೆವು. ಅದನ್ನು ತೆಗೆದು ಹಾಕುವಂತೆ ಸೆನ್ಸಾರ್ ಮಂಡಳಿ ಸೂಚಿಸಿದೆ. ಅದು ಸ್ವಲ್ಪ ಬೇಸರವಾಗಿದೆ. ಉಳಿದಂತೆ ಚಿತ್ರತಂಡದ ಸಹಕಾರದಿಂದ ಹೈನ ಚೆನ್ನಾಗಿ ಮೂಡಿಬಂದಿದೆ ಎಂದರು. ಅಕ್ರಮ ವಲಸಿಗರು ನಮ್ಮ ದೇಶದೊಳಗೆ ನುಸುಳಿ, ಹೇಗೆ ನಮ್ಮದೇ ಹಣವನ್ನು ಉಪಯೋಗಿಸುತ್ತಿದ್ದಾರೆ. ದೇಶದ ಆಂತರಿಕ ಭದ್ರತೆ, ಭಯೋತ್ಪಾದಕರಿಗೆ ಹಣ ಹೇಗೆ ಬರುತ್ತದೆ ಎಂಬುದನ್ನು, ಹೈನ ಚಿತ್ರದಲ್ಲಿ ತೋರಿಸಲಾಗಿದೆ ಎಂದು ಕಥೆ ಬರೆದಿರುವ ಲಕ್ಷ್ಮಣ್ ಶಿವಶಂಕರ್ ಅವರು ವಿವರಿಸಿದರು. ಛಾಯಾಗ್ರಾಹಕ ನಿಶಾಂತ್ ನಾಣಿ, ಸಂಕಲನಕಾರ ಶಮೀಕ್ ಚಿತ್ರದ ಬಗ್ಗೆ ಮಾಹಿತಿ ಹಂಚಿಕೊಂಡರು ವೆಂಕಟ್ ಭಾರದ್ವಾಜ್ ಹಾಗೂ ರಾಜ್‌ಕಮಲ್ ಸೇರಿ ನಿರ್ಮಿಸಿರುವ ಈ ಚಿತ್ರದ ಪ್ರಮುಖ ತಾರಾಬಳಗದಲ್ಲಿ ಹರ್ಷ ಅರ್ಜುನ್, ದಿಗಂತ ಸ್ವರೂಪ, ರಾಜ್‌ಕುಮಲ್, ಲಕ್ಷ್ಮಣ ಶಿವಶಂಕರ್, ನಂದಕಿಶೋರ್ ಮತ್ತು ಲಾರೆನ್ಸ್ ಪ್ರೀತಂ ನಟಿಸಿದ್ದಾರೆ.




'ಭಗೀರಥ'ನಿಗೆ ದೊಡ್ಮನೆ ಕುಟುಂಬ ಸಾಥ್

ಅಸಾಧ್ಯವಾದದ್ದನ್ನು ನಿರಂತರ ಪ್ರಯತ್ನದಿಂದ ಸಾಧಿಸುವುದಕ್ಕೆ ಭಗೀರಥ ಪ್ರಯತ್ನ ಎನ್ನುತ್ತೇವೆ. ಇಂತಹ ವಿಭಿನ್ನ ಕಥೆಯನ್ನಿಟ್ಟುಕೊಂಡು ಬರುತ್ತಿರುವ ಸಿನಿಮಾ ಭಗೀರಥ. ಇತ್ತೀಚೆಗೆ ಈ ಚಿತ್ರದ ಟ್ರೇಲರ್ ಬಿಡುಗಡೆಯಾಯಿತು.

ಪಾರ್ವತಮ್ಮ ರಾಜ್‌ಕುಮಾರ್ ಸಹೋದರರಾದ ಎಸ್.ಎ.ಚಿನ್ನೇಗೌಡ, ಎಸ್.ಎ.ಗೋವಿಂದರಾಜು, ಎಸ್.ಎ. ಶ್ರೀನಿವಾಸ್ ಹಾಗೂ ಡಾ||ರಾಜ್ ಅವರ ಪುತ್ರಿ ಲಕ್ಷ್ಮೀ ಗೋವಿಂದರಾಜು ಹೀಗೆ ದೊಡ್ಮನೆಯ ಕುಟುಂಬವೇ ಆಗಮಿಸಿ ಭಗೀರಥ ಚಿತ್ರದ ಟ್ರೈಲರ್ ಬಿಡುಗಡೆ ಕಾರ್ಯಕ್ರಮಕ್ಕೆ ಸಾಕ್ಷಿಯಾಯಿತು. ಪ್ರದೀಪ್ ವರ್ಮ ಅವರ ಸಂಗೀತದಲ್ಲಿ ಮೂಡಿಬಂದಿರುವ ಚಿತ್ರದ 4 ಹಾಡುಗಳನ್ನು ವಿಜಯ್ ಪ್ರಕಾಶ್, ಶೃತಿ ಪ್ರಹ್ಲಾದ್ ಹಾಗೂ ಹೇಮಂತ್‌ಕುಮಾರ್ ಹಾಡಿದ್ದಾರೆ. ಚಿತ್ರದಲ್ಲಿ ನಾಯಕನಾಗಿ ಜಯಪ್ರಕಾಶ್ ರೆಡ್ಡಿ, ನಾಯಕಿಯರಾಗಿ ಚಂದನಾ ರಾಘವೇಂದ್ರ, ನಿಸರ್ಗ ಹಾಗೂ ರೂಪಶ್ರೀ ನಟಿಸಿದ್ದಾರೆ. ನಿರ್ದೇಶಕ ರಾವ್ ಜನಾರ್ಧನ್ ಮಾತನಾಡುತ್ತ, ಹೆಸರೇ ಹೇಳುವಂತೆ ಅಸಾಧ್ಯವಾದುದ್ದನ್ನು ಸಾಧಿಸುವವನು. ನಮ್ಮ ಚಿತ್ರದ ಕಥೆಯೂ ಇದೇ ಅರ್ಥದಲ್ಲಿ ಸಾಗುತ್ತದೆ. ಹೆಣ್ಣನ್ನು ಎಷ್ಟು ಗೌರವಿಸಬೇಕು ಅಂತ ಚಿತ್ರದಲ್ಲಿ ಹೇಳಿದ್ದೇವೆ, ನಾಯಕಿಯ ಪಾತ್ರವನ್ನು ಗಂಗೆಗೆ ಹೋಲಿಸಲಾಗಿದ್ದು ಆಕೆಯನ್ನು ಉಳಿಸಿಕೊಳ್ಳಲು ನಾಯಕ ಅದೆಷ್ಟು ಪ್ರಯತ್ನ ಮಾಡುತ್ತಾನೆ ಅನ್ನೋದೇ ಚಿತ್ರದ ಕಾನ್ಸೆಪ್ಟ್ ಎಂದರು. ಸಾಯಿ ರಮೇಶ್ ಪ್ರೊಡಕ್ಷನ್ ಲಾಂಛನದಲ್ಲಿ ನಾನು, ಕೆ.ರಮೇಶ್ ಹಾಗೂ ಬಿ.ಭೈರಪ್ಪ ಸೇರಿ ಈ ಚಿತ್ರವನ್ನು ನಿರ್ಮಿಸಿದ್ದೇವೆ ಎಂದು ನಿರ್ಮಾಪಕ ಚೇತನ್ ಎಸ್.ರಮೇಶ್ ಹೇಳಿದರು. ಈ ಚಿತ್ರದಲ್ಲಿ ನನ್ನದು ಯಾವುದಕ್ಕೂ ಹೆದರದ, ವಿಲ್‌ಪವರ್ ಇರುವ ಮನುಷ್ಯನ ಪಾತ್ರ. ಚಿತ್ರದಲ್ಲಿ ಸಾಹಸ ಸನ್ನಿವೇಶಗಳು ಹೈಲೈಟ್ ಎಂದು ನಾಯಕ ಎಸ್.ಜಯಪ್ರಕಾಶ್ (ಜೆಪಿ) ಹೇಳಿದರು. ಚಿತ್ರದಲ್ಲಿ ನಾನೊಬ್ಬ ಪತ್ರಕರ್ತೆಯಾಗಿ ಅಭಿನಯಿಸಿದ್ದೇನೆ. ಗುಡ್‌ನ್ಯೂಸ್ ಗಾಯತ್ರಿ ನನ್ನ ಪಾತ್ರದ ಹೆಸರು. ತನ್ನೂರನ್ನು ರಾಮರಾಜ್ಯದ ಥರ ಮಾಡಿರುವ ಸೂರ್ಯಕಿರಣ್ ಸಂದರ್ಶನ ತಗೋಬೇಕು ಎಂದು ಆ ಊರಿಗೆ ಹೋದಾಗ ಆಕೆಗೆ ಏನೋ ಒಂದು ತೊಂದರೆ ಎದುರಾಗುತ್ತೆ, ಮುಂದೆ ನಡೆಯುವುದೇನು ಅನ್ನೋದೇ ಚಿತ್ರದ ಕಥೆ ಎಂದು ನಾಯಕಿ ಚಂದನ ರಾಘವೇಂದ್ರ ಹೇಳಿದರು. ನಿಸರ್ಗ ಅಣ್ಣಪ್ಪ, ರೂಪಶ್ರೀ ಉಳಿದ ನಾಯಕಿಯರಾಗಿ ಕಾಣಿಸಿಕೊಂಡಿದ್ದಾರೆ. ಸಂಗೀತ ನಿರ್ದೇಶಕ ಪ್ರದೀಪ್ ವರ್ಮ ಹಾಡುಗಳ ಬಗ್ಗೆ ಹಾಗೂ ಸಾಹಸ ಸಂಯೋಜನೆಯ ಕುರಿತು ಥ್ರಿಲ್ಲರ್ ಮಂಜು ಮಾಹಿತಿ ನೀಡಿದರು.

ಸಿನಿಪದಬಂಧ–561



ಉಮ್ಮತ್ತೂರು ಇಂದುಶೇಖರ್
ಮೊ.9880820462



ಹೆಸರು ______
ವಿಳಾಸ ______
ದೂರವಾಣಿ ಸಂಖ್ಯೆ ______

ಎಡದಿಂದ ಬಲಕ್ಕೆ

1.ನವರಸ ನಾಯಕನಿಗೆ ಜಿ.ಕೆ.ಮುದ್ದುರಾಜ್ ನಿರ್ದೇಶನವಿದೆ	5
4.ಏಳು ಸಮುದ್ರ	5
6.ಧನಂಜಯ್–ಶೃತಿ ಹರಿಹರನ್ ಅಭಿನಯದಲ್ಲಿ ತಿರುಗಿದ ವಸ್ತು!	2
7.ಅನಂತ್‌ನಾಗ್ ಮುಕ್ತಿಗೊಂಡರೂ ಕೋಳ ತೊಟ್ಟಿದ್ದಾನೆ	7
9."ಒಡೆಯಿತು ಒಲವಿನ _ _ _ ಬರೆಯಿತು ಶೋಕದ ಮುನ್ನುಡಿ.... ",	3
12.ಆಂಟಿ ಪ್ರೀತ್ಸೇ ಚಿತ್ರದ ಹಾಡೊಂದರ ಆರಂಭ	6
13.ರಾಕಿಂಗ್ ಸ್ಟಾರ್ ಯಶ್ "ವ್ಯಾಘ್ರ"	4
15.ವಿಷ್ಣುವರ್ಧನ್ "ಹೀರೋ"	5
16.ಬಾಲರಾಜ್ ಮಾಡಿದ ಶಿವನ ಭಯಂಕರ ನೃತ್ಯ	5
18.ಅಂಬಿ ಹಾರಿಸಿದ ಪತಾಕೆ	5

ಮೇಲಿನಿಂದ ಕೆಳಕ್ಕೆ

1.ದಶರಥ ಪುತ್ರನ ನಾಡಿನಲ್ಲಿ ದುಷ್ಟರು ಇದ್ದಾರೆ	10
2.ಮನ್ಮಥನ ಹೆಂಡತಿ	2
3.ರವಿಚಂದ್ರನ್ ಇಬ್ಬರ ಹೆಂಡಿರ ನಡುವೆ ಸಿಲುಕಿದ್ದಾನೆ	6
4.ವಿಜಿ ಇರಿಸಿಕೊಂಡಿರುವ ಸಂಗೀತಾಕ್ಷರ	4
5.ಅಂಗ ಸಾಧನೆ ಮಾಡುವ ಸ್ಥಳ ಇಲ್ಲಿ ಅಸ್ತವ್ಯಸ್ತ	3
8.ಈ ನಟ ಮಾಸ್ಟರ್ ಪೀಸ್	2
10.ವಿಷ್ಣುವರ್ಧನ್ ಮಂದಿಯ ಮುಖಂಡ	5
11.ಅಂಬಿಯ ಬಲಿಯಾದ ಚಿತ್ರವಿದು	3
14.ರಾಜ್‌ಕುಮಾರ್ ಅಭಿನಯದಲ್ಲಿ ಬಂದ ಜಾತಿಯ ಹೆಣ್ಣು	4
15.ರಾಜೇಶ್–ಆರತಿ ಅಭಿನಯದ ಚಿತ್ರ	4
17.ಬಲೆ ನೇಯ್ದ "ಹುಳು"	2

ಸಿನಿ ಪದಬಂಧ 560ರ ಉತ್ತರ

ಕೂ	ರ್ಮಾ	ವ	ತಾ	ರ	■	ಜ	ಗ	ನ್ಮೋ	ಹಿ	ನಿ
ಡಿ	■	ಜ	■	ತಿ	■	ರ	■	■	■	ರೋ
ಬಾ	ಲು	■	■	ಅ	ವ	ತಾ	ರ	ಪು	ರು	ಷ
ಳಿ	■	ಪ್ರೇ	ಮಾ	ಗ್ನಿ	■	ರಿ	■	ಟ್ಟ	■	■
ದ	■	■	■	ಹೋ	■	■	■	■	ರಾಂ	■
ರೆ	■	ಭಾ	■	ತ್ರಿ	ಬ	ಲ್	ರೈ	ಡಿಂ	ಗ್	■
ಸ್ವ	ಯಂ	ವ	ರ	■	■	■	■	■	ನಂ	■
ರ್ಗ	■	ನಾ	■	ವಿ	■	ನ	ಮ್ಮೂ	ರ	ಬ	ಸ್ವಿ
ಸು	■	■	■	ಷ	■	ವ	■	■	ರ್	■
ಖ	ಳ	ನಾ	ಯ	ಕ	■	ನೀ	■	ತೇ	■	■
■	■	■	■	ನ್ಯೆ	■	ತ	ವ	ರು	ಮ	ನೆ

ವಿಜೇತರು: ಜಿ.ಶಿವಮಾಲಾ, ಚಾಮರಾಜಪುರಂ, ಜಯಲಕ್ಷ್ಮಿವಿಲಾಸ್ ರೋಡ್, ಮೈಸೂರು.

ವಿಳಾಸ: 'ಸಿನಿಬಂಧ' ವಿಭಾಗ, 'ಮೈಸೂರು ಮಿತ್ರ' ದಿನಪತ್ರಿಕೆ, ಬನ್ನಿಮಂಟಪ, ಮೈಸೂರು–570 015

ಜ.26ಕ್ಕೆ ರಾಘವೇಂದ್ರ ಚಿತ್ರವಾಣಿ ಪ್ರಶಸ್ತಿ ಪ್ರದಾನ





ಒಬ್ಬ ನಿರ್ಮಾಪಕ ಸಿನಿಮಾ ನಿರ್ಮಾಣ ಮಾಡುವುದಷ್ಟೇ ಮುಖ್ಯವಲ್ಲ, ಅದನ್ನು ಸರಿಯಾಗಿ ಪ್ರೇಕ್ಷಕರಿಗೆ ತಲುಪಿಸುವುದು ಕೂಡ ಬಹಳ ಪ್ರಮುಖವಾಗಿರುತ್ತದೆ. ಈ ಹಂತದಲ್ಲಿ ಮಾಧ್ಯಮ ಪ್ರಮುಖ ಪಾತ್ರ ವಹಿಸುತ್ತದೆ. ಇಲ್ಲಿ ನಿರ್ಮಾಪಕರು ಹಾಗೂ ಸಿನಿಮಾ ಪತ್ರಕರ್ತರ ನಡುವೆ ಕೊಂಡಿಯಾಗಿ ಕೆಲಸ ಮಾಡುವುದು ಆ ಸಿನಿಮಾದ ಪ್ರಚಾರಕರ್ತರು. ಹೀಗೆ ಇವರಿಬ್ಬರಿಗೂ ಸಂಪರ್ಕ ಬೆಸೆಯುವ ಕೆಲಸವನ್ನು ಬಹಳ ಹಿಂದೆ ಕನ್ನಡ ಚಿತ್ರರಂಗದಲ್ಲಿ ಮೊದಲು ಪ್ರಾರಂಭಿಸಿದ್ದು ಪ್ರಚಾರಕರ್ತ ಡಿ.ವಿ.ಸುಧೀಂದ್ರ ಅವರು. ತಮ್ಮ ರಾಘವೇಂದ್ರ ಚಿತ್ರವಾಣಿ ಸಂಸ್ಥೆಯ ಮೂಲಕ ಅವರು ಸಿನಿಮಾ ಪತ್ರಕರ್ತರ ಸಂಪರ್ಕದಲ್ಲಿದ್ದುಕೊಂಡು ನೂರಾರು ಕನ್ನಡ ಸಿನಿಮಾಗಳಿಗೆ ಪ್ರಚಾರಕಾರ್ಯವನ್ನು ನಿರ್ವಹಿಸಿದರು. ಅವರು ತಮ್ಮ ಸಂಸ್ಥೆಯ 25ನೇ ವರ್ಷಾಚರಣೆಯ ಸಂದರ್ಭದಲ್ಲಿ ಹಿರಿಯ ನಿರ್ಮಾಪಕರು ಮತ್ತು ಹಿರಿಯ ಪತ್ರಕರ್ತರಿಗೆ ಪ್ರಶಸ್ತಿ ನೀಡಿ ಗೌರವಿಸುವ ಪರಿಪಾಠ ಆರಂಭಿಸಿದರು. ಅದರ ಜತೆಗೆ ಮತ್ತೆ ಕೆಲವರು ಪ್ರಶಸ್ತಿ ನೀಡಲು ಮುಂದೆ ಬಂದರು. ಹೀಗೆ ಪ್ರಾರಂಭವಾದ ಪ್ರಶಸ್ತಿಗಳ ಸಂಖ್ಯೆ ಇದೀಗ ಹತ್ತಕ್ಕೇರಿದೆ. ರಾಘವೇಂದ್ರ ಚಿತ್ರವಾಣಿ ಸಂಸ್ಥೆಯ 49ನೇ ವಾರ್ಷಿಕೋತ್ಸವ ಹಾಗೂ 24ನೇ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಇದೇ ತಿಂಗಳ 26ರ ಭಾನುವಾರ ಸಂಜೆ ಬೆಂಗಳೂರಿನ ಎಂಎಂಬಿ ಲೆಗೆಸಿ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ,

ಈ ವರ್ಷದ ಶ್ರೀರಾಘವೇಂದ್ರ ಚಿತ್ರವಾಣಿ ಪ್ರಶಸ್ತಿಯನ್ನು ಹಿರಿಯ ಪತ್ರಕರ್ತರಾದ ಕೆ.ಜೆ.ಕುಮಾರ್ ಹಾಗೂ ನಿರ್ಮಾಪಕ ಕೆ.ವಿ.ಜಯರಾಂ ಪತ್ನಿ ಮೀನಾಕ್ಷಿ ಜಯರಾಂ ಅವರಿಗೆ ನೀಡಲಾಗುತ್ತದೆ. ಉಳಿದಂತೆ ಅರ್ಜುನ್ ಜನ್ಯ(ಸಂಗೀತ ನಿರ್ದೇಶಕ), ಡಾ|| ವಿ.ನಾಗೇಂದ್ರಪ್ರಸಾದ್(ಗೀತರಚನೆಕಾರ), ಕು.ಅನುರಾಧಾಭಟ್ (ಗಾಯಕಿ), ಓಂಪ್ರಕಾಶ್‌ರಾವ್(ಹಿರಿಯ ನಿರ್ದೇಶಕರು), ಶ್ರೀಮತಿ ರೇಖಾರಾವ್ (ಹಿರಿಯ ನಟಿ), ಜಯಶಂಕರ್ ಆರ್ಯ (ಕಥಾ ಲೇಖಕ ಹಾಗೂ ನಿರ್ದೇಶಕ), ಚಂದ್ರಜಿತ್ ಬೆಳ್ಳಿಯಪ್ಪ (ಸಂಭಾಷಣೆಕಾರ ಹಾಗೂ ನಿರ್ದೇಶಕ), ಉತ್ಸವ್ ಗೋನ್ವಾರ್ (ನಿರ್ದೇಶಕ) ರಾಘವೇಂದ್ರ ಚಿತ್ರವಾಣಿ ಪ್ರಶಸ್ತಿ ಪಡೆಯುತ್ತಿರುವವರ ಪಟ್ಟಿಯಲ್ಲಿದ್ದಾರೆ.

ಬಸವೇಶ್ವರ ಪ್ರತಿಮೆ ವಿರೂಪ ಖಂಡಿಸಿ ಪ್ರತಿಭಟನೆ



ಬಸವೇಶ್ವರ ಪ್ರತಿಮೆ ವಿರೂಪ ಖಂಡಿಸಿ ಪ್ರತಿಭಟನೆ ನಡೆಸಲಾಯಿತು

ನಂಜನಗೂಡು, ಜ.23– ಬೀದರ್ ಜಿಲ್ಲೆ ದಾಡಗಿ ಗ್ರಾಮದಲ್ಲಿ ದುಷ್ಕರ್ಮಿಗಳು ಬಸವೇಶ್ವರ ಪ್ರತಿಮೆ ವಿರೂಪಗೊಳಿಸಿರುವುದನ್ನು ಖಂಡಿಸಿ ನಗರದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯುತ ಮಹಾಸಭಾ ಕಾರ್ಯಕರ್ತರು ಗುರುವಾರ ಪ್ರತಿಭಟನೆ ನಡೆಸಿದರು.

ನಗರದ ತಹಸೀಲ್ದಾರ್ ಕಚೇರಿ ಎದುರು ಜಮಾಯಿಸಿದ ಪ್ರತಿಭಟನಾಕಾರರು ಕೂಡಲೇ ಕಿಡಿಗೇಡಿಗಳನ್ನು ಬಂಧಿಸುವಂತೆ ಆಗ್ರಹಿಸಿದರು. ಹಲ್ಲರೆ ಮಠದ ಬಸವಣ್ಣ ಸ್ವಾಮೀಜಿ ಮಾತನಾಡಿ, ವೀರಶೈವ ಲಿಂಗಾಯತ ಸಮಾಜದವರು ಶಾಂತ ಸ್ವಭಾವದವರು ಅವರನ್ನು ಕೆಣಕಿ ವೀರ ಭದ್ರೇಶ್ವರ ಅವತಾರ ತಾಳಲು ಬಿಡಬೇಡಿ. ಈ ಹಿಂದೆ ಕಿಡಿಗೇಡಿಗಳು ಬೆಂಗಳೂರಿನಲ್ಲಿ ಸಿದ್ಧಗಂಗಾ ಶ್ರೀಗಳ ಪ್ರತಿಮೆ ವಿರೂಪಗೊಳಿಸಿದ್ದರು. ಇದೀಗ ಬೀದರ್‌ನಲ್ಲಿ ಜಗಜ್ಯೋತಿ ಬಸವೇಶ್ವರರ ಪುತ್ಥಳಿ ವಿರೂಪಗಳಿಸಿದ ಕಿಡಿಗೇಡಿಗಳನ್ನು ಸರ್ಕಾರ ಕೂಡಲೇ ಬಂಧಿಸಬೇಕು. ಅವರಿಗೆ ಕಠಿಣ ಶಿಕ್ಷೆಯಾಗಬೇಕು. ಇಲ್ಲದಿದ್ದರೆ ಸಮಾಜದವರು ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸಬೇಕಾ ಗುತ್ತದೆ ಎಂದು ಎಚ್ಚರಿಕೆ ನೀಡಿದರು.

ತಾಲೂಕು ಅಖಿಲ ಭಾರತ ವೀರಶೈವ ಲಿಂಗಾಯುತ ಮಹಾಸಭಾ ಅಧ್ಯಕ್ಷ ಎಸ್.ಎಂ.ಕೆಂಪಣ್ಣ ಮಾತನಾಡಿ, ನಮ್ಮ ಸಮಾಜದ ಮೇಲೆ ನಿರಂತರ ದಬ್ಬಾಳಿಕೆ ನಡೆಯುತ್ತಿದೆ. ಬೆಳಗಾವಿ ಅಧಿವೇಶನದ ಸಂದರ್ಭ ಪಂಚಮಸಾಲಿ 2ಎ ಮೀಸಲಾತಿ ವಿಚಾರವಾಗಿ ನಡೆದ ಹೋರಾಟದಲ್ಲಿ ನಮ್ಮ ಸಮಾಜದ ಸ್ವಾಮೀಜಿಗಳ ಮೇಲೆ ಲಾಠಿಚಾರ್ಜ್ ನಡೆಸಲಾಯಿತು. ಬೀದರ್ ಜಿಲ್ಲೆಯಲ್ಲಿ ಬಸವೇಶ್ವರ ಪ್ರತಿಮೆ ವಿರೂಪಗೊಳಿಸಿರುವುದನ್ನು ಮಹಾಸಭಾ ಖಂಡಿಸುತ್ತದೆ. ಸರ್ಕಾರ ತಕ್ಷಣ ಕಿಡಿಗೇಡಿಗಳನ್ನು ಬಂಧಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಮುಖಂಡರಾದ ಚೆನ್ನಪ್ಪ ಅನುಸೂಯ, ಮಾದಪ್ಪ ಅರ್ಜುನ್, ಪಾರ್ಥ, ಶಿವಪ್ಪ ದೇವರು, ನಟರಾಜು, ಶಿವಕುಮಾರ್, ರೇವಣ್ಣ, ನಂಜಮ್ಮಣಿ, ಮಹೇಶ್, ಮಂಜುನಾಥ್, ಕೋಮಲ, ನಂದಿನಿ, ಶಿವನಾಗಪ್ಪ, ಮಹದೇವಸ್ವಾಮಿ, ನವೀನ್, ಶಶಿಕಲಾ, ಮಹೇಶ್, ಮಹದೇವ ಪ್ರಸಾದ್, ಎನ್.ಸಿ.ಬಸವಣ್ಣ, ಗುರುಸ್ವಾಮಿ ಉಪಸ್ಥಿತರಿದ್ದರು.

ಅಂಕನಹಳ್ಳಿ: ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ



ರಸ್ತೆ ಅಭಿವೃದ್ಧಿ ಕಾಮಗಾರಿಗೆ ಶಾಸಕ ಡಿ.ರವಿಶಂಕರ್ ಚಾಲನೆ ನೀಡಿದರು.

ಕೆ.ಆರ್.ನಗರ, ಜ.23– ಚುನಾವಣಾ ಪೂರ್ವ ಗ್ರಾಮಸ್ಥರಿಗೆ ನೀಡಿದ ಭರವಸೆಯಂತೆ ಗ್ರಾಮದ ಮುಖ್ಯರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಲಾಗಿದ್ದು, ಜೊತೆಗೆ ಅಂಕನಹಳ್ಳಿ ಸುತ್ತಮುತ್ತ ಹೈನುಗಾರಿಕೆ ಮಾಡುವವರಿಗೆ ಅನುಕೂಲ ಕಲ್ಪಿಸಲು ಪಶು ಆಸ್ಪತ್ರೆ ಆರಂಭ ಮಾಡಲಾಗುತ್ತದೆ ಎಂದು ಶಾಸಕ ಡಿ.ರವಿಶಂಕರ್ ತಿಳಿಸಿದರು.

ಸಾಲಿಗ್ರಾಮ ತಾಲೂಕು ಅಂಕನಹಳ್ಳಿ ಗ್ರಾಮದಲ್ಲಿ ಕೆ.ಆರ್.ನಗರ ತಾಲೂಕು ಹೊಸಕೋಟೆ ಗ್ರಾಮದಿಂದ ಚಿಬುಕಹಳ್ಳಿ, ಕೋಗಿಲೂರು, ಬೆಣಗನಹಳ್ಳಿ, ಸೋಮನಹಳ್ಳಿ, ಅಂಕನಹಳ್ಳಿ ಮೂಲಕ ಮಾಯಿಗೌಡನಹಳ್ಳಿ ಮುಖ್ಯರಸ್ತೆಗೆ ಸಂಪರ್ಕ ಕಲ್ಪಿಸುವ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದ ಅವರು, ಈ ಭಾಗದ ಉಳಿದ ರಸ್ತೆಅಭಿವೃದ್ಧಿಗಾಗಿ 10 ಕೋಟಿ ರೂ. ಅವಶ್ಯಕತೆ ಇದ್ದು ಮುಂದಿನ ದಿನಗಳಲ್ಲಿ ತಲಾ 5 ಕೋಟಿ ರೂ.ಗಳನ್ನು ಹಂತ ಹಂತವಾಗಿ ಬಿಡುಗಡೆ ಮಾಡಿಸಲಾಗುತ್ತದೆ. ಅಂಕನಹಳ್ಳಿ ಮತ್ತು ಸುತ್ತಮುತ್ತಲ ಗ್ರಾಮಸ್ಥರ ಅನುಕೂಲಕ್ಕಾಗಿ ಪಶು ಆಸ್ಪತ್ರೆ ಮಂಜೂರು ಮಾಡಿಸಲಾಗಿದ್ದು, ಶೀಘ್ರ ಆರಂಭಿಸಲು ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಚುಂಚನಕಟ್ಟೆ ಶ್ರೀರಾಮ ಸಹಕಾರ ಸಕ್ಕರೆ ಕಾರ್ಖಾನೆಯನ್ನು ಗುತ್ತಿಗೆಗೆ ಪಡೆದಿರುವ ನಿರಾಣಿ ಶುಗರ್ಸ್ ಲಿ. ಅವರು ಮುಂದಿನ ತಿಂಗಳು ಗುತ್ತಿಗೆ ಕರಾರು ನೋಂದಣಿ ಮಾಡಿಸಿಕೊಂಡು ಕಾರ್ಖಾನೆ ಪುನರಾರಂಭ ಮಾಡಲಿದ್ದಾರೆ. ಇದರಿಂದ ಈ ಭಾಗದ ಕಬ್ಬು ಬೆಳೆಗಾರರಿಗೆ ಮತ್ತು ವ್ಯಾಪಾರಸ್ಥರಿಗೆ ಅನುಕೂಲವಾಗಲಿದೆ ಎಂದು ತಿಳಿಸಿದರು.

ಅಂಕನಹಳ್ಳಿ ಗ್ರಾಮದ ಬಸವೇಶ್ವರ ದೇವಾಲಯದ ಗೋಪುರ ಮತ್ತು ಕುರ್ಜು ನಿರ್ಮಾಣಕ್ಕೆ ಶಾಸಕರ ನಿಧಿಯಿಂದ ಅಗತ್ಯ ಅನುದಾನ ನೀಡಲಿದ್ದು, ಮುಂದಿನ 6 ತಿಂಗಳೊಳಗೆ ಕಾಮಗಾರಿ ಪೂರ್ಣಗೊಂಡು ದೇವಾಲಯದ ಜೀರ್ಣೋದ್ಧಾರ ಮಾಡಿಸಿ ಉದ್ಘಾಟಿಸಲಾಗುತ್ತದೆ ಎಂದರು.

ಹೊಸಕೋಟೆಯಿಂದ ಕೆ.ಆರ್.ನಗರ ಪುರಸಭೆ ವೃತ್ತದವರೆಗೆ 22 ಕೋಟಿ ರೂಗಳ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಲು ಜ.29ರಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ ಜಾರಕಿಹೋಳಿ ಆಗಮಿಸಲಿದ್ದಾರೆ. ಈ ವೇಳೆ ಕ್ಷೇತ್ರದ ಹಲವು ರಸ್ತೆಗಳ ಅಭಿವೃದ್ಧಿಗೆ ಅನುದಾನ ನೀಡುವಂತೆ ಮನವಿ ಸಲ್ಲಿಸಲಾಗುತ್ತದೆ ಎಂದರು.

ತಾಪಂ ಮಾಜಿ ಅಧ್ಯಕ್ಷ ಮಹದೇವಸ್ವಾಮಿ ಮಾತನಾಡಿ, ಕಳೆದ 20 ವರ್ಷಗಳಿಂದ ಅಭಿವೃದ್ಧಿಯಲ್ಲಿ ನಿರ್ಲಕ್ಷ್ಯಕ್ಕೊಳಗಾಗಿರುವ ಗ್ರಾಮಗಳ ಅಭಿವೃದ್ಧಿಗೆ ಶಾಸಕರು ಮೊದಲ ಆದ್ಯತೆ ನೀಡುತ್ತಿದ್ದು, ಅವರಿಗೆ ಸರ್ವರೂ ಸಹಕಾರ ನೀಡಬೇಕು ಎಂದು ಕೋರಿದರು.

ಈ ವೇಳೆ ಲೋಕೋಪಯೋಗಿ ಇಲಾಖೆ ಎಇಇ ಸುಮಿತ, ಪಿಡಿಓ ಬಿ.ಕೆ.ರಾಜೇಶ್, ಮುಖಂಡರಾದ ವಂದನಾ, ಸಿ.ಕೆ.ಬಸವರಾಜು, ನಟಬುದ್ದಿ, ವೀರಭದ್ರಪ್ಪ, ಸಣ್ಣತಮ್ಮೇಗೌಡ, ಆನಂದ್, ಉದಯಶಂಕರ್, ಅಶ್ವಥ, ಎನ್.ಸಿ.ಪ್ರಸಾದ್, ಸುರೇಶ್, ಮಲ್ಲಿಕಾರ್ಜುನ, ಜಗದೀಶ್, ಷಣ್ಮುಖ, ಬೀರೇಗೌಡ, ಗುತ್ತಿಗೆದಾರ ಬಸವರಾಜು, ಮಾಧು, ರಮೇಶ್ ಸೇರಿದಂತೆ ಇನ್ನಿತರರಿದ್ದರು.

ರೈತರ ಜ್ವಲಂತ ಸಮಸ್ಯೆಗಳ ಪರಿಹಾರಕ್ಕೆ ಆಗ್ರಹ



ಕಾರ್ಯಕ್ರಮವನ್ನು ಎಂಎಲ್‌ಸಿ ಯತೀಂದ್ರ ಉದ್ಘಾಟಿಸಿದರು.

> ರೈತರು ಕೃಷಿಯಿಂದ ನಷ್ಟ ಅನುಭವಿಸಿದರೂ ಕೃಷಿಯಿಂದ ವಿಮುಖರಾಗಿಲ್ಲ. ರೈತರ ಬೆಳೆಗಳಿಗೆ ಬೆಂಬಲ ಬೆಲೆ ನಿಗದಿ ಹಾಗೂ ಹಲವು ಬೇಡಿಕೆಗಳನ್ನು ಮುಖ್ಯಮಂತ್ರಿಗಳ ಗಮನಕ್ಕೆ ತಂದು ಹಂತ-ಹಂತವಾಗಿ ಪರಿಹರಿಸಲಾಗುವುದು. ಸರ್ಕಾರ ರೈತರ ಪರವಾಗಿದ್ದು ರೈತರ ಹಿತ ಕಾಪಾಡಲು ಬದ್ಧವಾಗಿದೆ.
>
> -ಸುನೀಲ್ ಬೋಸ್, *ಸಂಸದ.*

ನಂಜನಗೂಡು, ಜ.23– ರೈತರು ಮೈಕ್ರೋ ಫೈನಾನ್ಸ್‌ಗಳ ದಬ್ಬಾಳಿಕೆಯಿಂದ ಗ್ರಾಮಗಳನ್ನು ತೊರೆಯುತ್ತಿದ್ದಾರೆ. ಸರ್ಕಾರ ರೈತರು ಬೆಳೆದ ಬೆಳೆಗಳಿಗೆ ಬೆಂಬಲ ಬೆಲೆ ನಿಗದಿಪಡಿಸಬೇಕು. ಟನ್ ಕಬ್ಬಿಗೆ 5.500 ರೂ., ಭತ್ತಕ್ಕೆ 3500 ರೂ. ಬೆಲೆ ನಿಗದಿ ಮಾಡಬೇಕು. ಗ್ರಾಮಠಾಣಾಗಡಿಗಳನ್ನು ವಿಸ್ತರಣೆ ಮಾಡಬೇಕು. ಕಾಡುಪ್ರಾಣಿಗಳ ಉಪಟಳಕ್ಕೆ ಶಾಶ್ವತ ಪರಿಹಾರ ರೂಪಿಸಬೇಕು ಎಂದು ರಾಜ್ಯ ರೈತ ಸಂಘದ ಮುಖಂಡ ಪಚ್ಚೆ ನಂಜುಂಡಸ್ವಾಮಿ ಮನವಿ ಮಾಡಿದರು.

ತಾಲೂಕಿನ ತಾಂಡವಪುರ ಗ್ರಾಮದ ಮಾರಮ್ಮನ ದೇವಾಲಯದ ಆವರಣದಲ್ಲಿ ಸ್ಥಳೀಯ ಶಾಸಕರು, ಸಂಸದರು, ರೈತ ಮುಖಂಡರ ಮುಖಾಮುಖಿ ರೈತಸ್ನೇಹಿ ಚರ್ಚಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಶಾಸಕ ಡಾ.ಯತೀಂದ್ರ ಮಾತನಾಡಿ, ರಾಜ್ಯದಲ್ಲಿ ರೈತಪರ ಸರ್ಕಾರ ಆಡಳಿತ ನಡೆಸುತ್ತಿದೆ. ರೈತ ಸಂಘ ರೈತರ ಸಮಸ್ಯೆ ನಿವಾರಿಸುವ ಸಲುವಾಗಿ ಹಲವು ಹೋರಾಟಗಳನ್ನು ರೂಪಿಸಿದೆ. ಕಾರ್ಖಾನೆಗಳಿಗೆ ಜಮೀನು ನೀಡಿ, ಉದ್ಯೋಗ ನೀಡದೆ ವಂಚಿಸಿದ ಸಂದರ್ಭದಲ್ಲಿ ಹೋರಾಟ ನಡೆಸಿ 550 ಮಂದಿಗೆ ಉದ್ಯೋಗ ದೊರಕಿಸಿದೆ. ಮೈಕ್ರೋ ಫೈನಾನ್ಸ್‌ಗಳ ಹಾವಳಿ ಬಗ್ಗೆ ಸಿಎಂ ಸಿದ್ದರಾಮಯ್ಯ ಜ.25ರಂದು ಸಭೆ ಕರೆದಿದ್ದು, ಸೂಕ್ತ ತೀರ್ಮಾನ ಕೈಗೊಳ್ಳುತ್ತಾರೆ. ತಾಲೂಕಿನಲ್ಲಿ ಅರ್ಜಿ ಸಲ್ಲಿಸಿದ ಬಹುತೇಕ ರೈತರಿಗೆ ಸಾಗುವಳಿ ಚೀಟಿ ವಿತರಿಸಲಾಗಿದೆ. ಉಳಿದಿರುವ ಅರ್ಜಿಗಳ ಪರಿಶೀಲನೆ ನಡೆಸಲಾಗುತ್ತಿದೆ. ನದಿ ಮೂಲದಿಂದ ತಗಡೂರು ಕೆರೆ ತುಂಬಿಸಲು ಕ್ರಮ ವಹಿಸಲಾಗುವುದು. ಸರ್ಕಾರ ವಿವಿಧ ಗ್ರಾಮಗಳಲ್ಲಿ ಓವರ್‌ಹೆಡ್ ಟ್ಯಾಂಕ್ ನಿರ್ಮಿಸಲು 80 ಕೋಟಿ ರೂ. ಅನುದಾನ ನೀಡಿದ್ದು, ಕಾಮಗಾರಿ ಆರಂಭಗೊಳ್ಳಲಿದೆ. ಸಭೆಯಲ್ಲಿ ರೈತರು ಸಲ್ಲಿಸಿರುವ ಹಲವು ಬೇಡಿಕೆಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯನವರ ಗಮನಕ್ಕೆ ತಂದು ಪರಿಹಾರ ದೊರಕಿಸಲಾಗುವುದು ಎಂದರು.

ಶಾಸಕ ದರ್ಶನ್ ಮಾತನಾಡಿ, ನಮ್ಮ ಕ್ಷೇತ್ರ ವ್ಯಾಪ್ತಿಯ ಕಾಡಂಚಿನ ಗ್ರಾಮಗಳಲ್ಲಿ ಕಾಡು ಪ್ರಾಣಿಗಳ ಹಾವಳಿ ತಪ್ಪಿಸಲು, ಕಾಡಂಚಿನ ಭಾಗದಲ್ಲಿ ರೈಲ್ವೆ ಬ್ಯಾರಿಕೇಡ್, ಮೆಶ್ ಅಳವಡಿಸಿ ರೈತರ ಬೆಳೆ ಹಾನಿಯಾಗುವುದನ್ನು ತಪ್ಪಿಸಲಾಗಿದೆ. ದೊಡ್ಡ ಕವಲಂದೆ ಭಾಗದಲ್ಲಿ ದೇವನೂರು ಏತ ನೀರಾವರಿ ಯೋಜನೆ ಜಾರಿಗೆ ತರಲು ಅನುದಾನ ಬಿಡುಗಡೆಯಾಗಿದೆ. ಹಳ್ಳದಕೇರಿಯಿಂದ ದೇವಸರನಹಳ್ಳಿ ವರ್ಗವಾಗಿ ಕಳಲೆ ಗೇಟ್‌ಗೆ ಸೇರುವ ರಸ್ತೆ ಅಭಿವೃದ್ಧಿಪಡಿಸಲಾಗುವುದು ಎಂದರು. ಕಾರ್ಯಕ್ರಮದಲ್ಲಿ ಶಾಸಕ ಗಣೇಶ್ ಪ್ರಸಾದ್, ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ರೈತ ಸಂಘದ ಜಿಲ್ಲಾಧ್ಯಕ್ಷ ವಿದ್ಯಾಸಾಗರ್, ಚನ್ನಪ್ಪ ಪೂಜಾರಿ, ಶರಣಪ್ಪ ದೊಡ್ಡಮನಿ, ಹಿಮ್ಮಾವು ರಘು, ಸತೀಶ್ ರಾವ್, ಮೋಹನ್, ಚುಂಚನಹಳ್ಳಿ ಮಲ್ಲೇಶ್, ಬಂಗಾರಸ್ವಾಮಿ, ಬೊಕ್ಕಹಳ್ಳಿ ನಂಜುಂಡಸ್ವಾಮಿ, ಶ್ವೇತಾ ಸೇರಿದಂತೆ ಹಲವು ರೈತ ಮುಖಂಡರು ಉಪಸ್ಥಿತರಿದ್ದರು.

ತಿ.ನರಸೀಪುರ: ಸುತ್ತೂರು ಜಾತ್ರಾ ಪ್ರಚಾರ ರಥಕ್ಕೆ ಸ್ವಾಗತ




ಸುತ್ತೂರು ಜಾತ್ರಾ ಮಹೋತ್ಸವದ ಪ್ರಚಾರ ರಥಕ್ಕೆ ಸ್ವಾಗತ ಕೋರಲಾಯಿತು.

ತಿ.ನರಸೀಪುರ, ಜ.23– ರಾಜ್ಯ, ನೆರೆ ರಾಜ್ಯಗಳಲ್ಲೂ ಸುತ್ತೂರು ಜಾತ್ರಾ ಮಹೋತ್ಸವ ಪ್ರಸಿದ್ಧಿ ಪಡೆದಿದೆ ಎಂದು ಮೈಸೂರು ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಹೆಳವರಹುಂಡಿ ಸಿದ್ದಪ್ಪ ತಿಳಿಸಿದರು.

ಪಟ್ಟಣದ ಜೆಎಸ್‌ಎಸ್ ಸಭಾ ಭವನದ ಬಳಿ ಆಗಮಿಸಿದ ಸುತ್ತೂರು ಜಾತ್ರಾ ಮಹೋತ್ಸವದ ಪ್ರಚಾರ ರಥಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಅವರು, ಸುತ್ತೂರು ಜಾತ್ರೆಗೆ ಯಾವುದೇ ಪ್ರಚಾರ ಬೇಕಿಲ್ಲ. ಆದರೆ ರಾಜೇಂದ್ರ ಶ್ರೀಗಳು ಜಾತ್ರೆಗೆ ಬರಲಾಗದ ಗ್ರಾಮೀಣ ಜನರು, ಮಕ್ಕಳಿಗೆ ಶ್ರೀಶಿವರಾತ್ರೀಶ್ವರರ ದರ್ಶನ ದೊರಕಿಸುವ ಉದ್ದೇಶದಿಂದ ರಥಯಾತ್ರೆ ಪ್ರಾರಂಭಿಸಿದರು. ಇದೀಗ ಶಿವರಾತ್ರಿ ದೇಶಿಕೇಂದ್ರ ಶ್ರೀಗಳು ಕೂಡ ಅದನ್ನು ಮುಂದುವರೆಸಿದ್ದಾರೆ. ಈ ರಥ ಗ್ರಾಮೀಣ ಪ್ರದೇಶಗಳಲ್ಲಿ ಸಂಚರಿಸಿ ಶಿವರಾತ್ರೀಶ್ವರರ ದರ್ಶನ ನೀಡಲಿದೆ. ಜಾತಿ, ಮತ, ಬೇಧವಿಲ್ಲದೇ ಸರ್ವ ಸಮುದಾಯಗಳು ಪಾಲ್ಗೊಳ್ಳುವ ಜಾತ್ರೆ ಇದಾಗಿದೆ ಎಂದರು.

ಈ ವೇಳೆ ವಾಟಾಳು ಮಠದ ಸಿದ್ಧಲಿಂಗ ಶಿವಾಚಾರ್ಯ ಸ್ವಾಮೀಜಿ, ಎಂ.ಎಲ್.ಹುಂಡಿ ವಿರಕ್ತ ಮಠದ ಗೌರಿಶಂಕರ ಸ್ವಾಮೀಜಿ, ತಾಲೂಕು ಅಧ್ಯಕ್ಷ ಸೋಮಶೇಖರ್, ಬಿಜೆಪಿ ಮಂಡಲ ಅಧ್ಯಕ್ಷ ಸತ್ಯರಾಜ್, ಉದ್ಯಮಿ ಹೋಟೆಲ್ ರಾಜಣ್ಣ, ವೀರಶೈವ ಲಿಂಗಾಯತ ಮಹಾಸಭಾಧ್ಯಕ್ಷ ಎಸ್‌ಎಂಆರ್ ಪ್ರಕಾಶ್, ಕಾರ್ಯದರ್ಶಿಗಳಾದ ಕಾರ್ ಮಲ್ಲಪ್ಪ ಬಸವ ಬಳಗದ ಅಧ್ಯಕ್ಷ ಪರಮೇಶ್ ಪಟೇಲ್, ನಂಜುಂಡಸ್ವಾಮಿ, ನಿರ್ದೇಶಕರಾದ ತೊಂಟೇಶ್, ಮಾಯಪ್ಪ, ಪೂಜಿತ್ ಮೆಡಿಕಲ್ ಕುಮಾರ್, ವಕೀಲರ ಸಂಘದ ಅಧ್ಯಕ್ಷ ಮಹದೇವಸ್ವಾಮಿ, ವಕೀಲ ಜ್ಞಾನೇಂದ್ರಮೂರ್ತಿ, ಉಪನ್ಯಾಸಕ ಕುಮಾರಸ್ವಾಮಿ, ಜೆಎಸ್‌ಎಸ್ ಭವನ ವ್ಯವಸ್ಥಾಪಕ ಜಿ.ಎಲ್.ಯೋಗೇಶ್, ಪುರಸಭೆ ಮಾಜಿ ಸದಸ್ಯ ಎನ್.ಲೋಕೇಶ್, ಮುಖಂಡರಾದ ಕರೋಹಟ್ಟಿ ಪ್ರಭುಸ್ವಾಮಿ, ಕೆಇಬಿ ಸಿದ್ದಲಿಂಗಸ್ವಾಮಿ, ಎಪಿ ಪ್ರಕಾಶ್, ಶಿವಕುಮಾರ್, ಸಿ.ಬಿ.ಹುಂಡಿ ಸಿದ್ದು, ಮಹದೇವಸ್ವಾಮಿ, ಶೇಖರ, ಮೋಹನ್, ಆಡಿಟರ್ ಮಂಜುನಾಥ್, ಬಜ್ಜಿ ನಿಂಗಪ್ಪ, ಹಾಜರಿದ್ದರು.

ನೂತನ ಕ್ಯಾಲೆಂಡರ್ ಬಿಡುಗಡೆ



ಹುಣಸೂರು ತಾಲೂಕಿನ ಕೊಯಮುತ್ತೂರು ಕಾಲೋನಿ ವ್ಯವಸಾಯ ಸೇವಾ ಸಹಕಾರ ಬ್ಯಾಂಕ್ ನೂತನ ಕ್ಯಾಲೆಂಡರ್ ಅನ್ನು ಬಿಡುಗಡೆಗೊಳಿಸಲಾಯಿತು. ಈ ವೇಳೆ ಬ್ಯಾಂಕ್ ಅಧ್ಯಕ್ಷ ಶಿವಲಿಂಗಪ್ಪ, ಉಪಾಧ್ಯಕ್ಷ ರವಿ, ನಿರ್ದೇಶಕರಾದ ಹೆಚ್.ಪಿ.ಅಮರನಾಥ್, ರಾಮಸ್ವಾಮಿ, ಚಿನ್ನಸ್ವಾಮಿ, ರಾಜೇಂದ್ರ, ಶಂಕರಪ್ಪ, ವೆಳ್ಳಂಗಿರಿ, ಮಾದನಾಯ್ಕ ಮಹಾದೇವ, ಇಓ ಸೆಂಥಿಲ್ ಕುಮಾರ್, ಕಾಂಗ್ರೆಸ್ ಕಾರ್ಯಾಧ್ಯಕ್ಷ ವಕೀಲ ಪುಟ್ಟರಾಜ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ರಾಘು, ಸಕ್ರಮ ಸಮಿತಿ ಸದಸ್ಯ ಕುಮಾರ್, ಮಾಜಿ ಸದಸ್ಯ ಚಿಕ್ಕಸ್ವಾಮಿ, ನಿವೃತ್ತ ಇಓ ಮನೋಹರ್ ಇತರರಿದ್ದರು.

ಕಾರ್ಮಿಕರ ಸುರಕ್ಷತೆಗಾಗಿ ಹಲವು ಯೋಜನೆ ಜಾರಿ

ಶಾಸಕ ಡಿ.ರವಿಶಂಕರ್



ಕಾರ್ಮಿಕರಿಗೆ ಶಾಸಕ ರವಿಶಂಕರ್ ಟೂಲ್‌ಕಿಟ್ ವಿತರಿಸಿದರು.

ಕೆ.ಆರ್.ನಗರ, ಜ.23– ನವಭಾರತ ನಿರ್ಮಾಣಕ್ಕಾಗಿ ದುಡಿಯುತ್ತಿರುವ ಕಟ್ಟಡ ಕಾರ್ಮಿಕರ ಸುರಕ್ಷತೆಗಾಗಿ ಸರ್ಕಾರ ಹಲವು ಯೋಜನೆಗಳನ್ನು ಜಾರಿಗೆ ತಂದಿದೆ ಎಂದು ಶಾಸಕ ಡಿ.ರವಿಶಂಕರ್ ತಿಳಿಸಿದರು.

ಪಟ್ಟಣದ ಸಂಗೋಳಿ ರಾಯಣ್ಣ ಸಮುದಾಯ ಭವನದಲ್ಲಿ ಕಾರ್ಮಿಕ ಇಲಾಖೆಯಿಂದ ನಡೆದ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ ಟೂಲ್ಸ್‌ಕಿಟ್ ಹಾಗೂ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ವಿತರಣೆ ಮತ್ತು ಉಚಿತ ಆರೋಗ್ಯ ತಪಾಸಣಾ ಶಿಬಿರ ಉದ್ಘಾಟಿಸಿ ಮಾತನಾಡಿದರು.

ಕಾರ್ಮಿಕರ ಹಿತದೃಷ್ಟಿಯಿಂದ ಸರ್ಕಾರ ಜಾರಿಗೊಳಿಸಿರುವ ವಿಮಾ ಸೌಲಭ್ಯ ಮತ್ತು ಮಕ್ಕಳಿಗಾಗಿ ನೀಡುವ ವಿದ್ಯಾರ್ಥಿ ವೇತನ ಇತರ ಸವಲತ್ತುಗಳನ್ನು ಕಾರ್ಮಿಕರು ಸದ್ಬಳಕೆ ಮಾಡಿಕೊಂಡು ಆರ್ಥಿಕವಾಗಿ ಸಬಲರಾಗಬೇಕೆಂದು ತಿಳಿಸಿದರು.

ಕಾರ್ಮಿಕ ಇಲಾಖೆಯವರು ನೋಂದಣಿ ಅದಾಲತ್ ನಡೆಸಿ ಅರ್ಹರಿಗೆ ಕಾರ್ಡ್‌ಗಳನ್ನು ವಿತರಿಸುವ ಜೊತೆಗೆ ಸಕಾಲದಲ್ಲಿ ಹಳೆ ಕಾರ್ಡ್‌ಗಳನ್ನು ನವೀಕರಣ ಮಾಡಿಕೊಡಬೇಕೆಂದು ಸೂಚಿಸಿದ ಶಾಸಕರು ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ಅರ್ಹರಿಗೆ ಆದ್ಯತೆ ನೀಡಬೇಕು. ಈವರೆಗೆ ಅನರ್ಹರು ಹೆಚ್ಚಾಗಿರುವ ಬಗ್ಗೆ ಮಾಹಿತಿ ಇದ್ದು, ನವೀಕರಣ ಸಂದರ್ಭ ಅವರನ್ನು ವಜಾಗೊಳಿಸಬೇಕೆಂದು ತಾಕೀತು ಮಾಡಿದರು.

ಗಾರೆ ಕೆಲಸಗಾರರು, ವಿದ್ಯುತ್ ಮತ್ತು ಕುಡಿಯುವ ನೀರಿನ ಸಂಪರ್ಕ ಕಲ್ಪಿಸುವವರು ಸೇರಿದಂತೆ ಕಟ್ಟಡಗಳಲ್ಲಿ ಕೆಲಸ ಮಾಡುವ ಎಲ್ಲಾ ಕಾರ್ಮಿಕರು ಧೂಳು ಮತ್ತು ಇತರ ಮಾಲಿನ್ಯಕ್ಕೆ ಒಳಗಾಗಲಿದ್ದಾರೆ. ಆದ್ದರಿಂದ ಅವರಿಗೆ ಇಲಾಖೆಯಿಂದ ಆರೋಗ್ಯ ತಪಾಸಣೆ ಕೈಗೊಳ್ಳಬೇಕು ಎಂದರು.

ಕಾರ್ಮಿಕರ ಅನುಕೂಲಕ್ಕಾಗಿ ಮೈಸೂರು–ಹಾಸನ ರಸ್ತೆಯಲ್ಲಿರುವ ಶಾಸಕರ ಕಚೇರಿಯಲ್ಲಿ ಸಹಾಯವಾಣಿ ತೆರೆಯಲಿದ್ದು, ಕಾರ್ಮಿಕರು ಸೇರಿದಂತೆ ಸರ್ಕಾರದ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸುವವರು ಉಚಿತವಾಗಿ ಸಲ್ಲಿಸಬಹುದಾಗಿದೆ ಎಂದರು.

ಕಾರ್ಮಿಕರಿಗೆ ವಿವಿಧ ಮಾದರಿ ಕಿಟ್‌ಗಳ ಜೊತೆಗೆ ಅವರ ಮಕ್ಕಳಿಗೆ ಲ್ಯಾಪ್‌ಟಾಪ್ ಮತ್ತು ಶಾಲಾ ಬ್ಯಾಗ್‌ಗಳನ್ನು ಶಾಸಕರು ವಿತರಿಸಿದರು. ಶಿವುನಾಯಕ್, ಮೈಸೂರು ಜಿಲ್ಲಾ ಉಪವಿಭಾಗದ ಕಾರ್ಮಿಕ ಅಧಿಕಾರಿ ಚೇತನ್ ಕುಮಾರ್, ತಾಲೂಕು ಕಾರ್ಮಿಕ ನಿರೀಕ್ಷಕ ಹೆಚ್.ಕೆ.ಗೋವಿಂದರಾಜು, ತಹಸೀಲ್ದಾರ್‌ಗಳಾದ ಜಿ.ಸುರೇಂದ್ರಮೂರ್ತಿ, ಎಸ್.ಎನ್.ನರಗುಂದ್ ಮಾತನಾಡಿದರು.

ಪುರಸಭೆ ಅಧ್ಯಕ್ಷ ನರಸಿಂಹರಾಜು, ಸದಸ್ಯರಾದ ಪ್ರಕಾಶ್, ಶಂಕರ್‌ಸ್ವಾಮಿ, ಮಾಜಿ ಸದಸ್ಯ ಕೆ.ವಿನಯ್, ತಾಲೂಕು ಆರೋಗ್ಯಾಧಿಕಾರಿ ಡಾ.ಡಿ.ನಟರಾಜು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ಎಸ್.ಮಹದೇವ್, ಉದಯಶಂಕರ್, ವಕ್ತಾರ ಸೈಯದ್ ಜಾಬೀರ್, ಆರೋಗ್ಯ ರಕ್ಷಾ ಸಮಿತಿ ಅಧ್ಯಕ್ಷ ಹೆಚ್.ಹೆಚ್.ನಾಗೇಂದ್ರ, ಮುಖಂಡರಾದ ಜಯರಾಮೇಗೌಡ, ಆದರ್ಶ, ವಸೀಮ್, ದೊಡ್ಡೇಗೌಡ, ಪರಮೇಶ್, ಕಾಂತರಾಜು ಮತ್ತಿತರರಿದ್ದರು.

ಅಂತರಸಂತೆಯಲ್ಲಿ ಮಕ್ಕಳ ಹಕ್ಕುಗಳ ಗ್ರಾಮಸಭೆ



ಸಾರನಾಥ ಬುದ್ಧ ವಿಹಾರದ ಸಭಾಂಗಣದಲ್ಲಿ ಮಕ್ಕಳ ಹಕ್ಕುಗಳ ಗ್ರಾಮ ಸಭೆ ನಡೆಯಿತು.

ಹೆಚ್.ಡಿ.ಕೋಟೆ, ಜ.23– ತಾಲೂಕಿನ ಅಂತರಸಂತೆ ಗ್ರಾಪಂ ವತಿಯಿಂದ ಸಾರನಾಥ ಬುದ್ಧ ವಿಹಾರ ಸಭಾಂಗಣದಲ್ಲಿ ಮಕ್ಕಳ ಹಕ್ಕುಗಳ ಗ್ರಾಮಸಭೆ ನಡೆಯಿತು.

ಸಂಪನ್ಮೂಲ ವ್ಯಕ್ತಿ ಉಮೇಶ್ ಮಾತನಾಡಿ, ಸರ್ಕಾರ ಮಕ್ಕಳ ಹಕ್ಕುಗಳನ್ನು ರಕ್ಷಿಸಲು ಗ್ರಾಪಂ ವತಿಯಿಂದ ನ.14ರಿಂದ ಜ.26 ರವರೆಗೆ 10 ವಾರಗಳ ಕಾಲ ಮಕ್ಕಳ ಗ್ರಾಮಸಭೆ ನಡೆಸಲು ಆದೇಶಿಸಿದ್ದು, ಸ್ಥಳೀಯ ಸಂಘ ಸಂಸ್ಥೆಗಳ ಜೊತೆಗೂಡಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುತ್ತಿದೆ. ಇದನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು. ಮುಖ್ಯ ಅತಿಥಿ ಶಿವರಾಜ್ ಜೀವಿಕ ಮಾತನಾಡಿ, ಮಕ್ಕಳ ಹಕ್ಕುಗಳು ಅತ್ಯಂತ ಮಹತ್ವದಾಗಿದ್ದು, ಅದನ್ನು ರಕ್ಷಿಸುವ ಸಂಪೂರ್ಣ ಜವಾಬ್ದಾರಿ ಪೋಷಕರು, ಶಿಕ್ಷಕರು, ಅಧಿಕಾರಿಗಳು ಮತ್ತು ಸಾರ್ವಜನಿಕರದ್ದಾಗಿದೆ. ಯಾವುದೇ ಕಾರಣಕ್ಕೂ ಮಕ್ಕಳ ಹಕ್ಕುಗಳು ಉಲ್ಲಂಘನೆ ಆಗಬಾರದು. ಒಂದು ವೇಳೆ ಉಲ್ಲಂಘನೆ ಮಾಡಿದರೆ ಕಠಿಣ ಶಿಕ್ಷೆಗೆ ಗುರಿಪಡಿಸಲಾಗುವುದು ಎಂದು ತಿಳಿಸಿ ಮಕ್ಕಳ ಹಕ್ಕುಗಳ ಬಗ್ಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಮಕ್ಕಳು ಶಾಲೆಯಲ್ಲಿ ಎದುರಿಸುತ್ತಿರುವ ಸಮಸ್ಯೆಗಳಾದ ಶೌಚಾಲಯ ಸ್ವಚ್ಛತೆ, ಕಾಂಪೌಂಡ್, ಕೊಠಡಿ ರಿಪೇರಿ, ಮೈದಾನ, ಶುದ್ಧ ಕುಡಿಯುವ ನೀರು ಪೂರೈಸುವಂತೆ ಮನವಿ ಸಲ್ಲಿಸಲಾಯಿತು. ಇದಕ್ಕೆ ಪ್ರತಿಕ್ರಿಯಿಸಿದ ಪಿಡಿಓ ಕೆ.ಪಿ.ಸುರೇಶ್ ಎಲ್ಲಾ ಸಮಸ್ಯೆಗಳನ್ನು ಹಂತ ಹಂತವಾಗಿ ಬಗೆಹರಿಸಲಾಗುವುದು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗ್ರಾಪಂ ಅಧ್ಯಕ್ಷೆ ರೇಖಾ, ಉಪಾಧ್ಯಕ್ಷೆ ಕವಿತಾ, ಸ್ಥಾಯಿ ಸಮಿತಿ ಅಧ್ಯಕ್ಷ ದೊರೆಸ್ವಾಮಿ, ಸದಸ್ಯರಾದ ನರ್ಜಿನ್ ತಾಜ್, ಸಂಪನ್ಮೂಲ ವ್ಯಕ್ತಿ ಶಿವರಾಜ್, ಪೀಪಲ್ ಟ್ರೀ ರುದ್ರಪ್ಪ, ಜವರೇಗೌಡ, ಚೆನ್ನಬಸಪ್ಪ, ಮುಖ್ಯ ಶಿಕ್ಷಕ ಗುಣಪಾಲ್, ನೂರ್ ಫಾತಿಮಾ, ರಮೇಶ್, ರವಿಕುಮಾರ್, ಲೈಬ್ರರಿ ಸುರೇಶ್, ಗೋವಿಂದರಾಜ, ಕುಮಾರ್, ಭಾಗ್ಯಮ್ಮ, ಶಾಲಾ ಮಂತ್ರಿ ಮಂಡಲದ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಬಸವರಾಜ ನಾಯಕ ನಿಧನ



ಹುಣಸೂರು, ಜ.23– ತಾಲೂಕಿನ ಮೋದೂರು ಗ್ರಾಮದ ನಾಯಕ ಜನಾಂಗದ ಯಜಮಾನ ಮಂಟಿ ಬಸವರಾಜ ನಾಯಕ (59) ಗುರುವಾರ ನಿಧನರಾದರು. ಮೃತರು ಪತ್ನಿ, ಮೋದೂರು ಗ್ರಾಪಂ ಮಾಜಿ ಅಧ್ಯಕ್ಷೆ ಹೂಮ್ಮ, ಓರ್ವ ಪುತ್ರಿ, ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಶುಕ್ರವಾರ ಮಧ್ಯಾಹ್ನ 1 ಗಂಟೆಗೆ ಮೃತರ ತೋಟದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಪಿಎಲ್‌ಡಿ ಬ್ಯಾಂಕ್ ಚುನಾವಣೆ: ಹಾಲಿ ಅಧ್ಯಕ್ಷ ಮಹದೇವಣ್ಣ, 16 ಮಂದಿ ನಾಮಪತ್ರ ಸಲ್ಲಿಕೆ



ಪಿಎಲ್‌ಡಿ ಬ್ಯಾಂಕ್ ಚುನಾವಣೆಯಲ್ಲಿ ಸ್ಪರ್ಧಿಸಲು ಹಾಲಿ ಅಧ್ಯಕ್ಷ ಎಂ.ಮಹದೇವಣ್ಣ, ಮಾಜಿ ಅಧ್ಯಕ್ಷ ಕೆ.ವಜ್ರೇಗೌಡ ಹಾಗೂ ಎಂ.ಶಿವಮೂರ್ತಿ ಸೇರಿದಂತೆ ಇತರರು ನಾಮಪತ್ರ ಸಲ್ಲಿಸಿದರು.

ತಿ.ನರಸೀಪುರ, ಜ.23– ತಾಲೂಕು ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ಆಡಳಿತ ಮಂಡಳಿಗೆ ನಡೆಯುವ ಚುನಾವಣೆಯಲ್ಲಿ ನಿರ್ದೇಶಕ ಸ್ಥಾನಕ್ಕೆ ಬ್ಯಾಂಕ್ ಹಾಲಿ ಅಧ್ಯಕ್ಷ ಕೆಂಪಯ್ಯನಹುಂಡಿ ಎಂ.ಮಹದೇವಣ್ಣ, ಮಾಜಿ ಅಧ್ಯಕ್ಷ ಕೆ.ವಜ್ರೇಗೌಡ ಹಾಗೂ ಎಂ.ಶಿವಮೂರ್ತಿ ಸೇರಿದಂತೆ 16 ಮಂದಿ ಗುರುವಾರ ನಾಮಪತ್ರ ಸಲ್ಲಿಸಿದರು.

ಸಾಲಗಾರರ ಕ್ಷೇತ್ರಕ್ಕೆ 13 ನಾಮಪತ್ರ ಸಲ್ಲಿಕೆಯಾದರೆ, ಸಾಲಗಾರರಲ್ಲದ ಕ್ಷೇತ್ರಕ್ಕೆ 3 ಮಂದಿ ಉಮೇದುವಾರಿಕೆ ಸಲ್ಲಿಸಿದರು. ಭಾನುವಾರದಿಂದ ನಾಮಪತ್ರ ಸಲ್ಲಿಸುವ ಪ್ರಕ್ರಿಯೆ ಆರಂಭಗೊಂಡಿದ್ದು, ಗುರುವಾರದ ಅಂತ್ಯಕ್ಕೆ ಒಟ್ಟು 32 ನಾಮಪತ್ರಗಳು ಸಲ್ಲಿಕೆಯಾಗಿವೆ.

ಫೆ.2ರಂದು ನಡೆಯುವ ಚುನಾವಣೆಗೆ ಕುಪ್ಯ ಸಾಲಗಾರರ ಕ್ಷೇತ್ರದಿಂದ ಸಾಮಾನ್ಯ ವರ್ಗಕ್ಕೆ ಮೀಸಲಾದ ಸ್ಥಾನಕ್ಕೆ ಬ್ಯಾಂಕ್ ಹಾಲಿ ಅಧ್ಯಕ್ಷ ಎಂ.ಮಹದೇವಣ್ಣ, ಸೋಮನಾಥಪುರ ಕ್ಷೇತ್ರದಿಂದ ಮಾಜಿ ಅಧ್ಯಕ್ಷ ಕೆ.ವಜ್ರೇಗೌಡ, ಚಿದರವಳ್ಳಿಯಿಂದ ಎನ್.ಎನ್.ಮಹದೇವಸ್ವಾಮಿ, ಕೊತ್ತೇಗಾಲದಿಂದ ಮಾಜಿ ಅಧ್ಯಕ್ಷ ಎಂ.ಶಿವಮೂರ್ತಿ ಹಾಗೂ ನಾಗರಾಜಮೂರ್ತಿ, ಯಾಚೇನಹಳ್ಳಿ ಕ್ಷೇತ್ರದಿಂದ ಟಿ.ಎಸ್.ಸಿದ್ದರಾಜು, ಬನ್ನೂರು ಕ್ಷೇತ್ರದಿಂದ ಬಿ.ಸಿ.ಪಾರ್ಥಸಾರಥಿ ಮತ್ತು ಕೆ.ರಾಜೇಶ್ ನಾಮಪತ್ರ ಸಲ್ಲಿಸಿದರೆ, ತಲಕಾಡು ಕ್ಷೇತ್ರದಿಂದ ಪ್ರವರ್ಗ 'ಬಿ'ಗೆ ಮೀಸಲಾದ ಸ್ಥಾನಕ್ಕೆ ಕೆ.ವಿ.ರುದ್ರಸ್ವಾಮಿ, ದೊಡ್ಡೆಬಾಗಿಲು ಕ್ಷೇತ್ರದಿಂದ ಪ್ರವರ್ಗ 'ಎ'ಗೆ ಮೀಸಲಾದ ಸ್ಥಾನಕ್ಕೆ ದೊಡ್ಡೆಬಾಗಿಲು ಮಲ್ಲೇಗೌಡರ ಪುತ್ರ ಮಲ್ಲಿಕಾರ್ಜುನಸ್ವಾಮಿ, ಮುಸುವಿನಕೊಪ್ಪಲು ಎಂ.ಬಸವರಾಜು, ಹೊರಳಹಳ್ಳಿ ಎಂ.ಗುರುಸ್ವಾಮಿ, ಸೋಸಲೆ ಕ್ಷೇತ್ರದಿಂದ ಪ.ಜಾತಿಗೆ ಮೀಸಲಾದ ಸ್ಥಾನಕ್ಕೆ ಚಿಕ್ಕತಾಯಮ್ಮ ಹಾಗೂ ಲಿಂಗಪ್ಪಾಜಿ ನಾಮಪತ್ರ ಸಲ್ಲಿಸಿದರು.

ಸಾಲಗಾರರಲ್ಲದ ಕ್ಷೇತ್ರದಿಂದ ಮಾದೇಗೌಡನಹುಂಡಿ ಎನ್.ಅನಿಲ್ ಕುಮಾರ್, ತಿ.ನರಸೀಪುರ ಎಂ.ನಾಗರಾಜು (ಚಿಕಾ) ಹಾಗೂ ಮಾಲಂಗಿ ಕೆ.ವಿ.ಪ್ರಭುಸ್ವಾಮಿ, ಎಸ್.ದಿವಾಕರ್ (ಪಾಪಣ್ಣಿ) ಆಡಳಿತ ಮಂಡಳಿ ಸದಸ್ಯ ಸ್ಥಾನಕ್ಕೆ ಆಯ್ಕೆ ಬಯಸಿ ಸಹಾಯಕ ಚುನಾವಣಾಧಿಕಾರಿ ವಿಮಲ್ ಕುಮಾರ್ ಅವರಿಗೆ ಉಮೇದುವಾರಿಕೆ ಸಲ್ಲಿಸಿದರು.

ನಾಮಪತ್ರ ಸಲ್ಲಿಸಲು ಶನಿವಾರ ಅಂತಿಮ ದಿನವಾಗಿದ್ದು, ಮತ್ತಷ್ಟು ನಾಮಪತ್ರ ಸಲ್ಲಿಕೆಯಾಗುವ ನಿರೀಕ್ಷೆಯಿದೆ. ಫೆ.2ರ ಭಾನುವಾರ ಚುನಾವಣೆ ನಡೆಯ ಲಿದೆ. ನಾಮಪತ್ರ ಸಲ್ಲಿಕೆ ವೇಳೆ ಮೈಮುಲ್ ಮಾಜಿ ಅಧ್ಯಕ್ಷ ಓಂಪ್ರಕಾಶ್, ವರುಣ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮುದ್ದೇಗೌಡ, ಎಪಿಎಂಸಿ ಮಾಜಿ ಅಧ್ಯಕ್ಷ ಶಿವಸ್ವಾಮಿ, ಗ್ರಾಪಂ ಮಾಜಿ ಅಧ್ಯಕ್ಷ ಆನಂದ್, ಕೆಪಿಸಿಸಿ ಹಿಂದುಳಿದ ವರ್ಗಗಳ ರಾಜ್ಯ ಪ್ರಧಾನ ಕಾರ್ಯದರ್ಶಿ ಎಂ.ರಮೇಶ್, ಕಾಂಗ್ರೆಸ್ ಮುಖಂಡ ರಾಮಲಿಂಗು, ಕಿರಗಸೂರು ಕಾಂತರಾಜು, ಗೌಡರ ರಾಜಶೇಖರ್, ಮಂಚಿಗಯ್ಯ ಮತ್ತಿತರರಿದ್ದರು.

ಕುಟುಂಬ ನಿರ್ವಹಣೆಗೆ ಹೈನುಗಾರಿಕೆ ಉಪಯುಕ್ತ

ಮೈಮುಲ್ ನಿರ್ದೇಶಕ ಕೆ.ಈರೇಗೌಡ



ಹೆತ್ತಿಗೆ ಡೈರಿಯಲ್ಲಿ ಅರಿವು ಕಾರ್ಯಕ್ರಮ ನಡೆಯಿತು.

ಸರಗೂರು, ಜ.23– ಕುಟುಂಬ ನಿರ್ವಹಣೆಗೆ ಹೈನುಗಾರಿಕೆ ಉಪಯುಕ್ತವಾಗಿದೆ ಎಂದು ಮೈಮುಲ್ ನಿರ್ದೇಶಕ ಕೆ.ಈರೇಗೌಡ ತಿಳಿಸಿದರು.

ತಾಲೂಕಿನ ಹೆತ್ತಿಗೆ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದಲ್ಲಿ ನಡೆದ ಅರಿವು ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮೈಮುಲ್‌ನ ಕ್ಷೀರ ಸಂಜೀವಿನಿ ಹಂತ–3 ಯೋಜನೆಯಡಿ ಗ್ರಾಮೀಣ ಭಾಗದ ಮಹಿಳಾ ಹಾಲು ಉತ್ಪಾದಕರು ಗುಣಮಟ್ಟದ ಹಾಲು ಉತ್ಪಾದನೆಗೆ ಹೆಚ್ಚು ಒತ್ತು ನೀಡಬೇಕು. ಹಾಲು ಉತ್ಪಾದನೆಯಿಂದ ಆರ್ಥಿಕ ಮತ್ತು ಸಾಮಾಜಿಕ ಸ್ಥಿತಿ ಸುಧಾರಿಸಲು ಸಹಕಾರಿಯಾಗಲಿದೆ. ಹೈನುಗಾರಿಕೆ ರೈತರ ಕುಲ ಕಸುಬಾಗಿದ್ದು, ಕುಟುಂಬ ನಿರ್ವಹಣೆಗೆ ಉಪಯುಕ್ತವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಡೈರಿ ಅಧ್ಯಕ್ಷೆ ಎಂ.ಎಸ್.ಸುಮ, ವೈದ್ಯಾಧಿಕಾರಿ ರೋಹನ್, ಒಕ್ಕೂಟದ ಉಪ ವ್ಯವಸ್ಥಾಪಕಿ ಸೌಮ್ಯ, ಹಾದನೂರು ಪಿಡಿಓ ಚಿನ್ನಸ್ವಾಮಿ, ಸಕಲೇಶ್, ವಕೀಲರಾದ ಕು.ಕವಿತಾ ಕಾಳೆ, ಒಕ್ಕೂಟದ ಸಹಾಯಕ ವ್ಯವಸ್ಥಾಪಕ ಡಾ.ಮುಕುಲ್ ಸಿ.ಜಿ, ಸಹಾಯಕ ವ್ಯವಸ್ಥಾಪಕ ಪ್ರಭುಶಂಕರ್.ವಿ, ವಿಸ್ತರಣಾಧಿಕಾರಿ ರಾಮಪ್ಪ ಬಾರ್ಕಿ, ರಂಜಿತಾ ಹಾಜರಿದ್ದರು.


ಮೈಸೂರು ಮಿತ್ರ

ಮಂಡ್ಯದಲ್ಲಿ ಸಂಯೋಜಿತ ಕೃಷಿ ವಿವಿ ಸ್ಥಾಪನೆಗೆ ತೀರ್ಮಾನ

• ಹಾಸನ, ಮಂಡ್ಯ, ಮೈಸೂರು, ಚಾಮರಾಜನಗರ ಭಾಗದ ರೈತರಿಗೆ ಇದರಿಂದ ಸಹಕಾರ • ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಮತ; ಅಂತರರಾಷ್ಟ್ರೀಯ ವಾಣಿಜ್ಯ ಮೇಳ ಸಾವಯವ ಮತ್ತು ಸಿರಿಧಾನ್ಯ ಮೇಳಕ್ಕೆ ಚಾಲನೆ

ಬೆಂಗಳೂರು, ಜ.23(ಕೆಎಂಶಿ)– ಕೃಷಿ ಪ್ರಧಾನ ಮಂಡ್ಯ ಜಿಲ್ಲೆಯಲ್ಲಿ ಕೃಷಿ, ತೋಟಗಾರಿಕೆ, ಪಶು ಸಂಗೋಪನೆ ಸೇರಿ ಸಂಯೋಜಿತ ಕೃಷಿ ವಿಶ್ವವಿದ್ಯಾಲಯ ಸ್ಥಾಪಿಸಲು ತೀರ್ಮಾನಿಸಲಾಗಿದ್ದು, ಇದರಿಂದ ಮಂಡ್ಯ, ಹಾಸನ, ಮೈಸೂರು, ಚಾಮರಾಜನಗರ ಭಾಗದ ರೈತರಿಗೆ ಸಾವಯವ ಹಾಗೂ ಸಿರಿಧಾನ್ಯ ಕೃಷಿಗೆ ಮಾರ್ಗದರ್ಶನ, ಪ್ರೋತ್ಸಾಹ ದೊರೆಯಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ತಿಳಿಸಿದ್ದಾರೆ.

ಅಂತರರಾಷ್ಟ್ರೀಯ ವಾಣಿಜ್ಯ ಮೇಳ ಸಾವಯವ ಮತ್ತು ಸಿರಿಧಾನ್ಯ–2025 ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ರೈತರ ಹಲವು ದಿನಗಳ ಬೇಡಿಕೆಯಾದ ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ) ಜಾರಿಗೆ ತರಬೇಕೆಂದು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದರು.



ಅಂತರರಾಷ್ಟ್ರೀಯ ವಾಣಿಜ್ಯ ಮೇಳ ಸಾವಯವ ಮತ್ತು ಸಿರಿಧಾನ್ಯ ಮೇಳಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದರು.

ಭಾರತ ಕೃಷಿ ಪ್ರಧಾನ ದೇಶ, ಆಹಾರ ಉತ್ಪಾದನೆಯಲ್ಲಿ ಸ್ವಾವಲಂಬಿಯಾಗಿದೆ, ಅಲ್ಲದೆ, ಆಹಾರಧಾನ್ಯಗಳನ್ನು ಭಾರತ ರಫ್ತು ಮಾಡುತ್ತಿರುವುದು ಹೆಮ್ಮೆಯ ವಿಷಯ.

ವಿರಳ ಮಳೆ ಪ್ರದೇಶಗಳಲ್ಲಿ ಹೆಚ್ಚಾಗಿ ಸಾವಯವ ಸಿರಿಧಾನ್ಯಗಳನ್ನು ಬೆಳೆಯಲಾಗುತ್ತದೆ, ತಮ್ಮ ಕುಟುಂಬದವರೂ ಸಿರಿಧಾನ್ಯಗಳ ಕೃಷಿ ಮಾಡುತ್ತಿದ್ದರು, ರಾಗಿ ತಿಂದವನು ನಿರೋಗಿ ಎಂಬಂತೆ, ಸಿರಿಧಾನ್ಯಗಳ ಸೇವನೆ ಆರೋಗ್ಯಕ್ಕೆ ಉತ್ತಮ ಎಂದರು. ಸಿರಿಧಾನ್ಯಗಳ ಉತ್ಪಾದನೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಹೆಚ್ಚಿನ ಒತ್ತು ನೀಡಿವೆ, ಸಾವಯವ ಕೃಷಿ ಪ್ರದೇಶದಲ್ಲಿ ಭಾರತ ವಿಶ್ವದಲ್ಲಿ 2ನೇ ಹಾಗೂ ಒಟ್ಟು ಸಾವಯವ ಉತ್ಪಾದಕರಲ್ಲಿ ಮೊದಲನೇ ಸ್ಥಾನದಲ್ಲಿದೆ.

ವಿಶ್ವದಲ್ಲಿ ಅಂದಾಜು 903.61 ಲಕ್ಷ ಟನ್ ಸಿರಿಧಾನ್ಯಗಳ ಉತ್ಪಾದನೆಯಾಗುತ್ತಿದ್ದು, ಇದರಲ್ಲಿ ಶೇ.38.50ರಷ್ಟು ಪಾಲು ಭಾರತದ್ದಾಗಿದ್ದು, ಮುಂಚೂಣಿ ರಾಷ್ಟ್ರವಾಗಿದೆ, ಕರ್ನಾಟಕ ಸಿರಿಧಾನ್ಯಗಳ ಬೆಳೆ ಪ್ರದೇಶ ಮತ್ತು ಉತ್ಪಾದನೆಯಲ್ಲಿ ದೇಶದಲ್ಲಿ 3ನೇ ಸ್ಥಾನದಲ್ಲಿದೆ.

ಭಾರತದ ಸಾವಯವ ರಫ್ತು ಪ್ರಮಾಣ 2.61 ಲಕ್ಷ ಟನ್, ಈ ಪೈಕಿ ಸಾವಯವ ಆಹಾರ ರಫ್ತಿನಿಂದ ಸುಮಾರು 4,008 ಕೋಟಿ ರೂ. ಆದಾಯ ಬರುತ್ತಿದೆ.

ಸಾವಯವ ಮತ್ತು ಸಿರಿಧಾನ್ಯಗಳಿಗೆ ವ್ಯವಸ್ಥಿತ ಮಾರುಕಟ್ಟೆ ಮತ್ತು ಸರಬರಾಜು ಸರಪಳಿ ಕಲ್ಪಿಸುವ ಉದ್ದೇಶದಿಂದ ಪರಿಷ್ಕೃತ 'ಸಾವಯವ ಕೃಷಿ ನೀತಿ'ಯನ್ನು 2017ರಲ್ಲಿ ತರಲಾಗಿದೆ.

ರಾಜ್ಯದ ರೈತರಲ್ಲಿ ಸಾವಯವ ಕೃಷಿ ಪದ್ಧತಿ ಬಗ್ಗೆ ಅರಿವು ಮೂಡಿಸಲು 'ಸಾವಯವ ಭಾಗ್ಯ ಯೋಜನೆ'ಯನ್ನು 2013ರಲ್ಲಿ ಹೋಬಳಿ ಮಟ್ಟದಲ್ಲಿ ಮಾದರಿ ಸಾವಯವ ಗ್ರಾಮಗಳನ್ನು ಸ್ಥಾಪಿಸಿ ರೈತರನ್ನು ಒಗ್ಗೂಡಿಸಿ ಉತ್ತೇಜಿಸಲಾಗಿದೆ ಎಂದರು. ರಾಜ್ಯದ ಸಿರಿಧಾನ್ಯ ಕ್ಷೇತ್ರ ವಿಸ್ತರಿಸುವಲ್ಲಿ 'ರೈತ ಸಿರಿ' ಯೋಜನೆಯಡಿ ಸಿರಿಧಾನ್ಯಗಳಾದ ಊದಲು, ನವಣೆ, ಹಾರಕ, ಕೊರಲೆ, ಸಾಮೆ ಮತ್ತು ಬರಗು ಬೆಳೆಗಳನ್ನು ಬೆಳೆಯುವ ರೈತರಿಗೆ ಪ್ರತಿ ಹೆಕ್ಟೇರ್‌ಗೆ 10,000 ರೂ.ನಂತೆ ಗರಿಷ್ಠ 2 ಹೆಕ್ಟೇರ್‌ಗೆ ಪ್ರೋತ್ಸಾಹಧನ ನೀಡಲಾಗುತ್ತಿದೆ.

ರಾಜ್ಯದ ಸಾವಯವ ಉತ್ಪನ್ನಗಳ ಮಾರಾಟಕ್ಕೆ ಸೂಕ್ತ ಮಾರುಕಟ್ಟೆ ಹಾಗೂ ಉತ್ತಮ ಧಾರಣೆ ದೊರಕಿಸಲು ಸಾವಯವ ಕೃಷಿಕರ ಸಂಘಗಳನ್ನು ಒಗ್ಗೂಡಿಸಿ 15 ಪ್ರಾಂತೀಯ ಸಾವಯವ ಒಕ್ಕೂಟ ರಚಿಸಲಾಗಿದೆ. ಸಾವಯವ ಹಾಗೂ ಸಿರಿಧಾನ್ಯಗಳ ಕೃಷಿಗೆ ಸಂಬಂಧಿಸಿದ ಸಂಶೋಧನಾ ಕೇಂದ್ರಗಳನ್ನು ಕೃಷಿ ವಿಶ್ವವಿದ್ಯಾಲಯಗಳಲ್ಲಿ ಸ್ಥಾಪಿಸಲಾಗಿದೆ, ಸಿರಿಧಾನ್ಯಗಳ ಉತ್ತೇಜನದಲ್ಲಿ ಕರ್ನಾಟಕ ಸರ್ಕಾರದ ವಿಶೇಷ ಪ್ರಯತ್ನಗಳನ್ನು ಗುರುತಿಸಿ ಕರ್ನಾಟಕ ಕೃಷಿ ಇಲಾಖೆಗೆ ಕೇಂದ್ರ ಸರ್ಕಾರ ಪ್ರಶಂಸನಾ ಪತ್ರ ನೀಡಿದೆ ಎಂದರು.

ಮುಂದಿನ ಆರ್ಥಿಕ ವರ್ಷದಿಂದ ರಾಜ್ಯದ ಸಾವಯವ ಉತ್ಪನ್ನಗಳ ಮಾರಾಟಕ್ಕೆ ಎಪಿಎಂಸಿಗಳಲ್ಲಿ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸಲಾಗುವುದು, ಸಿರಿಧಾನ್ಯಗಳ ಕೃಷಿ, ಮಾರುಕಟ್ಟೆ ಹಾಗೂ ಇತರೆ ಸೌಲಭ್ಯಗಳನ್ನು ನೀಡುವ ಮೂಲಕ ಸಿರಿಧಾನ್ಯ ಕೃಷಿ ಅಭಿವೃದ್ಧಿಗೆ ಪ್ರೋತ್ಸಾಹ ನೀಡಲು ಬದ್ಧವಾಗಿದೆ ಎಂದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಸಂಕ್ರಾಂತಿಕಿ ವಸ್ತುನ್ನಾಂ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ರುದ್ರ ಗರುಡ ಪುರಾಣ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಲವ್ ಇಸ್ ಫಾರೆವರ್ (ಹಿಂ)	3 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಫಾರೆಸ್ಟ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಯುಐ (ಕ)	4 ಪ್ರದರ್ಶನಗಳು
ರಾಜಕಮಲ್	
ಕುಜಂತೈಗಲ್ ಮುನ್ನೇತ್ರ ಕಳಗ (ತ)	4 ಪ್ರದರ್ಶನಗಳು
ಸಂಗಂ	
ರಾಯಲ್ (ಕ)	4 ಪ್ರದರ್ಶನಗಳು
ಲಿಡೋ	
ಭೂ ಮಂತರ್ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಸ್ಕೈ ಫೋರ್ಸ್ (ಹಿಂ)	4 ಪ್ರದರ್ಶನಗಳು
ಪ್ರಭಾ	
ಮ್ಯಾಕ್ಸ್ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	**ಮುಫಾಸ ದಿ ಲಯನ್ ಕಿಂಗ್ (3ಡಿ)(ಇಂ):** ಬೆ.10.40ಕ್ಕೆ, **ಗೇಮ್ ಚೇಂಜರ್ (ತೆ):** ಮ.1.05ಕ್ಕೆ, **ಸಂಜು ವೆಡ್ಸ್ ಗೀತಾ 2 (ಕ):** ಸಂ.4.25ಕ್ಕೆ, **ರುದ್ರ ಗರುಡ ಪುರಾಣ (ಕ):** ರಾ.7.10ಕ್ಕೆ, **ಭೂ ಮಂತರ್ (ಕ):** ರಾ.10.05ಕ್ಕೆ.
ಸ್ಕ್ರೀನ್ 2	**ಸಂಜು ವೆಡ್ಸ್ ಗೀತಾ 2 (ಕ):** ಬೆ.10.35ಕ್ಕೆ, ರಾ.10.10ಕ್ಕೆ, **ಮದಗಜ ರಾಜ (ತ):** ಮ.1.15ಕ್ಕೆ, **ಸಂಕ್ರಾಂತಿಕಿ ವಸ್ತುನ್ನಾಂ (ತೆ):** ಸಂ.4.20ಕ್ಕೆ, **ಭೂ ಮಂತರ್ (ಕ):** ರಾ.7.15ಕ್ಕೆ.
ಸ್ಕ್ರೀನ್ 3	**ಭೂ ಮಂತರ್ (ಕ):** ಬೆ.10.30ಕ್ಕೆ, **ಕಾದಲಿಕ್ಕ ನೆರಮಿಲ್ಲೈ (ತ):** ಮ.1.30ಕ್ಕೆ, **ನಿಮ್ಮ ವಸ್ತುಗಳಿಗೆ ನೀವೇ ಜವಾಬ್ದಾರರು (ಕ):** ಸಂ.4.25ಕ್ಕೆ, **ಎಮರ್ಜೆನ್ಸಿ (ಹಿಂ):** ರಾ.7.10ಕ್ಕೆ, **ರೇಖಾಚಿತ್ರಂ (ಮ):** ರಾ.10.15ಕ್ಕೆ.
ಸ್ಕ್ರೀನ್ 4	**ಮ್ಯಾಕ್ಸ್ (ಕ):** ಮ.1.10ಕ್ಕೆ, **ಎಮರ್ಜೆನ್ಸಿ (ಹಿಂ):** ಸಂ.4ಕ್ಕೆ, ರಾ.10.10ಕ್ಕೆ, **ರುದ್ರ ಗರುಡ ಪುರಾಣ (ಕ):** ರಾ.7ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	**ಬ್ಯಾಡ್ ನ್ಯೂಸ್ (ಹಿಂ):** ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	**ಕಲ್ಕಿ 2898 ಎಡಿ (ಕ):** ಬೆ.11.40ಕ್ಕೆ, ಸಂ.6.05ಕ್ಕೆ, **ಟ್ವಿಸ್ಟರ್ಸ್ (ಇಂ):** ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	**ಇಂಡಿಯನ್ 2 (ತ):** ಬೆ.9.40ಕ್ಕೆ, ಸಂ.4.05ಕ್ಕೆ, **ಟ್ವಿಸ್ಟರ್ಸ್ (ಇಂ):** ಮ.1.20ಕ್ಕೆ, ರಾ.7.45ಕ್ಕೆ, **ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ):** ರಾ.10.30ಕ್ಕೆ.
ಸ್ಕ್ರೀನ್ 4	**ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ):** ಬೆ.11.30ಕ್ಕೆ, **ಕಲ್ಕಿ 2898 ಎಡಿ (3ಡಿ)(ತೆ):** ಮ.2.50ಕ್ಕೆ, **ಹಿರಣ್ಯ (ಕ):** ಸಂ.6.30ಕ್ಕೆ, **ಕಲ್ಕಿ 2898 ಎಡಿ (ಹಿಂ):** ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	**ಮ್ಯಾಕ್ಸ್ (ಕ):** ಬೆ.11.15ಕ್ಕೆ, ಸಂ.6.45ಕ್ಕೆ, ರಾ.9.15ಕ್ಕೆ, **ಯುಐ (ಕ):** ಮ.1.45ಕ್ಕೆ, **ನಿಮ್ಮ ವಸ್ತುಗಳಿಗೆ ನೀವೇ ಜವಾಬ್ದಾರರು (ಕ):** ಸಂ.4.15ಕ್ಕೆ.
ಸ್ಕ್ರೀನ್ 2	**ಪರಿಸ್ಥಿತಿ (ಕ):** ಬೆ.11.20ಕ್ಕೆ, **ಭೂ ಮಂತರ್ (ಕ):** ಮ.1.20ಕ್ಕೆ, ಸಂ.4ಕ್ಕೆ, ಸಂ.6.40ಕ್ಕೆ, ರಾ.9.20ಕ್ಕೆ.
ಸ್ಕ್ರೀನ್ 3	**ಡಾಕು ಮಹಾರಾಜ್ (ತೆ):** ಬೆ.10.40ಕ್ಕೆ, ಸಂ.4ಕ್ಕೆ, **ಟೆಡ್ಡಿ ಬೇರ್ (ಕ):** ಮ.1.25ಕ್ಕೆ, **ರೇಖಾಚಿತ್ರಂ (ಮ):** ಸಂ.6.45ಕ್ಕೆ, ರಾ.9.25ಕ್ಕೆ.
ಸ್ಕ್ರೀನ್ 4	**ಭೂ ಮಂತರ್ (ಕ):** ಬೆ.10.45ಕ್ಕೆ, **ಮ್ಯಾಕ್ಸ್ (ಕ):** ಮ.1.30ಕ್ಕೆ, ಸಂ.4.05ಕ್ಕೆ, **ಡಾಕು ಮಹಾರಾಜ್ (ತೆ):** ಸಂ.6.35ಕ್ಕೆ, ರಾ.9.20ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, **ಶ್ರೀಕಾಂತ್ (ಹಿಂ):** ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, **ಸ್ಟಾರ್ (ತ):** ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, **ಅರಮನೈ 4 (ತ):** ಮ.12.30ಕ್ಕೆ, **ಪ್ರತಿನಿಧಿ 2 (ತೆ):** ಮ.12.55ಕ್ಕೆ, ರಾ.9.15ಕ್ಕೆ, **ರಾಮನ ಅವತಾರ (ಕ):** ಮ.3.40ಕ್ಕೆ, **ಅಂಜನೀಪುತ್ರ (ಕ):** ಸಂ.4ಕ್ಕೆ, **ಗ್ರೇ ಗೇಮ್ಸ್ (ಕ):** ಸಂ.6.35ಕ್ಕೆ, **ಕೃಷ್ಣಮ್ಮ (ತೆ):** ರಾ.7.25ಕ್ಕೆ, **ಮಾರಿವಿಲ್ಲಿನ್ ಗೋಪುರಂಗಲ್ (ಮ):** ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಕರ್ನಾಟಕದಲ್ಲೇ ಮೊದಲ ಬಾರಿ ಅರಣ್ಯದಲ್ಲಿ ಪಕ್ಷಿ ಗಣತಿ

ಫೆ.1,2ರಂದು ಮಲೆ ಮಹದೇಶ್ವರ ಬೆಟ್ಟ ವನ್ಯ ಜೀವಿಧಾಮದಲ್ಲಿ ಸಮೀಕ್ಷೆ

ಬೆಂಗಳೂರು, ಜ.23– ಅರಣ್ಯ ಪ್ರದೇಶದಲ್ಲಿ ಯಾವೆಲ್ಲ ಪ್ರಭೇದದ ಪಕ್ಷಿಗಳಿವೆ ಎಂಬುದನ್ನು ಅರಿಯಲು ರಾಜ್ಯದಲ್ಲೇ ಮೊದಲ ಬಾರಿಗೆ ಪಕ್ಷಿಗಳ ಸಮೀಕ್ಷೆ ನಡೆಸಲು ಅರಣ್ಯ ಇಲಾಖೆ ನಿರ್ಧರಿಸಿದ್ದು, ಫೆ.1 ಮತ್ತು 2ರಂದು ಮಲೆ ಮಹದೇಶ್ವರ ಬೆಟ್ಟ ವನ್ಯ ಜೀವಿಧಾಮದಲ್ಲಿ ಸಮೀಕ್ಷೆ ನಡೆಯಲಿದೆ.

ರಾಜ್ಯದ ಅರಣ್ಯ ಪ್ರದೇಶದಲ್ಲಿನ ಹುಲಿ–ಆನೆಯಂತಹ ವನ್ಯ ಜೀವಿಗಳನ್ನು ಕಾಲಕಾಲಕ್ಕೆ ಗಣತಿ ಮಾಡಲಾಗುತ್ತದೆ. ಆದರೆ, ಇದೀಗ ಮಲೆ ಮಹದೇಶ್ವರ ಬೆಟ್ಟ ವನ್ಯ ಜೀವಿಧಾಮದಲ್ಲಿ ಪಕ್ಷಿಗಳ ಸಮೀಕ್ಷೆ ನಡೆಸಲು ಉದ್ದೇಶಿಸಲಾಗಿದೆ. ತಮಿಳುನಾಡು ಗಡಿಭಾಗಕ್ಕೆ ಹೊಂದಿಕೊಂಡಂತಿರುವ ಈ ವನ್ಯಜೀವಿಧಾಮ, 906 ಚದರ ಕಿ.ಮೀ. ವಿಸ್ತೀರ್ಣದ ಅರಣ್ಯ ಪ್ರದೇಶ ಹೊಂದಿದೆ.

50 ತಂಡಗಳ ಮೂಲಕ ಸರ್ವೇ: ಪಕ್ಷಿಗಳ ಸಮೀಕ್ಷೆಗಾಗಿ ಸಾರ್ವಜನಿಕರು, ವನ್ಯಜೀವಿ ಪ್ರಿಯರು, ಸ್ವಯಂ ಸೇವಕರನ್ನೂ ಬಳಸಿಕೊಳ್ಳಲಾಗುತ್ತಿದೆ. ಈ ಸಂಬಂಧ ಈಗಾಗಲೇ ನೋಂದಣಿಯನ್ನೂ ಮಾಡಿಸಿಕೊಳ್ಳಲಾಗಿದೆ. 2 ದಿನ ನಡೆಯುವ ಸಮೀಕ್ಷೆಗಾಗಿ 50 ತಂಡಗಳನ್ನು ರಚಿಸಲಾಗುತ್ತಿದೆ. ಪ್ರತಿ ತಂಡದಲ್ಲೂ ಸ್ವಯಂ ಸೇವಕರು ಅರಣ್ಯ ಇಲಾಖೆ ಸಿಬ್ಬಂದಿ ಅಥವಾ ಅಧಿಕಾರಿ ಸೇರಿದಂತೆ 5–6 ಜನರ ತಂಡ ರಚಿಸಿ ಸಮೀಕ್ಷೆ ಮಾಡಲಾಗುತ್ತದೆ. ಈ ತಂಡಗಳು 2 ದಿನವೂ ಬೆಳಗಿನ ಜಾವ 3ರಿಂದ 4 ಗಂಟೆಯವರೆಗೆ ಹಾಗೂ ಸಂಜೆ ವೇಳೆ ಕಾಡಿನಲ್ಲಿ ಸಂಚರಿಸಿ ಪಕ್ಷಿಗಳ ಇರುವಿಕೆಯನ್ನು ದಾಖಲಿಸಲಿವೆ.

ಹುಲಿ–ಆನೆ ಗಣತಿ ಮಾದರಿ: ಪಕ್ಷಿಗಳ ಸಮೀಕ್ಷೆಯನ್ನು ಹುಲಿ ಮತ್ತು ಆನೆ ಗಣತಿಯಂತೆಯೇ ಮಾಡಲಾಗುತ್ತಿದೆ. ಪ್ರತಿ ತಂಡಕ್ಕೂ ನಿಗದಿತ ಸ್ಥಳವನ್ನು ನೀಡಿ, ಅಲ್ಲಿ ಬರುವ ಪಕ್ಷಿಗಳ ಪ್ರಭೇದವನ್ನು ದಾಖಲಿಸಲಾಗುತ್ತದೆ. ಅವುಗಳು ಹಾರಾಡುವುದು, ಕುಳಿತಿರುವುದು ಸೇರಿದಂತೆ ಮತ್ತಿತರ ಭಾವಚಿತ್ರವನ್ನು ತೆಗೆಯಲಾಗುತ್ತದೆ. ಅದನ್ನು ಅರಣ್ಯ ಇಲಾಖೆಯಿಂದ ನೀಡಲಾಗುವ ಮಾದರಿ ಅರ್ಜಿಯಲ್ಲಿ ದಾಖಲಿಸಲಾಗುವುದು. ಎಲ್ಲ 50 ತಂಡಗಳಿಂದಲೂ ಪಡೆಯುವ ಸಮೀಕ್ಷಾ ವರದಿಗಳನ್ನು ಒಂದೆಡೆ ಸೇರಿಸಿ, ಅರಣ್ಯ ಸಿಬ್ಬಂದಿ, ಅಧಿಕಾರಿಗಳು ಹಾಗೂ ಪಕ್ಷಿ ತಜ್ಞರು ಪರಿಶೀಲಿಸಲಿದ್ದಾರೆ. ನಂತರ ವನ್ಯಜೀವಿಧಾಮದ ಅರಣ್ಯದಲ್ಲಿ ಎಷ್ಟು ಪ್ರಭೇದದ ಪಕ್ಷಿಗಳಿವೆ ಎಂಬ ವರದಿ ಸಿದ್ಧಪಡಿಸಲಾಗುತ್ತದೆ.

ಸುರಕ್ಷತೆಗೂ ಕ್ರಮ: ಮಲೆ ಮಹದೇಶ್ವರ ಬೆಟ್ಟ ವನ್ಯಜೀವಿಧಾಮ ವ್ಯಾಪ್ತಿಯಲ್ಲಿ 300ಕ್ಕೂ ಹೆಚ್ಚಿನ ಆನೆಗಳು, 20ಕ್ಕೂ ಹೆಚ್ಚಿನ ಹುಲಿಗಳಿವೆ. ಅದರ ಜತೆಗೆ ಚಿರತೆ, ಕಾಡು ನಾಯಿ, ಕಾಡೆಮ್ಮೆ ಸೇರಿದಂತೆ ಹಲವು ಬಗೆಯ ವನ್ಯಜೀವಿಗಳಿವೆ. ಅವುಗಳಿಂದ ರಕ್ಷಣೆ ಪಡೆದು ಸಮೀಕ್ಷೆ ಮಾಡಲು ಮಲೆಮಹದೇಶ್ವರ ವನ್ಯಜೀವಿಧಾಮದ ವಿಭಾಗ ಪ್ರತಿ ಸಮೀಕ್ಷಾ ತಂಡಕ್ಕೂ ಸುರಕ್ಷಾ ಪರಿಕರಗಳನ್ನು ನೀಡಲಿದೆ.

286 ಪ್ರಭೇದದ ಪಕ್ಷಿಗಳು: ಮಲೆಮಹದೇಶ್ವರ ಬೆಟ್ಟ ವನ್ಯಜೀವಿಧಾಮ ವ್ಯಾಪ್ತಿಯಲ್ಲಿ 2014ರಲ್ಲಿ ಪಕ್ಷಿಗಳ ಸಮೀಕ್ಷೆ ನಡೆಸಲಾಗಿದೆ ಎಂಬ ಮಾಹಿತಿ ಇದೆ. 286 ಪ್ರಭೇದದ ಪಕ್ಷಿಗಳನ್ನು ಪತ್ತೆ ಮಾಡಲಾಗಿತ್ತು. ಆದರೆ, ಆ ಕುರಿತ ಮಾಹಿತಿ ಸದ್ಯ ಅರಣ್ಯ ಇಲಾಖೆಯಲ್ಲಿ ಲಭ್ಯವಿಲ್ಲ. ಹೀಗಾಗಿ ಅಲ್ಲಿ ಮತ್ತೆ ಪಕ್ಷಿಗಳ ಸಮೀಕ್ಷೆ ನಡೆಸಲಾಗುತ್ತಿದೆ.

ಮಲೆಮಹದೇಶ್ವರ ಬೆಟ್ಟ ವನ್ಯ ಜೀವಿಧಾಮ ವ್ಯಾಪ್ತಿಯಲ್ಲಿನ ಪಕ್ಷಿಗಳ ಪ್ರಭೇದವನ್ನು ಅರಿಯಲು ಈ ಸಮೀಕ್ಷೆ ನಡೆಸಲಾಗುತ್ತಿದೆ. ಎರಡು ದಿನ ಸಮೀಕ್ಷೆ ನಡೆಸಲಾಗುತ್ತಿದ್ದು, ಅದಕ್ಕಾಗಿ 50 ತಂಡ ರಚಿಸಲಾಗುವುದು. ಹಿಂದೆ ಸಮೀಕ್ಷೆ ನಡೆಸಲಾಗಿದೆ ಎಂದು ಹೇಳಲಾಗುತ್ತಿದೆಯಾದರೂ, ಆ ಕುರಿತ ಮಾಹಿತಿ ಲಭ್ಯವಿಲ್ಲ ಎಂದು ಮಲೆಮಹದೇಶ್ವರ ಬೆಟ್ಟ ವನ್ಯ ಜೀವಿಧಾಮದ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ.ಸಂತೋಷ್‌ಕುಮಾರ್ ತಿಳಿಸಿದ್ದಾರೆ.

ರೈತರು ತಾವು ಬೆಳೆದ ಬೆಳೆ ತಾವೇ ಮಾರಿದರೆ ಅಧಿಕ ಲಾಭ

• ಸಾವಯವ ರೈತ ವಿಕಾಸ್ ಬೂದನೂರು ಸಲಹೆ
• ಕಡಿಮೆ ಖರ್ಚಿನಲ್ಲಿ ಅಣಬೆ ಬೆಳೆಯುವ ಮಾಹಿತಿ

ಮೈಸೂರು, ಜ.23(ಎಂಕೆ)– ಗುಣಮಟ್ಟದ ಸ್ವದೇಶಿ ಆಹಾರ ಬೆಳೆಗಳನ್ನು ಬೆಳೆಯುವ ರೈತರು, ತಾವೇ ಮಾರಾಟ ಮಾಡಿದರೆ ಉತ್ತಮ ಲಾಭ ಪಡೆಯಬಹುದು ಎಂದು ಸಾವಯವ ರೈತ ವಿಕಾಸ್ ಬೂದನೂರು ತಿಳಿಸಿದರು.



ಸ್ವದೇಶಿ ಮೇಳದಲ್ಲಿ ಸಾವಯವ ರೈತ ವಿಕಾಸ್ ಬೂದನೂರು, ಅಣಬೆ ಕೃಷಿ ಕುರಿತು ಮಾಹಿತಿ ನೀಡಿದರು.

ಮೈಸೂರು ಮಹಾರಾಜ ಕಾಲೇಜು ಮೈದಾನದಲ್ಲಿ ನಡೆಯುತ್ತಿರುವ ಸ್ವದೇಶಿ ಮೇಳದಲ್ಲಿ ಅಣಬೆ ಕೃಷಿ ತರಬೇತಿ ಶಿಬಿರದಲ್ಲಿ ಮಾತನಾಡಿದ ಅವರು, ಬೆಳೆದ ಬೆಳೆಯನ್ನು ಮಧ್ಯವರ್ತಿಗಳಿಗೆ ಕೊಡುವ ಬದಲು ರೈತರೇ ಮಾರಾಟ ಮಾಡಿದರೆ ಅಧಿಕ ಲಾಭಗಳಿಸಬಹುದಾಗಿದೆ ಎಂದು ಸಲಹೆ ನೀಡಿದರು.

ಸಾವಯವ ಕೃಷಿ ಪದ್ಧತಿಯಲ್ಲಿ ಬೆಳೆದ ಗುಣಮಟ್ಟದ ಆಹಾರ ಪದಾರ್ಥಗಳನ್ನು ಹೆಚ್ಚು ದಿನ ಇಟ್ಟುಕೊಳ್ಳಲು ಸಾಧ್ಯವಿಲ್ಲ. ಹಾಗೆಯೇ ಮಾರುಕಟ್ಟೆಯಲ್ಲೂ ಗುಣಮಟ್ಟದ ಆಹಾರ ಪದಾರ್ಥಗಳನ್ನು ಕೊಳ್ಳುವ ಗ್ರಾಹಕರ ದಂಡೆ ಇದೆ. ಆದ್ದರಿಂದ ರೈತರೇ ಮಾರಾಟಕ್ಕೆ ಮುಂದಾಗುವುದರಿಂದ ನಷ್ಟಕ್ಕಿಂತ ಲಾಭ ಹೆಚ್ಚುತ್ತದೆ. ಆಹಾರ ಪದಾರ್ಥಗಳನ್ನು ಬೆಳೆಯುವುದು ಸಹ ಗುಡಿ ಕೈಗಾರಿಕೆ ಇದ್ದಂತೆ ಎಂದರಲ್ಲದೆ ತಾವು ಬೆಳೆಯುವ 'ಚಿಪ್ಪು ಅಣಬೆ' ಹಾಗೂ ಇನ್ನಿತರೆ ಅಣಬೆ ತಳಿಗಳನ್ನು ಕಡಿಮೆ ಜಾಗದಲ್ಲಿ ಬೆಳೆಯುವ ಪ್ರಕ್ರಿಯೆ ಕುರಿತು ತಿಳಿಸಿಕೊಟ್ಟರು.

ಆಯಸ್ಸು ವೃದ್ಧಿಗೆ ಅಣಬೆ ಬಳಸಿ: ತರಬೇತಿಯಲ್ಲಿ ಭಾಗವಹಿಸಿದ್ದ ಕೃಷಿ ಇಲಾಖೆ ನಿವೃತ್ತ ಅಧಿಕಾರಿ ಡಾ.ಡಿ.ಎಸ್.ಚಂದ್ರಶೇಖರ್, ಅತೀ ಹೆಚ್ಚು ಪ್ರೋಟಿನ್ ಹೊಂದಿರುವ ಅಣಬೆ ಸೇವನೆಯಿಂದ ಆಯಸ್ಸು ವೃದ್ಧಿಯಾಗುತ್ತದೆ. ವಾರಕ್ಕೆ ಕನಿಷ್ಠ ಎರಡು ದಿನ ಅಣಬೆ ಬಳಸುವ ಜಪಾನಿಯರ ಸರಾಸರಿ ಆಯಸ್ಸು 93 ವರ್ಷವಾದರೆ, ಭಾರತೀಯರ ಆಯಸ್ಸು 60–65 ಆಗಿದೆ. ಆದ್ದರಿಂದ ಆಯಸ್ಸು ವೃದ್ಧಿಗೆ ಅಣಬೆ ಬಳಸಿ ಎಂದು ಕಿವಿಮಾತು ಹೇಳಿದರು.

ಅಣಬೆಯಲ್ಲಿ ಸುಮಾರು ಹತ್ತು ಸಾವಿರ ಪ್ರಬೇದಗಳಿದ್ದು, ಚಿಪ್ಪು ಅಣಬೆ, ಗುಂಡು ಅಣಬೆ, ಕ್ಯಾಲ್ಸಿ ಅಣಬೆ ಮತ್ತು ಔಷಧಿಯ ಅಣಬೆ ಇದ್ದು, ಅವುಗಳನ್ನು ಬೆಳೆದು ಮಾರಾಟ ಮಾಡಲಾಗುತ್ತಿದೆ. ಚಿಪ್ಪು ಅಣಬೆ ಭತ್ತದ ಹುಲ್ಲಿನ ತ್ಯಾಜ್ಯದ ನಡುವೆ ಬೆಳೆಯಲಿದೆ. ಅಣಬೆ ಸೇವನೆಯಿಂದ ಮಹಿಳೆಯರಲ್ಲಿ ರಕ್ತಹೀನತೆ ಸಂಬಂಧಿತ ಕಾಯಿಲೆಗಳು ಕಡಿಮೆಯಾಗಲಿವೆ ಎಂದು ತಿಳಿಸಿದರು.

ಸುಗಮ ಸಂಗೀತ: ನಂತರ ಮೈಸೂರು ಮಹಾಲಿಂಗ ಮತ್ತು ಪುರುಷೋತ್ತಮ್ ತಂಡದಿಂದ ಸುಗಮ ಸಂಗೀತ ಕಾರ್ಯಕ್ರಮ ನಡೆಯಿತು. ಬಳಿಕ ಎಂ.ಆರ್.ಶ್ರೀನಿವಾಸ್ ನಿರ್ದೇಶನದಲ್ಲಿ ಬೆಂಗಳೂರಿನ ರಂಗಪುತ್ಥಳಿ ತಂಡದಿಂದ ರಾಮಾಯಣ, ಸೂತ್ರ ಸಲಾಕೆ ಬೊಂಬೆಯಾಟ ಪ್ರದರ್ಶನಗೊಂಡಿತು.

ಶಾಸಕ ಹರೀಶ್‌ಗೌಡರಿಂದ ಅಭಿನಂದನೆ



ಮೈಸೂರು ವಿವಿ 105ನೇ ಘಟಿಕೋತ್ಸವದಲ್ಲಿ ಎಂಎಸ್ಸಿ ರಸಾಯಶಾಸ್ತ್ರ ವಿಭಾಗದಲ್ಲಿ 18 ಚಿನ್ನದ ಪದಕ ಪಡೆದ ವಿದ್ಯಾರ್ಥಿನಿ ಭೂಮಿಕ ಅವರ ನಿವಾಸಕ್ಕೆ ಭೇಟಿ ನೀಡಿದ ಶಾಸಕ ಕೆ.ಹರೀಶ್‌ಗೌಡ ಅಭಿನಂದಿಸಿ, ಮುಂದಿನ ಭವಿಷ್ಯಕ್ಕೆ ಶುಭ ಹಾರೈಸಿದರು.

ಪಿಹೆಚ್.ಡಿ ಪದವಿ



ಮೈಸೂರು, ಜ.23– ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಇಂಗ್ಲಿಷ್ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಜಿ.ನಟರಾಜು ಮಾರ್ಗದರ್ಶನದಲ್ಲಿ ಕೆ.ಆರ್. ಸಂಧ್ಯಾ ಸಾದರಪಡಿಸಿದ ಮಹಾ ಪ್ರಬಂಧವನ್ನು ಮುಕ್ತ ವಿವಿ ಪಿಹೆಚ್.ಡಿ ಪದವಿಗೆ ಅಂಗೀಕರಿಸಿದೆ.

ಉತ್ತಮ ಹೂಡಿಕೆ ಹೆಸರಲ್ಲಿ ವೃದ್ಧರಿಗೆ 89.62 ಲಕ್ಷ; ಒಬ್ಬರ ಖಾತೆಯಿಂದ ಸದ್ದಿಲ್ಲದೆ 10.50 ಲಕ್ಷ ವರ್ಗಾವಣೆ; ಮಾದಕ ವಸ್ತು ಹೆಸರಲ್ಲಿ ಇಂಜಿನಿಯರ್‌ಗೆ 7.82 ಲಕ್ಷ ವಂಚನೆ

ಮೈಸೂರು, ಜ.23(ಎಸ್‌ಬಿಡಿ)– ವಿವಿಧ ಆಯಾಮಗಳಲ್ಲಿ ಸಾರ್ವಜನಿಕರ ಹಣ ದೋಚುತ್ತಿರುವ ಸೈಬರ್ ವಂಚಕರಿಗೆ ಕಡಿವಾಣ ಬಿದ್ದಿಲ್ಲ. ಪ್ರತಿಷ್ಠಿತ ಸಂಸ್ಥೆಗಳು, ಸರ್ಕಾರಿ ತನಿಖಾ ಸಂಸ್ಥೆಗಳ ಹೆಸರಲ್ಲಿ ಅಮಾಯಕರನ್ನು ಮೋಸದ ಬಲೆಗೆ ಕೆಡವುತ್ತಿದ್ದಾರೆ. ಮೈಸೂರಿನಲ್ಲೂ ಇಂತಹ ಪ್ರಕರಣಗಳು ನಿತ್ಯ ವರದಿಯಾಗುತ್ತಿವೆ.



89 ಲಕ್ಷ ದೋಖಾ: ಮೈಸೂರಿನ ಎನ್.ಆರ್.ಮೊಹಲ್ಲಾದ ವೃದ್ಧರೊಬ್ಬರು ಟಾಟಾ ಇನ್ವೆಸ್ಟ್‌ಮೆಂಟ್ ಕ್ಲಬ್ ಹೆಸರಿನ ವಾಟ್ಸಾಪ್ ಗ್ರೂಪ್ ಸೇರಿ ಬರೋಬ್ಬರಿ 89.62 ಲಕ್ಷ ರೂ. ಕಳೆದುಕೊಂಡಿದ್ದಾರೆ. ಹೆಚ್ಚಿನ ಲಾಭದಾಸೆಗೆ ವಾಟ್ಸಾಪ್ ಗ್ರೂಪ್‌ನಲ್ಲಿ ಸೂಚಿಸಿದಂತೆ ಹಂತ ಹಂತವಾಗಿ ಹಣ ಹೂಡಿಕೆ ಮಾಡಿದ್ದಾರೆ. ಆದರೆ ಆರಂಭದಲ್ಲಿ ಒಂದಷ್ಟು ಹಣವನ್ನು ಲಾಭವೆಂದು ನೀಡಿ, ನಂತರ ವಂಚಿಸಲಾಗಿದೆ.

ಅಪರಿಚಿತರಿಗೆ ಹಣ: ದತ್ತ ನಗರದ ನಿವಾಸಿಯೊಬ್ಬರ ಬ್ಯಾಂಕ್ ಖಾತೆಯಿಂದ ಅವರ ಗಮನಕ್ಕೆ ಬಾರದಂತೆ 10.50 ಲಕ್ಷ ರೂ. ಅಪರಿಚಿತರಿಗೆ ವರ್ಗಾವಣೆಯಾಗಿದೆ ಎಂದು ಸೆನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಡಿಜಿಟಲ್ ಅರೆಸ್ಟ್ ಆಗಿದೆ!: ಗಂಗೋತ್ರಿ ಲೇಔಟ್‌ನ ಯುವ ಇಂಜಿನಿಯರ್‌ಗೆ ಕೆಲ ದಿನಗಳ ಹಿಂದೆ ಕರೆ ಮಾಡಿದ ವ್ಯಕ್ತಿಯೊಬ್ಬ ಡಿಹೆಚ್‌ಎಲ್ ಎಕ್ಸ್‌ಪ್ರೆಸ್‌ನಿಂದ ಕರೆ ಮಾಡುತ್ತಿರುವುದಾಗಿ ತಿಳಿಸಿ, ನಿಮ್ಮ ಹೆಸರಿನಲ್ಲಿ 200 ಗ್ರಾಂ ಎಂಡಿಎಂಎ ಪಾರ್ಸೆಲ್ ಬುಕ್ ಆಗಿದ್ದು, ನೀವು ದೆಹಲಿ ವಿಭಾಗಕ್ಕೆ ಕರೆ ಮಾಡಿ ದೂರು ನೀಡಿ ಎಂದು ಯಾರಿಗೋ ಕಾನ್ಫರೆನ್ಸ್ ಹಾಕಿದ್ದಾನೆ. ಆಗ ಮತ್ತೊಬ್ಬ ವ್ಯಕ್ತಿ ಮಾತನಾಡಿ ನಿಮ್ಮ ಹೆಸರಿನಲ್ಲಿ ಕಾನೂನುಬಾಹಿರವಾಗಿ ಬ್ಯಾಂಕ್ ಅಕೌಂಟ್ ಕ್ರಿಯೇಟ್ ಆಗಿವೆ. ಆ ಅಕೌಂಟ್‌ಗಳು ಮನಿ ಲಾಂಡರಿಂಗ್ ಕೇಸ್‌ಗೆ ಸಂಬಂಧಿಸಿದ್ದು ನಿಮ್ಮನ್ನು ಕೂಡಲೇ ಅರೆಸ್ಟ್ ಮಾಡಬೇಕಾಗಿದೆ. ನಿಮ್ಮನ್ನು ಈ ಕೇಸ್‌ನಿಂದ ಬಿಡಬೇಕಾದರೆ ನೀವು ಈ ಖಾತೆಗಳನ್ನು ಬಳಸುತ್ತಿಲ್ಲ ಎಂದು ಆರ್‌ಬಿಐ ಪರಿಶೀಲನಾ ಪತ್ರ ಕೊಡಬೇಕು. ನಿಮ್ಮ ಖಾತೆಯಲ್ಲಿನ ಹಣದ ಸುರಕ್ಷತೆಗಾಗಿ ಡಿಪಾರ್ಟ್‌ಮೆಂಟ್ ಅಕೌಂಟ್‌ಗೆ ವರ್ಗಾವಣೆ ಮಾಡಬೇಕು. ನೀವು ಡಿಜಿಟಲ್ ಅರೆಸ್ಟ್ ಆಗಿದ್ದೀರಾ. ಕೂಡಲೇ ನಾನು ಹೇಳಿದಂತೆ ಮಾಡಿ ಎಂದು ಹೆಸರಿಸಿ ವಿವಿಧ ಹಂತಗಳಲ್ಲಿ 7.82 ಲಕ್ಷ ರೂ. ಪಡೆದು ಮೋಸ ಮಾಡಿದ್ದಾರೆ.

ಎನ್.ಆರ್.ಸಂಚಾರ ಪೊಲೀಸರಿಂದ ಅರ್ಥಪೂರ್ಣ ರಸ್ತೆ ಸುರಕ್ಷತಾ ಮಾಸಾಚರಣೆ



ಮೈಸೂರಿನ ಎನ್.ಆರ್.ಸಂಚಾರ ಪೊಲೀಸರು ಅಂಚೆ ಕಚೇರಿ ಸಿಬ್ಬಂದಿಗೆ ರಸ್ತೆ ಸುರಕ್ಷತೆ ಬಗ್ಗೆ ಜಾಗೃತಿ ಮೂಡಿಸಿದರು.

ಮೈಸೂರು, ಜ.23(ಎಸ್‌ಬಿಡಿ)– ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣೆ ಅಂಗವಾಗಿ ನಗರದ ಎನ್.ಆರ್.ಸಂಚಾರ ಠಾಣೆ ಪೊಲೀಸರು ಗುರುವಾರ ವಿವಿಧೆಡೆ ಜಾಗೃತಿ ಕಾರ್ಯಕ್ರಮ ನಡೆಸಿದರು.

ಕೆಸರೆ ಘನತ್ಯಾಜ್ಯ ಸಂಸ್ಕರಣಾ ಘಟಕದ ಆವರಣದಲ್ಲಿ ಕಸ ವಿಲೇವಾರಿ ವಾಹನಗಳ ಚಾಲಕರಿಗೆ ಹಾಗೂ ನೆಹರೂ ವೃತ್ತದಲ್ಲಿರುವ ಪ್ರಧಾನ ಅಂಚೆ ಕಚೇರಿ ಸಿಬ್ಬಂದಿಗೆ ಎನ್.ಆರ್.ಠಾಣೆ ಸಬ್ ಇನ್ಸ್‌ಪೆಕ್ಟರ್ ಎಂ.ಎಲ್.ಸಿದ್ದೇಶ್ ಹಾಗೂ ಸಿಬ್ಬಂದಿ ರಸ್ತೆ ಸುರಕ್ಷತೆ ಬಗ್ಗೆ ಅರಿವು ಮೂಡಿಸಿದರು. ವಾಹನ ಚಾಲಿಸುವಾಗ ಸಣ್ಣ ನಿರ್ಲಕ್ಷ್ಯದಿಂದ ಸಾವು–ನೋವು ಸಂಭವಿಸುವ ಸಾಧ್ಯತೆ ಇರುತ್ತದೆ. ಪ್ರತಿಯೊಬ್ಬರೂ ಸಂಚಾರ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಿದರೆ ಅಪಘಾತಗಳನ್ನು ತಡೆಯಬಹುದು. ದ್ವಿಚಕ್ರ ವಾಹನದಲ್ಲಿ ತೆರಳುವಾಗ ಸವಾರರಿಬ್ಬರೂ ಹೆಲ್ಮೆಟ್ ಧರಿಸಬೇಕು. ಕಾರುಗಳಲ್ಲಿ ಸಂಚರಿಸುವಾಗ ಚಾಲಕ ಹಾಗೂ ಪಕ್ಕದ ಆಸನದಲ್ಲಿ ಕೂರುವವರು ಸೀಟ್‌ಬೆಲ್ಟ್ ಹಾಕಿಕೊಳ್ಳಬೇಕು. ಇದು ದಂಡದಿಂದ ಪಾರಾಗಲಷ್ಟೇ ಅಲ್ಲ ನಿಮ್ಮ ಜೀವ ರಕ್ಷಣೆಯ ಮುಂಜಾಗ್ರತಾ ಕ್ರಮ ಎನ್ನುವುದನ್ನು ಮರೆಯಬಾರದು ಎಂದು ತಿಳಿಸಲಾಯಿತು.

ನಗರದ ಸ್ವಚ್ಛತೆಗಾಗಿ ಶ್ರಮಿಸುವ ಕಾರ್ಮಿಕರು ಸಂಚಾರ ನಿಯಮ ಪಾಲಿಸುವ ಮೂಲಕ ಇತರರಿಗೆ ಮಾದರಿಯಾಗಬೇಕು. ವಾಹನಗಳು ಸುಸ್ಥಿಯಲ್ಲಿರುವಂತೆ ನಿಗಾ ವಹಿಸಬೇಕು. ಚಾಲನಾ ಪರವಾನಗಿಯನ್ನು ಜೊತೆಯಲ್ಲಿಟ್ಟುಕೊಳ್ಳಬೇಕು. ವಿಲೇವಾರಿ ಸಂದರ್ಭದಲ್ಲಿ ತ್ಯಾಜ್ಯ ರಸ್ತೆಗೆ ಬೀಳದಂತೆ ಹಾಗೂ ಪ್ಲಾಸ್ಟಿಕ್ ಇನ್ನಿತರ ಲಘುವಾದ ವಸ್ತುಗಳು ಗಾಳಿಯಲ್ಲಿ ತೂರದಂತೆ ಎಚ್ಚರಿಕೆ ಕ್ರಮ ವಹಿಸಬೇಕು. ಯಾವುದೇ ರೀತಿಯಲ್ಲೂ ವಾಹನ ಸವಾರರಿಗೆ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದು ಸ್ವಚ್ಛತಾ ಕಾರ್ಮಿಕರಿಗೆ ಅರಿವು ಮೂಡಿಸಿದರು.

ಮೈಸೂರಿನಲ್ಲಿ ಜೆಡಿಎಸ್ ಮುಖಂಡ ಹನುಮಂತು ಕೊಲೆ ಕೇಸ್: ಏಳು ಮಂದಿ ಬಂಧನ

ಮೈಸೂರು, ಜ.23– ಜಮೀನು ವಿಚಾರವಾಗಿ ಜೆಡಿಎಸ್ ಮುಖಂಡ ಹನುಮಂತು ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮೈಸೂರಿನ ಮೇಟಗಳ್ಳಿ ಠಾಣೆ ಪೊಲೀಸರಿಂದ 7 ಆರೋಪಿಗಳನ್ನು ಬಂಧಿಸಲಾಗಿದೆ. ವಿನೋದ್, ಮೋಹನ್, ಯೋಗ, ಸಂತು, ಆಂಥೋಣಿ, ವೇಣುಗೋಪಾಲ್ ಮತ್ತು ಮಂಜು ಬಂಧಿತರು.

ಕಳೆದ ಡಿಸೆಂಬರ್ 22ರಂದು ಮೈಸೂರು ಹೊರವಲಯದ ಬೆಲವತ್ತ ಗ್ರಾಮದ ಬಳಿ ಜೆಡಿಎಸ್ ಮುಖಂಡ ಹನುಮಂತು ಕೊಲೆಯಾಗಿತ್ತು. ರಾತ್ರಿ ಬೈಕ್‌ನಲ್ಲಿ ಹೋಗುತ್ತಿದ್ದ ಹನುಮಂತುರನ್ನು ಅಡ್ಡಗಟ್ಟಿದ ಕಿಡಿಗೇಡಿಗಳು ಬೈಕ್ ಬೀಳಿಸಿ ಮನಸೋ ಇಚ್ಛೆ ಇರಿದು ಕೊಲೆ ಮಾಡಿದ್ದರು. ಜನರ ಓಡಾಟವಿರುವ ಜಾಗದಲ್ಲಿ ಕ್ಷಣಾರ್ಧದಲ್ಲಿ ನಡೆದು ಹೋದ ಭೀಕರ ಕೊಲೆ ಎಲ್ಲರನ್ನೂ ಬೆಚ್ಚಿ ಬೀಳಿಸಿತ್ತು.

ಹನುಮಂತು ಮೈಸೂರಿನ ಬೆಲವತ್ತ ಗ್ರಾಮದ ನಿವಾಸಿ. ರೈತರಾಗಿದ್ದ ಹನುಮಂತು ಜೆಡಿಎಸ್ ಮುಖಂಡನೂ ಹೌದು. ಜೊತೆಗೆ ಹಲವು ಸಂಘಟನೆಯಲ್ಲಿ ಗುರುತಿಸಿಕೊಂಡಿದ್ದರು. ಸಾಕಷ್ಟು ಹೋರಾಟ ಪ್ರತಿಭಟನೆಗಳಲ್ಲಿ ಭಾಗಿಯಾಗಿದ್ದರು. ಯಾವುದೇ ಹೋರಾಟ ಆದರೂ ಹನುಮಂತು ಮಂಚೂಣಿಯಲ್ಲಿರುತ್ತಿದ್ದರು. ಎಲ್ಲರ ಜೊತೆಯಲ್ಲೂ ಹನುಮಂತು ಚೆನ್ನಾಗಿಯೇ ಇದ್ದರು. ಇಷ್ಟೊಂದು ಆ್ಯಕ್ಟೀವ್ ಆಗಿದ್ದ ಹನುಮಂತು ಕೊಲೆಯಾಗಿದ್ದು ಎಲ್ಲರ ಅಚ್ಚರಿಗೆ ಕಾರಣವಾಗಿತ್ತು.

ಕೊಲೆಯಾದ ಹನುಮಂತು ಜೊತೆ ಕಾಂಗ್ರೆಸ್ ಮುಖಂಡ ಮಂಜುನಾಥ್ ನಡೆಸಿದ್ದ ವಾಗ್ವಾದದ ವಿಡಿಯೋ ಒಂದು ವೈರಲ್ ಆಗಿತ್ತು. ಡಿ.5 ರಂದು ಕಾಂಗ್ರೆಸ್ ಮುಖಂಡ ಮಂಜುನಾಥ್ ಮತ್ತು ಹನುಮಂತು ನಡುವೆ ಜಮೀನಿನ ವಿಚಾರವಾಗಿ ಮಾತಿನ ಚಕಮಕಿ ನಡೆದಿತ್ತು. ಈ ವೇಳೆ ಸಿಎಂ ವಿರುದ್ಧ ಸಾಮಾನ್ಯ ವ್ಯಕ್ತಿ ಸ್ನೇಹಮಯಿ ಕೃಷ್ಣ ಹೋರಾಡುತ್ತಿದ್ದಾರೆ. ನಾನು ನಿಮ್ಮ ವಿರುದ್ಧ ಅದೇ ರೀತಿ ಹೋರಾಡುತ್ತೇನೆ ಎಂದಿದ್ದ ಕೊಲೆಯಾದ ಬೆಲವತ್ತ ಹನುಮಂತು. ಈ ವೇಳೆ ಹನುಮಂತುಗೆ ಪ್ರತ್ಯುತ್ತರ ಕೊಟ್ಟಿದ್ದ ಮಂಜು, ಕೃಷ್ಣ ಏನು ಕಿತ್ತುಕೊಳ್ಳೋದಿಲ್ಲ. ಆ ಮಗನಿಗೆ ಒಳಗೆ ಕೂರಿಸಿದ್ದ ಮಗ ನಾನು ಎಂದಿದ್ದರು.

ಇನ್ನು ಕೊಲೆ ನಂತರ ಕಾಂಗ್ರೆಸ್ ಮುಖಂಡ ಮಂಜುನಾಥ್ ವೈರಲ್ ವಿಡಿಯೋದಲ್ಲಿ ತಮ್ಮ ಹೆಸರು ಪ್ರಸ್ತಾಪವಾದ ಹಿನ್ನೆಲೆ ಸ್ನೇಹಮಯಿ ಕೃಷ್ಣ ಕೂಡ ಪೊಲೀಸರಿಗೆ ದೂರು ನೀಡಿದ್ದರು. ವೈರಲ್ ಆದ ವಿಡಿಯೋ ಹಾಗೂ ಹಿಂದೆ ನಡೆದಿದ್ದ ಗಲಾಟೆ ಬಗ್ಗೆ ಮಾಹಿತಿ ಕಲೆ ಹಾಕಿದ ಪೊಲೀಸರು ಹನುಮಂತನನ್ನು ಕೊಲೆ ಮಾಡಿದ ಆರೋಪಿಗಳನ್ನು ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಈ ಪ್ರಕರಣದಲ್ಲಿ ಅರ್ಜುನ್ ಸೇರಿದಂತೆ ಮೂವರ ಬಂಧನಕ್ಕೆ ಪೊಲೀಸರು ಹುಡುಕಾಟ ನಡೆಸಿದ್ದಾರೆ

ಟೆರೇಷಿಯನ್ ಕಾಲೇಜು ಐವರು ವಿದ್ಯಾರ್ಥಿನಿಯರಿಗೆ ಚಿನ್ನದ ಪದಕ



ಸ್ವೀಡಲ್ ಥೋರಸ್



ಸೌಂದರ್ಯ



ಅನುಷ್ಕಾ



ಲಿಖಿತಾ

ಮೈಸೂರು, ಜ.23(ಎಂಕೆ)– ಮೈಸೂರು ವಿವಿ 105ನೇ ಘಟಿಕೋತ್ಸವದಲ್ಲಿ ಟೆರೇಷಿಯನ್ ಕಾಲೇಜಿನ ಐವರು ವಿದ್ಯಾರ್ಥಿನಿಯರು ಚಿನ್ನದ ಪದಕ ಗಳಿಸಿದ್ದಾರೆ.



ರಾಜರಾಜೇಶ್ವರಿ

ಎಂಎಸ್ಸಿ ಸಸ್ಯಶಾಸ್ತ್ರದಲ್ಲಿ ಸಿಸ್ಟರ್ ವಿವಿನಾ ಸ್ವೀಡಲ್ ಥೋರಸ್ 10 ಚಿನ್ನದ ಪದಕ ಹಾಗೂ 2 ನಗದು ಬಹುಮಾನ ಪಡೆದರೆ, ಬಿಎ ಅರ್ಥಶಾಸ್ತ್ರ ವಿದ್ಯಾರ್ಥಿನಿ ಎಸ್. ಸೌಂದರ್ಯ 4 ಚಿನ್ನ ಮತ್ತು 6 ನಗದು ಬಹುಮಾನ ಪಡೆದಿದ್ದಾರೆ. ಹಾಗೆಯೇ ಬಿಎ ಇಂಗ್ಲಿಷ್‌ನಲ್ಲಿ ಡಿ.ಸಿ. ಅನುಷ್ಕಾ, 3 ಚಿನ್ನದ ಪದಕ ಮತ್ತು 2 ನಗದು ಬಹುಮಾನ, ಬಿಎಸ್ಸಿ ಕೆಮಿಸ್ಟ್ರಿಯಲ್ಲಿ ಜಿ.ಲಿಖಿತಾ, 2 ಚಿನ್ನದ ಪದಕ ಹಾಗೂ ಬಿಎಸ್ಸಿ ಪ್ರಾಣಿಶಾಸ್ತ್ರದಲ್ಲಿ ಎ.ರಾಜರಾಜೇಶ್ವರಿ 1 ಚಿನ್ನದ ಪದಕ ಮತ್ತು 2 ನಗದು ಬಹುಮಾನಗಳಿಸಿದ್ದಾರೆ. ವಿದ್ಯಾರ್ಥಿನಿಯರ ಸಾಧನೆಗೆ ಟೆರೇಷಿಯನ್ ಕಾಲೇಜಿನ ಆಡಳಿತ ಮಂಡಳಿ ಅಭಿನಂದನೆ ಸಲ್ಲಿಸಿದೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಲಾಗಿದೆ.


ಕೇಂದ್ರ ಸಚಿವರಾದ ಸನ್ಮಾನ್ಯ
ಹೆಚ್.ಡಿ.ಕುಮಾರಸ್ವಾಮಿರವರಿಂದ
ಕೃಷ್ಣರಾಜನಗರ ಕ್ಷೇತ್ರದ ಮತದಾರ ಬಂಧುಗಳಿಗೆ
ಕೃತಜ್ಞತೆ ಸಭೆ ಹಾಗೂ
ಕೃಷ್ಣರಾಜನಗರ ಕ್ಷೇತ್ರದ ಜನತೆಯಿಂದ
ಅಭಿಮಾನದ
ಅಭಿನಂದನಾ ಸಮಾರಂಭ
ನೀವು ಬನ್ನಿ ನಿಮ್ಮವರನ್ನು ಕರೆತನ್ನಿ,
ಹರಸಿ ಆರ್ಶೀವದಿಸಿ, ಭೋಜನ ಸ್ವೀಕರಿಸಿ
24.01.2025, ಶುಕ್ರವಾರ
10:30 ಗಂಟೆಗೆ
ರೇಡಿಯೋ ಮೈದಾನ,
ಕೆ.ಆರ್.ನಗರ
ಸರ್ವರಿಗೂ ಸುಸ್ವಾಗತ
ಪ್ರಕಟಣೆ: ಶ್ರೀನಿವಾಸ್
ಅಧ್ಯಕ್ಷರು ಹಿಂದುಳಿದ ವರ್ಗ, ಜೆಡಿಎಸ್